ಡಾ|| ರಾಜ್‌ಕುಮಾರ್ ಅಕಾಡೆಮಿ
ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು

**ಸೆಪ್ಟೆಂಬರ್ ೧ನೇ ವಾರ**

01-09-2025 TO 06-09-2025

ಸಕಾರಣವಿಲ್ಲದ ಡಿಎನ್‌ಎ ಪರೀಕ್ಷೆ

ಪಂಜಾಬ್: 25 ವರ್ಷದಲ್ಲೇ ಅಧಿಕ ಮಳೆ

ಎಫ್ಡಿಐ: ಕರ್ನಾಟಕಕ್ಕೆ ಹೆಚ್ಚು

ರಾಜ್ಯ ಶಿಕ್ಷಣ ನೀತಿ



## ❖ ಗಡಿ ವಿವಾದ ಇತ್ಯರ್ಥಕ್ಕೆ ಸಹಮತ

**ಸಂದರ್ಭ:** ಉಭಯ ದೇಶಗಳ ನಡುವೆ ಉದ್ವಿಗ್ನ ಸ್ಥಿತಿಗೆ ಕಾರಣವಾಗಿರುವ ಗಡಿ ವಿವಾದವನ್ನು 'ಮುಕ್ತ, ನ್ಯಾಯಯುತ ಮತ್ತು ಪರಸ್ಪರರಿಗೆ ಒಪ್ಪಿತವಾಗಬಹುದಾದ ಮಾರ್ಗ'ದಲ್ಲಿ ಇತ್ಯರ್ಥಪಡಿಸಿಕೊಳ್ಳಲು ಪ್ರಧಾನಿ ನರೇಂದ್ರ ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರು ಬದ್ಧತೆ ವ್ಯಕ್ತಪಡಿಸಿದರು.


ಪ್ರಧಾನಿ ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ –ಪಿಟಿಐ ಚಿತ್ರ

- ತಿಯಾನ್‌ಜಿನ್‌ನಲ್ಲಿ ಶಾಂಘೈ ಸಹಕಾರ ಸಂಘಟನೆಯ (ಎಸ್‌ಸಿಒ) ಶೃಂಗಸಭೆ ವೇಳೆ ಮೋದಿ ಹಾಗೂ ಜಿನ್‌ಪಿಂಗ್ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಜಾಗತಿಕ ವ್ಯಾಪಾರದಲ್ಲಿ ಸ್ಥಿರತೆ ತರುವ ದಿಸೆಯಲ್ಲಿ ಜತೆಯಾಗಿ ಕೆಲಸ ಮಾಡುವ ಪ್ರತಿಜ್ಞೆಯನ್ನೂ ಉಭಯ ನಾಯಕರು ಕೈಗೊಂಡರು.
- ಅಭಿವೃದ್ಧಿಯ ವಿಚಾರದಲ್ಲಿ ಎರಡೂ ದೇಶಗಳು ಪಾಲುದಾರರೇ ಹೊರತು ಪ್ರತಿಸ್ಪರ್ಧಿಗಳಲ್ಲ; ಉಭಯ ದೇಶಗಳ ನಡುವಿನ ಭಿನ್ನಾಭಿಪ್ರಾಯಗಳು ವಿವಾದಗಳಾಗಿ ಬದಲಾಗಬಾರದು ಎಂಬುದನ್ನು ಒಪ್ಪಿಕೊಂಡರು.

<u>ಮೋದಿ ಹೇಳಿದ್ದು...</u>

- Iಭಾರತ–ಚೀನಾ ನಡುವಣ ಸಹಕಾರವು ಎರಡೂ ದೇಶಗಳ 280 ಕೋಟಿ ಜನರ ಹಿತಾಸಕ್ತಿಗೆ ಸಂಬಂಧಿಸಿದ್ದು
- Iಪೂರ್ವ ಲಡಾಖ್‌ನಲ್ಲಿ ನಿಯೋಜಿಸಿದ್ದ ಸೇನೆಯನ್ನು ಕಳೆದ ವರ್ಷ ಉಭಯ ದೇಶಗಳು ವಾಪಸ್ ಕರೆಸಿಕೊಂಡಿರುವುದು ಗಡಿಯಲ್ಲಿ ಶಾಂತಿ ಮತ್ತು ಸ್ಥಿರತೆಯ ವಾತಾವರಣ ಸೃಷ್ಟಿಸಿದೆ
- Iಕಳೆದ ವರ್ಷ ಕಜಾನ್‌ನಲ್ಲಿ ನಡೆದ ಚರ್ಚೆ ನಮ್ಮ ಸಂಬಂಧ ಸಕಾರಾತ್ಮಕ ಹಾದಿಯಲ್ಲಿ ಮುನ್ನಡೆಯಲು ನೆರವಾಗಿದೆ
- Iಕೈಲಾಸ ಮಾನಸ ಸರೋವರ ಯಾತ್ರೆ ಪುನರಾರಂಭವಾಗಿದೆ. ಉಭಯ ದೇಶಗಳ ನಡುವೆ ನೇರ ವಿಮಾನ ಸಂಚಾರ ಕೂಡಾ ಪುನರಾರಂಭಿಸಲಾಗುತ್ತದೆ
- Iಎರಡೂ ದೇಶಗಳು ಪರಸ್ಪರರ ಯಶಸ್ಸಿನಲ್ಲಿ ಪಾಲುದಾರರಾಗಬೇಕು. **ಡ್ರ್ಯಾಗನ್ (ಚೀನಾ) ಮತ್ತು ಆನೆ (ಭಾರತ) ಜತೆಯಾಗಿ ನೃತ್ಯ ಮಾಡುವಂತಾಗಬೇಕು**

ಒಗ್ಗಟ್ಟಿನ ಹೋರಾಟದ ಸೂಚನೆ

- ಭಾರತದಿಂದ ಆಮದು ಮಾಡಿಕೊಳ್ಳುತ್ತಿ ರುವ ಸರಕುಗಳ ಮೇಲೆ ಅಮೆರಿಕವು ಶೇಕಡ 50ರಷ್ಟು ಸುಂಕ ವಿಧಿಸಿದ ಐದು ದಿನಗಳ ಬಳಿಕ ಮೋದಿ– ಜಿನ್‌ಪಿಂಗ್ ಮಾತುಕತೆ ನಡೆದಿದೆ.
- ಭಾರತವು ರಷ್ಯಾದಿಂದ ತೈಲ ಖರೀದಿಸುತ್ತಿರುವುದಕ್ಕೆ ಪ್ರತಿಯಾಗಿ ಅಮೆರಿಕವು ಸುಂಕ ಹೆಚ್ಚಿಸುವ ನಿರ್ಧಾರ ತೆಗೆದುಕೊಂಡಿದೆ. ಪಾಶ್ಚಿಮಾತ್ಯ ರಾಷ್ಟ್ರಗಳ ಒತ್ತಡದ ವಿರುದ್ಧ ಷಿ ಮತ್ತು ಮೋದಿ ಅವರು ಒಗ್ಗಟ್ಟಿನ ಹೋರಾಟ ನಡೆಸಲು ನೋಡುತ್ತಿದ್ದಾರೆ ಎಂದು ವಿಶ್ಲೇಷಿಸಲಾಗುತ್ತಿದೆ.
- ಜಾಗತಿಕ ಅರ್ಥ ವ್ಯವಸ್ಥೆಗೆ ಸ್ಥಿರತೆ ತರಲು ಉಭಯ ದೇಶಗಳ ಆರ್ಥಿಕತೆಯು ಪ್ರಮುಖ ಪಾತ್ರ ವಹಿಸಬೇಕು ಎಂಬ ವಿಚಾರದಲ್ಲಿ ಇಬ್ಬರೂ ನಾಯಕರು ಸಹಮತ ವ್ಯಕ್ತಪಡಿಸಿದರು. ಅಮೆರಿಕದ ಸುಂಕ ಹೇರಿಕೆಯು ಜಾಗತಿಕ ಅರ್ಥ ವ್ಯವಸ್ಥೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಿರುವ ಸಮಯದಲ್ಲಿ ನಡೆದಿರುವ ಈ ಮಾತುಕತೆ ಹೆಚ್ಚಿನ ಮಹತ್ವ ಪಡೆದುಕೊಂಡಿದೆ.

Dr. Rajkumar IAS/KAS Ac

- ದ್ವಿಪಕ್ಷೀಯ ಬಾಂಧವ್ಯ ವೃದ್ಧಿಗೆ ಗಡಿ ಪ್ರದೇಶದಲ್ಲಿ ಶಾಂತಿ ಮತ್ತು ನೆಮ್ಮದಿಯ ಮಹತ್ವವನ್ನು ಪ್ರಧಾನಿ ಅವರು ಒತ್ತಿ ಹೇಳಿದರು. ಲಡಾಖ್‌ನಲ್ಲಿ ವಾಸ್ತವ ಗಡಿ ನಿಯಂತ್ರಣ ರೇಖೆಯ ಉದ್ದಕ್ಕೂ ನಿಯೋಜಿಸಿದ್ದ ಸೇನಾಪಡೆಗಳನ್ನು ಕಳೆದ ವರ್ಷ ವಾಪಸ್ ಕರೆಸಿಕೊಂಡದ್ದು ಮತ್ತು ಆ ಬಳಿಕ ಗಡಿಯಲ್ಲಿ ಶಾಂತಿ ನೆಲಸಿರುವುದಕ್ಕೆ ಉಭಯ ನಾಯಕರು ತೃಪ್ತಿ ವ್ಯಕ್ತಪಡಿಸಿದರು.
- ಕಳೆದ ವರ್ಷ ಅಕ್ಟೋಬರ್‌ನಲ್ಲಿ ರಷ್ಯಾದ ಕಜಾನ್‌ನಲ್ಲಿ ನಡೆದ ಮಾತುಕತೆಯ ನಂತರ ದ್ವಿಪಕ್ಷೀಯ ಸಂಬಂಧದಲ್ಲಿ ಸುಧಾರಣೆ ಕಂಡುಬಂದಿರುವುದಕ್ಕೆ ಇಬ್ಬರೂ ಸಂತಸ ವ್ಯಕ್ತಪಡಿಸಿದರು.
- ಗಾಲ್ವನ್ ಕಣಿವೆಯಲ್ಲಿನ ಸಂಘರ್ಷದ ಬಳಿಕ ಹದಗೆಟ್ಟಿದ್ದ ಭಾರತ–ಚೀನಾ ಸಂಬಂಧ ದಲ್ಲಿ ಸುಧಾರಣೆ ತರುವ ಪ್ರಕ್ರಿಯೆ ಮುಂದುವರಿಸುವುದು ಮೋದಿ-ಷಿ ಮಾತುಕತೆಯ ಮುಖ್ಯ ಆಶಯವಾಗಿತ್ತು ಎಂದು ತಿಳಿದು ಬಂದಿದೆ.
- **ಜಿನ್‌ಪಿಂಗ್‌ಗೆ ಆಹ್ವಾನ: ಭಾರತದ ಆತಿಥ್ಯದಲ್ಲಿ ಮುಂದಿನ ವರ್ಷ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಲ್ಗೊಳ್ಳುವಂತೆ ಮೋದಿ ಅವರು ಚೀನಾ ಅಧ್ಯಕ್ಷರನ್ನು ಆಹ್ವಾನಿಸಿದರು.**
- ಭಾರತದ ಬ್ರಿಕ್ಸ್ ಅಧ್ಯಕ್ಷತೆಗೆ ಚೀನಾ ತನ್ನ ಬೆಂಬಲ ಸೂಚಿಸಿದೆ’ ಎಂದು ಎಂಇಎ ಪ್ರಕಟಣೆ ತಿಳಿಸಿದೆ.

## ❖ ಚಿರಾಗ್-ಸಾತ್ವಿಕ್ ಜೋಡಿಗೆ ಕಂಚು

### ಸಾತ್ವಿಕ್–ಚಿರಾಗ್ ಜೋಡಿಗೆ ಕಂಚು

**ವಿಶ್ವ ಬ್ಯಾಡ್ಮಿಂಟನ್**


ಪ್ಯಾರಿಸ್ (ಪಿಟಿಐ): ಭಾರತದ ಅಗ್ರಮಾನ್ಯ ಬ್ಯಾಡ್ಮಿಂಟನ್ ಜೋಡಿ ಸಾತ್ವಿಕ್ ಸಾಯಿರಾಜ್ ರಣಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಅವರು ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಷಿಪ್‌ನಲ್ಲಿ ಭಾನುವಾರ ಪುರುಷರ ಡಬಲ್ಸ್‌ನಲ್ಲಿ ಕಂಚಿನ ಪದಕ ಪಡೆದರು. ಸೆಮಿಫೈನಲ್‌ನಲ್ಲಿ ಭಾರತದ ಜೋಡಿಯು ಚೀನಾದ ಚೆನ್ ಬೋ ಯಾಂಗ್ ಮತ್ತು ಲೀ ಯೀ ಜೋಡಿ ಎದುರು ಮಣಿಯಿತು

**ಸೆಮಿಫೈನಲ್ ಸ್ಕೋರ್**

| | | | |
|---|---|---|---|
| ಚೆನ್ ಯಾಂಗ್–ಲೀ ಯಿ (ಚೀನಾ) | 21 | 18 | 21 |
| ಸಾತ್ವಿಕ್–ಚಿರಾಗ್ (ಭಾರತ) | 19 | 21 | 12 |

* ಸಾತ್ವಿಕ್–ಚಿರಾಗ್ ಅವರಿಗೆ ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಒಲಿದ ಎರಡನೇ ಕಂಚು. 2022ರಲ್ಲಿ ಜಯಿಸಿದ್ದರು

* ಈ ಸಲದ ಟೂರ್ನಿಯಲ್ಲಿ ಭಾರತಕ್ಕೆ ಲಭಿಸಿದ ಏಕೈಕ ಪದಕ



### ವಿಶ್ವ ಬ್ಯಾಡ್ಮಿಂಟನ್‌ನಲ್ಲಿ ಪದಕ ಗೆದ್ದ ಭಾರತೀಯರು

| ಆಟಗಾರ | ಪದಕ | ಸ್ಪರ್ಧೆ | ವರ್ಷ |
|---|---|---|---|
| ಪ್ರಕಾಶ್ ಪಡುಕೋಣೆ | ಕಂಚು | ಸಿಂಗಲ್ಸ್ | 1983 |
| ಜ್ವಾಲಾ ಗುಟ್ಟಾ/ಅಶ್ವಿನಿ ಪೊನ್ನಪ್ಪ | ಕಂಚು | ಮಹಿಳಾ ಡಬಲ್ಸ್ | 2011 |
| ಪಿ.ವಿ. ಸಿಂಧು | ಕಂಚು | ಸಿಂಗಲ್ಸ್ | 2013 |
| ಪಿ.ವಿ. ಸಿಂಧು | ಕಂಚು | ಸಿಂಗಲ್ಸ್ | 2014 |
| ಸೈನಾ ನೆಹ್ವಾಲ್ | ಬೆಳ್ಳಿ | ಸಿಂಗಲ್ಸ್ | 2015 |
| ಸೈನಾ ನೆಹ್ವಾಲ್ | ಕಂಚು | ಸಿಂಗಲ್ಸ್ | 2017 |
| ಪಿ.ವಿ. ಸಿಂಧು | ಬೆಳ್ಳಿ | ಸಿಂಗಲ್ಸ್ | 2017 |
| ಪಿ.ವಿ. ಸಿಂಧು | ಬೆಳ್ಳಿ | ಸಿಂಗಲ್ಸ್ | 2018 |
| ಪಿ.ವಿ. ಸಿಂಧು | ಚಿನ್ನ | ಸಿಂಗಲ್ಸ್ | 2019 |
| ಬಿ. ಸಾಯಿಪ್ರಣೀತ್ | ಕಂಚು | ಸಿಂಗಲ್ಸ್ | 2019 |
| ಕೆ. ಶ್ರೀಕಾಂತ್ | ಬೆಳ್ಳಿ | ಸಿಂಗಲ್ಸ್ | 2021 |
| ಲಕ್ಷ್ಯ ಸೇನ್ | ಕಂಚು | ಸಿಂಗಲ್ಸ್ | 2021 |
| ಚಿರಾಗ್ ಶೆಟ್ಟಿ–ಸಾತ್ವಿಕ್ ಸಾಯಿರಾಜ್ | ಕಂಚು | ಡಬಲ್ಸ್ | 2022 |
| ಎಚ್.ಎಸ್. ಪ್ರಣಯ್ | ಕಂಚು | ಸಿಂಗಲ್ಸ್ | 2023 |
| ಚಿರಾಗ್ ಶೆಟ್ಟಿ/ಸಾತ್ವಿಕ್ ಸಾಯಿರಾಜ್ ರಣಕಿರೆಡ್ಡಿ | ಕಂಚು | ಪುರುಷರ ಡಬಲ್ಸ್ | 2025 |

### ಅಕಾನೆಗೆ ಮಹಿಳಾ ಸಿಂಗಲ್ಸ್ ಪ್ರಶಸ್ತಿ

ಪ್ಯಾರಿಸ್ (ಎಎಫ್‌ಪಿ): ಜಪಾನ್‌ನ ಅಕಾನೆ ಯಮಾಗುಚಿ ಅವರು ಭಾನುವಾರ ನಡೆದ ಫೈನಲ್‌ನಲ್ಲಿ ಚೀನಾದ ಚೆನ್ ಯೂಫಿ ಅವರನ್ನು 21-09, 21-13, ರಿಂದ ಸೋಲಿಸಿ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಷಿಪ್ ಮಹಿಳಾ ಸಿಂಗಲ್ಸ್ ಪ್ರಶಸ್ತಿ ಗೆದ್ದುಕೊಂಡರು.

ಐದನೇ ಶ್ರೇಯಾಂಕ ಪಡೆದಿದ್ದ ಜಪಾನ್‌ನ ಆಟಗಾರ್ತಿ ಯಾವ ಹಂತದಲ್ಲೂ ತೊಂದರೆಗೆ ಸಿಲುಕಲಿಲ್ಲ. ಕೇವಲ 37 ನಿಮಿಷಗಳಲ್ಲಿ ವಿಶ್ವದ ಮಾಜಿ ಅಗ್ರಮಾನ್ಯ ಆಟಗಾರ್ತಿ ಯುಫಿ ಅವರನ್ನು ಮಣಿಸಿದರು. ಅಕಾನೆ ಅವರು 2021 ಮತ್ತು 2022ರಲ್ಲೂ ಚಿನ್ನದ ಪದಕ ಗೆದ್ದುಕೊಂಡಿದ್ದರು.

2020ರ ಟೋಕಿಯೊ ಒಲಿಂಪಿಕ್ಸ್ ಸ್ವರ್ಣ ವಿಜೇತೆ ಚೆನ್ ಅವರು ಪಾದದ ನೋವಿಗೆ ಒಳಗಾದಂತೆ ಕಂಡರು. ಹಾಲಿ ಚಾಂಪಿಯನ್ ಹಾಗೂ ಅಗ್ರ ಶ್ರೇಯಾಂಕದ ಆನ್ ಸೆ-ಯಂಗ್ (ದಕ್ಷಿಣ ಕೊರಿಯಾ) ಅವರ ವಿರುದ್ಧ ಸೆಮಿಫೈನಲ್ ಪಂದ್ಯ ಗೆಲ್ಲುವ ಮೊದಲು ಅವರು ಪಾದದ ತಿರುಚುವಿಕೆಗೆ ಒಳಗಾಗಿದ್ದರು.

## ❖ 'ಎಜುಕೇಟ್ ಗರ್ಲ್ಸ್'ಗೆ ಮ್ಯಾಗ್ಸೆಸೆ

**ಸಂದರ್ಭ:** ಹೆಣ್ಣುಮಕ್ಕಳಿಗೆ ಶಿಕ್ಷಣ ನೀಡಿ, ವಿವಿಧ ರೀತಿಯ ಶೋಷಣೆಯಿಂದ ಅವರನ್ನು ವಿಮೋಚನೆಗೊಳಿಸುವಲ್ಲಿ ನಿರತವಾಗಿರುವ ಸ್ವಯಂ ಸೇವಾ ಸಂಸ್ಥೆ 'ಎಜುಕೇಟ್ ಗರ್ಲ್ಸ್'ಗೆ ಈ ಬಾರಿಯ ಪ್ರತಿಷ್ಠಿತ ರೇಮನ್ ಮ್ಯಾಗ್ಸೆಸೆ ಪ್ರಶಸ್ತಿ ಲಭಿಸಿದೆ.

- **'ಎಜುಕೇಟ್ ಗರ್ಲ್ಸ್' ಸಂಸ್ಥೆಯು ರೇಮನ್ ಮ್ಯಾಗ್ಸೆಸೆ ಪ್ರಶಸ್ತಿಗೆ ಆಯ್ಕೆಯಾಗಿರುವ ಭಾರತದ ಮೊದಲ ಸಂಘಟನೆಯಾಗಿದೆ.** ಇದೊಂದು ಐತಿಹಾಸಿಕ ಕ್ಷಣ' ಎಂದು ರೇಮನ್ ಮ್ಯಾಗ್ಸೆಸೆ ಅವಾರ್ಡ್ ಫೌಂಡೇಷನ್ (ಆರ್‌ಎಂಎಎಫ್) ಪ್ರಕಟಣೆಯಲ್ಲಿ ತಿಳಿಸಿದೆ.
- 'ದಿ ಫೌಂಡೇಷನ್ ಟು ಎಜುಕೇಟ್ ಗರ್ಲ್ಸ್ ಗ್ಲೋಬಲಿ' ಎಂಬುದು ಸಂಸ್ಥೆಯ ಮೂಲ ಹೆಸರಾಗಿದ್ದು, ಇದು 'ಎಜುಕೇಟ್ ಗರ್ಲ್ಸ್' ಎಂದೇ ಪ್ರಸಿದ್ಧ. **ಸಫೀನಾ ಹುಸೇನ್ ಅವರು ಸಂಘಟನೆಯನ್ನು 2007ರಲ್ಲಿ ಸ್ಥಾಪಿಸಿದ್ದಾರೆ.**
- ಫಿಲಿಪ್ಪೀನ್ಸ್ ರಾಜಧಾನಿ ಮನಿಲಾದಲ್ಲಿ ನವೆಂಬರ್ 7ರಂದು ನಡೆಯುವ ಸಮಾರಂಭದಲ್ಲಿ 67ನೇ ರೇಮನ್ ಮ್ಯಾಗ್ಸೆಸೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.
- **ಪರಿಸರ ಸಂರಕ್ಷಣೆ ಕ್ಷೇತ್ರದಲ್ಲಿನ ಕಾರ್ಯಕ್ಕಾಗಿ ಮಾಲ್ದೀವ್ಸ್‌ನ ಶಾಹಿನಾ ಅಲಿ ಹಾಗೂ ಫಿಲಿಪ್ಪೀನ್ಸ್‌ನ ಫ್ಲಾವಿಯಾನೊ ಆಂಟೊನಿಯೊ ಎಲ್ ವಿಲ್ಲಾನುಯೆವಾ ಅವರಿಗೂ ಈ ಪ್ರತಿಷ್ಠಿತ ಪ್ರಶಸ್ತಿ ಲಭಿಸಿದೆ.**

ಐತಿಹಾಸಿಕ ಕ್ಷಣ: ಸಫೀನಾ

- 'ಸಂಸ್ಥೆಗೆ ರೇಮನ್ ಮ್ಯಾಗ್ಸೆಸೆ ಪ್ರಶಸ್ತಿ ಲಭಿಸಿರುವುದು ಭಾರತದ ಪಾಲಿಗೆ ಐತಿಹಾಸಿಕ ಕ್ಷಣ. ದೇಶದ ಮೂಲೆಯೊಂದರಲ್ಲಿ ಒಬ್ಬ ಬಾಲಕಿಯಿಂದ ಈ ಶಿಕ್ಷಣ ಅಭಿಯಾನ ಆರಂಭಗೊಂಡಿತು. ಜನರೇ ಮುನ್ನಡೆಸುತ್ತಿರುವ ಚಳವಳಿಯೊಂದು ಈಗ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿರುವುದು ಖುಷಿ ತಂದಿದೆ' ಎಂದು 'ಎಜುಕೇಟ್ ಗರ್ಲ್ಸ್'ನ ಸಂಸ್ಥಾಪಕಿ ಸಫೀನಾ ಹುಸೇನ್ ಹೇಳಿದರು.
- 'ಸಂಘಟನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 'ಟೀಮ್ ಬಾಲಿಕಾ'ದ ಸ್ವಯಂ ಸೇವಕರು, ಪಾಲುದಾರರು, ಬೆಂಬಲ ನೀಡುತ್ತಿರುವವರಿಗೆ ಈ ಪ್ರಶಸ್ತಿಯಿಂದ ಗೌರವ ಸಿಕ್ಕಂತಾಗಿದೆ. ಅಲ್ಲದೇ, ಲಕ್ಷಾಂತರ ಬಾಲಕಿಯರು ತಮ್ಮ ಶಿಕ್ಷಣದ ಹಕ್ಕನ್ನು ಮರಳಿ ಪಡೆದಿರುವುದನ್ನು ಸಹ ಈ ಪ್ರಶಸ್ತಿ ದೃಢೀಕರಿಸುತ್ತದೆ' ಎಂದರು.
- 'ಸಾಂಪ್ರದಾಯಿಕ ಕಟ್ಟಳೆಗಳ ಬಂಧನ ಹಾಗೂ ಅನಕ್ಷರತೆಯಿಂದ ಬಾಲಕಿಯರು ಮತ್ತು ಯುವತಿಯರನ್ನು ಮುಕ್ತರನ್ನಾಗಿಸುವುದು, ಆ ಮೂಲಕ ಅವರಲ್ಲಿ ಧೈರ್ಯ ತುಂಬುವುದು, ಕೌಶಲಗಳನ್ನು ಮೈಗೂಡಿಸಿಕೊಳ್ಳುವಂತೆ ಮಾಡಿ, ಅವರಲ್ಲಿನ ಸುಪ್ತಪ್ರತಿಭೆಯನ್ನು ಪೋಷಿಸುವ ದಿಸೆಯಲ್ಲಿ 'ಎಜುಕೇಟ್ ಗರ್ಲ್ಸ್' ಪ್ರದರ್ಶಿಸಿದ ಬದ್ಧತೆ ಗಮನಿಸಿ, ಏಷ್ಯಾದ ಈ ಪ್ರತಿಷ್ಠಿತ ಪ್ರಶಸ್ತಿಗೆ ಸಂಘಟನೆಯನ್ನು ಆಯ್ಕೆ ಮಾಡಲಾಗಿದೆ' ಎಂದು ಆರ್‌ಎಂಎಎಫ್ ತಿಳಿಸಿದೆ.
- **'ರಾಜಸ್ಥಾನದಲ್ಲಿ ಆರಂಭಗೊಂಡ ಸಂಘಟನೆಯು ಶಾಲೆಯಿಂದ ದೂರ ಉಳಿದ ಹಾಗೂ ಶಾಲೆಯನ್ನು ಅರ್ಧಕ್ಕೆ ಬಿಟ್ಟ ಬಾಲಕಿಯರನ್ನು ಗುರುತಿಸಿ, ಅವರನ್ನು ಪುನಃ ಶಿಕ್ಷಣದ ಮುಖ್ಯ ವಾಹಿನಿಗೆ ತರುವ ಕೆಲಸ ಆರಂಭಿಸಿತು. ಅವರು ಉನ್ನತ ಶಿಕ್ಷಣ ಪೂರೈಸಿ, ಉದ್ಯೋಗ ಪಡೆಯುವವರೆಗೆ ಅವರ ಬೆಂಬಲಕ್ಕೆ ನಿಲ್ಲುವ ಕಾರ್ಯ ಮಾಡುತ್ತಿದೆ'** ಎಂದು ಫೌಂಡೇಷನ್ ಹೇಳಿದೆ.

Dr. Rajkumar IAS/KAS Academy

- 'ಪ್ರಾಯೋಗಿಕವಾಗಿ 50 ಗ್ರಾಮಗಳ ಶಾಲೆಗಳಲ್ಲಿ ತನ್ನ ಕಾರ್ಯಕ್ರಮ ಆರಂಭಿಸಿದ್ದ ಸಂಘಟನೆ, ದೇಶದಾದ್ಯಂತ 30 ಸಾವಿರಕ್ಕೂ ಅಧಿಕ ಗ್ರಾಮಗಳಿಗೆ ತನ್ನ ಕಾರ್ಯಚಟುವಟಿಕೆಗಳನ್ನು ವಿಸ್ತರಿಸಿದೆ. 20 ಲಕ್ಷಕ್ಕೂ ಅಧಿಕ ಬಾಲಕಿಯರಿಗೆ ಶಿಕ್ಷಣ ನೀಡಿದೆ' ಎಂದೂ ತಿಳಿಸಿದೆ.

## ❖ ವ್ಯಾಪಾರ ಕೊರತೆ: ಕಳವಳಕಾರಿ ಮಟ್ಟಕ್ಕೆ

### ಚೀನಾದೊಂದಿಗೆ ದ್ವಿಪಕ್ಷೀಯ ವ್ಯಾಪಾರ; ಭಾರತದ ಪಾಲು ಗಣನೀಯ ಕುಸಿತ

# ವ್ಯಾಪಾರ ಕೊರತೆ: ಕಳವಳಕಾರಿ ಮಟ್ಟಕ್ಕೆ



ಪ್ರಧಾನಿ ನರೇಂದ್ರ ಮೋದಿ ಅವರು ಚೀನಾಕ್ಕೆ ಏಳು ವರ್ಷಗಳ ಬಳಿಕ ಭೇಟಿ ನೀಡಿ ಅಲ್ಲಿನ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರನ್ನು ಭೇಟಿ ಮಾಡಿದ್ದಾರೆ. ಶಾಂಘೈ ಸಹಕಾರ ಸಂಘಟನೆಯ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿಯವರು ತೆರಳಿದ್ದರೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಮೇಲೆ ಶೇ 50ರಷ್ಟು ಸುಂಕ ಹೇರಿದ ಬೆನ್ನಲ್ಲೇ ಇಬ್ಬರೂ ನಾಯಕರು ಮಾತುಕತೆ ನಡೆಸಿರುವುದಕ್ಕೆ ಜಾಗತಿಕ ಮಟ್ಟದಲ್ಲಿ ಮಹತ್ವ ದೊರೆತಿದೆ. ಗಡಿ ವಿವಾದ, ದ್ವಿಪಕ್ಷೀಯ ವ್ಯಾಪಾರ, ಭಯೋತ್ಪಾದನೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಇಬ್ಬರೂ ನಾಯಕರು ಚರ್ಚೆ ನಡೆಸಿದ್ದಾರೆ. ಇದೇ ಹೊತ್ತಿನಲ್ಲಿ ಹಲವು ಕೈಗಾರಿಕಾ ವಲಯಗಳಿಗೆ ಸಂಬಂಧಿಸಿದ ಸರಕುಗಳಿಗೆ ಚೀನಾವನ್ನು ಅವಲಂಬಿಸಿರುವ ಭಾರತವು, ಅದರೊಂದಿಗೆ ಹೊಂದಿರುವ ವ್ಯಾಪಾರ ಕೊರತೆ ಕಳವಳಕಾರಿ ಮಟ್ಟಕ್ಕೆ ಏರಿಕೆ ಕಂಡಿರುವ ಸಂಗತಿಯೂ ಮುನ್ನೆಲೆಗೆ ಬಂದಿದೆ



ಪ್ರಜಾವಾಣಿ ವಾರ್ತೆ

ಲಡಾಖ್‌ನ ಗಾಲ್ವನ್ ಕಣಿವೆಯಲ್ಲಿ 2020ರ ಜೂನ್‌ನಲ್ಲಿ ನಡೆದ ಸೇನಾ ಸಂಘರ್ಷದ ಬಳಿಕ ಭಾರತ-ಚೀನಾ ನಡುವಿನ ಗಡಿವಿವಾದ ಮತ್ತಷ್ಟು ಬಿಗಡಾಯಿಸಿ ದ್ವಿಪಕ್ಷೀಯ ಸಂಬಂಧದಲ್ಲಿ ಉಂಟಾಗಿದ್ದ ಬಿರುಕನ್ನು ಸರಿಪಡಿಸುವ ಪ್ರಯತ್ನ ಕಳೆದ ವರ್ಷದಿಂದ ಎರಡೂ ರಾಷ್ಟ್ರಗಳು ಮಾಡುತ್ತಿವೆ. ಈಗ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸುಂಕ ಹೇರಿಕೆಯಿಂದಾಗಿ ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾಗಳನ್ನೊಳಗೊಂಡ 'ಬ್ರಿಕ್ಸ್' ಇನ್ನಷ್ಟು ಸಂಘಟಿತವಾಗುತ್ತಿದೆ. ಇದೇ ನೆಪದಲ್ಲಿ, ದ್ವಿಪಕ್ಷೀಯ ಸಂಬಂಧವನ್ನು ಇನ್ನಷ್ಟು ಸುಧಾರಿಸುವತ್ತ ಭಾರತ-ಚೀನಾ ಹೆಜ್ಜೆ ಇಟ್ಟಿವೆ. ಇದರ ಮುಂದುವರಿದ ಭಾಗವಾಗಿ ತಿಯಾನ್‌ಜಿನ್‌ನಲ್ಲಿ ಪ್ರಧಾನಿ ಮೋದಿ ಮತ್ತು ಚೀನಾ ಅಧ್ಯಕ್ಷ ಜಿನ್‌ಪಿಂಗ್ ಅವರ ನಡುವೆ ದ್ವಿಪಕ್ಷೀಯ ಮಾತುಕತೆ ನಡೆದಿದೆ ಎಂದು ಹೇಳಲಾಗುತ್ತಿದೆ. ಗಡಿ ವಿವಾದ ಬಗೆಹರಿಸುವುದು, ದ್ವಿಪಕ್ಷೀಯ ವ್ಯಾಪಾರವನ್ನು ಇನ್ನಷ್ಟು ಹೆಚ್ಚಿಸುವುದು, ಭಯೋತ್ಪಾದನೆಯ ವಿರುದ್ಧ ಹೋರಾಡುವುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ಇಬ್ಬರೂ ಮಾತುಕತೆ ನಡೆಸಿದ್ದಾರೆ. ದ್ವಿಪಕ್ಷೀಯ ವ್ಯಾಪಾರ ವೃದ್ಧಿಯ ಜೊತೆಗೆ ವ್ಯಾಪಾರ ಕೊರತೆಯ ಬಗ್ಗೆಯೂ ಸಭೆಯಲ್ಲಿ ಚರ್ಚೆಯಾಗಿದೆ ಎಂದು ವರದಿಯಾಗಿದೆ.

ಭಾರತ ಮತ್ತು ಚೀನಾದ ನಡುವೆ ದ್ವಿಪಕ್ಷೀಯ ವ್ಯಾಪಾರ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದ್ದರೂ ಚೀನಾದೊಂದಿಗೆ ಭಾರತ ಹೊಂದಿರುವ ವ್ಯಾಪಾರ ಕೊರತೆಯು ಕಳವಳಕಾರಿ ಮಟ್ಟಕ್ಕೆ ಏರಿದೆ. ಭಾರತವು ಜಗತ್ತಿನ ವಿವಿಧ ರಾಷ್ಟ್ರಗಳೊಂದಿಗೆ ಹೊಂದಿರುವ ವ್ಯಾಪಾರ ಕೊರತೆಗೆ ಹೋಲಿಸಿದರೆ, ಚೀನಾದೊಂದಿಗೆ ಗರಿಷ್ಠ ವ್ಯಾಪಾರ ಕೊರತೆ ಹೊಂದಿದೆ. ಆತಂಕಕಾರಿ ಸಂಗತಿ ಎಂದರೆ, ಈ ಕೊರತೆಯು ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ. ದ್ವಿಪಕ್ಷೀಯ ವ್ಯಾಪಾರದಲ್ಲಿ 20 ವರ್ಷಗಳ ಹಿಂದೆ ಭಾರತದ ಪಾಲು ಶೇ 42.3ರಷ್ಟು ಇದ್ದಿದ್ದರೆ, ಅದೀಗ ಶೇ 11.2ಕ್ಕೆ ಕುಸಿದಿದೆ.

2024-25ನೇ ಸಾಲಿನಲ್ಲಿ ವ್ಯಾಪಾರ ಕೊರತೆಯ ಮೌಲ್ಯ ₹8.74 ಲಕ್ಷ ಕೋಟಿ (9,921 ಕೋಟಿ ಡಾಲರ್). 2003-2004ರಲ್ಲಿ ಇದ್ದಿದ್ದು ಕೇವಲ ₹9,697 ಕೋಟಿ. ಅಂದರೆ, ಎರಡು ದಶಕಗಳಲ್ಲಿ ಭಾರತದ ವ್ಯಾಪಾರದ ಕೊರತೆ 90 ಪಟ್ಟು ಹೆಚ್ಚಾಗಿದೆ. 2023-24ರಲ್ಲಿ ಈ ಕೊರತೆ ₹7.50 ಲಕ್ಷ ಕೋಟಿಯಷ್ಟಿತ್ತು. ಈ ವರ್ಷದ ಏಪ್ರಿಲ್-ಜುಲೈ ನಡುವಿನ ವ್ಯಾಪಾರದಲ್ಲಿ ಈ ಕೊರತೆ ₹3.58 ಲಕ್ಷದಷ್ಟಿದೆ.

**ಚೀನಾದ ಮೇಲೆ ಹೆಚ್ಚಿದ ಅವಲಂಬನೆ:** ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ 2014ರಲ್ಲಿ 'ಮೇಕ್ ಇನ್ ಇಂಡಿಯಾ' ಎಂಬ ಮಹತ್ವಾಕಾಂಕ್ಷಿ ಯೋಜನೆಯನ್ನು ಘೋಷಿಸಿತ್ತು. ಚೀನಾ ಸೇರಿದಂತೆ ವಿವಿಧ ರಾಷ್ಟ್ರಗಳ ಮೇಲಿನ ಅವಲಂಬನೆಯನ್ನು ತಗ್ಗಿಸುವ ಉದ್ದೇಶದಿಂದ ಇಲ್ಲಿನ ಕಂಪನಿಗಳಿಗೆ ಭಾರತದಲ್ಲೇ ತಯಾರಿಸಲು ಪ್ರೋತ್ಸಾಹ ನೀಡಿ, ದೇಶವನ್ನು ಜಾಗತಿಕ ತಯಾರಿಕಾ ಕೇಂದ್ರವನ್ನಾಗಿ ರೂಪಿಸುವುದು ಮತ್ತು ಆ ಮೂಲಕ ದೇಶದಲ್ಲಿ ಹೆಚ್ಚು ಉದ್ಯೋಗ ಸೃಷ್ಟಿಸುವ ಉದ್ದೇಶವನ್ನು ಈ ಯೋಜನೆ ಹೊಂದಿದೆ. 'ಮೇಕ್ ಇನ್ ಇಂಡಿಯಾ' ಅನುಷ್ಠಾನಕ್ಕೆ ಬಂದು 11 ವರ್ಷಗಳಾಗಿದ್ದರೂ ಅದರ ನೈಜ ಉದ್ದೇಶ ಈಡೇರಿಲ್ಲ. ಮೊಬೈಲ್, ಕಂಪ್ಯೂಟರ್, ಸೋಲಾರ್ ಘಟಕಗಳು, ಕೆಲವು ರಕ್ಷಣಾ ಸಲಕರಣೆಗಳನ್ನು ಇಲ್ಲಿ ಜೋಡಿಸಲಾಗುತ್ತಿದ್ದರೂ (ಅಸೆಂಬಲ್) ಅವುಗಳ ಬಿಡಿಭಾಗಗಳು ವಿದೇಶಗಳಿಂದ ವಿಶೇಷವಾಗಿ ಚೀನಾದಿಂದಲೇ ಬರುತ್ತಿವೆ. ಇದು ಸಂಪೂರ್ಣ 'ಮೇಕ್ ಇನ್ ಇಂಡಿಯಾ' ಅಲ್ಲ ಎಂಬುದು ತಜ್ಞರ ವಾದ. ಹೊರ ದೇಶಗಳಿಂದ ಮಾಡಲಾಗುತ್ತಿರುವ ಆಮದು ಕಡಿಮೆ ಮಾಡಬೇಕಾದರೆ, ಭಾರತದಲ್ಲೇ ವಸ್ತುಗಳನ್ನು ತಯಾರಿಸಬೇಕು. ಸ್ಥಳೀಯವಾಗಿ ತಂತ್ರಜ್ಞಾನ ಅಭಿವೃದ್ಧಿ ಪಡಿಸಬೇಕು ಎಂಬುದು ಅವರ ಸಲಹೆ.

ದೇಶೀಯವಾಗಿ ತಯಾರಿಕೆಗೆ ಉತ್ತೇಜನ ನೀಡುವುದಕ್ಕಾಗಿ ಕೇಂದ್ರ ಸರ್ಕಾರ 14 ವಲಯಗಳಲ್ಲಿ ತಯಾರಿಕೆಗೆ ಸಂಬಂಧಿಸಿದ ಪ್ರೋತ್ಸಾಹಕ (ಪಿಎಲ್‌ಐ) ಯೋಜನೆಗಳನ್ನು ಘೋಷಿಸಿದೆ. ಅಲ್ಲದೇ, ಕಳಪೆ ಗುಣಮಟ್ಟದ ಸರಕುಗಳ ಆಮದಿಗೆ ಕಡಿವಾಣ ಹಾಕುವುದಕ್ಕಾಗಿ ಕಠಿಣ ಗುಣಮಟ್ಟ ಮಾನದಂಡಗಳು, ಪರೀಕ್ಷೆ ಮತ್ತು ಪ್ರಮಾಣೀಕರಣ ವ್ಯವಸ್ಥೆಯನ್ನು ರೂಪಿಸಿದೆ. ಪೂರೈಕೆ ವ್ಯವಸ್ಥೆಗಾಗಿ ಒಂದರ ಬದಲು ವಿವಿಧ ಮೂಲಗಳನ್ನು ಅವಲಂಬಿಸಬೇಕು ಎಂದು ಉದ್ದಿಮೆಗಳಿಗೆ ಸೂಚಿಸಿದೆ. ಇಂತಹ ಹಲವು ಕ್ರಮಗಳನ್ನು ಕೈಗೊಂಡಿದ್ದರೂ ಆಮದಿನ ಮೇಲಿನ ಅವಲಂಬನೆಯನ್ನು ಗಣನೀಯವಾಗಿ ತಗ್ಗಿಸಲು ಸಾಧ್ಯವಾಗಿಲ್ಲ.

ಭಾರತವು ಈಗ ಬಹುತೇಕ ಎಲ್ಲ ವಲಯಗಳಲ್ಲೂ ಸರಕುಗಳಿಗಾಗಿ ಚೀನಾವನ್ನೇ ಅವಲಂಬಿಸಿದೆ. ಪ್ರತಿಯೊಂದು ಕೈಗಾರಿಕಾ ವಲಯಕ್ಕೂ ಪೂರೈಕೆಯಾಗುತ್ತಿರುವ ವಸ್ತುಗಳಲ್ಲಿ ಚೀನಾವೇ ಮೇಲುಗೈ ಸಾಧಿಸಿದೆ. ಔಷಧಗಳು, ಎಲೆಕ್ಟ್ರಾನಿಕ್ಸ್‌ನಿಂದ ಹಿಡಿದು ಕಟ್ಟಡ ನಿರ್ಮಾಣ ವಸ್ತುಗಳು, ನವೀಕರಿಸಬಹುದಾದ ಇಂಧನ, ಗ್ರಾಹಕರ ಸರಕುಗಳು, ಹೀಗೆ ಎಲ್ಲದರಲ್ಲೂ ಚೀನಾದ್ದೇ ಪಾರಮ್ಯ. ಇದು ಕಳವಳಕಾರಿ ಸಂಗತಿ ಎಂದು ಚಿಂತಕರ ಚಾವಡಿ ಜಿಟಿಆರ್‌ಐ (ಗ್ಲೋಬಲ್ ಟ್ರೇಡ್ ರಿಸರ್ಚ್ ಇನಿಷಿಯೇಟಿವ್) ಹೇಳಿದೆ.

ಅರಿಥ್ರೋಮೈಸಿನ್‌ನಂತಹ ಆ್ಯಂಟಿಬಯಾಟಿಕ್‌ಗಳ ಪೂರೈಕೆಯಲ್ಲಿ ಚೀನಾದ ಪಾಲು ಶೇ 97.7ರಷ್ಟಿದೆ. ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿ ಶೇ 96.8ರಷ್ಟು ಸಿಲಿಕಾನ್ ಬಿಲ್ಲೆಗಳನ್ನು (ಸಿಲಿಕಾನ್ ವೇಫರ್ಸ್) ಚೀನಾವು ಭಾರತಕ್ಕೆ ರಫ್ತು ಮಾಡುತ್ತದೆ. ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಶೇ 82.7ರಷ್ಟು ಸೌರಕೋಶಗಳು ಚೀನಾದಿಂದ ಬರುತ್ತವೆ. ಭಾರತಕ್ಕೆ ಪೂರೈಕೆಯಾಗುವ ಲಿಥಿಯಂ ಬ್ಯಾಟರಿಗಳಲ್ಲಿ ಚೀನಾದ ಕೊಡುಗೆ ಶೇ 75.2ರಷ್ಟಿದೆ.

'ಕಚ್ಚಾ ವಸ್ತುಗಳು, ವಾಹನಗಳು, ಮೊಬೈಲ್, ಕಂಪ್ಯೂಟರ್ ಬಿಡಿಭಾಗಗಳು, ಯಂತ್ರೋಪಕರಣಗಳು, ಔಷಧಿಗಳಿಗೆ ಸಂಬಂಧಿಸಿದ ವಸ್ತುಗಳನ್ನು ಚೀನಾದಿಂದ ಆಮದು ಮಾಡಿಕೊಂಡು, ಉತ್ಪನ್ನಗಳನ್ನು ಇಲ್ಲಿ ತಯಾರಿಸಿ ನಂತರ ರಫ್ತು ಮಾಡಲಾಗುತ್ತದೆ' ಎಂದು ಹೇಳುತ್ತದೆ ಹಣಕಾಸು ಸಚಿವಾಲಯ. ದೇಶೀಯ ಮಾರುಕಟ್ಟೆಯಲ್ಲಿ ಈ ವಸ್ತುಗಳ ಬೇಡಿಕೆ ಮತ್ತು ಪೂರೈಕೆ ನಡುವೆ ದೊಡ್ಡ ಮಟ್ಟದ ಅಂತರ ಇರುವುದರಿಂದ ಕಚ್ಚಾ ವಸ್ತುಗಳು ಮತ್ತು ಬಿಡಿಭಾಗಗಳನ್ನು ಆಮದು ಮಾಡಿಕೊಳ್ಳಬೇಕಾಗಿದೆ ಎಂಬುದು ಅದರ ಸಮಜಾಯಿಷಿ.

ಆಧಾರ: ಪಿಟಿಐ, ಹಣಕಾಸು ಸಚಿವಾಲಯ, ಬೀಜಿಂಗ್‌ನಲ್ಲಿನ ಭಾರತದ ರಾಯಭಾರ ಕಚೇರಿ ವೆಬ್‌ಸೈಟ್, ಮಾಧ್ಯಮ ವರದಿಗಳು

**ವ್ಯಾಪಾರ ಕೊರತೆ**

ಒಂದು ದೇಶವು ನಿರ್ದಿಷ್ಟ ದೇಶಕ್ಕೆ ಮಾಡುವ (ನಿಗದಿತ ಅವಧಿಯಲ್ಲಿ) ರಫ್ತಿನ ಮೌಲ್ಯವು, ಆ ದೇಶದಿಂದ ಆಮದು ಮಾಡಿಕೊಳ್ಳುವ ವಸ್ತುಗಳ ಮೌಲ್ಯಕ್ಕಿಂತ ಕಡಿಮೆ ಇದ್ದರೆ, ಅವೆರಡರ ನಡುವಿನ ವ್ಯತ್ಯಾಸವನ್ನು ವ್ಯಾಪಾರ ಕೊರತೆ ಎನ್ನಲಾಗುತ್ತದೆ.




**ಭಾರತ– ಚೀನಾ ದ್ವಿಪಕ್ಷೀಯ ವ್ಯಾಪಾರ** (ಲಕ್ಷ ಕೋಟಿಗಳಲ್ಲಿ)

| | ಭಾರತದ ರಫ್ತು | ಭಾರತದ ಆಮದು | ಕೊರತೆ | ವ್ಯತ್ಯಾಸ |
|---|---|---|---|---|
| 2019-20 | ₹1.46 | ₹5.75 | ₹4.29 | -5.97% |
| 2020-21 | ₹1.86 | ₹5.74 | ₹3.88 | 5.53% |
| 2021-22 | ₹1.90 | ₹8.34 | ₹6.44 | 34.41% |
| 2022-23 | ₹1.35 | ₹8.68 | ₹7.33 | -1.99% |
| 2023-24 | ₹1.47 | ₹8.97 | ₹7.50 | 4.02% |
| 2024-25 | ₹1.26 | ₹10.00 | ₹8.74 | 7.86% |
| 2025-26* | ₹0.51 | ₹3.58 | ₹3.07 | |

* ಏಪ್ರಿಲ್– ಜುಲೈ

(ವ್ಯಾಪಾರ ಮೌಲ್ಯವನ್ನು ಲೆಕ್ಕಹಾಕುವಾಗ ಪ್ರತಿ ಡಾಲರ್‌ಗೆ ಈಗಿರುವ ರೂಪಾಯಿ ಮೌಲ್ಯವನ್ನು (₹88.15) ಪರಿಗಣಿಸಲಾಗಿದೆ)

**ರಫ್ತು:** ಅದಿರುಗಳು, ಅದಿರಿನ ಉಪ ಉತ್ಪನ್ನಗಳು, ಖನಿಜ ಇಂಧನಗಳು, ಖನಿಜ ತೈಲಗಳು ಮತ್ತು ಅವುಗಳ ಉಪ ಉತ್ಪನ್ನಗಳು, ಸೇರಿದಂತೆ ಎಂಜಿನಿಯರಿಂಗ್ ಸಲಕರಣೆಗಳು, ಮೀನು, ಸಿಗಡಿ ಸೇರಿದಂತೆ ವಿವಿಧ ಸಾಗರ ಉತ್ಪನ್ನಗಳು, ಹತ್ತಿ, ಮಸಾಲೆ ಪದಾರ್ಥಗಳು, ಇಂಗಾಲದ ಅಂಶಗಳನ್ನೊಳಗೊಂಡ ರಾಸಾಯನಿಕಗಳು, ಇತ್ಯಾದಿ

**ಆಮದು:** ಕಂಪ್ಯೂಟರ್, ಲ್ಯಾಪ್‌ಟಾಪ್, ಮೊಬೈಲ್ ಫೋನ್ ಹಾಗೂ ಅವುಗಳ ಬಿಡಿಭಾಗಗಳು ಸೇರಿದಂತೆ ಎಲೆಕ್ಟ್ರಾನಿಕ್ಸ್ ವಸ್ತುಗಳು, ಯಂತ್ರೋಪಕರಣಗಳು, ವಿವಿಧ ಕೈಗಾರಿಕೆಗಳಲ್ಲಿ ಬಳಸುವ ರಾಸಾಯನಿಕಗಳು, ಕಬ್ಬಿಣ, ಉಕ್ಕು, ವೈದ್ಯಕೀಯ ಸಲಕರಣೆಗಳು, ಔಷಧಿಗಳು, ಪ್ಲಾಸ್ಟಿಕ್, ರಸಗೊಬ್ಬರಗಳು, ಆಟಿಕೆ, ವಾಹನ ಮತ್ತು ಬಿಡಿಭಾಗಗಳು, ಜವಳಿ ಉತ್ಪನ್ನಗಳು, ಲಿಥಿಯಂ ಬ್ಯಾಟರಿಗಳು, ಅಪರೂಪದ ಲೋಹಗಳು ಇತ್ಯಾದಿ

**ಆತಂಕಕಾರಿ ಏಕೆ?**

- ಭಾರತದ ಸರಕು ಪೂರೈಕೆ ವ್ಯವಸ್ಥೆಯ ಮೇಲೆ ಚೀನಾ ಹಿಡಿತ ಸಾಧಿಸಬಹುದು
- ಗಡಿ ವಿವಾದ ಸೇರಿದಂತೆ ಉಭಯ ರಾಷ್ಟ್ರಗಳ ನಡುವೆ ಯಾವುದೇ ಬಿಕ್ಕಟ್ಟು ಉದ್ಭವವಾದರೆ ಭಾರತದ ಮೇಲೆ ಒತ್ತಡ ಹೇರುವುದಕ್ಕೆ ಇದನ್ನೇ ಗುರಾಣಿಯನ್ನಾಗಿ ಬಳಸಬಹುದು. ರಫ್ತಿನ ಮೇಲೆ ಚೀನಾ ನಿರ್ಬಂಧ ಹೇರಿದರೆ, ಅದು ಭಾರತದ ಅರ್ಥವ್ಯವಸ್ಥೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಲಿದೆ (ವಾಹನಗಳ ತಯಾರಿಕೆಗೆ ಪ್ರಮುಖವಾಗಿ ಬೇಕಾಗಿದ್ದ ಅಪರೂಪದ ಖನಿಜ ಲೋಹಗಳ ರಫ್ತಿಗೆ ಚೀನಾ ನಿರ್ಬಂಧ ಹೇರಿತ್ತು. ಇದು ಭಾರತದ ವಾಹನ ಉದ್ಯಮದ ಮೇಲೆ ಪರಿಣಾಮ ಬೀರಿತ್ತು)
- ವಿದೇಶಿ ವಿನಿಮಯ ಮೀಸಲಿನ ಮೇಲೆ ಒತ್ತಡ ಬೀಳುತ್ತದೆ
- ವಿದೇಶಿ ಪೂರೈಕೆದಾರರ ಮೇಲೆ ಅವಲಂಬನೆ ಮತ್ತು ಕಡಿಮೆ ಬೆಲೆಯ ವಸ್ತುಗಳ ಆಮದಿನಿಂದ ಸ್ಥಳೀಯ ತಯಾರಕರ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ
- ಕರೆನ್ಸಿ ಮೌಲ್ಯದ ಕುಸಿತದಿಂದ ಆಮದು ವೆಚ್ಚ ಹೆಚ್ಚುವುದಲ್ಲದೆ, ಅದು ಹಣದುಬ್ಬರ ಏರಿಕೆಗೆ ಕಾರಣವಾಗಬಹುದು
- ಹೊರದೇಶದ ಮೇಲಿನ ಅವಲಂಬನೆ ದೇಶದ ಕೈಗಾರಿಕಾ ಪ್ರಗತಿಗೆ ಅಡ್ಡಿಯಾಗಬಹುದು

## ❖ ಭ್ರಷ್ಟಾಚಾರ: 7,072 ಪ್ರಕರಣ ವಿಚಾರಣೆಗೆ ಬಾಕಿ

**ಸಂದರ್ಭ:** ಕೇಂದ್ರ ಜಾಗೃತ ಆಯೋಗವು (ಸಿವಿಸಿ) 2024 ಡಿಸೆಂಬರ್ 31ರವರೆಗಿನ ಅಂಕಿ ಅಂಶವನ್ನು ಬಿಡುಗಡೆ ಮಾಡಿದ್ದು, ಭ್ರಷ್ಟಾಚಾರದ ಆರೋಪಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆ ನಡೆಸಿರುವ ಒಟ್ಟು 7,072 ಪ್ರಕರಣಗಳು ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಉಳಿದಿವೆ. 2,660 ಪ್ರಕರಣಗಳು 10 ವರ್ಷಗಳಿಂದ ವಿಚಾರಣಾ ಹಂತದಲ್ಲೇ ಇವೆ ಎಂದು ಹೇಳಿದೆ.

- ಭ್ರಷ್ಟಾಚಾರ ಪ್ರಕರಣಗಳು ಮಾತ್ರವಲ್ಲ, ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿಬಿಐ ಮತ್ತು ಆರೋಪಿಗಳು ಸಲ್ಲಿಸಿರುವ ಸುಮಾರು 13,100 ಮೇಲ್ಮನವಿಗಳು/ ಮರು ಪರಿಶೀಲನಾ ಅರ್ಜಿಗಳು ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಗೆ ಬಾಕಿ ಇವೆ.
- ಇವುಗಳಲ್ಲಿ 606 ಮೇಲ್ಮನವಿಗಳ ವಿಚಾರಣೆ 20 ವರ್ಷಗಳಿಂದ ಹಾಗೂ 1,227 ಮನವಿಗಳ ವಿಚಾರಣೆ 15 ವರ್ಷಗಳಿಂದ ಬಾಕಿ ಉಳಿದಿವೆ. 2024ರಲ್ಲಿ ಸಿಬಿಐ ದಾಖಲಿಸಿದ 644 ಪ್ರಕರಣಗಳಲ್ಲಿ ವಿಚಾರಣೆ ಪೂರ್ಣಗೊಳಿಸಿ ಆದೇಶ ಪ್ರಕಟಿಸಲಾಗಿದೆ. ಇದರಲ್ಲಿ 392 ಪ್ರಕರಣಗಳಲ್ಲಿ ಅಪರಾಧ ಸಾಬೀತಾಗಿದೆ.
- 154 ಪ್ರಕರಣಗಳಲ್ಲಿ ಆರೋಪಿಗಳನ್ನು ನಿರ್ದೋಷಿ ಎಂದು ಘೋಷಿಸಲಾಗಿದೆ.
- 21 ಪ್ರಕರಣಗಳನ್ನು ಖುಲಾಸೆಗೊಳಿಸಲಾಗಿದೆ.
- 77 ಪ್ರಕರಣಗಳನ್ನು ಅನ್ಯ ಕಾರಣಗಳಿಗಾಗಿ ವಿಲೇವಾರಿ ಮಾಡಲಾಗಿದೆ.
- 2024ರಲ್ಲಿ ಶಿಕ್ಷೆಯ ಪ್ರಮಾಣ ಶೇ69.14ರಷ್ಟಿದ್ದರೆ 2023ರಲ್ಲಿ ಇದು ಶೇ 71.47ರಷ್ಟಿತ್ತು ಎಂದೂ ವರದಿ ಹೇಳಿದೆ.
- 2024ರ ಅಂತ್ಯದ ವೇಳೆಗೆ ವಿವಿಧ ನ್ಯಾಯಾಲಯಗಳಲ್ಲಿ ಭ್ರಷ್ಟಾಚಾರ ಮತ್ತು ಇತರೆ ಪ್ರಕರಣಗಳು ಸೇರಿ ಸಿಬಿಐ ತನಿಖೆಗೆ ಸಂಬಂಧಿಸಿದ ಒಟ್ಟು 11,384 ಪ್ರಕರಣಗಳು ವಿಚಾರಣೆಗೆ ಬಾಕಿ ಇದ್ದವು.

## ❖ ಅಮೆರಿಕ–ಭಾರತ ನಡುವಿನ ಅಂಚೆ ವ್ಯವಹಾರ ಸ್ಥಗಿತ

**ಸಂದರ್ಭ:** ಅಮೆರಿಕದ ಜೊತೆಗಿನ ಎಲ್ಲ ರೀತಿಯ ಅಂಚೆ ವ್ಯವಹಾರಗಳ ಮುಂಗಡ ಕಾಯ್ದಿರಿ ಸುವಿಕೆಯನ್ನು ಭಾರತೀಯ ಅಂಚೆ ಇಲಾಖೆ ಸ್ಥಗಿತಗೊಳಿಸಿದೆ.

- ಅಮೆರಿಕದ ಸೀಮಾಸುಂಕ ಇಲಾಖೆಯು ಜಾರಿಗೊಳಿಸಿರುವ ಹೊಸ ನಿಯಮಗಳ ಬಗ್ಗೆ ಸ್ಪಷ್ಟತೆ ಇಲ್ಲದಿರುವ ಕಾರಣಕ್ಕೆ ಈ ನಿರ್ಧಾರವನ್ನು ಕೈಗೊಳ್ಳಲಾಗಿದೆ ಎಂದು ಅಂಚೆ ಇಲಾಖೆ ತಿಳಿಸಿದೆ.
- ಅಮೆರಿಕ ಸರ್ಕಾರವು ಹೊಸ ಕಸ್ಟಮ್ ನಿಯಮಗಳನ್ನು ಜಾರಿಗೊಳಿಸಿದ ಬೆನ್ನಲ್ಲೇ ಭಾರತೀಯ ಅಂಚೆ ಇಲಾಖೆಯು ₹8,800ಕ್ಕಿಂತ (100 ಡಾಲರ್) ಅಧಿಕ ಮೌಲ್ಯದ ವಸ್ತುಗಳ ರವಾನೆಯನ್ನು ಈ ಹಿಂದೆ ತಾತ್ಕಾಲಿಕವಾಗಿ ಸ್ಥಗಿತ ಗೊಳಿಸಿತ್ತು.
- ಈ ನಿರ್ಧಾರವನ್ನು ಪುನರ್ ಪರಿಶೀಲಿಸಿರುವ ಅಂಚೆ ಇಲಾಖೆ ಪತ್ರ, ದಾಖಲೆ ಮತ್ತು ₹8,800 (100 ಡಾಲರ್) ಮೌಲ್ಯದವರೆಗಿನ ವಸ್ತುಗಳು ಸೇರಿದಂತೆ ಎಲ್ಲ ರೀತಿಯ ಅಂಚೆ ವ್ಯವಹಾರಗಳ ಮುಂಗಡ ಕಾಯ್ದಿರಿಸು ವಿಕೆಯನ್ನು ಸ್ಥಗಿತಗೊಳಿಸಿದೆ.
- 'ಪರಿಸ್ಥಿತಿಯನ್ನು ಅವಲೋಕಿಸ ಲಾಗುತ್ತಿದೆ. ಶೀಘ್ರದಲ್ಲಿ ಎಲ್ಲ ಸೇವೆಗಳನ್ನು ಪುನರಾರಂಭಿಸಲು ಪ್ರಯತ್ನಿಸಲಾಗುತ್ತದೆ' ಎಂದು ಅಂಚೆ ಇಲಾಖೆ ಹೇಳಿದೆ.
- ಅಮೆರಿಕವು ಜುಲೈ 30ರಂತೆ ಹೊರಡಿಸಿರುವ ಕಾರ್ಯಕಾರಿ ಆದೇಶದ ಅನ್ವಯ ₹8,800ಗಿಂತ ಅಧಿಕ ಮೌಲ್ಯದ ವಸ್ತುಗಳಿಗೆ ಆಗಸ್ಟ್ 20ರಿಂದ ಅಮೆರಿಕದಲ್ಲಿ ಸುಂಕ ವಿಧಿಸಲಾಗುತ್ತದೆ. ಆದರೆ, ಈ ಕುರಿತಾದ ಮಾರ್ಗಸೂಚಿಯಲ್ಲಿ ಸ್ಪಷ್ಟತೆ ಇರದ ಕಾರಣ ಅಮೆರಿಕಕ್ಕೆ ತೆರಳುವ ವಿಮಾನಗಳು ವಸ್ತುಗಳನ್ನು ಕೊಂಡೊಯ್ಯಲು ಒಪ್ಪುತ್ತಿಲ್ಲ.

Dr. Rajkumar IAS/KAS Academy

## ❖ ಜಿಎಸ್‌ಟಿ ಬದಲಾವಣೆ: ಖರೀದಿ ಮುಂದಕ್ಕೆ

**ಸಂದರ್ಭ:**ಜಿಎಸ್‌ಟಿ ವ್ಯವಸ್ಥೆಯ ಅಡಿಯಲ್ಲಿ ತೆರಿಗೆ ಹಂತಗಳಲ್ಲಿ ಬದಲಾವಣೆ ತರುವ ಪ್ರಸ್ತಾವ ಇರುವ ಕಾರಣಕ್ಕೆ, ಆನ್‌ಲೈನ್ ವೇದಿಕೆಗಳ ಮೂಲಕ ಖರೀದಿಸುವ ಪ್ರವೃತ್ತಿ ಇರುವ ಹಲವರು ಖರೀದಿಯನ್ನು ಮುಂದೂಡುತ್ತಿದ್ದಾರೆ.

- ತೆರಿಗೆ ಪ್ರಮಾಣ ಇಳಿಕೆ ಆಗಿ, ಗ್ರಾಹಕ ಬಳಕೆ ಉತ್ಪನ್ನಗಳು, ಎಲೆಕ್ಟ್ರಾನಿಕ್ಸ್ ಉಪಕರಣಗಳ ಬೆಲೆಯು ಕಡಿಮೆ ಆಗಬಹುದು ಎಂಬ ನಿರೀಕ್ಷೆಯಲ್ಲಿ ಅವರು ಈ ತೀರ್ಮಾನ ತೆಗೆದುಕೊಳ್ಳುತ್ತಿದ್ದಾರೆ ಎಂದು ಮಾರುಕಟ್ಟೆ ತಜ್ಞರು ಹೇಳಿದ್ದಾರೆ.
- ಖರೀದಿಯನ್ನು ಮುಂದಕ್ಕೆ ಹಾಕುತ್ತಿರುವುದು ಅಲ್ಪಕಾಲಕ್ಕೆ ಮಾತ್ರ ಸೀಮಿತ, ಜಿಎಸ್‌ಟಿ ಬದಲಾವಣೆಗಳ ವಿಚಾರದಲ್ಲಿ ಸ್ಪಷ್ಟತೆ ಮೂಡಿದ ನಂತರದಲ್ಲಿ ಖರೀದಿಯು ಚುರುಕುಗೊಳ್ಳಲಿದೆ ಎಂದು ತಜ್ಞರು ಅಂದಾಜು ಮಾಡಿದ್ದಾರೆ.
- ಜಿಎಸ್‌ಟಿ ಅಡಿಯಲ್ಲಿ ನಾಲ್ಕು ಹಂತಗಳ ತೆರಿಗೆಯ ಬದಲಿಗೆ ಎರಡು ಹಂತಗಳ ತೆರಿಗೆ ಪದ್ಧತಿಯನ್ನು ಜಾರಿಗೆ ತರುವ ಪ್ರಸ್ತಾವವನ್ನು ಕೇಂದ್ರ ಸರ್ಕಾರವು ಸಿದ್ಧಪಡಿಸಿದೆ. ಕೇಂದ್ರದ ಪ್ರಸ್ತಾವ ಜಾರಿಗೆ ಬಂದಲ್ಲಿ ವಾಷಿಂಗ್ ಮೆಷಿನ್, ಹವಾನಿಯಂತ್ರಕಗಳು, ರೆಫ್ರಿಜರೇಟರ್ ಗಳಂತಹ ಉಪಕರಣಗಳ ಮೇಲಿನ ತೆರಿಗೆ ತಗ್ಗುವ ನಿರೀಕ್ಷೆ ಇದೆ.
- ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯ ಜಿಎಸ್‌ಟಿ ಮಂಡಳಿಯು ಸೆಪ್ಟೆಂಬರ್ 3 ಹಾಗೂ 4ರಂದು ಸಭೆ ಸೇರಲಿದೆ.
- 'ತೆರಿಗೆ ಹಂತಗಳಲ್ಲಿ ಬದಲಾವಣೆ ಆಗಲಿದೆ ಎಂಬ ನಿರೀಕ್ಷೆಯ ಕಾರಣದಿಂದಾಗಿ ಗ್ರಾಹಕರು ಕಾದುನೋಡುವ ತಂತ್ರದ ಮೊರೆಹೋಗಿದ್ದಾರೆ. ಜಿಎಸ್‌ಟಿ ವಿಚಾರದಲ್ಲಿ ಸ್ಪಷ್ಟತೆ ಸಿಗುವುದು ವಿಳಂಬ ಆದಲ್ಲಿ, ಹವಾನಿಯಂತ್ರಕ, ರೆಫ್ರಿಜರೇಟರ್‌ಗಳ ಮಾರಾಟದ ಮೇಲೆ ಶೇ 30ರವರೆಗೆ ಪರಿಣಾಮ ಉಂಟಾಗಬಹುದು ಎಂಬುದನ್ನು ಆಂತರಿಕ ಅಂದಾಜುಗಳು ಹೇಳುತ್ತಿವೆ' ಎಂದು ಗ್ರ್ಯಾಂಟ್ ಥಾರ್ನ್‌ಟನ್ ಭಾರತ್ ಸಂಸ್ಥೆಯ ಪಾಲುದಾರ ನವೀನ್ ಮಲ್ಪಾನಿ ಹೇಳಿದ್ದಾರೆ.
- ದೀಪಾವಳಿ ಸಂದರ್ಭದಲ್ಲಿ ತೆರಿಗೆ ದರ ಇಳಿಕೆಯಾಗಿ, ಉತ್ಪನ್ನಗಳ ಬೆಲೆಯೂ ಕಡಿಮೆ ಆಗಬಹುದು ಎಂದು ಗ್ರಾಹಕರು ಅಂದಾಜು ಮಾಡಿದ್ದಾರೆ. ₹1.2 ಲಕ್ಷ ಮೌಲ್ಯದ ಸ್ಮಾರ್ಟ್‌ಫೋನ್ ಬೆಲೆಯು ಶೇ 10ರಷ್ಟು ಕಡಿಮೆ ಆಗಬಹುದು ಎಂಬ ನಿರೀಕ್ಷೆಯಲ್ಲಿ ಗ್ರಾಹಕರು ಖರೀದಿಯನ್ನು ಮುಂದೂಡುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ.
- ಜಿಎಸ್‌ಟಿ ಅಡಿ ಹೊಸ ದರಗಳನ್ನು ಅಂತಿಮಗೊಳಿಸಿದ ನಂತರದಲ್ಲಿ, ಅಕ್ಟೋಬರ್ ಕೊನೆಯ ಭಾಗದಲ್ಲಿ ಬೇಡಿಕೆ ಹೆಚ್ಚಳ ಆಗಬಹುದು ಎಂದು ಇ–ಕಾಮರ್ಸ್ ವಹಿವಾಟಿನಲ್ಲಿರುವ ಪ್ರಮುಖ ಕಂಪನಿಗಳು ಉತ್ಪಾದಕರಿಗೆ ತಿಳಿಸುತ್ತಿವೆ ಎಂದು ಕೌಂಟರ್‌ಪಾಯಿಂಟ್ ರಿಸರ್ಚ್ ಸಂಸ್ಥೆಯ ಸಂಶೋಧನಾ ವಿಶ್ಲೇಷಕ ಶುಭಂ ನಿಮ್ಕಾರ್ ಹೇಳಿದ್ದಾರೆ.

## ❖ ಅಕ್ಟೋಬರ್‌ನಿಂದ ಸ್ಪೆಷಾಲಿಟಿ ಫರ್ಟಿಲೈಜರ್ ರಫ್ತಿಗೆ ಚೀನಾ ನಿರ್ಬಂಧ

**ಸಂದರ್ಭ:**ಅಕ್ಟೋಬರ್ ತಿಂಗಳಿನಿಂದ ಸ್ಪೆಷಾಲಿಟಿ ಫರ್ಟಿಲೈಜರ್ ರಫ್ತಿಗೆ ಚೀನಾ ಮತ್ತೆ ನಿರ್ಬಂಧ ಹೇರಲಿದೆ. ಇದು ಪೂರೈಕೆ ಸವಾಲು ಸೃಷ್ಟಿಸಲಿದ್ದು, ದರ ಹೆಚ್ಚಳಕ್ಕೆ ಕಾರಣವಾಗಲಿದೆ. ಅಲ್ಲದೆ, ನೇರವಾಗಿ ರೈತರ ಮೇಲೆ ಪರಿಣಾಮ ಬೀರಲಿದೆ ಎಂದು ಕೈಗಾರಿಕಾ ವಲಯದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

- 'ಚೀನಾ ಅಕ್ಟೋಬರ್‌ನಿಂದ ನಿರ್ಬಂಧವನ್ನು ಜಾರಿಗೆ ತರುತ್ತಿದೆ. ನಿರ್ಬಂಧವು ಭಾರತಕ್ಕೆ ಮಾತ್ರವೇ ಅನ್ವಯ ಆಗುವುದಿಲ್ಲ, ಜಗತ್ತಿನ ಇತರ ಮಾರುಕಟ್ಟೆಗಳಿಗೂ ಅನ್ವಯಿಸಲಿದೆ' ಎಂದು ಕರಗುವ ರಸಗೊಬ್ಬರ ಕೈಗಾರಿಕಾ ಸಂಘದ (ಸೊಲ್ಯುಬಲ್ ಫರ್ಟಿಲೈಜರ್ ಇಂಡಸ್ಟ್ರಿ ಅಸೋಸಿಯೇಷನ್ – ಎಸ್ಎಫ್ಐಎ) ಅಧ್ಯಕ್ಷ ಹೇಳಿದ್ದಾರೆ.

- **ಭಾರತವು ಚೀನಾದಿಂದ ಶೇ 80ರಷ್ಟು ಸ್ಪೆಷಾಲಿಟಿ ಫರ್ಟಿಲೈಜರ್ ಅನ್ನು ನೇರವಾಗಿ ಆಮದು ಮಾಡಿಕೊಳ್ಳುತ್ತಿದೆ. ಉಳಿದ ಶೇ 20ರಷ್ಟನ್ನು ಪರೋಕ್ಷವಾಗಿ ಚೀನಾದ ವ್ಯಾಪಾರ ಮೂಲಗಳಿಂದ ಖರೀದಿಸುತ್ತದೆ. ಭಾರತವು, ಚೀನಾದ ಸ್ಪೆಷಾಲಿಟಿ ಫರ್ಟಿಲೈಜರ್ ಆಮದು ಮೇಲೆ ಶೇ 95ರಷ್ಟು ಅವಲಂಬಿಸಿದೆ.**
- ಇತ್ತೀಚೆಗೆ ಚೀನಾ ಸ್ಪೆಷಾಲಿಟಿ ಫರ್ಟಿಲೈಜರ್ ರಫ್ತು ಮೇಲೆ ನಿರ್ಬಂಧ ಹೇರಿತ್ತು. ಇದರಿಂದ ಲಭ್ಯತೆಯಲ್ಲಿ ಕೊರತೆಯುಂಟಾಗಿ, ಬೆಲೆ ಶೇ 40ರಷ್ಟು ಏರಿಕೆಯಾಗಿತ್ತು.

## ❖ 'ಖಾಸಗಿ ಬಂಡವಾಳ ವೆಚ್ಚ ಶೇ 21.5ರಷ್ಟು ಹೆಚ್ಚಳ ನಿರೀಕ್ಷೆ'


**<u>ಸಂದರ್ಭ:</u>**ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ಖಾಸಗಿ ವಲಯದಿಂದ ಆಗುವ ಬಂಡವಾಳ ವೆಚ್ಚದ ಪ್ರಮಾಣ ಶೇ 21.5ರಷ್ಟು ಹೆಚ್ಚಳ ಕಾಣುವ ನಿರೀಕ್ಷೆ ಇದೆ ಎಂದು ಆರ್‌ಬಿಐ ಲೇಖನವೊಂದು ಹೇಳಿದೆ.

- ಕಳೆದ ಆರ್ಥಿಕ ವರ್ಷದಲ್ಲಿ ಅಂದಾಜು ₹2,20,132 ಕೋಟಿ ಬಂಡವಾಳ ವೆಚ್ಚ ಆಗಿದೆ. ಈ ಬಾರಿ ₹2,67,432 ಕೋಟಿ ಬಂಡವಾಳ ವೆಚ್ಚ ಆಗಬಹುದು ಎಂದು ಲೇಖನವು ಅಂದಾಜು ಮಾಡಿದೆ.
- ಜಿಡಿಪಿ ಹೆಚ್ಚಳ, ನಿರುದ್ಯೋಗ ಮತ್ತು ಹಣದುಬ್ಬರ ದರ ಇಳಿಕೆ ಹಾಗೂ ರೆಪೊ ದರ ಕಡಿತವು ಹೂಡಿಕೆ ಹೆಚ್ಚಳಕ್ಕೆ ಕಾರಣವಾಗಲಿವೆ ಎಂದು ಹೇಳಿದೆ.
- ಜಾಗತಿಕ ಅನಿಶ್ಚಿತತೆಯ ನಡುವೆಯೂ ದೇಶದ ಕಂಪನಿಗಳು ಆರೋಗ್ಯಕರ ಹಣಕಾಸಿನ ಸ್ಥಿತಿ ಹೊಂದಿವೆ. ಹೆಚ್ಚಿದ ನಗದು ಲಭ್ಯತೆ, ಲಾಭದಾಯಕತೆಯ ಹೆಚ್ಚಳ ಕಂಡುಬಂದಿದೆ ಎಂದು 'ಖಾಸಗಿ ಕಂಪನಿಗಳ ಹೂಡಿಕೆ: 2024–25ರಲ್ಲಿ ಬೆಳವಣಿಗೆ ಮತ್ತು 2025–26ರ ಮುನ್ನೋಟ'ದ ಲೇಖನದಲ್ಲಿ ಬರೆಯಲಾಗಿದೆ.
- ಜಾಗತಿಕ ರಾಜಕೀಯ ಬಿಕ್ಕಟ್ಟು, ಅನಿಶ್ಚಿತತೆ, ಬೇಡಿಕೆ ಇಳಿಕೆ ಆಗುತ್ತಿರುವುದು ಹೂಡಿಕೆಯ ಮೇಲೆ ಪ್ರಭಾವ ಬೀರಬಹುದು ಎಂದು ಹೇಳಿದೆ.

## ❖ ಪಂಜಾಬ್: 25 ವರ್ಷದಲ್ಲೇ ಅಧಿಕ ಮಳೆ

**<u>ಸಂದರ್ಭ:</u>**ಪಂಜಾಬ್‌ನಲ್ಲಿ ಆಗಸ್ಟ್ ತಿಂಗಳಲ್ಲಿ 25.37 ಸೆಂ.ಮೀ.ನಷ್ಟು ಮಳೆ ಸುರಿದಿದೆ. ಈ ಪ್ರಮಾಣವು ವಾಡಿಕೆಗಿಂತ ಶೇ 74ರಷ್ಟು ಅಧಿಕವಾಗಿದೆ. ಕಳೆದ 25 ವರ್ಷಗಳಲ್ಲೇ ಈ ಪ್ರಮಾಣದ ಮಳೆಯನ್ನು ರಾಜ್ಯ ಕಂಡಿರಲಿಲ್ಲ ಎಂದು ಅಧಿಕಾರಿಗಳು ಹೇಳಿದರು.

- ಭಾರಿ ಮಳೆಯಿಂದಾಗಿ ಜಮ್ಮು ಮತ್ತು ಕಾಶ್ಮೀರ ಹಾಗೂ ಪಂಜಾಬ್‌ನ ಹಲವು ಭಾಗಗಳಲ್ಲಿ ಪ್ರವಾಹ ಉಂಟಾಗಿದೆ.
- ಜನರ ಸುರಕ್ಷತೆಗಾಗಿ ಸೇನೆಯು 'ಮಾನವ ನೆರವು ಮತ್ತು ವಿಪತ್ತು ಪರಿಹಾರ' (ಎಚ್‌ಎಡಿಆರ್) ಕಾರ್ಯಾಚರಣೆ ನಡೆಸುತ್ತಿದೆ. ವಾಯುಪಡೆಯು 20 ವಿಮಾನಗಳು, ಮೂರು ಹೆಲಿಕಾಪ್ಟರ್‌ಗಳನ್ನು ಸನ್ನದ್ಧ ಸ್ಥಿತಿಯಲ್ಲಿ ಇರಿಸಿದೆ.
- ತೀವ್ರ ಮಳೆಯಿಂದಾಗಿ ಹಿಮಾಚಲ ಪ್ರದೇಶದ ಮೂರು ರಾಷ್ಟ್ರೀಯ ಹೆದ್ದಾರಿಗಳೂ ಸೇರಿ ಒಟ್ಟು 822 ರಸ್ತೆಗಳು ಮುಚ್ಚಿವೆ. 1,236 ವಿದ್ಯುತ್ ಪರಿವರ್ತಕಗಳು ಮತ್ತು 424 ಜಲ ಪೂರೈಕೆ ಯೋಜನೆಗಳಿಗೆ ಹಾನಿಯಾಗಿದೆ.




## ❖ ಹಿಂದುಳಿದ ವರ್ಗಗಳಿಗೆ ಶೇ 42 ಮೀಸಲಾತಿ

**ಸಂದರ್ಭ:**ರಾಜ್ಯದ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ವರ್ಗಗಳಿಗೆ ಶೇಕಡ 42ರಷ್ಟು ಮೀಸಲಾತಿ ಕಲ್ಪಿಸುವ ಎರಡು ಮಸೂದೆಗಳನ್ನು ತೆಲಂಗಾಣ ವಿಧಾನಸಭೆ ಅಂಗೀಕರಿಸಿದೆ.

- ಮಸೂದೆ ಕುರಿತ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಮುಖ್ಯಮಂತ್ರಿ ಎ.ರೇವಂತ ರೆಡ್ಡಿ,‘ಹೈಕೋರ್ಟ್ ಆದೇಶದಂತೆ ಸ್ಥಳೀಯ ಸಂಸ್ಥೆಗಳಿಗೆ ಸೆಪ್ಟೆಂಬರ್ 30ರ ಒಳಗಾಗಿ ಚುನಾವಣೆ ನಡೆಸಬೇಕಿದೆ’ ಎಂದು ಹೇಳಿದರು.
- ಇದೇ ವಿಚಾರಕ್ಕೆ ಸಂಬಂಧಿಸಿ 2018ರಲ್ಲಿ ರೂಪಿಸಿದ್ದ ಕಾಯ್ದೆಗೆ ತಿದ್ದುಪಡಿ ತರುವುದಕ್ಕಾಗಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿತ್ತು.

IAS/KAS Academy

## ❖ ಪಹಲ್ಗಾಮ್ ದಾಳಿಗೆ ಖಂಡನೆ

**ಸಂದರ್ಭ:** ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು 'ಶಾಂಘೈ ಸಹಕಾರ ಸಂಘಟನೆ' (ಎಸ್‌ಸಿಒ) ಶೃಂಗಸಭೆಯು ಬಲವಾಗಿ ಖಂಡಿಸಿದೆ. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಸದಸ್ಯ ರಾಷ್ಟ್ರಗಳ ಇಬ್ಬಗೆ ನೀತಿಯನ್ನು ಒಪ್ಪಲು ಸಾಧ್ಯವಿಲ್ಲ ಎಂದು ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಸಮ್ಮುಖದಲ್ಲೇ ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

- ಶೃಂಗಸಭೆ ಸಮಾರೋಪದಲ್ಲಿ ಮಾತನಾಡಿದ ಚೀನಾದ ಅಧ್ಯಕ್ಷ ಷಿ ಜಿನ್‌ಪಿಂಗ್, ಅಭಿವೃದ್ಧಿ ಬ್ಯಾಂಕ್ ಸ್ಥಾಪನೆ ಕುರಿತು ಒಲವು ವ್ಯಕ್ತಪಡಿಸಿದರು.
- ಜಂಟಿ ಬಾಂಡ್ ಬಿಡುಗಡೆಗೊಳಿಸಬೇಕು ಎಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಸಲಹೆ ನೀಡಿದರು.
- ಉಕ್ರೇನ್‌ನಲ್ಲಿ ಶಾಂತಿ ಸ್ಥಾಪನೆಗೆ ಪ್ರಧಾನಿ ನರೇಂದ್ರ ಮೋದಿ ಒತ್ತಾಯಿಸಿದರೆ, ಗಾಜಾದ ಮೇಲೆ ಇಸ್ರೇಲ್ ಸೇನಾ ದಾಳಿಯನ್ನು ಸದಸ್ಯ ರಾಷ್ಟ್ರಗಳು ಒಕ್ಕೊರಲಿನಿಂದ ಖಂಡಿಸಿದವು.
- ಅಭಿವೃದ್ಧಿ ಬ್ಯಾಂಕ್ ಸ್ಥಾಪನೆಗೆ ಷಿ ಕರೆ: 'ಸದಸ್ಯ ರಾಷ್ಟ್ರಗಳು ಅಭಿವೃದ್ಧಿ ಬ್ಯಾಂಕ್ ಸ್ಥಾಪಿಸಲು ಒತ್ತು ನೀಡಬೇಕು' ಎಂದು ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಕರೆ ನೀಡಿದ್ದಾರೆ.
- 'ಬ್ರಿಕ್ಸ್‌ನ ರಾಷ್ಟ್ರೀಯ ಅಭಿವೃದ್ಧಿ ಬ್ಯಾಂಕ್ (ಎನ್‌ಡಿಬಿ) ಹಾಗೂ ಏಷ್ಯನ್ ಮೂಲಸೌಕರ್ಯ ಹೂಡಿಕೆ ಬ್ಯಾಂಕ್ (ಎಐಐಬಿ) ಮಾದರಿಯಲ್ಲಿ ಹೊಸ ಅಭಿವೃದ್ಧಿ ಬ್ಯಾಂಕ್ ಸ್ಥಾಪನೆಗೆ ಸದಸ್ಯ ರಾಷ್ಟ್ರಗಳು ಒಗ್ಗೂಡಬೇಕು ಎಂದು ಚೀನಾ ಬಯಸುತ್ತಿದೆ. ಇದರಲ್ಲಿ ಭಾರತವು ಎರಡನೇ ಅತಿ ದೊಡ್ಡ ಭಾಗೀದಾರ ರಾಷ್ಟ್ರವಾಗಿರಲಿದೆ' ಎಂದು ಷಿ ತಿಳಿಸಿದ್ದಾರೆ.
- ಎಸ್‌ಸಿಒ ವಿಶ್ವದ ಅತಿ ದೊಡ್ಡ ಪ್ರಾದೇಶಿಕ ಒಕ್ಕೂಟವಾಗಿ ಬೆಳೆಯುತ್ತಿದ್ದು, 26 ದೇಶಗಳು ಭಾಗಿಯಾಗುತ್ತಿವೆ. 50 ಪ್ರಮುಖ ಕ್ಷೇತ್ರಗಳಲ್ಲಿ ಸಹಭಾಗಿತ್ವ ಹೊಂದಿದ್ದು, ಸುಮಾರು 30 ಟ್ರಿಲಿಯನ್ ಡಾಲರ್‌ನಷ್ಟು ಉತ್ಪಾದನೆ ಹೊಂದಿವೆ.
- ಇದನ್ನು ಗಮನದಲ್ಲಿರಿಸಿಕೊಂಡೇ ಮಾತನಾಡಿದ ಷಿ ಜಿನ್‌ಪಿಂಗ್, 'ಎಸ್‌ಸಿಒದ ಅಂತರರಾಷ್ಟ್ರೀಯ ಪ್ರಭಾವ ಹಾಗೂ ಸ್ವೀಕೃತಿಯು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ. ಸದಸ್ಯ ರಾಷ್ಟ್ರಗಳೆಲ್ಲವೂ ಸ್ನೇಹಿತರು ಹಾಗೂ ಪಾಲುದಾರರು' ಎಂದು ಹೇಳಿದರು.
- **ಚೀನಾ, ರಷ್ಯಾ, ಕಜಾಕಸ್ತಾನ, ಕಿರ್ಗಿಸ್ತಾನ, ತಾಜಿಕಿಸ್ತಾನ ನೇತೃತ್ವದಲ್ಲಿ ಎಸ್‌ಸಿಒ 2001ರಲ್ಲಿ ಆರಂಭಗೊಂಡಿತ್ತು. ಇದರಲ್ಲಿ ಭಾರತ, ಪಾಕಿಸ್ತಾನ, ಇರಾನ್, ಬೆಲರೂಸ್ ಹಾಗೂ ಉಜ್ಬೆಕಿಸ್ತಾನವೂ ಸೇರ್ಪಡೆಗೊಂಡಿವೆ.**
- **ಸಂಘರ್ಷ ಕೊನೆಗೊಳಿಸಿ:** 'ಉಕ್ರೇನ್ ಜೊತೆಗಿನ ಸಂಘರ್ಷವನ್ನು ಮಾನವೀಯ ದೃಷ್ಟಿಯಿಂದ ಆದಷ್ಟು ಬೇಗ ಕೊನೆಗಾಣಿಸಬೇಕು' ಎಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರಿಗೆ ಪ್ರಧಾನಿ ಮೋದಿ ಸಲಹೆ ನೀಡಿದ್ದಾರೆ.
- ಪ್ರತಿಸುಂಕದ ಕಾರಣದಿಂದಾಗಿ ಅಮೆರಿಕ ಜೊತೆಗೆ ಇತ್ತೀಚೆಗೆ ಭಾರತದ ಸಂಬಂಧ ಕಳೆದೆರಡು ದಶಕಗಳಲ್ಲಿಯೇ ತೀವ್ರವಾಗಿ ಹದಗೆಟ್ಟಿದೆ. ಅದರ ಬೆನ್ನಲ್ಲೇ, ಇಲ್ಲಿ ನಡೆದ ಎಸ್‌ಸಿಒ ಶೃಂಗಸಭೆ ವೇಳೆ ಉಭಯ ನಾಯಕರು ಭೇಟಿಯಾಗಿ ಚರ್ಚೆ ನಡೆಸಿದರು.

**ಎಸ್‌ಸಿಒ ಶೃಂಗಸಭೆಯ ಪ್ರಮುಖಾಂಶಗಳು**

ಪಹಲ್ಗಾಮ್ ಭಯೋತ್ಪಾದಕರ ದಾಳಿ– ಸದಸ್ಯ ರಾಷ್ಟ್ರಗಳಿಂದಲೂ ಖಂಡನೆ

ಭಯೋತ್ಪಾದನೆ ವಿರುದ್ಧ ಹೋರಾಟ–ಭಾರತದ ವಾದ ಬೆಂಬಲಿಸಿದ ಸದಸ್ಯ ರಾಷ್ಟ್ರಗಳು

ದಾಳಿಯಲ್ಲಿ ಮೃತಪಟ್ಟ ಹಾಗೂ ಗಾಯಗೊಂಡವರಿಗೆ ಸಂತಾಪ ಸಲ್ಲಿಕೆ

ಗಾಜಾದ ಮೇಲೆ ಇಸ್ರೇಲ್‌ನ ಸೇನಾ ದಾಳಿಗೂ ಖಂಡನೆ

ದಾಳಿ ಎಸಗುವವರು, ಬೆಂಬಲಿಸುವವರನ್ನು ಶಿಕ್ಷೆಗೆ ಗುರಿಪಡಿಸಬೇಕು ಎಂಬ ಘೋಷಣೆ ಅಂಗೀಕಾರ

।ಭಯೋತ್ಪಾದನೆ ವಿರುದ್ಧ ಹೋರಾಟ, ಪ್ರತ್ಯೇಕತಾವಾದ ಹಾಗೂ ಉಗ್ರವಾದದ ವಿರುದ್ಧ ಹೋರಾಟಕ್ಕೆ ಸದಸ್ಯ ರಾಷ್ಟ್ರಗಳಿಂದ ಬದ್ಧತೆ

।ಮುಂದಿನ ವರ್ಷದಿಂದ ಸದಸ್ಯ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ನಿರ್ದಿಷ್ಟ ವಿದ್ಯಾರ್ಥಿವೇತನ

।ಶೈಕ್ಷಣಿಕ ಕ್ಷೇತ್ರದ ಉನ್ನತ ಮಟ್ಟದ ಪ್ರತಿಭೆಗಳಿಗೆ ಪಿಎಚ್.ಡಿ. ಕಾರ್ಯಕ್ರಮ, ಜಂಟಿ ತರಬೇತಿ

।ಕೃತಕ ಬುದ್ಧಿಮತ್ತೆ ಸಹಕಾರ ಕೇಂದ್ರದ ಸ್ಥಾಪನೆ

## ❖ ಜಿಬಿಎ ನಿಗಾದಡಿ ಪಾಲಿಕೆಗಳ ಕಾರ್ಯ

**ಸಂದರ್ಭ:** ನಗರ ಪಾಲಿಕೆಗಳ ಆಡಳಿತದಲ್ಲಿ 'ಗ್ರೇಟರ್ ಬೆಂಗಳೂರು ಪ್ರಾಧಿಕಾರ' (ಜಿಬಿಎ) ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳುತ್ತಿದ್ದರೂ, ಚುನಾವಣೆ ಆಗುವವರೆಗೂ ಮುಖ್ಯ ಆಯುಕ್ತರ ಅಡಿಯಲ್ಲೇ ಐದೂ ನಗರ ಪಾಲಿಕೆಗಳ ಆಯುಕ್ತರು ಕಾರ್ಯ ನಿರ್ವಹಿಸಲಿದ್ದಾರೆ.

- ಜಿಬಿಎ ಹಾಗೂ ನಗರ ಪಾಲಿಕೆಯ ಪ್ರಸ್ತಾವಿತ ಕಾರ್ಯನಿರ್ವಹಣೆಯ ಪಟ್ಟಿಯಂತೆ (ಆರ್ಗನೈಸೇಷನ್ ಚಾರ್ಟ್) ಬೃಹತ್ ಕಾಮಗಾರಿಗಳನ್ನು ನಿರ್ವಹಿಸುವ ಬಿ–ಸ್ಮೈಲ್ ಸೇರಿದಂತೆ ಜಿಬಿಎನಲ್ಲಿ ತಾಂತ್ರಿಕ ಜಾಗೃತಿ ಕೋಶ (ಟಿವಿಸಿಸಿ), ಗುಣಮಟ್ಟ ನಿಯಂತ್ರಣ (ಕ್ಯೂಸಿ), ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತ (ಬಿಎಸ್‌ಡಬ್ಲ್ಯುಎಂಎಲ್), ಯೋಜನೆ ವಿಭಾಗಗಳು ಜಿಬಿಎ ಮುಖ್ಯ ಆಯುಕ್ತರ ಅಡಿಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ.
- ಟಿವಿಸಿಸಿ, ಕ್ಯೂಸಿ, ಬಿಎಸ್‌ಡಬ್ಲ್ಯು ಎಂಎಲ್, ಯೋಜನೆ ವಿಭಾಗಗಳ ಮುಖ್ಯ ಎಂಜಿನಿಯರ್‌ಗಳಿಗೆ ತಲಾ ಒಬ್ಬರು ಅಧೀಕ್ಷಕ ಎಂಜಿನಿಯರ್ (ಎಸ್‌ಇ), ತಲಾ 10 ಕಾರ್ಯಪಾಲಕ ಎಂಜಿನಿಯರ್ (ಇಇ), ತಲಾ 20 ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ), ತಲಾ 20 ಸಹಾಯಕ ಎಂಜಿನಿಯರ್ (ಎಇ) ಇರಲಿದ್ದಾರೆ. ಬಿ–ಸ್ಮೈಲ್‌ನಲ್ಲಿ ಸಿಒಒ ಜೊತೆಗೆ ನಾಲ್ವರು ಮುಖ್ಯ ಎಂಜಿನಿಯರ್, ನಾಲ್ವರು ಎಸ್‌ಇ, 20 ಇಇ, 30 ಎಇಇ, 50 ಎಇಗಳಿರುತ್ತಾರೆ.
- ಜಿಬಿಎ ಮುಖ್ಯ ಆಯುಕ್ತರಡಿ ಐದು ಪಾಲಿಕೆಗಳ ಆಯುಕ್ತರು ಕಾರ್ಯ ನಿರ್ವಹಿಸಬೇಕಿದೆ. ನಗರ ಪಾಲಿಕೆಯ ಹೆಚ್ಚುವರಿ ಆಯುಕ್ತರು ಕಂದಾಯ, ಆಸ್ತಿ, ಮಾರುಕಟ್ಟೆ, ಆಡಳಿತ, ಹಣಕಾಸು, ಜಾಹೀರಾತು, ಸರ್ವೆ, ಮಾಹಿತಿ ತಂತ್ರಜ್ಞಾನ ವಿಭಾಗದ ಜವಾಬ್ದಾರಿ ನೀಡಲಾಗಿದೆ. ಜಂಟಿ ಆಯುಕ್ತರಿಗೆ ಯೋಜನೆ, ಆರೋಗ್ಯ–ಸ್ವಾಸ್ಥ್ಯ, ಶಿಕ್ಷಣ, ಅರಣ್ಯ–ತೋಟಗಾರಿಕೆ– ಕೆರೆ, ನಗರ ಯೋಜನೆ, ಟಿಡಿಆರ್, ಕಲ್ಯಾಣ ವಿಭಾಗಗಳನ್ನು ಹಂಚಲಾಗಿದೆ. ಜಿಬಿಎನಲ್ಲಿರುವ ವಿಶೇಷ ಆಯುಕ್ತರು ಹೆಚ್ಚುವರಿ– ಜಂಟಿ ಆಯುಕ್ತರು ಹೊಂದಿರುವ ಜವಾಬ್ದಾರಿಗಳನ್ನೇ ಹೊಂದಿದ್ದು, ಅವರು ಇವರ ಮೇಲೆ ಹಿಡಿತ ಸಾಧಿಸಲಿದ್ದಾರೆ.
- ನಗರ ಪಾಲಿಕೆಗಳಲ್ಲಿ ತಲಾ ಮೂವರು ಮುಖ್ಯ ಎಂಜಿನಿಯರ್‌ಗಳಿರುತ್ತಾರೆ. ಯೋಜನೆ ಹಾಗೂ ವಲಯ ಮಟ್ಟದ ಕಾಮಗಾರಿಗಳನ್ನು ಇವರು ನಿರ್ವಹಿಸ ಲಿದ್ದಾರೆ. ವಾರ್ಡ್ ಎಂಜಿನಿಯರಿಂಗ್ ಕಾಮಗಾರಿ, ತ್ಯಾಜ್ಯ ನಿರ್ವಹಣೆ, ಬೀದಿ ದೀಪ, 50 x 80 ಅಡಿಗಳವರೆಗಿನ ಕಟ್ಟಡಗಳಿಗೆ ನಕ್ಷೆ ಅನುಮೋದನೆಗೆ ಸಿಇ– ವಾರ್ಡ್ ಎಂಬ ಹುದ್ದೆ ಸೃಷ್ಟಿಸಲಾಗಿದೆ.

ಕಾರ್ಯಾಚರಣೆಗೆ ಸಿದ್ಧತೆ: ಮಹೇಶ್ವರ್ ರಾವ್

- 'ಗ್ರೇಟರ್ ಬೆಂಗಳೂರು ಪ್ರಾಧಿಕಾರ' (ಜಿಬಿಎ) ಕಾರ್ಯಕಲಾಪಗಳನ್ನು ನಡೆಸಲು ಸಜ್ಜಾಗಿದ್ದು, ಐದು ನಗರ ಪಾಲಿಕೆಗಳ ರಚನೆಯ ಅಧಿಸೂಚನೆ ಹೊರಬೀಳುತ್ತಿದ್ದಂತೆಯೇ ನಿಯೋಜಿತ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದರು.
- '198 ವಾರ್ಡ್‌ಗಳು ನಗರ ಪಾಲಿಕೆಗಳಿಗೆ ವಿಂಗಡಣೆಯಾಗಲಿದ್ದು, ಅದರಂತೆಯೇ ಕಾರ್ಯನಿರ್ವಹಿಸಲಿವೆ. ಕಾಮಗಾರಿಗಳು ಅಥವಾ ಬಿಲ್ ಪಾವತಿಗೆ ಅಷ್ಟೇನು ತೊಂದರೆಯಾಗದು. ಬಿಬಿಎಂಪಿ ಬಜೆಟ್ ಅನ್ನೇ ಮುಂದುವರಿಸಲಾಗು ತ್ತದೆ. ನಗರ ಪಾಲಿಕೆಗಳು ರಚನೆಗೊಂಡ ಮೇಲೆ ಅವರಿಗೆ ಅನುಸಾರವಾಗಿ ಪುನರ್

Dr. Rajkumar IAS/KAS Academy

ವಿಮರ್ಶೆ ಮನವಿಯನ್ನು ಸಲ್ಲಿಸಿದರೆ ಜಿಬಿಎ ಅದನ್ನು ಪರಿಶೀಲಿಸಿ, ಕ್ರಮ ಕೈಗೊಳ್ಳುತ್ತದೆ' ಎಂದು ಸುದ್ದಿಗಾರರಿಗೆ ಸೋಮವಾರ ಮಾಹಿತಿ ನೀಡಿದರು.

'ಉಪ ಆಯುಕ್ತರಿಗೆ ಆಯುಕ್ತರ ಹೊಣೆ'

- 'ಆಡಳಿತಾತ್ಮಕ ಅನುಭವ ಇರುವ, ಉಪ ಆಯುಕ್ತ ರುಗಳಾಗಿ ಕೆಲಸ ನಿರ್ವಹಿಸಿರುವ ಹಿರಿಯ ಅಧಿಕಾರಿಗಳನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಐದು ಪಾಲಿಕೆಗಳಿಗೆ ಆಯುಕ್ತರನ್ನಾಗಿ ನೇಮಿಸಲು ತೀರ್ಮಾನಿಸಲಾಗಿದೆ' ಎಂದು ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.
- ಅಧಿಕಾರಿಗಳ ಜೊತೆ ಸಭೆ ನಡೆಸಿದ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ಯಾವ, ಯಾವ ಅಧಿಕಾರಿಗಳನ್ನು ನಿಯೋಜನೆ ಮಾಡಬೇಕು ಎಂದು ಸಭೆಯಲ್ಲಿ ಚರ್ಚಿಸಲಾಯಿತು' ಎಂದರು.
- 'ಸ್ಥಳೀಯವಾಗಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳನ್ನೇ ಪಾಲಿಕೆಗಳಿಗೆ ನಿಯೋಜನೆ ಮಾಡಲಾಗುವುದು' ಎಂದೂ ಅವರು ಹೇಳಿದರು.

ಆಯಾ ಪಾಲಿಕೆಗೆ ಎ, ಬಿ, ಸಿ, ಡಿ ನೌಕರರು

- ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಎ, ಬಿ, ಸಿ, ಡಿ ವೃಂದದ ನೌಕರರು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಚೇರಿಯು ಹೊಸದಾಗಿ ರಚನೆಯಾಗುವ ಯಾವ ನಗರ ಪಾಲಿಕೆಗೆ ಬರುತ್ತದೋ ಅದರಡಿ ಕೆಲಸ ನಿರ್ವಹಿಸುವಂತೆ ನಗರಾಭಿವೃದ್ಧಿ ಇಲಾಖೆ ಅಧಿಸೂಚನೆ ಹೊರಡಿಸಿದೆ.
- ಜಿಬಿಎ ಅಸ್ತಿತ್ವಕ್ಕೆ ಬಂದಿರುವುದರಿಂದ ಬಿಬಿಎಂಪಿ ನಿರಶನಗೊಂಡಿರುವುದ ರಿಂದ, ಬಿಬಿಎಂಪಿಗೆ ಮಂಜೂರಾಗಿರುವ ವಿವಿಧ ವೃಂದದ ಹುದ್ದೆಗಳನ್ನು ಮರು ಹಂಚಿಕೆ ಮಾಡಲಾಗಿದೆ.
- ಜಿಬಿಎಗೆ ಅಥವಾ ಇತರೆ ನಗರ ಪಾಲಿಕೆಗೆ ವರ್ಗಾಯಿಸಲು ನಿರ್ದಿಷ್ಟ ಆದೇಶ ಹೊರಡಿಸಿದರೆ ಮಾತ್ರ ಅವರು ಬೇರೆಡೆಗೆ ಹೋಗಬಹುದು. 198 ವಾರ್ಡ್ ಕಚೇರಿಗಳು ಯಾವ ನಗರ ಪಾಲಿಕೆಗಳ ವ್ಯಾಪ್ತಿಗೆ ಬರುತ್ತವೋ ಅಲ್ಲಿಯೇ ಆ ಸಿಬ್ಬಂದಿಯ ಕೆಲಸ ಮುಂದುವರಿಯುತ್ತದೆ.
- ಬಿಬಿಎಂಪಿ ಕೇಂದ್ರ ಕಚೇರಿ ಅಥವಾ ಯಾವುದೇ ಕಚೇರಿಯಲ್ಲಿರುವ ಸಿಬ್ಬಂದಿಯ ಹುದ್ದೆ ಮುಂದುವರಿಸಿರುವ ಆದೇಶವಿಲ್ಲದಿದ್ದರೆ, ಅಂತಹವರು ಸರ್ಕಾರ ಅಥವಾ ಜಿಬಿಎಯಲ್ಲಿ ಸ್ಥಳ ನಿರೀಕ್ಷಣೆಗಾಗಿ ವರದಿ ಮಾಡಿಕೊಳ್ಳಬೇಕು. ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿರುವ ಅಧಿಕಾರಿಗಳು ಜಿಬಿಎ ಮುಖ್ಯ ಆಯುಕ್ತರ ಬಳಿ ವರದಿ ಮಾಡಿಕೊಂಡು, ಐದು ನಗರ ಪಾಲಿಕೆಗಳು, ಬಿ-ಸ್ಮೈಲ್ ಗೆ ಕಡತಗಳನ್ನು ವರ್ಗಾಯಿಸುವ ಪೂರ್ಣ ಜವಾಬ್ದಾರಿ ನಿಭಾಯಿಸಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.
- ವ್ಯವಸ್ಥಾಪಕರು, ಎಫ್ ಡಿಎ, ಎಸ್ ಡಿಎ, ಸ್ಟೆನೊಗ್ರಾಫರ್, ಚಾಲಕರು ಮತ್ತು ಗ್ರೂಪ್-ಡಿ ನೌಕರರು (1,820), ಲೆಕ್ಕಾಧಿಕಾರಿಗಳು (44), ಆಡಳಿತ ವಿಭಾಗ (3), ಕ್ಲಿನಿಕಲ್ ಹೆಲ್ತ್, ಕೌನ್ಸಿಲ್, ಶಿಕ್ಷಣ, ಮುಖ್ಯ- ಅಧೀಕ್ಷಕ-ಕಾರ್ಯಪಾಲಕ, ಸಹಾಯಕ, ಕಿರಿಯ ಎಂಜಿನಿಯರ್ ಗಳು, ಅರಣ್ಯ, ಕಾನೂನು ಘಟಕ, ತೋಟಗಾರಿಕೆ, ಮಾಹಿತಿ ತಂತ್ರಜ್ಞಾನ, ಸಾರ್ವಜನಿಕ ಆರೋಗ್ಯ, ಸಾರ್ವಜನಿಕ ಸಂಪರ್ಕಾಧಿಕಾರಿ, ಕಂದಾಯ, ಆಸ್ತಿ, ಜಾಹೀರಾತು, ಟಿಡಿಆರ್, ಮಾರುಕಟ್ಟೆ, ನೈರ್ಮಲ್ಯ, ಪೌರಕಾರ್ಮಿಕರು, ಸರ್ವೆ, ನಗರ ಯೋಜನೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಜಿಬಿಎ ಹಾಗೂ ಐದು ನಗರ ಪಾಲಿಕೆಗಳು, ವಲಯ ಕಚೇರಿಗಳಿಗೆ ನಿಯೋಜಿಸಿ ಆದೇಶ ಹೊರಡಿಸಲಾಗಿದೆ.

'ಟೇಬಲ್‌ಗಳು ಹೆಚ್ಚಾಗಲಿವೆ'

- ನಗರ ಪಾಲಿಕೆಯ ಆಡಳಿತದ ಮೇಲೆ ಜಿಬಿಎ ನಿಯಂತ್ರಣವಿರುವುದಿಲ್ಲ ಎಂದು ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆಗೆ ತಿದ್ದುಪಡಿಯನ್ನೂ ತರಲಾಗಿದೆ. ಆದರೆ, ಈಗ ಪ್ರಸ್ತಾಪಿಸಿರುವ ಕಾರ್ಯಾಚರಣೆ ಪಟ್ಟಿಯಲ್ಲಿ ನಗರ ಪಾಲಿಕೆಗಳ ಎಲ್ಲ ಕಾರ್ಯವ್ಯಾಪ್ತಿಯೂ ಜಿಬಿಎ ಆಣತಿಯಂತೆಯೇ ನಡೆಯಲಿದೆ.

Dr. Rajkumar IAS/KAS Academy

ಮುಖ್ಯ ಆಯುಕ್ತರಲ್ಲದೆ, ಜಿಬಿಎಯಲ್ಲಿರುವ ವಿಶೇಷ ಆಯುಕ್ತರು ಪಾಲಿಕೆಗಳ ಎಲ್ಲ ವಿಭಾಗಗಳ ಮೇಲೆ ನಿಗಾ ವಹಿಸಿ, ನಿಯಂತ್ರಣ ಸಾಧಿಸಲಿದ್ದಾರೆ.

- 'ಐದು ನಗರ ಪಾಲಿಕೆಗಳಿಗೆ ಚುನಾವಣೆ ನಡೆದು, ಕಾರ್ಪೊರೇಟರ್‌ಗಳು ಬರುವವರೆಗೂ ಅಧಿಕಾರಿಗಳದ್ದೇ ಆಟವಾಗಿರುತ್ತದೆ. ಈಗಾಗಲೇ ಬಿಬಿಎಂಪಿಗೆ ಚುನಾವಣೆಯಾಗದೆ ಐದು ವರ್ಷವಾಗುತ್ತಿದೆ. ಗ್ರೇಟರ್ ಬೆಂಗಳೂರಾಗಿ ಐದು ನಗರ ಪಾಲಿಕೆಗಳಾದ ಮೇಲೆ ಕಾಮಗಾರಿಯೊಂದಕ್ಕೆ ಹಲವು ಅಧಿಕಾರಿಗಳ ಒಪ್ಪಿಗೆ ಪಡೆಯುವ ಟೇಬಲ್‌ಗಳು ಹೆಚ್ಚಾಗಲಿವೆ' ಎಂದು ಇಬ್ಬರು ಮಾಜಿ ಮೇಯರ್‌ಗಳು ಅಭಿಪ್ರಾಯಪಟ್ಟರು.

## ❖ ಅನ್ನಪೂರ್ಣ ಯೋಜನೆ ಜಾರಿ

**ಸಂದರ್ಭ:** ಬೆಂಗಳೂರು ಜಲಮಂಡಳಿ ವ್ಯಾಪ್ತಿಯಲ್ಲಿ ನಿತ್ಯ ಕೆಲಸ ಮಾಡುವ 700ಕ್ಕೂ ಹೆಚ್ಚು ಸ್ವಚ್ಛತಾ ಕಾರ್ಮಿಕರಿಗೆ ಅನ್ನಪೂರ್ಣ ಯೋಜನೆ ಜಾರಿಗೊಳಿಸಲಾಗಿದೆ.

- **'ಪ್ರತಿ ತಿಂಗಳು ₹1500 ಅನ್ನು ಅನ್ನಪೂರ್ಣ ಯೋಜನೆಯಡಿ ಸ್ವಚ್ಛತಾ ಕಾರ್ಮಿಕರು ಪಡೆಯಲಿದ್ದಾರೆ. ಆ್ಯಕ್ಸಿಸ್ ಬ್ಯಾಂಕ್ ಜೊತೆಗೂಡಿ ಯೋಜನೆ ಜಾರಿಗೊಳಿಸಲಾಗಿದೆ.**
- ಕರ್ನಾಟಕದ ಇತರೆ ನಗರಗಳಲ್ಲಿ ಸ್ವಚ್ಛತಾ ಕಾರ್ಮಿಕರಿಗೆ ಬೆಳಗಿನ ಉಪಾಹಾರ ವ್ಯವಸ್ಥೆ ಮಾಡಲಾಗಿದೆ. ಆದರೆ, ಉಪಾಹಾರದ ಬದಲು ತಮಗೆ ಇಷ್ಟವಾದ ಆಹಾರ ಸೇವಿಸಲಿ ಎನ್ನುವ ಉದ್ದೇಶದಿಂದ ನೇರವಾಗಿ ಹಣ ನೀಡಲಾಗುತ್ತಿದೆ.

## ❖ ರಾಜ್ಯ ಶಿಕ್ಷಣ ನೀತಿ ಏಕೆ ಬೇಕು?

**ಸಂದರ್ಭ:** ಕಳೆದ ಆಗಸ್ಟ್ 8ರಂದು 'ರಾಜ್ಯ ಶಿಕ್ಷಣ ನೀತಿ' (ಎಸ್‌ಇಪಿ) ವರದಿಯನ್ನು ಆಯೋಗ ಸರ್ಕಾರಕ್ಕೆ ಸಲ್ಲಿಸಿದೆ.

- ವರದಿ ಸಲ್ಲಿಕೆಯಾದ ನಂತರ 'ಎಸ್‌ಇಪಿ'ಯ ಸಾಧಕ–ಬಾಧಕಗಳ ಚರ್ಚೆ ಪ್ರಾರಂಭವಾಗಿದೆ. ಈಗಾಗಲೇ, ರಾಷ್ಟ್ರೀಯ ಶಿಕ್ಷಣ ನೀತಿ ಇರುವಾಗ, ರಾಜ್ಯ ಶಿಕ್ಷಣ ನೀತಿ ಅಗತ್ಯವಿದೆಯೇ ಎಂಬ ಪ್ರಶ್ನೆ ಹಲವು ವಲಯಗಳಿಂದ ವ್ಯಕ್ತವಾಗಿದೆ.
- ಆಶ್ಚರ್ಯವೆಂದರೆ, 'ಎಸ್‌ಇಪಿ' ಜಾರಿಗೊಳಿಸ ಬೇಕಾದ ಕೆಲವು ಹಿರಿಯ ಅಧಿಕಾರಿಗಳು ಎಸ್‌ಇಪಿ ಬಗ್ಗೆ ತಾತ್ಸಾರ ತೋರುತ್ತಿರುವುದು ಸಂಬಂಧಿಸಿದ ಇಲಾಖೆಗಳ ವಿವಿಧ ಹಂತಗಳಲ್ಲಿ ವ್ಯಕ್ತವಾಗುತ್ತಿದೆ.
- ಈ ಹಿನ್ನೆಲೆಯಲ್ಲಿ, ರಾಜ್ಯಕ್ಕೆ ತನ್ನದೇ ಆದ ಒಂದು ಶಿಕ್ಷಣ ನೀತಿಯ ಅವಶ್ಯಕತೆ ಇತ್ತೆ? ಇದ್ದರೆ, ಅದು ರಾಷ್ಟ್ರೀಯ ನೀತಿಗಿಂತ ಹೇಗೆ ಭಿನ್ನವಾಗಿರುತ್ತದೆ ಎಂದು ಚರ್ಚಿಸುವ ಅಗತ್ಯವಿದೆ.
- **ಸಂವಿಧಾನದ ವಿಧಿ 1, 'ಇಂಡಿಯಾ ಅರ್ಥಾತ್ ಭಾರತ, ರಾಜ್ಯಗಳ ಒಂದು ಒಕ್ಕೂಟ ಆಗಿರತಕ್ಕದ್ದು' ಎಂದು ಹೇಳುತ್ತದೆ. ಒಕ್ಕೂಟ ವ್ಯವಸ್ಥೆಯ ಪ್ರತಿಯೊಂದು ರಾಜ್ಯವು ತನ್ನದೇ ಆದ ಅಸ್ಮಿತೆ, ಭಾಷೆ, ಸಾಮಾಜಿಕ–ಆರ್ಥಿಕ–ಸಾಂಸ್ಕೃತಿಕ ಅನನ್ಯತೆಯನ್ನು ಹೊಂದಿದೆ. ಈ ಅನನ್ಯತೆಯನ್ನು ಉಳಿಸಿ ಬೆಳೆಸಲು ತನ್ನದೇ ಆದ ಉತ್ತಮ ಕಲಿಕಾ ವ್ಯವಸ್ಥೆಯನ್ನು ಕಟ್ಟಿಕೊಳ್ಳಬೇಕಿದೆ. ರಾಜ್ಯಗಳು ಬಲಿಷ್ಠವಾದರೆ, ಭಾರತ ಸಹಜವಾಗಿಯೇ ಬಲಗೊಳ್ಳುತ್ತದೆ.**
- ದೇಶದ ಶಿಕ್ಷಣ ನೀತಿ ನಿರೂಪಣೆಯ ಇತಿಹಾಸ ವನ್ನು ಅವಲೋಕಿಸಿದರೆ, ಸ್ವಾತಂತ್ರ್ಯಪೂರ್ವ ಮತ್ತು ಸ್ವಾತಂತ್ರ್ಯಾನಂತರ ನಾವು ರಚನೆ ಮಾಡಿದ್ದ ಬಹುತೇಕ ಎಲ್ಲಾ ಶಿಕ್ಷಣ ಆಯೋಗಗಳು/ಸಮಿತಿಗಳು ಮತ್ತು ನಂತರ ರೂಪಿಸಿದ ರಾಷ್ಟ್ರೀಯ ಶಿಕ್ಷಣ ನೀತಿಗಳು, ರಾಷ್ಟ್ರಮಟ್ಟದಲ್ಲಿ ಶಿಕ್ಷಣ ವ್ಯವಸ್ಥೆಯ ರಚನೆ ಹಾಗೂ ಸ್ವರೂಪ ಹೇಗಿರಬೇಕೆಂಬ ವಿಶಾಲ ಚೌಕಟ್ಟು ಮತ್ತು ಮಾರ್ಗಸೂಚಿಗಳನ್ನು ಒದಗಿಸಲು ಸಹಾಯಕವಾಗಿದ್ದವು. **ಉದಾಹರಣೆಗೆ, ಸ್ವಾತಂತ್ರ್ಯಪೂರ್ವದಲ್ಲಿ ರಚನೆಯಾಗಿದ್ದ ಶಿಕ್ಷಣ ಆಯೋಗ (1882), ಹರ್ಟಾಗ್ ಸಮಿತಿ (1929), ಸಾರ್ಜೆಂಟ್ ಯೋಜನೆ (1944) ಮತ್ತು ಸ್ವಾತಂತ್ರ್ಯಾನಂತರ**

**ರಚನೆಯಾದ ವಿಶ್ವವಿದ್ಯಾಲಯ ಶಿಕ್ಷಣ ಆಯೋಗ (1948–49), ಪ್ರೌಢ ಶಿಕ್ಷಣ ಆಯೋಗ (1952–53), ಭಾರತದ ಅತ್ಯಂತ ಪ್ರಸಿದ್ಧ ಶಿಕ್ಷಣ ಆಯೋಗ (1964–66), ಆಚಾರ್ಯ ರಾಮಮೂರ್ತಿ ಸಮಿತಿ (1989), ರಾಷ್ಟ್ರೀಯ ಜ್ಞಾನ ಆಯೋಗ (2005), ಟಿಎಸ್‌ಆರ್ ಸುಬ್ರಮಣಿಯನ್ ಸಮಿತಿ (2016) ಹಾಗೂ ಕಸ್ತೂರಿ ರಂಗನ್ ಸಮಿತಿ (2017–2019). ಈ ಆಯೋಗಗಳ ಶಿಫಾರಸುಗಳನ್ನು ತಳಹದಿಯನ್ನಾಗಿಸಿಕೊಂಡು 1968, 1986, 1992 (ಪರಿಷ್ಕೃತ) ಹಾಗೂ 2020ರ ರಾಷ್ಟ್ರೀಯ ಶಿಕ್ಷಣ ನೀತಿಗಳನ್ನು ರೂಪಿಸಲಾಗಿತ್ತು .**

- ರಾಷ್ಟ್ರೀಯ ನೀತಿ ನಿರೂಪಣೆಯ ಪ್ರಕ್ರಿಯೆ, ರಾಜ್ಯಗಳು ತಮ್ಮದೇ ಆದ ನೀತಿ, ಕಾರ್ಯಕ್ರಮ ಹಾಗೂ ಕಾನೂನುಗಳನ್ನು ರೂಪಿಸಿಕೊಳ್ಳಲು ಪೂರಕ ವಾಗಬಹುದಾದ ವಿಸ್ತೃತ ಚೌಕಟ್ಟು ಅಥವಾ ಮಾರ್ಗಸೂಚಿಯನ್ನು ಒದಗಿಸುವುದು ಅಗತ್ಯ. ಆದರೆ, ನಮ್ಮಲ್ಲಿ ಪ್ರಾರಂಭದಿಂದಲೂ ಶಿಕ್ಷಣವನ್ನು ರಾಷ್ಟ್ರ ಮಟ್ಟದಲ್ಲಿ ಕೇಂದ್ರೀಕರಿಸುವ ಅಥವಾ ರಾಜ್ಯಗಳ ಮೇಲೆ ಹೇರುವ ಕೆಲಸವೇ ನಡೆಯುತ್ತಿದೆ.
- ಕೇಂದ್ರದಲ್ಲಿ ಬಲಪಂಥೀಯ ಸರ್ಕಾರಗಳು ಅಧಿಕಾರಕ್ಕೆ ಬಂದಾಗ, ಸಂವಿಧಾನ ವಿರೋಧಿ ಮತ್ತು ರಾಜಕೀಯಪ್ರೇರಿತ ಶಿಕ್ಷಣ ನೀತಿಗಳನ್ನು ರೂಪಿಸುವ ಮೂಲಕ ನಿರ್ದಿಷ್ಟ ರಾಜಕೀಯ ಸಿದ್ಧಾಂತದ ವಿಚಾರಗಳನ್ನು ಶಿಕ್ಷಣದಲ್ಲಿ ಅಳವಡಿಸುವ ಪ್ರಯತ್ನಗಳೂ ನಡೆದಿವೆ. ರಾಜ್ಯಗಳು, ಸಂವಿಧಾನ ಕೊಡಮಾಡಿರುವ ಒಕ್ಕೂಟ ತತ್ವಕ್ಕನುಗುಣವಾಗಿ ತಮ್ಮ ಅಸ್ಮಿತೆ ಕಾಪಾಡಿಕೊಳ್ಳಲು ಪೂರಕವಾದ ನೀತಿಗಳನ್ನು ರೂಪಿಸಿಕೊಳ್ಳುವ ಬದಲು ಕೇಂದ್ರದ ನೀತಿಗಳನ್ನೇ ಅಂಧಾನುಕರಣೆ ಮಾಡಿದವು ಎಂಬುದು ಇತಿಹಾಸ.
- ಕರ್ನಾಟಕ ರಾಜ್ಯವು ಮೊದಲ ಬಾರಿಗೆ ತನ್ನ ವಿಶಿಷ್ಟ ಸವಾಲುಗಳನ್ನು ಎದುರಿಸಲು ರಾಜ್ಯ ಶಿಕ್ಷಣ ನೀತಿಯ ಅಗತ್ಯವನ್ನು ಮನಗಂಡು ನೀತಿ ರೂಪಿಸಿ ರುವುದು ಆಶಾದಾಯಕ ಬೆಳವಣಿಗೆ.


**<u>ರಾಜ್ಯ ಶಿಕ್ಷಣ ನೀತಿಯು ಕೆಳಗಿನ ಕಾರಣಗಳಿಂದ ಅತ್ಯಗತ್ಯವಾಗಿದೆ.</u>**

- **ಮೊದಲನೆಯದಾಗಿ,** ಕರ್ನಾಟಕ ತನ್ನದೇ ಆದ ಭಾಷೆ, ಸಂಸ್ಕೃತಿ, ಇತಿಹಾಸ, ಸಾಮಾಜಿಕ ಸಂರಚನೆ ಮತ್ತು ಆರ್ಥಿಕ ಅಭಿವೃದ್ಧಿಯ ಸವಾಲುಗಳನ್ನು ಹೊಂದಿದೆ. ರಾಜ್ಯ ಶಿಕ್ಷಣ ನೀತಿ ರಾಜ್ಯದ ಮಕ್ಕಳಿಗೆ ಸ್ಥಳೀಯ ಜೀವನಾನುಭವಕ್ಕೆ ಹೊಂದಿಕೆಯಾಗುವ ರೀತಿಯಲ್ಲಿ ಕಲಿಕಾ ವ್ಯವಸ್ಥೆಯನ್ನು ಕಟ್ಟಿಕೊಳ್ಳುವ ಮೂಲಕ ಎಲ್ಲರನ್ನೂ ಒಳಗೊಳ್ಳುವ ಜ್ಞಾನ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಪೂರಕವಾಗುತ್ತದೆ.
- **ಎರಡನೆಯದಾಗಿ,** ಕರ್ನಾಟಕ ಶೈಕ್ಷಣಿಕವಾಗಿ ದೊಡ್ಡಮಟ್ಟದ ಪ್ರಾದೇಶಿಕ ಅಸಮಾನತೆಗಳನ್ನು ಎದುರಿಸುತ್ತಿದೆ. ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಅಸಮಾನತೆಯಿದೆ. ವಿಶೇಷವಾಗಿ, ಕಲ್ಯಾಣ ಕರ್ನಾಟಕದಲ್ಲಿ ಶಿಕ್ಷಣದ ಲಭ್ಯತೆ, ಪ್ರವೇಶ ಮತ್ತು ಗುಣಮಟ್ಟದಲ್ಲಿ ಗಮನಾರ್ಹ ಅಸಮಾನತೆ ಯನ್ನು ಎದುರಿಸುತ್ತಿದೆ. ರಾಜ್ಯ–ನಿರ್ದಿಷ್ಟ ನೀತಿಯು ಸಂಪನ್ಮೂಲ ಹಂಚಿಕೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ಮೂಲಕ ಕಾಲಮಿತಿಯೊಳಗೆ ಶೈಕ್ಷಣಿಕ ಅಸಮಾನತೆಯನ್ನು ನಿವಾರಿಸಲು ಸಹಾಯಕ ವಾಗುತ್ತದೆ. ಈ ಮೂಲಕ, ಸಮುದಾಯಗಳ ಸಾಮಾಜಿಕ–ಆರ್ಥಿಕ ಸ್ಥಿತಿಗತಿಗನುಗುಣವಾಗಿ ಹೆಚ್ಚಿನ ಉದ್ಯೋಗಾವಕಾಶಗಳು ಮತ್ತು ಆದಾಯ ವೃದ್ಧಿಸುವ ಸೂಕ್ತವಾದ ಶೈಕ್ಷಣಿಕ ಕಾರ್ಯಕ್ರಮ ಹಾಗೂ ಪಠ್ಯಕ್ರಮಗಳನ್ನು ರೂಪಿಸಲು ಅನುಕೂಲವಾಗುತ್ತದೆ.
- **ಮೂರನೆಯದಾಗಿ,** ಶಿಕ್ಷಣವು ಸಮವರ್ತಿ ಪಟ್ಟಿಯಲ್ಲಿರುವುದರಿಂದ, ಒಕ್ಕೂಟ ಮತ್ತು ರಾಜ್ಯ ಉತ್ತಮ ಶಿಕ್ಷಣ ವ್ಯವಸ್ಥೆಯನ್ನು ರೂಪಿಸುವಲ್ಲಿ ಸಮಾನ ಹೊಣೆಗಾರರಾಗಿರುತ್ತಾರೆ. ಒಕ್ಕೂಟ ಸರ್ಕಾರ ಹೆಚ್ಚಿನ ಸಂಪನ್ಮೂಲ ಹಾಗೂ ನಮ್ಯತೆಯಿಂದ ಕೂಡಿದ ವಿಸ್ತೃತ ನೀತಿಯ ಚೌಕಟ್ಟನ್ನು ಒದಗಿಸಿದರೆ, ರಾಜ್ಯ ಅಗತ್ಯವಾದ ಮೂಲಭೂತ ಸೌಕರ್ಯ, ಶಿಕ್ಷಕರ ನೇಮಕಾತಿ, ಪಠ್ಯಪುಸ್ತಕ ಮುದ್ರಣ, ಮೌಲ್ಯಮಾಪನ, ಉತ್ತಮ ಆಡಳಿತ ಇತ್ಯಾದಿ ಒದಗಿಸುವ ಮೂಲಕ ವಿಕೇಂದ್ರೀಕೃತ ನೆಲೆಯಲ್ಲಿ ಸ್ಥಳೀಯ ಸರ್ಕಾರ ಹಾಗೂ ಸಮುದಾಯಗಳ ಸಹಭಾಗಿತ್ವದಲ್ಲಿ ಶೈಕ್ಷಣಿಕ ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೊಳಿಸುವ ಹೊಣೆಗಾರಿಕೆ ಹೊಂದಿರುತ್ತದೆ. ಹೀಗಾಗಿ, ರಾಜ್ಯ ತನ್ನ ಸ್ಥಿತಿಗೆ ಅನುಗುಣವಾಗಿ ಶಾಲಾ ಶಿಕ್ಷಣದಿಂದ ಉನ್ನತ

Dr. Rajkumar IAS/KAS Academy

ಶಿಕ್ಷಣದವರೆಗೆ ನಿರ್ದಿಷ್ಟ ಗುರಿಗಳನ್ನು ಹೊಂದಲು ಮತ್ತು ಗುಣಾತ್ಮಕ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯ ಮೂಲಕ ಸಮಾನತೆ ಹಾಗೂ ಸಾಮಾಜಿಕ ನ್ಯಾಯ ಒದಗಿಸಲು ರಾಜ್ಯ ನೀತಿ ಅವಶ್ಯಕವಾಗಿದೆ.

- **ನಾಲ್ಕನೆಯದಾಗಿ,** ರಾಜ್ಯವು ತನ್ನ ಅಧಿಕೃತ ರಾಜ್ಯಭಾಷೆಯನ್ನು ಶಿಕ್ಷಣದ ವಿವಿಧ ಹಂತದಲ್ಲಿ ಮಾಧ್ಯಮವಾಗಿ ಹಾಗೂ ಭಾಷೆಯಾಗಿ ಜಾರಿಗೊಳಿಸಲು ರಾಜ್ಯ ನೀತಿ ಬಲ ನೀಡುತ್ತದೆ. ರಾಜ್ಯದಲ್ಲಿರುವ ವಿವಿಧ ಸಮುದಾಯಗಳ ತಾಯ್ನುಡಿಯನ್ನು ಮತ್ತು ಭಾಷಾ ಅಲ್ಪಸಂಖ್ಯಾತರ ಭಾಷೆಗಳನ್ನು ಗೌರವಿಸುವ ಮೂಲಕ ಬಹುತ್ವ ಹಾಗೂ ಬಹು ಭಾಷಾ ಸಂಸ್ಕೃತಿಯನ್ನು ಉತ್ತೇಜಿಸುತ್ತದೆ. ರಾಜ್ಯ ಶಿಕ್ಷಣ ನೀತಿಯು ಶಿಕ್ಷಣದಲ್ಲಿ ಕನ್ನಡ ಮತ್ತು ಇತರ ಸ್ಥಳೀಯ ಭಾಷೆಗಳ ಅಳವಡಿಕೆಯನ್ನು ಖಚಿತಪಡಿಸುತ್ತದೆ. ಪಠ್ಯಕ್ರಮ ವಿನ್ಯಾಸ ಮತ್ತು ಪಠ್ಯೇತರ ಚಟುವಟಿಕೆಗಳ ಮೂಲಕ ರಾಜ್ಯದ ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಿ ಉತ್ತೇಜಿಸಲು ಸಹಾಯಕವಾಗುತ್ತದೆ.
- ಶಿಕ್ಷಕರ ಸಾಮರ್ಥ್ಯವನ್ನು ಬಲವರ್ಧಿಸುವ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ಹಿಂದುಳಿದ ಕಲ್ಯಾಣ ಕರ್ನಾಟಕದಲ್ಲಿ ಉತ್ತಮ ಗುಣಮಟ್ಟದ ಕಲಿಕೆ ತಾಯ್ನುಡಿ ಹಾಗೂ ಇಂಗ್ಲಿಷ್‌ನಲ್ಲಿ ಪ್ರಾವೀಣ್ಯತೆ ರೂಪಿಸಲು ಅನುವಾಗುವ ಭಾಷಾನೀತಿಯನ್ನು ರೂಪಿಸಲು ರಾಜ್ಯ ನೀತಿ ಸಹಾಯಕವಾಗುತ್ತದೆ. ಈ ಬಗೆಯ ಕ್ರಮಗಳು, ಕೆಳಸ್ತರದ ಮತ್ತು ಅವಕಾಶವಂಚಿತ ವರ್ಗಗಳಿಗೆ ಹೆಚ್ಚಿನ ಜೀವನಾಧಾರ ಅವಕಾಶಗಳನ್ನು ಕಲ್ಪಿಸಿ, ನಿರಂತರ ವೃತ್ತಿಪರ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲು ಸಹಾಯವಾಗುತ್ತದೆ.
- ಒಟ್ಟಾರೆ, ರಾಷ್ಟ್ರೀಯ ನೀತಿಗಳು ವಿಶಾಲ ಹಾಗೂ ವಿಸ್ತೃತವಾದ ಚೌಕಟ್ಟನ್ನು ಒದಗಿಸಲು ಸಹಾಯಕವಾದರೆ, ರಾಜ್ಯ ನೀತಿಯು ರಾಜ್ಯದ ವಿಶಿಷ್ಟ ಶೈಕ್ಷಣಿಕ ಭೂದೃಶ್ಯ, ಸವಾಲು ಮತ್ತು ಅವಕಾಶ ಗಳನ್ನು ಸಮರ್ಥವಾಗಿ ಎದುರಿಸಲು ಅತ್ಯಗತ್ಯ ವಾಗಿದೆ. ಇದು ನಮ್ಮ ಸಂದರ್ಭಕ್ಕೆ ಅನುಗುಣವಾಗಿ ಪರಿಹಾರಗಳನ್ನು ರೂಪಿಸುವಾಗ ಒಕ್ಕೂಟ ವ್ಯವಸ್ಥೆ ಯಿಂದ ನಿರ್ದಿಷ್ಟವಾಗಿ ಏನನ್ನು ನಿರೀಕ್ಷಿಸಬಹುದೆಂಬ ಬಗ್ಗೆ ಸ್ಪಷ್ಟತೆ ನೀಡುವ ಮೂಲಕ ಸೌಹಾರ್ದಕ್ಕೆ, ಸಮನ್ವಯತೆಗೆ ಅನುವು ಮಾಡಿಕೊಡುತ್ತದೆ.
- ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಪರಿಣಾಮಕಾರಿ ಸುಧಾರಣೆಗಳನ್ನು ತರಲು ಮತ್ತು ಶಿಕ್ಷಣ ವ್ಯವಸ್ಥೆಗೆ ಮುಂಗಾಣ್ಕೆ ಹಾಗೂ ಸ್ಪಷ್ಟ ದೃಷ್ಟಿಕೋನವನ್ನು ಒದಗಿಸುವ ಮೂಲಕ ಶೈಕ್ಷಣಿಕ ಉಪಕ್ರಮಗಳನ್ನು ರೂಪಿಸಿ ಜಾರಿಗೊಳಿಸಲು ನೀತಿ ದಾರಿದೀಪವಾಗುತ್ತದೆ. ಒಟ್ಟಾರೆ, ಕರ್ನಾಟಕದ ಮಕ್ಕಳನ್ನು ರಾಜ್ಯ, ರಾಷ್ಟ್ರ ಮತ್ತು ಜಾಗತಿಕ ಮಟ್ಟದಲ್ಲಿ 21ನೇ ಶತಮಾನದ ಸವಾಲುಗಳನ್ನು ಧೈರ್ಯವಾಗಿ ಎದುರಿಸಿ ಉತ್ತಮ ಅವಕಾಶಗಳನ್ನು ತಮ್ಮದಾಗಿಸಿಕೊಳ್ಳುವ ಮೂಲಕ ರಾಜ್ಯ-ರಾಷ್ಟ್ರದ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಉತ್ತಮ ಕೊಡುಗೆ ನೀಡಲು ಶೈಕ್ಷಣಿಕವಾಗಿ ವಿದ್ಯಾರ್ಥಿಗಳನ್ನು ಅಣಿಗೊಳಿಸಲು ರಾಜ್ಯ ನೀತಿಯು ನೀಲಿ ನಕಾಶೆಯಾಗುತ್ತದೆ.



Dr. Rajkumar IAS/KAS Academy

# ಇ20 ಪೆಟ್ರೋಲ್ ನೀಗದ ಗೊಂದಲ

ದೇಶದಾದ್ಯಂತ ಶೇ 20ರಷ್ಟು ಎಥೆನಾಲ್ ಮಿಶ್ರಿತ (ಇ20) ಪೆಟ್ರೋಲ್ ಪೂರೈಕೆ ಗುರಿಯನ್ನು ಸಾಧಿಸಿರುವ ಹೊತ್ತಿನಲ್ಲೇ, ಕೇಂದ್ರದ ಜೈವಿಕ ಇಂಧನ ಪ್ರೋತ್ಸಾಹ ನೀತಿಯ ವಿರುದ್ಧ ಮಿಶ್ರ ಅಭಿಪ್ರಾಯಗಳು ವ್ಯಕ್ತವಾಗಿವೆ. ಜುಲೈನಿಂದ ದೇಶದ ಎಲ್ಲ ಪೆಟ್ರೋಲ್ ಬಂಕ್‌ಗಳಲ್ಲಿ ಇ20 ಪೆಟ್ರೋಲ್ ಮಾತ್ರ ಲಭ್ಯವಿದೆ. ಈ ಪೆಟ್ರೋಲ್ ಹಳೆಯ ವಾಹನಗಳಿಗೆ ಹೊಂದಾಣಿಕೆಯಾಗುತ್ತಿಲ್ಲ ಎಂಬ ಕೂಗು ಚಾಲಕರು ಮತ್ತು ಮಾಲೀಕರಿಂದ ಕೇಳಿಬರುತ್ತಿದೆ. ಇಂಧನ ಕ್ಷಮತೆ ಕುಸಿತ, ಎಂಜಿನ್‌ಗೆ ಹಾನಿಯಂತಹ ಸಮಸ್ಯೆಗಳ ಬಗ್ಗೆ ಜನರು ಸಾಮಾಜಿಕ ಜಾಲತಾಣಗಳಲ್ಲಿ ಪ್ರಸ್ತಾಪಿಸುತ್ತಿದ್ದಾರೆ. ಆದರೆ, ಕೇಂದ್ರ ಸರ್ಕಾರ ಜನರ ಆಕ್ಷೇಪಣೆಗಳನ್ನು ತಳ್ಳಿಹಾಕಿದ್ದು, ತನ್ನ ನಿರ್ಧಾರವನ್ನು ಸಮರ್ಥಿಸಿಕೊಂಡಿದೆ

## ಹೊಸ ಪೆಟ್ರೋಲ್‌ನಿಂದ ಇಂಧನ ಕ್ಷಮತೆ ಕುಸಿತ, ವಾಹನಕ್ಕೆ ಹಾನಿ: ಮಾಲೀಕರು, ಚಾಲಕರ ಆತಂಕ

ಪ್ರಜಾವಾಣಿ ವಾರ್ತೆ

ದೇಶದಲ್ಲಿರುವ ಪೆಟ್ರೋಲ್, ಡೀಸೆಲ್ ಮತ್ತು ಇತರ ಇಂಧನ ಬೇಡಿಕೆಯನ್ನು ಪೂರೈಸುವುದಕ್ಕಾಗಿ ಭಾರತವು ಶೇ 85ರಷ್ಟು ಕಚ್ಚಾ ತೈಲವನ್ನು ಆಮದು ಮಾಡಿಕೊಳ್ಳುತ್ತಿದೆ. ಹೊರದೇಶಗಳಿಂದ ತೈಲದ ಖರೀದಿಯನ್ನು ಕಡಿಮೆ ಮಾಡುವುದರ ಜೊತೆಗೆ ಇಂಗಾಲದ ಹೊರಸೂಸುವಿಕೆಗೆ ಕಡಿವಾಣ ಹಾಕುವ ಉದ್ದೇಶದಿಂದ ಪರಿಸರ ಸ್ನೇಹಿ ಇಂಧನ ಬಳಕೆಗೆ ಕೇಂದ್ರ ಸರ್ಕಾರ ಉತ್ತೇಜನ ನೀಡುತ್ತಿದೆ. ಅದರಲ್ಲೊಂದು, ಪೆಟ್ರೋಲ್‌ಗೆ ಸಸ್ಯಜನ್ಯವಾದ ಎಥೆನಾಲ್ ಅನ್ನು ಬೆರೆಸಿ ಮಾರಾಟ ಮಾಡುವುದು. 2001ರಿಂದಲೂ ಈ ಕಾರ್ಯಕ್ರಮ ಜಾರಿಯಲ್ಲಿದೆ. ಪೆಟ್ರೋಲ್‌ಗೆ ಮಿಶ್ರಣ ಮಾಡುವ ಎಥೆನಾಲ್ ಪ್ರಮಾಣವನ್ನು ಹಂತ ಹಂತವಾಗಿ ಹೆಚ್ಚಿಸುತ್ತಾ ಬರಲಾಗಿದ್ದು, ಅದೀಗ ಶೇ 20ಕ್ಕೆ ತಲುಪಿದೆ. ಈ ವರ್ಷದ ಜುಲೈನಿಂದ ದೇಶದಲ್ಲಿರುವ ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಶೇ 20ರಷ್ಟು ಎಥೆನಾಲ್ ಮಿಶ್ರಿತ ಪೆಟ್ರೋಲ್ (ಇಬಿಪಿ 20 ಅಥವಾ ಇ20) ಮಾತ್ರ ಲಭ್ಯವಿದೆ. ಇದು ವಿವಾದವನ್ನೂ, ಗೊಂದಲವನ್ನೂ ಸೃಷ್ಟಿಸಿದೆ.

ಪೆಟ್ರೋಲ್ ವಾಹನಗಳ ಮಾಲೀಕರು, ಚಾಲಕರು ಪ್ರತಿ ದಿನ ಪೆಟ್ರೋಲ್ ಬಂಕ್‌ಗಳಲ್ಲಿ ಅಲ್ಲಿನ ಸಿಬ್ಬಂದಿಯೊಂದಿಗೆ ಜಗಳವಾಡುವ ಪರಿಸ್ಥಿತಿ ತಲೆದೋರಿದೆ. ಇ20 ಪೆಟ್ರೋಲ್ ಸರಿ ಇಲ್ಲ. ಎಥೆನಾಲ್ ಬೆರೆಸದ ಪೆಟ್ರೋಲ್ ಕೊಡಿ ಎಂದು ಆಗ್ರಹಿಸುತ್ತಿದ್ದಾರೆ. ಅವರ ಕೋಪಕ್ಕೆ ಕಾರಣವೂ ಇದೆ. ಇ20 ಪೆಟ್ರೋಲ್ ಪೂರೈಕೆ ಆರಂಭವಾದ ನಂತರ ವಾಹನಗಳ ಕಾರ್ಯಕ್ಷಮತೆ ಕುಗ್ಗಿದೆ. ಎಂಜಿನ್‌ನಲ್ಲಿ ತಾಂತ್ರಿಕ ದೋಷಗಳು ಕಾಣಿಸಿಕೊಳ್ಳುತ್ತಿವೆ. ತುಂಬಾ ಹಳೆಯ ವಾಹನಗಳ ಎಂಜಿನ್‌ಗಳು ಹಾಳಾಗಿದ್ದೂ ಇದೆ. ಇದರಿಂದ ವಾಹನಗಳ ನಿರ್ವಹಣೆಯ ವೆಚ್ಚ ಹೆಚ್ಚಾಗುತ್ತಿದ್ದು, ಜನರ ಜೇಬಿಗೆ ಹೊರೆಯಾಗಲು ಆರಂಭಿಸಿದೆ. ಹೊಸ ಪೆಟ್ರೋಲ್ ಹಾಕಿಸಿಕೊಂಡ ಬಹುತೇಕ ಬೈಕ್, ಕಾರುಗಳ ಇಂಧನ ಕ್ಷಮತೆ (ಮೈಲೇಜ್) ಗಣನೀಯವಾಗಿ ಕುಸಿತ ಕಂಡಿದೆ. ಕಾರುಗಳಲ್ಲಿ ಪ್ರತಿ ಲೀಟರ್‌ಗೆ ನಾಲ್ಕೈದು ಕಿ.ಮೀನಷ್ಟು ಇಳಿಕೆಯಾಗಿದೆ ಎಂಬುದು ಬಹುತೇಕ ಗ್ರಾಹಕರ ಹೇಳಿಕೆ.

ಆದರೆ, ಸರ್ಕಾರ ಇದನ್ನು ಒಪ್ಪುತ್ತಿಲ್ಲ. ವಾಹನಗಳ ಇಂಧನ ಕ್ಷಮತೆ ಸ್ವಲ್ಪ ಪ್ರಮಾಣದಲ್ಲಿ ಕಡಿಮೆಯಾಗಬಹುದು. ಕೆಲವು ರಬ್ಬರ್ ಬಿಡಿಭಾಗಗಳು/ಗ್ಯಾಸ್ಕೆಟ್‌ಗಳನ್ನು ಬದಲಿಸಿದರೆ ಈ ಸಮಸ್ಯೆಯೂ ಪರಿಹಾರವಾಗುತ್ತದೆ ಎಂಬುದು ಅದರ ವಾದ. ಆದರೆ, ಇದು ಜನರಿಗೆ ಸಮಾಧಾನ ತಂದಿಲ್ಲ.

**ಗೊಂದಲ ಏಕೆ?:** 2000ದ ದಶಕದಲ್ಲಿ ಭಾರತದಲ್ಲಿ ಎಥೆನಾಲ್ ಮಿಶ್ರಿತ ಪೆಟ್ರೋಲ್ ಪೂರೈಕೆ ಆರಂಭವಾಯಿತು. ಆರಂಭದಲ್ಲಿ ಶೇ 5ರಷ್ಟಿದ್ದ ಎಥೆನಾಲ್ ಪ್ರಮಾಣವನ್ನು ಶೇ 10ಕ್ಕೆ ಏರಿಸಲಾಯಿತು. ಇತ್ತೀಚಿನವರೆಗೂ ಈ ಪೆಟ್ರೋಲ್ ಅನ್ನೇ ಗ್ರಾಹಕರು ಬಳಸುತ್ತಿದ್ದರು. ಈ ಪ್ರಮಾಣವನ್ನು ಶೇ 20ಕ್ಕೆ ಹೆಚ್ಚಿಸಿದಾಗ ಸಮಸ್ಯೆ ತಲೆದೋರಿದೆ. 2023ರ ಏಪ್ರಿಲ್ ನಂತರ ತಯಾರಿಸಲಾದ ವಾಹನಗಳು ಇ20 ಪೆಟ್ರೋಲ್ ಬಳಕೆಗೆ ಯೋಗ್ಯವಾಗಿದೆ ಎಂದು ಹೇಳಲಾಗುತ್ತಿದೆ. ಅದಕ್ಕೂ ಹಳೆಯ ವಾಹನಗಳಿಗೆ ಈ ಪೆಟ್ರೋಲ್ ಹೊಂದಿಕೆಯಾಗುತ್ತಿಲ್ಲ ಎಂಬುದು ವಾಹನ ಉದ್ಯಮದ ತಜ್ಞರು ಹಾಗೂ ಗ್ರಾಹಕರ ಅಭಿಪ್ರಾಯ. ಬಿಎಸ್- 6 ಹಂತದ ವಾಹನಗಳಲ್ಲೂ ಸಮಸ್ಯೆಗಳು ಕಾಣಿಸಿಕೊಂಡಿವೆ. 2023ರ ಏಪ್ರಿಲ್ ನಂತರ ತಯಾರಿಸಲಾದ ವಾಹನಗಳಲ್ಲಿ, ವಾಹನವು ಇ5, ಇ10 ಪೆಟ್ರೋಲ್ ಬಳಸಲು ಯೋಗ್ಯ ಎಂದಷ್ಟೇ ಇದೆ. ಇತ್ತೀಚೆಗೆ ತಯಾರಾಗುತ್ತಿರುವ ವಾಹನಗಳ ಟ್ಯಾಂಕ್ ಮುಚ್ಚಳದಲ್ಲಿ 'ಇ20 ಪೆಟ್ರೋಲ್ ಬಳಸಲು ಅರ್ಹ' ಎಂಬ ಉಲ್ಲೇಖ ಇದೆ.

ಕೆಲವು ವಾಹನ ತಯಾರಿಕಾ ಕಂಪನಿಗಳು ತಮ್ಮ ಹಳೆಯ ವಾಹನಗಳನ್ನು ಇ20 ಪೆಟ್ರೋಲ್ ಬಳಸಿ ಪರೀಕ್ಷೆಗೆ ಒಳಪಡಿಸಿಲ್ಲ ಎಂದು ಆರಂಭದಲ್ಲಿ ಹೇಳಿಕೆ ನೀಡಿದ್ದರೂ ನಂತರ ತಮ್ಮ ಹೇಳಿಕೆ ಬದಲಿಸಿವೆ. ದೇಶದ ಅತಿದೊಡ್ಡ ಕಾರು ತಯಾರಿಕಾ ಸಂಸ್ಥೆ ಮಾರುತಿ ಸುಜುಕಿ ಸೇರಿದಂತೆ ಕೆಲವು ಕಂಪನಿಗಳು ಇ20 ಪೆಟ್ರೋಲ್ ಕಿಟ್ ಅನ್ನು ಸಿದ್ಧಪಡಿಸಿವೆ ಎಂದು ವರದಿಯಾಗಿದೆ. ಹೊಸ ಪೆಟ್ರೋಲ್‌ಗೆ ವಾಹನವನ್ನು ಹೊಂದಿಸಲು ಅಗತ್ಯವಾದ ಬಿಡಿಭಾಗಗಳನ್ನು ಈ ಕಿಟ್ ಹೊಂದಿದೆ.

ಇತ್ತೀಚೆಗೆ ನವದೆಹಲಿಯಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದ ಭಾರತೀಯ ವಾಹನ ತಯಾರಿಕಾ ಸೊಸೈಟಿಯ (ಎಸ್‌ಐಎಎಂ) ಕಾರ್ಯನಿರ್ವಾಹಕ ನಿರ್ದೇಶಕ ಪಿ.ಕೆ.ಬ್ಯಾನರ್ಜಿ, 'ಹಳೆಯ ವಾಹನಗಳಲ್ಲಿ ಇ20 ಪೆಟ್ರೋಲ್ ಬಳಸುವುದರಿಂದ ಇಂಧನ ಕ್ಷಮತೆ ಸ್ವಲ್ಪ ಕಡಿಮೆಯಾಗಬಹುದು. ಆದರೆ, ವಾಹನಕ್ಕೆ ಯಾವುದೇ ಸಮಸ್ಯೆ ಇಲ್ಲ. ಕೆಲವು ಸಮಯದಿಂದ ಎಲ್ಲ ವಾಹನಗಳು ಇ20 ಪೆಟ್ರೋಲ್ ಅನ್ನೇ ಬಳಸುತ್ತಿವೆ. ಆದರೆ, ಎಲ್ಲೂ ವಾಹನ ಹಾಳಾಗಿ ನಿಂತ ಉದಾಹರಣೆ ಇಲ್ಲ. ಒಂದು ವೇಳೆ ಅಂತಹ ಯಾವುದೇ ಸಮಸ್ಯೆ ಬಂದರೆ ಕಂಪನಿಗಳು ವಾರಂಟಿ, ವಿಮೆಯ ಕ್ಲೇಮುಗಳಿಗೆ ಸ್ಪಂದಿಸಲಿವೆ' ಎಂದು ಹೇಳಿದ್ದರು. ಆದರೆ, ಇ20 ಪೆಟ್ರೋಲ್‌ನಿಂದ ವಾಹನಕ್ಕೆ ಹಾನಿಯಾದರೆ, ಅದಕ್ಕೆ ವಿಮಾ ಕಂಪನಿಗಳು ಪರಿಹಾರ ನೀಡುತ್ತವೆಯೇ ಇಲ್ಲವೇ ಎಂಬ ಬಗ್ಗೆ ಗೊಂದಲ ಇದೆ.

'ಭಾರತದಲ್ಲಿ ಹಳೆಯ ವಾಹನಗಳನ್ನು ಹೊಂದಿರುವವರೇ ಹೆಚ್ಚು. ವಾಹನ ತಯಾರಿಕಾ ಕಂಪನಿಗಳು ಕೂಡ ಈ ಬಗ್ಗೆ ತಮ್ಮ ಗ್ರಾಹಕರಿಗೆ ತಿಳಿ ಹೇಳುವ ಕೆಲಸವನ್ನು ಮಾಡುತ್ತಿಲ್ಲ. ಸರ್ಕಾರವೂ ತನ್ನ ನಿರ್ಧಾರದ ಬಗ್ಗೆ ದೇಶದ ಜನರಿಗೆ ಅರಿವು ಮೂಡಿಸುವ ಕೆಲಸ ಮಾಡಿಲ್ಲ. ಇ20 ಪೆಟ್ರೋಲ್ ಕಾರಣಕ್ಕೆ ಹೊಸ ವಾಹನಗಳನ್ನು ಖರೀದಿಸುವ ಸಾಮರ್ಥ್ಯ ಬಹುತೇಕರಿಗೆ ಇಲ್ಲ. ಇ20 ಪೆಟ್ರೋಲ್ ಬಗ್ಗೆ ನಮಗೆ ಆಕ್ಷೇಪ ಇಲ್ಲ. ಆದರೆ, ಹಳೆಯ ವಾಹನಗಳಿಗೆ ಹೊಂದುವಂತಹ ಪೆಟ್ರೋಲ್ ಲಭ್ಯವಿರುವಂತೆ ಸರ್ಕಾರ ನೋಡಿಕೊಳ್ಳಬೇಕು. ಪೆಟ್ರೋಲ್ ಬಂಕ್‌ಗಳಲ್ಲಿ ತಮಗೆ ಬೇಕಾದ ಪೆಟ್ರೋಲ್ ಖರೀದಿಸುವ ಆಯ್ಕೆ ಇರಬೇಕು' ಎಂಬುದು ಬಹುತೇಕ ಗ್ರಾಹಕರ ಅಭಿಪ್ರಾಯ. ಇದೇ ವಾದವನ್ನು ಮುಂದಿಟ್ಟುಕೊಂಡು ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ನ್ಯಾಯಪೀಠ ವಜಾ ಮಾಡಿದೆ.

ಪಳೆಯುಳಿಕೆ ಇಂಧನದ ಮೇಲೆ ಅವಲಂಬನೆ ತಪ್ಪಿಸುವುದಕ್ಕಾಗಿ ಸರ್ಕಾರ ಜೈವಿಕ ಇಂಧನ ನೀತಿಯನ್ನು ರೂಪಿಸಿದ್ದು, ಅದನ್ನು ಕಟ್ಟುನಿಟ್ಟಾಗಿ ಜಾರಿಗೆ ತರುತ್ತಿದೆ. ಹೀಗಾಗಿ, ಜನರಿಂದ ವಿರೋಧ ವ್ಯಕ್ತವಾದರೂ ಅದು ತನ್ನ ನಿರ್ಧಾರದಿಂದ ಹಿಂದೆ ಸರಿಯುವ ಸಾಧ್ಯತೆ ಕ್ಷೀಣ ಎಂದೂ ಹೇಳಲಾಗುತ್ತಿದೆ.



### ದರ ಕಡಿಮೆ ಏಕಿಲ್ಲ?

ಶೇ 20ರಷ್ಟು ಎಥೆನಾಲ್ ಮಿಶ್ರಣ ಮಾಡಿದರೂ ಸರ್ಕಾರ ಪೆಟ್ರೋಲ್ ದರವನ್ನು ಕಡಿಮೆ ಮಾಡಿಲ್ಲ ಏಕೆ ಎಂಬುದು ಹಲವರ ಪ್ರಶ್ನೆ. ಇದಕ್ಕೂ ಸರ್ಕಾರ ಉತ್ತರಿಸಿದೆ. ಎಥೆನಾಲ್‌ನ ಬೆಲೆ ಹೆಚ್ಚಿದೆ. ಪ್ರತಿ ಲೀಟರ್‌ಗೆ ₹71.32ರಷ್ಟಿದೆ. ಇ20 ಪೆಟ್ರೋಲ್ ತಯಾರಿಸಲು ಬಳಸುವ ಮೋಟರ್ ಸ್ಪಿರಿಟ್‌ನ ದರವೂ ಹೆಚ್ಚಾಗಿದೆ. ಜೋಳ ಆಧಾರಿತ ಎಥೆನಾಲ್ ಬೆಲೆ ₹52.92ರಿಂದ ₹71.86ಕ್ಕೆ ಏರಿದೆ ಎಂದು ಅದು ಹೇಳಿದೆ.




ಬೆಂಗಳೂರಿನ ಪೆಟ್ರೋಲ್ ಬಂಕ್ ಒಂದರಲ್ಲಿ ಇ20 ಪೆಟ್ರೋಲ್ ಎಂದು ಫಲಕ ಹಾಕಿರುವುದು

### ಇ-ಪೆಟ್ರೋಲ್ ಹರಿದು ಬಂದ ಹಾದಿ

**2001**: ಎಥೆನಾಲ್ ಮಿಶ್ರಿತ ಪೆಟ್ರೋಲ್ (ಇಬಿಪಿ) ಯೋಜನೆ ಮಹಾರಾಷ್ಟ್ರದ ಮಿರಾಜ್ ಮತ್ತು ಉತ್ತರ ಪ್ರದೇಶದ ಬರೇಲಿಯಲ್ಲಿ ಪ್ರಯೋಗಿಕವಾಗಿ ಜಾರಿ

**2003**: ಯೋಜನೆ ಅಧಿಕೃತವಾಗಿ ಅನುಷ್ಠಾನ. ಒಂಬತ್ತು ರಾಜ್ಯಗಳು ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳಲ್ಲಿ ಶೇ 5ರಷ್ಟು ಎಥೆನಾಲ್ ಮಿಶ್ರಿತ (ಇ5) ಪೆಟ್ರೋಲ್ ಗ್ರಾಹಕರಿಗೆ ಪೂರೈಕೆ

**2006**: ಇ5 ಪೆಟ್ರೋಲ್ ಪೂರೈಕೆ 20 ರಾಜ್ಯಗಳಿಗೆ ವಿಸ್ತರಣೆ

**2018**: ಜೈವಿಕ ಇಂಧನ ರಾಷ್ಟ್ರೀಯ ನೀತಿ ರೂಪಿಸಿದ ಸರ್ಕಾರ. 2030ರ ಒಳಗಾಗಿ ಶೇ 20ರಷ್ಟು ಎಥೆನಾಲ್ ಮಿಶ್ರಿತ ಪೆಟ್ರೋಲ್ ಮತ್ತು ಶೇ 5ರಷ್ಟು ಜೈವಿಕ ಡೀಸೆಲ್ ಮಿಶ್ರಣ ಮಾಡಿದ ಡೀಸೆಲ್ ಬಳಸುವ ಗುರಿ ನಿಗದಿ

**2019**: ಶೇ 10ರಷ್ಟು ಎಥೆನಾಲ್ ಮಿಶ್ರಿತ (ಇ10) ಪೆಟ್ರೋಲ್ ಮಾರಾಟ ಆರಂಭ

**2022**: ದೇಶದಾದ್ಯಂತ ಇ10 ಪೆಟ್ರೋಲ್ ಮಾರಾಟದ ಗುರಿ ಸಾಧನೆ

**2022**: ರಾಷ್ಟ್ರೀಯ ಜೈವಿಕ ಇಂಧನ ನೀತಿಗೆ ತಿದ್ದುಪಡಿ. 2025–26ರ ವೇಳೆಗೆ ಪೆಟ್ರೋಲ್‌ಗೆ ಶೇ 20ರಷ್ಟು ಎಥೆನಾಲ್ ಮಿಶ್ರಣದ ಗುರಿ ತಲುಪುವ ಪ್ರಸ್ತಾವ. 2030ರ ವೇಳೆಗೆ ಶೇ 5ರಷ್ಟು ಎಥೆನಾಲ್ ಮಿಶ್ರಿತ ಡೀಸೆಲ್ ಅಥವಾ ಜೈವಿಕ ಡೀಸೆಲ್‌ನ ನೇರ ಮಾರಾಟದ ಗುರಿ ನಿಗದಿ

**2023ರ ಏಪ್ರಿಲ್ 1**: ಇ20 ಪೆಟ್ರೋಲ್ ಯೋಜನೆಗೆ ಚಾಲನೆ. ಪೆಟ್ರೋಲ್‌ಗೆ ಬೆರೆಸುವ ಎಥೆನಾಲ್ ಪ್ರಮಾಣ ಶೇ 14.06ಕ್ಕೆ ಹೆಚ್ಚಳ

**2025ರ ಏಪ್ರಿಲ್**: ಎಲ್ಲ ಹೊಸ ವಾಹನಗಳು ಇ20 ಪೆಟ್ರೋಲ್‌ಗೆ ಹೊಂದುವಂತೆ ಇರುವುದನ್ನು ಕಡ್ಡಾಯಗೊಳಿಸಿದ ಸರ್ಕಾರ

**2025ರ ಜುಲೈ**: ಪೆಟ್ರೋಲ್‌ಗೆ ಶೇ 20ರಷ್ಟು ಎಥೆನಾಲ್ ಬೆರೆಸುವ ಗುರಿ ಸಾಧನೆ

ಆಧಾರ: ರಾಷ್ಟ್ರೀಯ ಜೈವಿಕ ಇಂಧನ ನೀತಿ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ, ಪಿಐಬಿ, ಬಿಬಿಸಿ, ರಾಯಿಟರ್ಸ್

### ಸರ್ಕಾರದ ಅಂಕಿ ಅಂಶಗಳು ಹೇಳುವುದೇನು?

**₹1.44 ಲಕ್ಷ ಕೋಟಿ** ಎಥೆನಾಲ್ ಮಿಶ್ರಿತ ಪೆಟ್ರೋಲ್ ಬಳಕೆಯಿಂದ 2014–15ರಿಂದ 2025ರ ಜುಲೈವರೆಗೆ ಉಳಿತಾಯ ಆಗಿರುವ ವಿದೇಶಿ ವಿನಿಮಯ ಮೊತ್ತ

**₹1.20 ಲಕ್ಷ ಕೋಟಿ** ಎಥೆನಾಲ್ ಉತ್ಪಾದನೆಗೆ ಕಬ್ಬು, ಜೋಳ ಮತ್ತು ಇತರ ವಸ್ತುಗಳ ಖರೀದಿಗಾಗಿ ರೈತರಿಗೆ ಪಾವತಿ ಮಾಡಲಾದ ಹಣ

**2.45 ಕೋಟಿ ಟನ್** ಎಥೆನಾಲ್ ಮಿಶ್ರಣದಿಂದಾಗಿ ಕಚ್ಚಾ ತೈಲದಲ್ಲಿ ಆದ ಉಳಿಕೆ

**7.36 ಕೋಟಿ ಟನ್** ಇಂಗಾಲದ ಡೈಆಕ್ಸೈಡ್‌ನ ಹೊರಸೂಸುವಿಕೆಯಲ್ಲಿ ಆದ ಕಡಿತ. ಇದು 30 ಕೋಟಿಯಷ್ಟು ಗಿಡಗಳನ್ನು ನೆಟ್ಟಿದ್ದಕ್ಕೆ ಸಮ

### ಸರ್ಕಾರದ ವಾದವೇನು?

- ಇಂಧನ ಆಮದು ಅವಲಂಬನೆ ಕಡಿಮೆ ಮಾಡಲು, 2070ರ ವೇಳೆಗೆ ಶೂನ್ಯ ಇಂಗಾಲದ ಗುರಿ ಸಾಧಿಸಲು ಈ ಕ್ರಮ ಅನಿವಾರ್ಯ
- ವಿಸ್ತೃತ ಅಧ್ಯಯನ, ವಾಹನ ಉದ್ದಿಮೆಗಳ ಸಂಘಟನೆಯೊಂದಿಗೆ ಚರ್ಚಿಸಿದ ಬಳಿಕವೇ ಈ ನಿರ್ಧಾರ ಕೈಗೊಳ್ಳಲಾಗಿದೆ
- ಎಥೆನಾಲ್‌ನಿಂದಾಗಿ ಗ್ರಾಮೀಣ ಆರ್ಥಿಕತೆಗೆ ಉತ್ತೇಜನ ಸಿಗುತ್ತದೆ. ಗ್ರಾಮೀಣ ರೈತರಿಗೆ ಅನುಕೂಲವಾಗುತ್ತದೆ. ಉದ್ಯೋಗವೂ ಸೃಷ್ಟಿಯಾಗುತ್ತದೆ
- ಇ20 ಪೆಟ್ರೋಲ್‌ನಿಂದ ವಾಹನಗಳ ವೇಗವರ್ಧನೆ ಉತ್ತಮವಾಗಿರುತ್ತದೆ. ಆರಾಮದಾಯಕ ಪ್ರಯಾಣವೂ ಸಾಧ್ಯ. ಇಂಗಾಲ ಉಗುಳುವಿಕೆ ಕಡಿಮೆಯಾಗುತ್ತದೆ
- ಇ10 ಪೆಟ್ರೋಲ್ ಬಳಸುತ್ತಿದ್ದ ನಾಲ್ಕು ಚಕ್ರಗಳ ವಾಹನಗಳ ಇಂಧನ ಕ್ಷಮತೆ ಶೇ 1ರಿಂದ ಶೇ 2ರಷ್ಟು, ಉಳಿದ ವಾಹನಗಳಲ್ಲಿ ಶೇ 3ರಿಂದ 6ರಷ್ಟು ಕಡಿಮೆಯಾಗಬಹುದು. ರಬ್ಬರ್ ಬಿಡಿಭಾಗಗಳನ್ನು ಬದಲಿಸುವುದರಿಂದ, ಎಂಜಿನ್ ಟ್ಯೂನಿಂಗ್ ಮಾಡುವುದರಿಂದ ಇದನ್ನು ಸರಿಪಡಿಸಬಹುದು
- 2009ರಿಂದಲೂ ದೇಶದ ವಾಹನಗಳು ಎಥೆನಾಲ್ ಮಿಶ್ರಣದ ಪೆಟ್ರೋಲ್ ಅನ್ನೇ ಬಳಸುತ್ತಿವೆ. ಇ10 ಪೆಟ್ರೋಲ್ ಬಳಸುತ್ತಿರುವ ವಾಹನಗಳಲ್ಲಿ ಇಂಧನ ಕ್ಷಮತೆಯ ಕುಸಿತ ಪ್ರಮಾಣ ತುಂಬಾ ಕಡಿಮೆ
- ಮೊದಲಿನಂತೆ ಎಥೆನಾಲ್ ಮುಕ್ತ ಪೆಟ್ರೋಲ್ ವ್ಯವಸ್ಥೆಗೆ ಹೋಗುವುದರಿಂದ ದೇಶವು ಇಂಧನ ಪರಿವರ್ತನೆಯಲ್ಲಿ ಮತ್ತು ಮಾಲಿನ್ಯ ನಿಯಂತ್ರಣದಲ್ಲಿ ಸಾಧಿಸಿರುವ ಯಶಸ್ಸು ನಷ್ಟವಾಗುತ್ತದೆ

### ವಿದೇಶಗಳಲ್ಲಿ...

- ಬ್ರೆಜಿಲ್, ಅಮೆರಿಕ ಮತ್ತು ಐರೋಪ್ಯ ಒಕ್ಕೂಟದ ಹಲವು ದೇಶಗಳು ಎಥೆನಾಲ್ ಮಿಶ್ರಿತ ಪೆಟ್ರೋಲ್ ಬಳಸುತ್ತಿವೆ
- ಬೆಜ್ರಿಲ್‌ನಲ್ಲಿ 1970ರ ದಶಕದಿಂದಲೇ ಎಥೆನಾಲ್ ಮಿಶ್ರಿತ ಪೆಟ್ರೋಲ್ ಲಭ್ಯವಿದೆ. ಕಬ್ಬಿನಿಂದ ಭಾರಿ ಪ್ರಮಾಣದಲ್ಲಿ ಎಥೆನಾಲ್ ಅನ್ನು ಉತ್ಪಾದಿಸಲಾಗುತ್ತದೆ. ಫ್ಲೆಕ್ಸ್-ಫ್ಯುಯೆಲ್ ತಂತ್ರಜ್ಞಾನದಲ್ಲಿ ತಯಾರಿಸಿದ ವಾಹನಗಳು ಅಲ್ಲಿ ಈಗ ಹೆಚ್ಚು ಮಾರಾಟವಾಗುತ್ತಿವೆ. ಈ ವಾಹನಗಳು ಯಾವುದೇ ಪ್ರಮಾಣದಲ್ಲಿ ಎಥೆನಾಲ್ ಮಿಶ್ರಿತ ಪೆಟ್ರೋಲ್ ಹಾಗೂ ಎಥೆನಾಲ್ ರಹಿತ ಪೆಟ್ರೋಲ್‌ನಿಂದಲೂ ಚಲಿಸುವ ಸಾಮರ್ಥ್ಯ ಹೊಂದಿವೆ
- ಅಮೆರಿಕದಲ್ಲಿ 2005ರಿಂದಲೇ ಎಥೆನಾಲ್ ಮಿಶ್ರಿತ ಪೆಟ್ರೋಲ್ ಬಳಸಲಾಗುತ್ತಿದೆ. ಎ10 ಪೆಟ್ರೋಲ್ ಬಳಕೆ ಹೆಚ್ಚಿದೆ. ಕೆಲವು ಕಡೆಗಳಲ್ಲಿ ಇ51, ಇ85 ಪೆಟ್ರೋಲ್ ಕೂಡ ಲಭ್ಯವಿವೆ
- ಯುರೋಪಿನ ಫ್ರಾನ್ಸ್, ಜರ್ಮನಿ, ಬ್ರಿಟನ್‌ನಲ್ಲಿ ಇ10 ಪೆಟ್ರೋಲ್ ಬಳಕೆಯಲ್ಲಿದೆ. ಉಳಿದ ರಾಷ್ಟ್ರಗಳಲ್ಲಿ ಇ5 ಪೆಟ್ರೋಲ್ ಜನಪ್ರಿಯ

### ಪದಬ

**ಎಡದಿಂದ ಬಲಕ್ಕೆ**

1.ಟ್ರಾನ್ಸ್‌ಪರೆಂಟ್ ಅನ್ನು ಕನ್ನಡೀಕರಿಸಿ! (5)
3.ಒಂದು ಸಲ ಕುಡಿಯುವಷ್ಟು ದ್ರವ (3)
5.ಆಹಾ! ರುಚಿಕಟ್ಟಾದ ಭೋಜನ (5)
7.ಕೊನೆಗೆ ಹಣ್ಣನ್ನಿಟ್ಟರೆ ಖಂಡಿತಾ ಯಶಸ್ವಿ! (3)
8.ಯಾವುದೇ ಅಪರಾಧವನ್ನು ಮಾಡದಿರುವವನು (5)
10.ಅಪೇಕ್ಷೆ ಇಲ್ಲದವನ ಅಲಕ್ಷ್ಯ! (3)
11.ನವ ಬಾಳಿದು (5)
14.ಮರಿಗೆ ಜರೂರಾಗಿ ನೀಡಿದ ಕೂಲಿ (3)
15.ಪ್ರಸವ ಕೋಣೆಯಿದು (5)

**ಮೇಲಿಂದ ಕೆಳಕ್ಕೆ**

1.ಏನೂ ತಿಳಿಯದವನು ಮರದ ಹತ್ತಿರ ನಿಂತಿದ್ದಾನಲ್ಲಾ! (
2.ಹತ್ತು ವರ್ಷಗಳ ಕಾಲದ ಅವಧಿ (
4.ಕುಲದಲ್ಲಿ ಮೋಸಗಾರಿಕೆಯೇ? (
6.ವರನಲ್ಲಿ ಪ್ರತಿನಿಧಿ ಕಾಣಿಸಿದನೇ? (
7.ಸತ್ತವರನ್ನು ಹೂಳುವ ಸ್ಥಳ (
8.ಪರೀಕ್ಷೆಯನ್ನು ಎದುರು ನೋಡುವುದು! (
9.ರಾಯರಿಂದ ಬಂದಿರುವ ನಿರೂಪ (
10.ಶ್ರೇಷ್ಠವಾದುದನ್ನು ಹೀಗೆನ್ನಿ (
12.ಇದೊಂದು ಸಾಂಬಾರ ದ್ರವ್ಯ (
13.ಮಾದರಿ ಇಲ್ಲಿದೆ (

6151ನೇ

### ಸುಡೊಕ

## ❖ ನಿತ್ಯಬಳಕೆಯ 175 ಉತ್ಪನ್ನಗಳ ತೆರಿಗೆ ಇಳಿಕೆ?

**ಸಂದರ್ಭ:** ದಿನನಿತ್ಯ ಬಳಕೆ ಮಾಡುವ ಶಾಂಪೂವಿನಿಂದ ಆರಂಭಿಸಿ, ಗ್ರಾಹಕ ಬಳಕೆಯ ಎಲೆಕ್ಟ್ರಾನಿಕ್ ಉಪಕರಣಗಳು, ಹೈಬ್ರಿಡ್ ಕಾರುಗಳು ಸೇರಿ ಸರಿಸುಮಾರು 175 ಉತ್ಪನ್ನಗಳ ಮೇಲಿನ ತೆರಿಗೆಯನ್ನು ಶೇಕಡ 10ರಷ್ಟು ಕಡಿಮೆ ಮಾಡುವ ಇರಾದೆಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಮೂಲಗಳು ತಿಳಿಸಿವೆ.

- ಜಿಎಸ್‌ಟಿ ವ್ಯವಸ್ಥೆಯಲ್ಲಿ ಕೆಲವು ಸುಧಾರಣೆಗಳನ್ನು ತರುವುದಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಆಗಸ್ಟ್ 15ರಂದು ಹೇಳಿದ್ದಾರೆ.
- ಜಿಎಸ್‌ಟಿ ವ್ಯವಸ್ಥೆಯ ಅಡಿಯಲ್ಲಿ ತೆರಿಗೆ ಪ್ರಮಾಣ ಕಡಿಮೆ ಮಾಡುವ ಪ್ರಸ್ತಾವವನ್ನು ಕೇಂದ್ರ ಸರ್ಕಾರ ಸಿದ್ಧಪಡಿಸಿದೆ. ಟಾಲ್ಕಂ ಪೌಡರ್, ಟೂತ್‌ಪೇಸ್ಟ್, ಶಾಂಪೂಗಳ ಮೇಲಿನ ತೆರಿಗೆ ಪ್ರಮಾಣ ಶೇ 18ರಷ್ಟು ಇರುವುದನ್ನು ಶೇ 5ಕ್ಕೆ ಇಳಿಸುವ ಉಲ್ಲೇಖವು ಈ ಪ್ರಸ್ತಾವದಲ್ಲಿದೆ ಎಂದು ಗೊತ್ತಾಗಿದೆ. ಇದು ಕಾರ್ಯರೂಪಕ್ಕೆ ಬಂದಲ್ಲಿ ಹಿಂದುಸ್ತಾನ್ ಯೂನಿಲಿವರ್ ಮತ್ತು ಗೋದ್ರೆಜ್ ಇಂಡಸ್ಟ್ರೀಸ್‌ನಂತಹ ಕಂಪನಿಗಳ ಮಾರಾಟ ಪ್ರಮಾಣದಲ್ಲಿ ಏರಿಕೆ ಆಗುವ ನಿರೀಕ್ಷೆ ಇದೆ.
- ಹವಾನಿಯಂತ್ರಕಗಳು ಹಾಗೂ ಟಿ.ವಿ.ಗಳ ಮೇಲಿನ ತೆರಿಗೆ ಪ್ರಮಾಣ ಈಗಿನ ಶೇ 28ರ ಮಟ್ಟದಿಂದ ಶೇ 18ಕ್ಕೆ ಇಳಿಕೆ ಆಗುವ ಸಾಧ್ಯತೆ ಇದೆ. ಈ ವಿಚಾರವಾಗಿ ಕೇಂದ್ರ ಹಣಕಾಸು ಸಚಿವಾಲಯದಿಂದ ತಕ್ಷಣಕ್ಕೆ ಪ್ರತಿಕ್ರಿಯೆ ಲಭ್ಯವಾಗಿಲ್ಲ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೇತೃತ್ವದ ಜಿಎಸ್‌ಟಿ ಮಂಡಳಿಯು ಸಭೆ ಸೇರಲಿದೆ.
- ಅಮೆರಿಕಕ್ಕೆ ಭಾರತದಿಂದ ಆಗುವ ರಫ್ತುಗಳಲ್ಲಿ ಉಂಟಾಗಬಹುದಾದ ಇಳಿಕೆಯ ಪರಿಣಾಮವನ್ನು ನಿಭಾಯಿಸುವ ಉದ್ದೇಶ ಕೂಡ ಜಿಎಸ್‌ಟಿ ತೆರಿಗೆ ಹಂತಗಳ ಇಳಿಕೆ ಪ್ರಸ್ತಾವದ ಹಿಂದಿದೆ ಎಂದು ಮೂಲಗಳು ಹೇಳಿವೆ. ರಫ್ತಾಗುವ ಉತ್ಪನ್ನಗಳಾದ ರಸಗೊಬ್ಬರಗಳು, ಕೃಷಿ ಯಂತ್ರೋಪಕರಣಗಳು ಮತ್ತು ಟ್ರ್ಯಾಕ್ಟರ್‌ಗಳು, ಅವುಗಳ ಬಿಡಿಭಾಗಗಳ ಮೇಲಿನ ತೆರಿಗೆ ಪ್ರಮಾಣವನ್ನು ಈಗಿನ ಶೇ 12 ಅಥವಾ ಶೇ 18ರ ಮಟ್ಟದಿಂದ ಶೇ 5ಕ್ಕೆ ಇಳಿಕೆ ಮಾಡುವ ಚಿಂತನೆಯು ಕೇಂದ್ರ ಸರ್ಕಾರಕ್ಕೆ ಇದೆ.

ತೆರಿಗೆ ಇಳಿಕೆ ಪ್ರಸ್ತಾವ ಹೀಗಿದೆ...

- I ಪೆಟ್ರೋಲ್ ಹೈಬ್ರಿಡ್ ಕಾರುಗಳ ಮೇಲಿನ ತೆರಿಗೆ ಶೇ 18ಕ್ಕೆ ಇಳಿಸುವ ಚಿಂತನೆ
- I 350 ಸಿ.ಸಿ.ಗಿಂತ ಕಡಿಮೆ ಎಂಜಿನ್ ಸಾಮರ್ಥ್ಯದ ದ್ವಿಚಕ್ರ ವಾಹನಗಳ ಮೇಲಿನ ತೆರಿಗೆ ತಗ್ಗಿಸುವ ಪ್ರಸ್ತಾವ
- I 4 ಮೀಟರ್‌ಗಿಂತ ಹೆಚ್ಚು ಉದ್ದದ ಕಾರುಗಳ ಮೇಲಿನ ತೆರಿಗೆಯನ್ನು ಶೇ 40ಕ್ಕೆ ಹೆಚ್ಚಿಸಿ, ಅವುಗಳ ಮೇಲಿನ ಇತರ ಸೆಸ್‌ಗಳನ್ನು ಕಡಿಮೆ ಮಾಡಿ, ಒಟ್ಟು ತೆರಿಗೆ ಪ್ರಮಾಣವನ್ನು ಶೇ 50ರ ಮಟ್ಟದಲ್ಲಿ ಉಳಿಸಿಕೊಳ್ಳುವ ಆಲೋಚನೆ ಇದೆ
- I ಕಲ್ಲಿದ್ದಲು, ಕ್ಯಾಸಿನೊ, ಕುದುರೆ ರೇಸ್ ಮೇಲಿನ ತೆರಿಗೆ ಪ್ರಮಾಣ ಹೆಚ್ಚಳ ಸಾಧ್ಯತೆ

ವಾಹನ ರವಾನೆ ಇಳಿಕೆ

- ದೇಶದ ಪ್ರಮುಖ ವಾಹನ ತಯಾರಿಕಾ ಕಂಪನಿಗಳಾದ ಮಾರುತಿ ಸುಜುಕಿ, ಹುಂಡೈ, ಮಹೀಂದ್ರ ಆ್ಯಂಡ್ ಮಹೀಂದ್ರ ಮತ್ತು ಟಾಟಾ ಮೋಟರ್ಸ್ ಡೀಲರ್‌ಗಳಿಗೆ ರವಾನಿಸಿದ ವಾಹನಗಳ ಸಂಖ್ಯೆಯು ಆಗಸ್ಟ್‌ನಲ್ಲಿ ಇಳಿಕೆಯಾಗಿದೆ.
- ವಾಹನಗಳಿಗೆ ಜಿಎಸ್‌ಟಿ ವ್ಯವಸ್ಥೆಯ ಅಡಿ ಪ್ರಸ್ತುತ ವಿಧಿಸಲಾಗುತ್ತಿರುವ ಶೇ 28ರ ತೆರಿಗೆ ದರ ತಗ್ಗಬಹುದು ಎಂಬ ನಿರೀಕ್ಷೆಯಿಂದ ಬಹುತೇಕ ಖರೀದಿದಾರರು ವಾಹನಗಳ ಖರೀದಿಯನ್ನು ಮುಂದೂಡಿರುವುದು ವಾಹನಗಳ ರವಾನೆ ಕಡಿಮೆಯಾಗಲು ಕಾರಣ ಎನ್ನಲಾಗಿದೆ.
- ಕಳೆದ ವರ್ಷದ ಆಗಸ್ಟ್‌ನಲ್ಲಿ ಮಾರುತಿ ಸುಜುಕಿ ಕಂಪನಿಯು ಡೀಲರ್‌ಗಳಿಗೆ 1,43,075 ಪ್ರಯಾಣಿಕ ವಾಹನಗಳನ್ನು ಕಳುಹಿಸಿತ್ತು. ಈ ಬಾರಿ ಅದು 1,31,278 ವಾಹನಗಳನ್ನು ಕಳುಹಿಸಿದ್ದು, ಶೇ 8ರಷ್ಟು ಇಳಿಕೆ ಆಗಿದೆ.

- ಹುಂಡೈ ಮೋಟರ್ ಇಂಡಿಯಾದ ರವಾನೆಯಲ್ಲಿ ಶೇ 11ರಷ್ಟು ಇಳಿಕೆಯಾಗಿದ್ದು, 44,001 ವಾಹನ ರವಾನೆ ಆಗಿದೆ. ಮಹೀಂದ್ರ ಆ್ಯಂಡ್ ಮಹೀಂದ್ರ ಮತ್ತು ಟಾಟಾ ಮೋಟರ್ಸ್ ಕಡೆಯಿಂದ ಆಗಿರುವ ರವಾನೆಯು ಕ್ರಮವಾಗಿ ಶೇ 9 ಮತ್ತು ಶೇ 7ರಷ್ಟು ಕಡಿಮೆಯಾಗಿದೆ.
- **ಈಗ ನಾಲ್ಕು ಹಂತಗಳ (ಶೇ 5, ಶೇ 12, ಶೇ 18 ಮತ್ತು ಶೇ 28) ಜಿಎಸ್‌ಟಿ ಇದೆ. ವಾಹನಗಳಿಗೆ ಶೇ 28ರಷ್ಟು ತೆರಿಗೆ ವಿಧಿಸಲಾಗುತ್ತಿದೆ.** ಪ್ರಧಾನಿ ನರೇಂದ್ರ ಮೋದಿ ಅವರು, ನಾಲ್ಕು ಹಂತಗಳ ತೆರಿಗೆ ವ್ಯವಸ್ಥೆಯನ್ನು ಎರಡು ಹಂತಗಳಿಗೆ ಇಳಿಸಲಾಗುವುದು ಎಂದು ಹೇಳಿದ್ದಾರೆ. ಹೀಗಾಗಿ ವಾಹನ ಖರೀದಿಸಲು ಖರೀದಿದಾರರು ತಡ ಮಾಡುತ್ತಿದ್ದಾರೆ. ಇದೇ ರವಾನೆ ಪ್ರಮಾಣ ಕಡಿಮೆ ಆಗಲು ಕಾರಣ ಎನ್ನಲಾಗಿದೆ.

**ಜಿಎಸ್‌ಟಿ ಸಂಗ್ರಹ ಶೇ 6.5ರಷ್ಟು ಹೆಚ್ಚಳ**

- ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಮೂಲಕ ಆಗಸ್ಟ್ ತಿಂಗಳಿನಲ್ಲಿ ₹1.86 ಲಕ್ಷ ಕೋಟಿ ವರಮಾನ ಸಂಗ್ರಹವಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.
- ಜುಲೈನಲ್ಲಿ ಸಂಗ್ರಹ ವಾಗಿದ್ದ ₹1.96 ಲಕ್ಷ ಕೋಟಿಗೆ ಹೋಲಿಸಿದರೆ ವರಮಾನ ಕಡಿಮೆಯಾಗಿದೆ. ಆದರೆ 2024ರ ಆಗಸ್ಟ್‌ನಲ್ಲಿ ₹1.75 ಲಕ್ಷ ಕೋಟಿ ಸಂಗ್ರಹ ವಾಗಿದ್ದು, ಇದಕ್ಕೆ ಹೋಲಿಸಿದರೆ ವರಮಾನ ಶೇ 6ರಷ್ಟು ಏರಿಕೆಯಾಗಿದೆ.
- ದೇಶಿ ವಹಿವಾಟುಗಳ ಮೂಲಕ ಸಂಗ್ರಹವಾದ ಜಿಎಸ್‌ಟಿ ವರಮಾನ ಶೇ 9.6ರಷ್ಟು ಏರಿಕೆಯಾಗಿದ್ದು, ₹1.37 ಲಕ್ಷ ಕೋಟಿ ಸಂಗ್ರಹವಾಗಿದೆ. ಆಮದು ವಹಿವಾಟು ಮೂಲಕ ₹49,354 ಕೋಟಿ ಸಂಗ್ರಹವಾಗಿದ್ದು, ಶೇ 1.2ರಷ್ಟು ಕಡಿಮೆಯಾಗಿದೆ. ಜಿಎಸ್‌ಟಿ ಮರುಪಾವತಿ ಶೇ 20ರಷ್ಟು ಇಳಿಕೆಯಾಗಿದ್ದು, ₹19,359 ಕೋಟಿಯಾಗಿದೆ. ನಿವ್ವಳ ಜಿಎಸ್‌ಟಿ ವರಮಾನ ₹1.67 ಲಕ್ಷ ಕೋಟಿಯಾಗಿದ್ದು, ಶೇ 10.7ರಷ್ಟು ಹೆಚ್ಚಳವಾಗಿದೆ.
- ದೇಶದಲ್ಲಿ ಜನರು ಸರಕುಗಳನ್ನು ಖರೀದಿಸುವ ಪ್ರಮಾಣ ಹೆಚ್ಚಳವಾಗಿದೆ. ಮುಂಬರುವ ಹಬ್ಬದ ಋತುವಿನಲ್ಲಿ ಜಿಎಸ್‌ಟಿ ಸಂಗ್ರಹವು ಮತ್ತಷ್ಟು ಹೆಚ್ಚಳವಾಗುವ ನಿರೀಕ್ಷೆ ಇದೆ ಎಂದು ತಜ್ಞರು ಅಂದಾಜು ಮಾಡಿದ್ದಾರೆ.

## ❖ ತಯಾರಿಕಾ ವಲಯ ಚುರುಕು

**ಸಂದರ್ಭ:** ದೇಶದ ತಯಾರಿಕಾ ವಲಯದ ಕಾರ್ಯಾಚರಣೆ ಪರಿಸ್ಥಿತಿಯು ಆಗಸ್ಟ್ ತಿಂಗಳಲ್ಲಿ ಕಳೆದ 17 ವರ್ಷಗಳ ಅತ್ಯುತ್ತಮ ಬೆಳವಣಿಗೆಯನ್ನು ಕಂಡಿದೆ. ಉತ್ಪಾದನೆಯ ದಕ್ಷತೆಯು ಹೆಚ್ಚಳ ಕಂಡಿರುವುದು, ಬೇಡಿಕೆಯು ಆರೋಗ್ಯಕರವಾದ ಮಟ್ಟದಲ್ಲಿ ಇರುವುದು ಇದಕ್ಕೆ ಕಾರಣ.

- ಎಚ್‌ಎಸ್‌ಬಿಸಿ ಇಂಡಿಯಾ ಮ್ಯಾನ್ಯುಫ್ಯಾಕ್ಚರಿಂಗ್ ಪರ್ಚೇಸಿಂಗ್ ಮ್ಯಾನೇಜರ್ಸ್ ಇಂಡೆಕ್ಸ್ (ಪಿಎಂಐ) ಸೂಚ್ಯಂಕವು ಜುಲೈನಲ್ಲಿ 59.1ರಷ್ಟು ಇದ್ದಿದ್ದು ಆಗಸ್ಟ್‌ನಲ್ಲಿ 59.3ಕ್ಕೆ ಹೆಚ್ಚಳ ಕಂಡಿದೆ.
- ಪಿಎಂಐ ಮಾನದಂಡಗಳ ಪ್ರಕಾರ ಸೂಚ್ಯಂಕವು 50ಕ್ಕಿಂತ ಹೆಚ್ಚಿನ ಮಟ್ಟದಲ್ಲಿ ಇದ್ದರೆ ಅದನ್ನು ಬೆಳವಣಿಗೆ ಎಂದು ಪರಿಗಣಿಸಲಾಗುತ್ತದೆ. 50ಕ್ಕಿಂತ ಕಡಿಮೆ ಇದ್ದರೆ ಅದನ್ನು ಕುಸಿತವೆಂದು ಕಾಣಲಾಗುತ್ತದೆ.

Dr. Rajkumar IAS/KAS Academy

## ❖ ಎಥೆನಾಲ್ ಮಿಶ್ರಿತ ಪೆಟ್ರೋಲ್ 'ಸುಪ್ರೀಂ'ನಿಂದ ಪಿಐಎಲ್ ವಜಾ

**ಸಂದರ್ಭ:** ದೇಶದಾದ್ಯಂತ ಶೇ 20ರಷ್ಟು ಎಥೆನಾಲ್ ಮಿಶ್ರಿತ ಪೆಟ್ರೋಲ್ (ಇಬಿಪಿ–20) ಬಳಕೆ ಜಾರಿಗೊಳಿಸುವುದನ್ನು ಪ್ರಶ್ನಿಸಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾ ಗೊಳಿಸಿದೆ.

- 'ಇಬಿಪಿ–20' ಮೂಲಕ ದೇಶದ ಲಕ್ಷಾಂತರ ಸವಾರರನ್ನು ತಮ್ಮ ವಾಹನಗಳ ಎಂಜಿನ್‌ಗೆ ಹೊಂದಿಕೆ ಯಾದ ಇಂಧನ ಬಳಸುವಂತೆ ಒತ್ತಾಯಿಸ ಲಾಗುತ್ತಿದೆ' ಎಂದು ವಕೀಲ ಅಕ್ಷಯ್ ಮಲ್ಹೋತ್ರಾ ಪಿಐಎಲ್ ಸಲ್ಲಿಸಿದ್ದರು.
- 'ಎಲ್ಲ ಪೆಟ್ರೋಲ್ ಬಂಕ್‌ಗಳಲ್ಲಿ ಎಥೆ ನಾಲ್ ಮುಕ್ತ ಪೆಟ್ರೋಲ್ ಲಭ್ಯತೆ ಖಾತ್ರಿ ಪಡಿಸುವ ಲೇಬಲ್ ಪ್ರದರ್ಶಿಸುವಂತೆ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯಕ್ಕೆ ನಿರ್ದೇಶನ ನೀಡಬೇಕು' ಎಂಬ ಅರ್ಜಿದಾರರ ವಾದವನ್ನು ನ್ಯಾಯಮೂರ್ತಿ ಬಿ.ಆರ್.ಗವಾಯಿ ಮತ್ತು ಕೆ.ವಿನೋದ್ ಚಂದ್ರನ್ ಅವರನ್ನೊಳಗೊಂಡ ಪೀಠ ತಿರಸ್ಕರಿಸಿತು.
- 'ಕೇಂದ್ರದ ಪರ ಹಾಜರಾದ ಅಟಾರ್ನಿ ಜನರಲ್ ಆರ್. ವೆಂಕಟರಮಣಿ ಅವರು, 'ಪಿಐಎಲ್'ಗೆ ವಿರೋಧ ವ್ಯಕ್ತಪಡಿಸಿ, ಎಥೆನಾಲ್ ಮಿಶ್ರಿತ ಪೆಟ್ರೋಲ್‌ನಿಂದ ಕಬ್ಬು ಬೆಳೆಗಾರರಿಗೆ ಅನುಕೂಲವಾಗುತ್ತದೆ' ಎಂಬುದನ್ನು ಪೀಠದ ಗಮನಕ್ಕೆ ತಂದರು.
- 'ಪಿಐಎಲ್' ಸಲ್ಲಿಸಿರುವ ವಕೀಲರು ಬೇನಾಮಿ. ಇವರ ಹಿಂದೆ ಬೇರೆ ಲಾಬಿ ಇದೆ. 'ಇಬಿಪಿ–20'ಗೆ ಸಂಬಂಧಿಸಿಂತೆ ಸರ್ಕಾರ ಪ್ರತಿಯೊಂದು ಸಂಗತಿಯನ್ನೂ ವಿವೇಚಿಸುತ್ತದೆ' ಎಂದು ಅಟಾರ್ನಿ ಜನರಲ್ ಪೀಠಕ್ಕೆ ತಿಳಿಸಿದರು.

## ❖ ಮಹಿಳಾ ಏಕದಿನ ವಿಶ್ವಕಪ್: ಗೆಲ್ಲುವ ತಂಡಕ್ಕೆ ₹39.55 ಕೋಟಿ!

**ಸಂದರ್ಭ:** ಮುಂಬರುವ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಚಾಂಪಿಯನ್ನರು ಟೂರ್ನಿಯ ಇತಿಹಾಸ ದದಲ್ಲೇ ಅತ್ಯಧಿಕ ಮೊತ್ತದ ಬಹುಮಾನ ಮೊತ್ತ ಗಳಿಸಲಿದ್ದಾರೆ. ವಿಜೇತರಿಗೆ ನೀಡುವ ಬಹುಮಾನದ ಹಣವನ್ನು ₹11.65 ಕೋಟಿಯಿಂದ ₹39.55 ಕೋಟಿಗೆ ಏರಿಸಲಾಗಿದೆ ಎಂದು ಅಂತರರಾಷ್ಟ್ರೀಯ ಕ್ರಿಕೆಟ್ ಸಮಿತಿ ಪ್ರಕಟಿಸಿದೆ.

- 2023ರ ಪುರುಷರ ವಿಶ್ವಕಪ್ ಗೆದ್ದ ಆಸ್ಟ್ರೇಲಿಯಾ ತಂಡ ₹31.35 ಕೋಟಿ ಗಳಿಸಿತ್ತು.
- ಮಹಿಳಾ ವಿಶ್ವಕಪ್‌ನ 13ನೇ ಆವೃತ್ತಿ ಸೆಪ್ಟೆಂಬರ್ 30ರಂದು ಆರಂಭವಾಗಲಿದೆ. ಭಾರತ ಮತ್ತು ಶ್ರೀಲಂಕಾ ಆತಿಥ್ಯ ವಹಿಸಿವೆ. ಎಂಟು ತಂಡಗಳು ಕಣದಲ್ಲಿರುವ ಈ ಟೂರ್ನಿಯ ಬಹುಮಾನ ಮೊತ್ತ ಸುಮಾರು ಮೂರು ಪಟ್ಟು ಹೆಚ್ಚಾಗಿದೆ.
- ಈ ಬಾರಿ ಟೂರ್ನಿಯ ಒಟ್ಟು ಬಹುಮಾನ ಮೊತ್ತ ₹122.5 ಕೋಟಿ ($13.88 ದಶಲಕ್ಷ). ನ್ಯೂಜಿಲೆಂಡ್‌ನಲ್ಲಿ ಕಳೆದ ಬಾರಿಯ (2022ರ) ಆವೃತ್ತಿಗೆ ಹೋಲಿಸಿದರೆ ಇದು ಶೇ 297ರಷ್ಟು ಅಧಿಕ. ಈ ಏರಿಕೆಯು 2023ರ ಪುರುಷರ ಏಕದಿನ ವಿಶ್ವಕಪ್ ಟೂರ್ನಿಯ ಬಹುಮಾನ ಮೊತ್ತ (ಸುಮಾರು ₹88.26 ಕೋಟಿ) ಮೀರಿಸಿದೆ ಎಂದು ಐಸಿಸಿ ವಿವರಿಸಿದೆ.
- ರನ್ನರ್ ಅಪ್ ಸ್ಥಾನ ಪಡೆಯುವ ತಂಡ ₹19.77 ಕೋಟಿ ಮೊತ್ತ ($2.24 ದಶಲಕ್ಷ) ಸಂಪಾದಿಸಲಿದೆ. ಇದು ಕಳೆದ ಬಾರಿಯ ಮೊತ್ತವಾದ ₹5.30 ಕೋಟಿಗೆ ಹೋಲಿಸಿದಲ್ಲಿ ಶೇ. 273ರಷ್ಟು ಹೆಚ್ಚು.
- ಸೆಮಿಫೈನಲ್‌ನಲ್ಲಿ ಸೋತ ತಂಡಗಳು ₹9.89 ಕೋಟಿ ಮೊತ್ತ ತಮ್ಮದಾಗಿಸಿಕೊಳ್ಳಲಿವೆ. 2022ರಲ್ಲಿ ಸೆಮಿಫೈನಲ್‌ನಲ್ಲಿ ಸೋತ ತಂಡಗಳು ಪಡೆದ ಬಹುಮಾನ ಮೊತ್ತ ₹2.65 ಕೋಟಿ.

- ಗುಂಪು ಹಂತದಲ್ಲಿ ಗೆಲ್ಲುವ ತಂಡಗಳು ₹30.29 ಲಕ್ಷ ಸಂಪಾದಿಸಲಿವೆ. ಐದು ಮತ್ತು ಆರನೇ ಸ್ಥಾನ ಪಡೆಯುವ ತಂಡಗಳಿಗೆ ₹62 ಲಕ್ಷ ದೊರೆಯಲಿದೆ. ಏಳು ಮತ್ತು ಎಂಟನೇ ಸ್ಥಾನ ಪಡೆಯುವ ತಂಡಗಳು ₹24.71 ಲಕ್ಷ ಸಂಪಾದಿಸಲಿವೆ. ಭಾಗವಹಿಸುವ ಪ್ರತಿಯೊಂದು ತಂಡಗಳಿಗೆ ₹22 ಲಕ್ಷ ಸಿಗಲಿದೆ.
- 'ಮಹಿಳಾ ಕ್ರಿಕೆಟ್‌ಗೆ ಜನಪ್ರಿಯತೆ ಹೆಚ್ಚಿಸುವ ಉದ್ದೇಶವನ್ನು ಗಮನದಲ್ಲಿಟ್ಟುಕೊಂಡು ಈ ಕ್ರಮ ಕೈಗೊಳ್ಳಲಾಗಿದೆ. 2024ರ ವಿಶ್ವಕಪ್‌ಗೆ ಮೊದಲು ಘೋಷಿಸಿದಂತೆ ಬಹುಮಾನ ಮೊತ್ತದಲ್ಲಿ ಸಮಾನತೆ ತರುವ ಉದ್ದೇಶದಿಂದಲೂ ಈ ನಿರ್ಧಾರಕ್ಕೆ ಬರಲಾಗಿದೆ' ಎಂದು ಐಸಿಸಿ ಪ್ರಕಟಣೆಯಲ್ಲಿ ತಿಳಿಸಲಾಗಿದೆ.
- ಈ ಬಾರಿಯ ವಿಶ್ವಕಪ್ ಪಂದ್ಯಗಳು ಐದು ತಾಣಗಳಲ್ಲಿ– ಭಾರತದ ಗುವಾಹಟಿ, ಇಂದೋರ್, ನವಿ ಮುಂಬೈ, ವಿಶಾಖಪಟ್ಟಣ ಮತ್ತು ಶ್ರೀಲಂಕಾದ ಕೊಲಂಬೊದಲ್ಲಿ (ತಟಸ್ಥ ತಾಣ)– ನಡೆಯಲಿವೆ. ಪಾಕಿಸ್ತಾನ ತನ್ನ ಪಂದ್ಯಗಳನ್ನು ಕೊಲಂಬೊದಲ್ಲಿ ಆಡಲಿದೆ.
- 'ಮಹಿಳಾ ಕ್ರಿಕೆಟ್‌ಗೆ ಆದ್ಯತೆ ನೀಡುವುದು ಈ ಕ್ರಮದ ಹಿಂದಿನ ಉದ್ದೇಶ. ಮಹಿಳಾ ಕ್ರಿಕೆಟ್ ಬೆಳವಣಿಗೆಯ ದೃಷ್ಟಿಯಿಂದ ಇದು ಮಹತ್ವದ ಮೈಲಿಗಲ್ಲಾಗಿದೆ' ಎಂದು ಐಸಿಸಿ ಅಧ್ಯಕ್ಷ ಜಯ್ ಶಾ ತಿಳಿಸಿದರು.

## ❖ ನವದೆಹಲಿಯಲ್ಲಿ ಮುಂದಿನ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಷಿಪ್


**ಸಂದರ್ಭ:** ಭಾರತವು 2026ರ ವಿಶ್ವಬ್ಯಾಡ್ಮಿಂಟನ್ ಚಾಂಪಿಯನ್‌ಷಿಪ್‌ನ ಅತಿಥ್ಯ ವಹಿಸಿಕೊಂಡಿದೆ. ರಾಜಧಾನಿ ನವದೆಹಲಿ ಯಲ್ಲಿ 30ನೇ ಆವೃತ್ತಿಯ ಈ ಪ್ರತಿಷ್ಠಿತ ಚಾಂಪಿಯನ್‌ಷಿಪ್ ನಡೆಯಲಿದೆ.

- 17 ವರ್ಷಗಳ ನಂತರ ಭಾರತಕ್ಕೆ ವಿಶ್ವ ಚಾಂಪಿಯನ್‌ಷಿಪ್ ಮರಳುತ್ತಿದೆ. 2009ರಲ್ಲಿ ಕೊನೆಯ ಬಾರಿ ಈ ಚಾಂಪಿಯನ್‌ಷಿಪ್ ಭಾರತದಲ್ಲಿ (ಹೈದರಾಬಾದಿನಲ್ಲಿ) ನಡೆದಿತ್ತು.
- ಪ್ಯಾರಿಸ್‌ನಲ್ಲಿ 29ನೇ ವಿಶ್ವ ಚಾಂಪಿಯನ್‌ಷಿಪ್‌ನ ಸಮಾರೋಪದಲ್ಲಿ ಆತಿಥ್ಯದ ಘೋಷಣೆ ಮಾಡಲಾಯಿತು.
- 'ಪ್ಯಾರಿಸ್‌ನಲ್ಲಿ ಆಯೋಜನೆಗೊಂಡ ರೀತಿಯಲ್ಲೇ ಈ ಚಾಂಪಿಯನ್‌ಷಿಪ್ ಅನ್ನು ಗುಣಮಟ್ಟ ಮತ್ತು ವೈಭವದಿಂದ ನಡೆಸಲು ಶತಪ್ರಯತ್ನ ಹಾಕಲಿದ್ದೇವೆ.
- ಬ್ಯಾಡ್ಮಿಂಟನ್ ಪರಿವಾರವನ್ನು ದೆಹಲಿಗೆ ಸ್ವಾಗತಿಸಲು ನಾವು ಎದುರುನೋಡುತ್ತಿದ್ದೇವೆ' ಎಂದು ಭಾರತ ಬ್ಯಾಡ್ಮಿಂಟನ್ ಸಂಸ್ಥೆಯ ಗೌರವ ಮಹಾ ಕಾರ್ಯದರ್ಶಿ ಅವರನ್ನು ಉಲ್ಲೇಖಿಸಿ ಬಿಎಐ ಪ್ರಕಟಣೆ ತಿಳಿಸಿದೆ.




## ❖ ಮುನ್ಸಿಪಲ್ ಬೋರ್ಡ್‌ನಿಂದ ನಗರ ಪಾಲಿಕೆವರೆಗೆ..

**ಸಂದರ್ಭ:** ನಗರದ ಆಡಳಿತ 1862ರಲ್ಲಿ 18 ಸದಸ್ಯರಿಂದ ಆರಂಭವಾಗಿ, 2010ರಲ್ಲಿ 198 ಕಾರ್ಪೊರೇಟರ್‌ಗಳನ್ನು ಹೊಂದುವವರೆಗೂ ನಾಲ್ಕು ಬಾರಿ ತನ್ನ 'ಆಡಳಿತ ವಿನ್ಯಾಸ'ವನ್ನು ಬದಲಿಸಿಕೊಂಡಿದೆ.




- ನಗರ ಆಡಳಿತಕ್ಕೇ ಪ್ರತ್ಯೇಕವಾದ ಬೋರ್ಡ್ ರಚನೆಯಾಗಿ 142 ವರ್ಷಗಳಾಗುತ್ತಿದ್ದು, ಎರಡು ಮುನ್ಸಿಪಲ್ ಬೋರ್ಡ್‌ನಿಂದ ಆರಂಭವಾಗಿ, 198 ವಾರ್ಡ್‌ಗಳ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ, ಇದೀಗ ಐದು ನಗರ ಪಾಲಿಕೆಗಳಿಗೆ ನಗರದ ಆಡಳಿತ ಹಂಚಿಕೆಯಾಗಿದೆ.
- 1862ರ ಮಾರ್ಚ್ 27ರಂದು ಬೆಂಗಳೂರಿನಲ್ಲಿ ಸ್ಥಳೀಯ ಆಡಳಿತ ಪ್ರಾಯೋಗಿಕವಾಗಿ ಜಾರಿಗೆ ಬಂದಿತ್ತು. ಬ್ರಿಟನ್ ಮಾದರಿಯಲ್ಲಿ ಅಂದಿನ **ಮೈಸೂರಿನ ಆಯುಕ್ತ ಬೌರಿಂಗ್ ಅವರು 1850 ಕಾಯ್ದೆಯನ್ವಯ ಬೆಂಗಳೂರಿನಲ್ಲಿ ಮುನ್ಸಿಪಲ್ ಬೋರ್ಡ್ ರಚಿಸಿದರು. ನಾ**ಲ್ಕು ತಿಂಗಳ ನಂತರ 1862ರ ಆಗಸ್ಟ್ 1ರಂದು ಬೆಂಗಳೂರು ಮುನ್ಸಿಪಲ್ ಬೋರ್ಡ್ ಹಾಗೂ ಮುನ್ಸಿಪಲ್ ಕಂಟೋನ್ಮೆಂಟ್ ಬೋರ್ಡ್ (ದಂಡುಪ್ರದೇಶ) ಎಂದು ರಚಿಸಲಾಯಿತು.
- ಮುನ್ಸಿಪಲ್ ಬೋರ್ಡ್‌ನಲ್ಲಿ ಒಂಬತ್ತು ಅಧಿಕಾರಿಗಳನ್ನು ಸರ್ಕಾರ ನಾಮನಿರ್ದೇಶನ ಮಾಡಿತ್ತು. ದಂಡು ಪ್ರದೇಶ ಬೋರ್ಡ್‌ನಲ್ಲಿ ತಲಾ ಆರು ಅಧಿಕಾರಿಗಳು ಹಾಗೂ ಸೈನ್ಯಾಧಿಕಾರಿಗಳು ಸದಸ್ಯರಾಗಿದ್ದರು. ಎರಡೂ ಬೋರ್ಡ್‌ಗಳು ಪ್ರತ್ಯೇಕವಾಗಿ ತಮ್ಮ ವ್ಯಾಪ್ತಿಯಲ್ಲಿ ನೈರ್ಮಲ್ಯ, ತೆರಿಗೆ, ಪೊಲೀಸ್ ಹಾಗೂ ಲೆಕ್ಕಪತ್ರದ ನಿರ್ವಹಣೆ ಮಾಡುತ್ತಿದ್ದವು.
- ಎರಡು ಬೋರ್ಡ್‌ಗಳಿಗೆ **1883ರಲ್ಲಿ ಮೊದಲ ಬಾರಿಗೆ ಚುನಾವಣೆ ನಡೆದು, 18 ಸದಸ್ಯರು ಚುನಾಯಿತರಾದರು.** ಅಧಿಕಾರಿಗಳೇ ಕಾರ್ಯ ನಿಯಂತ್ರಣ ಹೊಂದಿದ್ದರು. ಬೆಂಗಳೂರು ಮುನ್ಸಿಪಲ್ ಬೋರ್ಡ್‌ಗೆ 1897ರಲ್ಲಿ ಸರ್ಕಾರದ ಪ್ರತಿನಿಧಿಯಾದ **ಅರ್ಕಾಡ್ ಶ್ರೀನಿವಾಸ ಚಾರ್ಯ ಮೊದಲ ಅಧ್ಯಕ್ಷರಾದರು.** ಅಧಿಕಾರೇತರ ಸದಸ್ಯರಾದ ಪುಟ್ಟಣ್ಣಶೆಟ್ಟಿ ಅವರು 1913ರಲ್ಲಿ ಅಧ್ಯಕ್ಷರಾದರು. ಮುನ್ಸಿಪಲ್ ಕಂಟೋನ್ಮೆಂಟ್ ಬೋರ್ಡ್‌ನಲ್ಲಿ ಅಧಿಕಾರಿಗಳೇ ಇದ್ದರು.
- ದಂಡುಪ್ರದೇಶ ಹಾಗೂ ಬೆಂಗಳೂರು ಮುನ್ಸಿಪಲ್ ಬೋರ್ಡ್‌ಗಳನ್ನು 1949ರಲ್ಲಿ ಸಿಟಿ ಕಾರ್ಪೊರೇಷನ್ ಕಾಯ್ದೆಯನ್ವಯ ವಿಲೀನಗೊಳಿಸಿ, 'ಬೆಂಗಳೂರು ಸಿಟಿ ಕಾರ್ಪೊರೇಷನ್' (ಬೆಂಗಳೂರು ನಗರ ಸಭೆ– ಬಿಸಿಸಿ) ಎಂದು ಹೆಸರಿಸಲಾಯಿತು. **ಆರ್. ಸುಬ್ಬಣ್ಣ ಪ್ರಥಮ ಮೇಯರ್ ಹಾಗೂ ವಿ.ಪಿ. ದೀನದಯಾಳು ನಾಯ್ಡು ಪ್ರಥಮ ಉಪಮೇಯರ್ ಆದರು**. 1951ರಲ್ಲಿ ಬಿಸಿಸಿಗೆ ಚುನಾವಣೆ ನಡೆದು, 69 ಸದಸ್ಯರು

ಆಯ್ಕೆಯಾದರು. ಆರು ಜನರು ನಾಮಕರಣ ಸದಸ್ಯರಿದ್ದರು. ಐದು ಸ್ಥಾಯಿ ಸಮಿತಿಗಳೂ ಅಸ್ತಿತ್ವಕ್ಕೆ ಬಂದವು.

- 1971ರ ಚುನಾವಣೆ ವರೆಗೂ ಬೆಂಗಳೂರು ನಗರ ಸಭೆಯ ಒಟ್ಟಾರೆ ಸದಸ್ಯರ ಸಂಖ್ಯೆ 75 (ನಾಮಕರಣ ಸದಸ್ಯರು ಸೇರಿ) ಆಗಿತ್ತು. 1983ರಲ್ಲಿ 87 ವಾರ್ಡ್‌ಗಳನ್ನಾಗಿ ವಿಂಗಡಿಸಲಾಯಿತು. 1996ರಲ್ಲಿ 100 ವಾರ್ಡ್‌ಗಳಿಗೆ ವಿಸ್ತರಣೆ ಮಾಡಿ, 'ಬೆಂಗಳೂರು ಮಹಾನಗರ ಪಾಲಿಕೆ' (ಬಿಎಂಪಿ) ಅಸ್ತಿತ್ವಕ್ಕೆ ಬಂದಿತು. 2007ರಲ್ಲಿ ನಗರದ ಸುತ್ತಮುತ್ತಲಿನ ಏಳು ನಗರ ಸಭೆ ಹಾಗೂ ಒಂದು ಪುರಸಭೆ ಮತ್ತು 110 ಹಳ್ಳಿಗಳು ಸೇರಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ (ಬಿಬಿಎಂಪಿ) ರಚಿಸಿ, 198 ವಾರ್ಡ್‌ಗಳನ್ನು ವಿಂಗಡಿಸಲಾಯಿತು. 2010ರಲ್ಲಿ ಬಿಬಿಎಂಪಿಗೆ ಚುನಾವಣೆ ನಡೆದಿತ್ತು.
- **2020ರ ಸೆಪ್ಟೆಂಬರ್ 10ರಂದು ಕೌನ್ಸಿಲ್ ಅವಧಿ ಮುಕ್ತಾಯಗೊಂಡಿತ್ತು**. 2022ರಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲೇ 243 ವಾರ್ಡ್‌ಗಳನ್ನು ಸರ್ಕಾರ ರಚಿಸಿತ್ತು. 2023ರ ಆಗಸ್ಟ್‌ನಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲೇ 225 ವಾರ್ಡ್‌ಗಳಿಗೆ ಮರು ವಿಂಗಡಣೆ ಮಾಡಲಾಗಿತ್ತು. 2025ರ ಸೆಪ್ಟೆಂಬರ್ 2ರಂದು ಬಿಬಿಎಂಪಿ ಅಸ್ತಿತ್ವ ಕಳೆದುಕೊಂಡು, ಅದೇ ವ್ಯಾಪ್ತಿಯಲ್ಲಿ 'ಗ್ರೇಟರ್ ಬೆಂಗಳೂರು' ಅಸ್ತಿತ್ವ ಕಂಡುಕೊಂಡು, ಐದು ನಗರ ಪಾಲಿಕೆಗಳೂ ರಚನೆಯಾಗಿವೆ.

ಮೆಯೊಹಾಲ್‌ನಿಂದ ಕೆಂಪೇಗೌಡ ಪೌರ ಸಭಾಂಗಣ

- ಮಹಾತ್ಮಗಾಂಧಿ ರಸ್ತೆಯಲ್ಲಿರುವ ಮೆಯೊ ಹಾಲ್‌ನಲ್ಲಿ 1996ರವರೆಗೆ ಕಾರ್ಪೊರೇಟರ್‌ಗಳ ಸಭೆ ನಡೆಯುತ್ತಿತ್ತು. ಎನ್.ಆರ್. ಚೌಕದಲ್ಲಿ 1996ರಲ್ಲಿ ಕೆಂಪೇಗೌಡ ಸಭಾಂಗಣ ನಿರ್ಮಾಣವಾದ ಮೇಲೆ ಅಂದಿನಿಂದ ಪಾಲಿಕೆಯ ಸಭೆ ಅಲ್ಲಿ ನಡೆಯುತ್ತಿತ್ತು. ಆಡಳಿತ ಯಂತ್ರದ ಕೇಂದ್ರ ಸ್ಥಾನವೂ ಅದೇ ಆವರಣದಲ್ಲಿತ್ತು.
- 1949ರಿಂದ 1994ರವರೆಗೆ ಬೆಂಗಳೂರು ನಗರ ಸಭೆಯಲ್ಲಿ 33 ಮೇಯರ್‌ಗಳಿದ್ದರು. 1996ರಿಂದ 2006ವರೆಗೆ 10 ಮೇಯರ್‌ಗಳು ಬೆಂಗಳೂರು ಮಹಾನಗರ ಪಾಲಿಕೆಯಲ್ಲಿದ್ದರು. 2010ರಿಂದ 2020ರವರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ 10 ಮೇಯರ್‌ಗಳನ್ನು ಕಂಡಿದೆ.
- 1967ರಿಂದ 1990ರವರೆಗಿನ ಬೆಂಗಳೂರು ನಗರ ಸಭೆಯಲ್ಲಿ 17 ಆಡಳಿತಾಧಿಕಾರಿಗಳು ವಿವಿಧ ಅವಧಿಯಲ್ಲಿದ್ದರು. 1995ರಿಂದ 1996ರವರೆಗಿನ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿಆರು ಮಂದಿ ಆಡಳಿತಾಧಿಕಾರಿ, 2006ರಿಂದ 2025ರವರೆಗಿನ ಬಿಬಿಎಂಪಿ ಅವಧಿಯಲ್ಲಿ ಏಳು ಮಂದಿ ಆಡಳಿತಾಧಿಕಾರಿಗಳು ಕಾರ್ಯನಿರ್ವಹಿಸಿದ್ದಾರೆ. 2020ರಿಂದ ಬಿಬಿಎಂಪಿಯಲ್ಲಿ ಅಧಿಕಾರಿಗಳ ಆಡಳಿತವೇ ಇತ್ತು. ಇದೀಗ 'ಗ್ರೇಟರ್ ಬೆಂಗಳೂರು ಪ್ರಾಧಿಕಾರ'ದ ಆಡಳಿತ ಆರಂಭವಾಗಿದೆ.

'ಇಂದಿನಿಂದಲೇ ಪಾಲಿಕೆಗಳಿಗೆ ತೆರಿಗೆ ಹಣ'

- ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ ನಗರ ಪಾಲಿಕೆಗಳಿಗೆ ಹೊಸ ಪ್ರದೇಶಗಳು ಸೇರ್ಪಡೆ: ಡಿಸಿಎಂ ಡಿ.ಕೆ. ಶಿವಕುಮಾರ್
- ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸಂಗ್ರಹ ವಾಗುವ ತೆರಿಗೆ ಹಣ ಆಯಾ ಪಾಲಿಕೆಗಳಿಗೆ ಬುಧವಾರದಿಂದಲೇ ಸಂದಾ ಯವಾಗಲಿದೆ. ಜಿಬಿಎ ಅಥವಾ ರಾಜ್ಯ ಸರ್ಕಾರಕ್ಕೆ ಬರುವುದಿಲ್ಲ' ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.
- '**ಸಂವಿಧಾನದ 74ನೇ ತಿದ್ದುಪಡಿಗೆ ಧಕ್ಕೆಯಾಗುವುದಿಲ್ಲ**. ಪಾಲಿಕೆಗಳಿಗೆ ಸ್ವಾಯತ್ತತೆ ನೀಡಲಾಗಿದೆ. ಮುಂದೆ ಜಿಬಿಎ ಮೂಲಕ ದೊಡ್ಡ ಯೋಜನೆಗಳ ಜಾರಿ, ಉತ್ತಮ ಆಡಳಿತ, ಸೇವೆಗೆ ಮೀಸಲಾಗಿರಲಿದೆ. ಸರ್ಕಾರದಿಂದ ಬಂದ ಹಣ ಜಿಬಿಎ ಹಾಗೂ ಪಾಲಿಕೆಗಳಿಗೆ ಹೋಗಲಿದೆ. ಇನ್ನು ಮುಂದಿನ ದಿನಗಳಲ್ಲಿ ಕಾನೂನು ಚೌಕಟ್ಟಿನಲ್ಲಿ ಚುನಾವಣೆ ನಡೆಯಲಿದೆ' ಎಂದು ಸುದ್ದಿಗಾರರಿಗೆ ಮಂಗಳವಾರ ಮಾಹಿತಿ ನೀಡಿದರು.

Dr. Rajkumar IAS/KAS Academy

- '**ನಗರದ ಜನಸಂಖ್ಯೆ 1.44 ಕೋಟಿ ಎಂದು ಅಂದಾಜಿಸಲಾಗಿದೆ. 2011ರ ಜನಗಣತಿ ಪ್ರಕಾರ, ವಾರ್ಡ್‌ನಲ್ಲಿ 20 ಸಾವಿರ ಜನಸಂಖ್ಯೆ ಇತ್ತು. ಈಗ 35-40 ಸಾವಿರ ಸರಾಸರಿಯಲ್ಲಿ ವಾರ್ಡ್ ರಚನೆ ಮಾಡಲಾಗುವುದು**' ಎಂದು ವಿವರಿಸಿದರು.
- 'ಮುಂದಿನ ದಿನಗಳಲ್ಲಿ ಪೂರ್ವ, ಪಶ್ಚಿಮ, ಉತ್ತರ ದಕ್ಷಿಣ ಪಾಲಿಕೆಗಳಿಗೆ ಹೊಸ ಪ್ರದೇಶಗಳು ಸೇರ್ಪಡೆಯಾಗಲು ಅವಕಾಶ ಕಲ್ಪಿಸಿದ್ದೇವೆ. ಕಾನೂನಿಗೆ ತೊಡಕಾಗಬಾರದು ಎಂಬ ಉದ್ದೇಶ ದಿಂದ ಆ ಬಗ್ಗೆ ಚರ್ಚೆ ಮಾಡುವುದಿಲ್ಲ. ಆಯಾ ಪಾಲಿಕೆಗಳು ಸರ್ಕಾರವನ್ನು ವಿಶ್ವಾಸಕ್ಕೆ ಪಡೆದು ಮುಂದಿನ ದಿನಗಳಲ್ಲಿ ಈ ಪ್ರಕ್ರಿಯೆಗಳನ್ನು ಮಾಡಿಕೊಳ್ಳಲಿವೆ. ಈಗ ಹಾಲಿ ಇದ್ದ ಪಾಲಿಕೆ ವ್ಯಾಪ್ತಿಗೆ ಜಿಬಿಎ ರಚಿಸಿ, ಐದು ಪಾಲಿಕೆ ಮಾಡಿದ್ದೇವೆ. ಆನೇಕಲ್ ಕ್ಷೇತ್ರಕ್ಕೆ ಸೇರಿದ್ದ ಒಂದು ವಾರ್ಡ್ ಬಿಟ್ಟುಹೋಗಿತ್ತು. ಈಗ ಅದನ್ನು ಸರಿಪಡಿಸಿದ್ದೇವೆ' ಎಂದು ಹೇಳಿದರು.
- ಐತಿಹಾಸಿಕ ದಿನ:' 'ಬೆಂಗಳೂರಿನ ಪಾಲಿಗೆ ಇದೊಂದು ಐತಿಹಾಸಿಕ ದಿನ. ಅಧಿಕಾರ ವಿಕೇಂದ್ರೀಕರಣಗೊಳಿಸುವ ರಾಜೀವ್ ಗಾಂಧಿ ಅವರ ಆಶಯದಂತೆ ಸಂವಿಧಾನದ 74ನೇ ತಿದ್ದುಪಡಿಯನ್ನು ಪಾಲಿಸಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚಿಸಲಾಗಿದೆ. 1993ರ ಜೂನ್ 1ರಂದು ಕರ್ನಾಟಕದಲ್ಲಿ 74ನೇ ತಿದ್ದುಪಡಿ ಜಾರಿಗೆ ಬಂದಿತು' ಎಂದು ಡಿ.ಕೆ. ಶಿವಕುಮಾರ್ ಹೇಳಿದರು.
- 'ಪೂರ್ವ ನಗರ ಪಾಲಿಕೆಯ ಆದಾಯ ಪೂರ್ವ ಪಾಲಿಕೆಗೇ ಸೀಮಿತ ವಾಗಲಿದೆ. ಪಶ್ಚಿಮ ನಗರ ಪಾಲಿಕೆ ಆದಾಯ ಕಡಿಮೆ ಇದ್ದಾಗ ಸರ್ಕಾರ ಅವರಿಗೆ ನೆರವು ನೀಡಬೇಕು. ನಾವು ಪೂರ್ವದ ಹಣವನ್ನು ಪಶ್ಚಿಮದ ಪಾಲಿಕೆಗೆ ನೀಡಿದರೆ ಅದು ಸಂವಿಧಾನಕ್ಕೆ ವಿರುದ್ಧವಾಗಿರಲಿದೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.
- 'ಉತ್ತಮ ಆಡಳಿತ, ಸೇವೆ ನೀಡ ಬೇಕು, ಸಂವಿಧಾನ ರಕ್ಷಣೆ ಮಾಡಬೇಕು. ಈ ಹಿಂದೆ ನಗರದ ಸಣ್ಣಪುಟ್ಟ ವಿಚಾರಕ್ಕೂ ಬೆಂಗಳೂರು ಆಯುಕ್ತರಿಗೆ ಕರೆ ಮಾಡಬೇಕಿತ್ತು. ಈಗ ಪರಿಸ್ಥಿತಿ ಹಾಗಿಲ್ಲ. ಜಿಬಿಎ ಅಧಿಕಾರಿಗಳು ನಗರದ ದೊಡ್ಡ ಯೋಜನೆಗಳ ಜವಾಬ್ದಾರಿ ಮಾತ್ರ ನಿಭಾಯಿಸುತ್ತಾರೆ. ಸುರಂಗ ರಸ್ತೆ ಸೇರಿದಂತೆ ಬೇರೆ ಬೇರೆ ಪಾಲಿಕೆಗಳ ಮೂಲಕ ಹಾದುಹೋಗುವ ದೊಡ್ಡ ದೊಡ್ಡ ಯೋಜನೆ ನೋಡಿಕೊಳ್ಳುತ್ತಾರೆ. ಆಯಾ ಪಾಲಿಕೆಗೆ ನಿಯೋಜನೆಯಾಗಿರುವ ಆಯುಕ್ತರು ಹೊಣೆಗಾರಿಕೆ ಹೊಂದಿರುತ್ತಾರೆ ' ಎಂದರು.

ಗ್ರೇಟರ್ ಬೆಂಗಳೂರು ರಚನೆ ಹಾದಿ...

- '2007ರ ಜನವರಿ 16ರಂದು 198 ವಾರ್ಡ್‌ಗಳೊಂದಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರಚನೆಯಾಗಿತ್ತು. 2024ರ ಸೆಪ್ಟೆಂಬರ್ 22ರಂದು ಬಿ.ಎಸ್ ಪಾಟೀಲ್ ಅವರ ನೇತೃತ್ವದಲ್ಲಿ ಸಮಿತಿ ರಚಿಸಿ ಬೆಂಗಳೂರಿನಲ್ಲಿ ಉತ್ತಮ ಆಡಳಿತ ನೀಡುವ ಬಗ್ಗೆ ಅಧ್ಯಯನ ನಡೆಸಲಾಯಿತು. ಈ ಸಮಿತಿ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಿ ಅಧ್ಯಯನ ಮಾಡಿ ಒಂಬತ್ತು ವರದಿಗಳನ್ನು ಸಲ್ಲಿಸಿತ್ತು' ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.
- '2015ರಲ್ಲಿ ಬೆಂಗಳೂರಿನಲ್ಲಿ ಮೂರು ಪಾಲಿಕೆಗಳನ್ನು ಮಾಡಬೇಕು ಎಂಬ ತೀರ್ಮಾನಕ್ಕೆ ಬರಲಾಯಿತು. ಈ ಪ್ರಸ್ತಾಪವನ್ನು ರಾಜ್ಯಪಾಲರಿಗೆ ಕಳುಹಿಸಿಲಾಗಿತ್ತಾದರೂ ನಂತರ ರಾಜ್ಯ ಸರ್ಕಾರ 2019ರ ಜುಲೈ 26ರಂದು ಅದನ್ನು ಹಿಂಪಡೆಯಿತು' ಎಂದರು.
- 'ನಮ್ಮ ಸರ್ಕಾರ ಮತ್ತೆ ಅಧಿಕಾರಕ್ಕೆ ಬಂದ ನಂತರ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚಿಸಲು ತೀರ್ಮಾನಿಸಿ, 2023ರ ಜುಲೈ 18ರಂದು ಬಿ.ಎಸ್ ಪಾಟೀಲ್ ಅವರ ಸಮಿತಿ ರಚಿಸಿದೆವು. ಈ ಸಮಿತಿ 2024ರ ಜುಲೈ 12ರಂದು ವರದಿ ಸಲ್ಲಿಸಿತ್ತು. ಗ್ರೇಟರ್ ಬೆಂಗಳೂರು ಆಡಳಿತ ಮಸೂದೆ ಸಿದ್ದಪಡಿಸಿ, ಜುಲೈ 25ರಂದು ವಿಧಾನಸಭೆಯಲ್ಲಿ ಮಂಡಿಸಲಾಯಿತು. ವಿರೋಧ ಪಕ್ಷಗಳ ಸದಸ್ಯರ ಸಲಹೆ ಮೇರೆಗೆ ಶಾಸಕ ರಿಜ್ವಾನ್ ಅರ್ಷದ್ ನೇತೃತ್ವದಲ್ಲಿ 15 ಸದಸ್ಯರ ಜಂಟಿ ಸದನ ಸಮಿತಿ ರಚಿಸಲಾಯಿತು. ಈ ಸಮಿತಿ 15ಕ್ಕೂ

Dr. Rajkumar IAS/KAS Academy

ಹೆಚ್ಚು ಸಭೆಗಳನ್ನು ನಡೆಸಿ ನೀಡಿದ ವರದಿಯನ್ವಯ, 2025ರ ಮಾರ್ಚ್ 10ರಂದು ತಿದ್ದುಪಡಿ ಮಸೂದೆಯನ್ನು ವಿಧಾನಸಭೆಯಲ್ಲಿ ಮಂಡಿಸಲಾಯಿತು. ಮಾ.12ರಂದು ವಿಧಾನ ಪರಿಷತ್‌ನಲ್ಲಿ ಚರ್ಚೆ ಮಾಡಿ ಅನುಮೋದನೆ ಪಡೆದು ರಾಜ್ಯಪಾಲರಿಗೆ ಕಳುಹಿಸಲಾಯಿತು. 2025ರ ಏಪ್ರಿಲ್ 23ರಂದು ರಾಜ್ಯಪಾಲರು ಅಂಕಿತ ಹಾಕಿದರು. ಮೇ 15ರಿಂದ ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ ಜಾರಿಗೆ ಬಂದು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಿತು. ಜುಲೈ 19ರಂದು ಐದು ನಗರ ಪಾಲಿಕೆಗಳ ಕರಡು ಅಧಿಸೂಚನೆ ಹೊರಡಿಸಿ, 30 ದಿನಗಳ ಕಾಲಾವಕಾಶ ನೀಡಲಾಯಿತು. 55 ಆಕ್ಷೇಪಣೆಗಳು ಬಂದಿದ್ದವು. ಇದೆಲ್ಲವನ್ನು ಬಗೆಹರಿಸಿ ಐದು ಪಾಲಿಕೆಗಳ ಗಡಿಯ ನಕ್ಷೆ ರೂಪಿಸಿ ರಾಜ್ಯಪಾಲರಿಂದ ಅಂಕಿತ ಪಡೆಯಲಾಯಿತು. ಅಂತಿಮ ಅಧಿಸೂಚನೆ ಹೊರಡಿಸಲಾಯಿತು ಎಂದು ಮಾಹಿತಿ ನೀಡಿದರು.

ಗ್ರೇಟರ್ ಬೆಂಗಳೂರಿಗೆ 5 ಪಾಲಿಕೆ

- ರಾಜಧಾನಿಯ ಆಡಳಿತ ಯಂತ್ರವನ್ನು ನಿಭಾಯಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವ್ಯಾಪ್ತಿಯಲ್ಲಿ ಅಸ್ತಿತ್ವಕ್ಕೆ ಬಂದಿರುವ 'ಗ್ರೇಟರ್ ಬೆಂಗಳೂರು ಪ್ರಾಧಿಕಾರ'ದ (ಜಿಬಿಎ) ಅಡಿಯಲ್ಲಿ ಐದು ನಗರ ಪಾಲಿಕೆಗಳು ರಚನೆಯಾಗಿವೆ.
- 'ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ– 2024' (ಜಿಬಿಜಿಎ) ಅಡಿಯಲ್ಲಿ ಬಿಬಿಎಂಪಿ ವ್ಯಾಪ್ತಿಯನ್ನು 'ಗ್ರೇಟರ್ ಬೆಂಗಳೂರು ಪ್ರದೇಶ' (ಜಿಬಿಎ) ಎಂದು ಗುರುತಿಸಿ 2025ರ ಮೇ 15ರಂದು ಸರ್ಕಾರ ಅಧಿಸೂಚಿಸಿತ್ತು. 'ಗ್ರೇಟರ್ ಬೆಂಗಳೂರು ಪ್ರದೇಶ'ದಲ್ಲೇ ಐದು ನಗರ ಪಾಲಿಕೆಗಳನ್ನು ರಚಿಸಿ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ಇದರಿಂದ ಬಿಬಿಎಂಪಿ ತನ್ನ ಅಸ್ತಿತ್ವ ಕಳೆದುಕೊಂಡಿದೆ.
- ಜಿಬಿಜಿಎ ಕಾಯ್ದೆಯ ಪ್ರಕರಣ 4ರ ಉಪ ಪ್ರಕರಣ (1) ಹಾಗೂ ಪ್ರಕರಣ 7ರ ಉಪ ಪ್ರಕರಣದಡಿ (1) ಅಧಿಕಾರ ಚಲಾಯಿಸಿರುವ ಸರ್ಕಾರ, ಜನಸಂಖ್ಯೆ, ವಿಸ್ತೀರ್ಣ, ಜನಸಂಖ್ಯಾ ಸಾಂದ್ರತೆ, ಬರುವ ಆದಾಯ, ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗ ಪ್ರಮಾಣ, ಆರ್ಥಿಕ ಪ್ರಾಮುಖ್ಯ ವನ್ನು ಪರಿಗಣಿಸಿ ಐದು ನಗರ ಪಾಲಿಕೆಗಳನ್ನು ರಚಿಸಿದೆ.
- ವಿಧಾನಸಭೆಯಂತೆ ವಿಂಗಡಣೆ ಇಲ್ಲ: ಬಿಬಿಎಂಪಿ ವ್ಯಾಪ್ತಿಯಲ್ಲಿ 225 ವಾರ್ಡ್‌ಗಳನ್ನು ಮರುರಚಿಸಿ 2023ರ ಸೆಪ್ಟೆಂಬರ್ 25ರಂದು ಸರ್ಕಾರ ಅಧಿಸೂಚನೆ ಹೊರಡಿಸಿತ್ತು. ಹೊಸ ಐದು ನಗರ ಪಾಲಿಕೆಗಳನ್ನು ಬಿಬಿಎಂಪಿ ಚುನಾವಣೆ ನಡೆದಿದ್ದ 198 ವಾರ್ಡ್‌ಗಳಿಗೆ ಅನುಗುಣವಾಗಿ ವಿಂಗಡಿಸಲಾಗಿದೆ. ಜೊತೆಗೆ 225 ವಾರ್ಡ್‌ಗಳ ವಿಂಗಡಣೆ ಸಮಯದಲ್ಲಿ ಸೇರಿಸಲಾದ ಪ್ರದೇಶಗಳನ್ನು ಸೇರಿಸಿಕೊಳ್ಳಲಾಗಿದೆ.
- 712 ಚದರ ಕಿ.ಮೀ. ವ್ಯಾಪ್ತಿಯಲ್ಲಿ ಐದು ನಗರ ಪಾಲಿಕೆಗಳನ್ನು ರಚಿಸಿ ಕರಡು ಅಧಿಸೂಚನೆ ಹೊರಡಿಸಲಾಗಿತ್ತು. ಆನೇಕಲ್ ವಿಧಾನಸಭೆ ಕ್ಷೇತ್ರದ ಸಿಂಗಸಂದ್ರ (ಕೂಡ್ಲು) ವಾರ್ಡ್ ಸೇರಿದಂತೆ 225 ವಾರ್ಡ್‌ಗಳನ್ನು ಪುನರ್ ವಿಂಗಡಿಸಿದಾಗ ಸೇರಿಕೊಂಡ ಪ್ರದೇಶಗಳು ಸೇರಿದಂತೆ 9 ಚದರ ಕಿ.ಮೀ. ವೃದ್ಧಿಸಿ 720.9 ಚದರ ಕಿ.ಮೀ. ವ್ಯಾಪ್ತಿಯಲ್ಲಿ ಐದು ನಗರ ಪಾಲಿಕೆಗಳ ಗಡಿಗಳನ್ನು ಗುರುತಿಸಿ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ.
- 2025ರ ಆಸ್ತಿ ತೆರಿಗೆ ಸಂಗ್ರಹವನ್ನು ಐದು ನಗರ ಪಾಲಿಕೆಗಳಿಗೆ ವಿಂಗಡಿಸಿದರೆ, ಮಹದೇವಪುರ ಹಾಗೂ ಕೆ.ಆರ್. ಪುರ ವಿಧಾನಸಭೆ ಕ್ಷೇತ್ರಗಳ ವ್ಯಾಪ್ತಿಯನ್ನು ಹೊಂದಲಿರುವ ಪೂರ್ವ ನಗರ ಪಾಲಿಕೆಗೆ ಅತಿಹೆಚ್ಚು (₹912 ಕೋಟಿ) ಸಂಗ್ರಹ ಇರಲಿದೆ. ಉತ್ತರ ನಗರ ಪಾಲಿಕೆಗೆ ಅತಿ ಕಡಿಮೆ (₹543 ಕೋಟಿ) ತೆರಿಗೆ ಸಂಗ್ರಹವಾಗಲಿದೆ.
- ಒಂದು ಚದರ ಕಿ.ಮೀ.ಗೆ ಸರಾಸರಿ 20,225 ಜನಸಂಖ್ಯೆ ಸಾಂದ್ರತೆ ಬರುವಂತೆ ವಿಂಗಡಿಸಲಾಗಿದೆ. ಕೇಂದ್ರ ನಗರ ಪಾಲಿಕೆಯಲ್ಲಿ ಅತಿಹೆಚ್ಚು ಜನಸಂಖ್ಯೆ ಸಾಂದ್ರತೆ (32,051) ಇರಲಿದ್ದು, ಪೂರ್ವ ನಗರ ಪಾಲಿಕೆಯಲ್ಲಿ ಅತಿ ಕಡಿಮೆ ಜನಸಂಖ್ಯೆ ಸಾಂದ್ರತೆ (7,738) ಇರಲಿದೆ. ಪ್ರತಿ ನಗರ ಪಾಲಿಕೆಯ ಗಡಿಯಲ್ಲಿ ಅತಿದೊಡ್ಡ ರಸ್ತೆ ಇರುವಂತೆ ವಿಂಗಡಣೆ ಮಾಡಲಾಗಿದೆ.

Dr Rajkumar IAS KAS Academy

ನ.30ಕ್ಕೆ ವಾರ್ಡ್ ಮೀಸಲಾತಿ ಪ್ರಕಟ: ಡಿಸಿಎಂ

- ಐದು ನಗರ ಪಾಲಿಕೆಗಳ ವಾರ್ಡ್ ಪುನರ್ ವಿಂಗಡಣೆಗೆ ಆಯೋಗ ರಚಿಸಿದ್ದು, ನವೆಂಬರ್ 1ಕ್ಕೆ ವಾರ್ಡ್‌ಗಳ ಅಂತಿಮ ಅಧಿಸೂಚನೆ ಹೊರಡಿಸಲಾಗುತ್ತದೆ. ನ.30ರಂದು ವಾರ್ಡ್‌ಗಳ ಮೀಸಲಾತಿ ಅಧಿಸೂಚನೆ ಹೊರಡಿಸಿ, ಚುನಾವಣೆ ನಡೆಸಲಾಗುತ್ತದೆ' ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದರು.
- 'ನಾವು ಸುಪ್ರೀಂ ಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿದ್ದು, ನಮಗೆ ಕಾಲಮಿತಿ ಇದೆ. ವಾರ್ಡ್ ಮೀಸಲಾತಿ ಅಧಿಸೂಚನೆಯಾದ ನಂತರ ಆಯೋಗಕ್ಕೆ ನೀಡಿ, ಚುನಾವಣೆ ನಡೆಸಲು ಮನವಿ ಮಾಡಲಾಗುತ್ತದೆ. ಚುನಾವಣೆ ನಡೆಸಲು ಪೂರ್ವಸಿದ್ಧತೆ ಆರಂಭಿಸಬೇಕು ಎಂದು ರಾಜ್ಯ ಚುನಾವಣಾ ಆಯೋಗಕ್ಕೆ ಪತ್ರ ಬರೆಯಲಾಗಿದೆ. ಅತಿ ಶೀಘ್ರದಲ್ಲೇ ಅವರು ಮತದಾರರ ಪಟ್ಟಿ ಸಿದ್ಧಪಡಿಸಲಿದ್ದಾರೆ' ಎಂದು ಮಂಗಳವಾರ ಸುದ್ದಿಗಾರರಿಗೆ ಮಾಹಿತಿ ನೀಡಿದರು.
- 'ಪಾಲಿಕೆಗಳ ಮೇಲೆ ಜಿಬಿಎ ಇರುವುದರಿಂದ 74ನೇ ತಿದ್ದುಪಡಿಗೆ ತೊಂದರೆಯಾಗುವುದಿಲ್ಲವೇ, ಇದನ್ನು ಪ್ರಶ್ನಿಸಿ ಯಾರಾದರೂ ನ್ಯಾಯಾಲಯದ ಮೊರೆ ಹೋಗುವುದಿಲ್ಲವೇ' ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಶಿವಕುಮಾರ್, 'ನ್ಯಾಯಾಲಯಗಳಲ್ಲಿ ಅರ್ಜಿ ಹಾಕಿ, ತಿರಸ್ಕೃತವಾಗಿವೆ. ಸುಪ್ರೀಂ ಕೋರ್ಟ್ ಪ್ರಮಾಣಪತ್ರ ಒಪ್ಪಿದೆ. ವಾರ್ಡ್ ಪುನರ್ ವಿಂಗಡಣೆ ಬಳಿಕ, ನವೆಂಬರ್ 3ರಂದು ವಿಚಾರಣೆಗೆ ಬರುವಂತೆ ತಿಳಿಸಿದೆ' ಎಂದರು.

## ❖ 'ಸಕಾರಣವಿಲ್ಲದ ಡಿಎನ್‌ಎ ಪರೀಕ್ಷೆ ಸಲ್ಲ'

**ಸಂದರ್ಭ:** 'ಸಕಾರಣ ಮತ್ತು ಅಗತ್ಯ ಇಲ್ಲದೇ ಡಿಎನ್‌ಎ ಪರೀಕ್ಷೆಗೆ ಒತ್ತಾಯಿಸುವುದು ವಿವಾಹದ ಪಾವಿತ್ರ್ಯ, ಸಾಂವಿಧಾನಿಕ ಚೌಕಟ್ಟು ಗಳ ಅಡಿಯಲ್ಲಿ ದಂಪತಿಗಳಿಗೆ ಕೊಡಮಾಡಿದ ಗೋಪ್ಯತೆ ಹಾಗೂ ಘನತೆಯ ಮೂಲಭೂತ ಹಕ್ಕನ್ನು ಉಲ್ಲಂಘಿಸಿದಂತೆ' ಎಂದು ಹೈಕೋರ್ಟ್, ಆಸ್ತಿ ಪಾಲುದಾರಿಕೆಯ ಪ್ರಕರಣವೊಂದರಲ್ಲಿ ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ.

- ಈ ಸಂಬಂಧ 39 ವರ್ಷದ ಪುರುಷರೊಬ್ಬರು ಸಲ್ಲಿಸಿದ್ದ ರಿಟ್ ಅರ್ಜಿ (ಡಬ್ಲ್ಯು.ಪಿ 20342/2025) ವಿಚಾರಣೆ ನಡೆಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಪ್ರಕಟಿಸಿದೆ.
- 'ಡಿಎನ್‌ಎ ಪರೀಕ್ಷೆ ನಡೆಸುವಂತೆ ಕೋರಿ ಸಲ್ಲಿಸಲಾಗುವ ಅರ್ಜಿ ಗಳಿಗೆ ಉತ್ತರಿಸುವಾಗ ವಿಚಾರಣಾ ನ್ಯಾಯಾಲಯಗಳು ಸದರಿ ತೀರ್ಪಿನ ಸಮಯದಲ್ಲಿ ಮಾಡಲಾಗಿರುವ ಎಲ್ಲ ಅವಲೋಕನಾ ಅಂಶಗಳನ್ನು ಮನಸ್ಸಿನಲ್ಲಿಟ್ಟುಕೊಂಡು ಮುಂದುವರಿಯ ಬೇಕು. ಅಂತೆಯೇ, ಈ ತೀರ್ಪನ್ನು ಸಂಬಂಧ ಪಟ್ಟ ನ್ಯಾಯಾಲಯಗಳಿಗೆ ರವಾನಿಸಬೇಕು' ಎಂದು ಹೈಕೋರ್ಟ್ ರಿಜಿಸ್ಟ್ರಿಗೆ ತಾಕೀತು ಮಾಡಿದೆ.

ಕಲಂ 112ರ ಘನತೆಗೆ ಧಕ್ಕೆಯಾಗಬಾರದು...

- 'ಭಾರತೀಯ ಸಾಕ್ಷ್ಯ ಕಾಯ್ದೆ-1872ರ ಕಲಂ 112ರ ಅಸ್ತಿತ್ವವೇ ಸಾರ್ವಜನಿಕ ನೈತಿಕತೆ ಮತ್ತು ಸಾಮಾಜಿಕ ಸ್ವಾಸ್ಥ್ಯ ಅಥವಾ ಶಾಂತಿಯ ಭದ್ರತೆಯನ್ನು ಹೊಂದಿದೆ. ದಾಂಪತ್ಯ ಅಸ್ತಿತ್ವದಲ್ಲಿರುವಾಗ ಮತ್ತು ಗರ್ಭ ಧರಿಸಿದ 280 ದಿನಗಳ ಮೇಲೆ ಮಗು ಜನಿಸಿದರೆ ಅದು ಆತನೇ ತಂದೆ ಎಂದು ತಿಳಿಯಬೇಕು. ಈ ನಿರ್ಣಾಯಕ ಪುರಾವೆಯನ್ನು ಮೀರಿ ಒಂದು ವೇಳೆ ಮಗುವಿನ ಪಿತೃತ್ವವನ್ನು ಪ್ರಶ್ನಿಸಿದ್ದೇ ಆದರೆ ಅದು 112ರಲ್ಲಿ ಅಡಕವಾಗಿರುವ ತತ್ವಗಳನ್ನು ಮೀರಿದ ಕಾರಣಕ್ಕೆ ಉದ್ಭವಿಸಿದೆ ಎನ್ನುವಂತಿರಬೇಕು. ಇಂತಹ ಮೀರಿದ ಸಂದರ್ಭಗಳಲ್ಲಿ ಮಾತ್ರವೇ ಡಿಎನ್‌ಎ ಪರೀಕ್ಷೆಗೆ ಅನುಮತಿ ನೀಡುವುದು ಸಮ್ಮತ' ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

- ಅರ್ಜಿದಾರರ ಪರ ಹೈಕೋರ್ಟ್ ವಕೀಲ ಎಂ.ವಿಜಯಕೃಷ್ಣ ಭಟ್ ಅವರ ವಾದವನ್ನು ಪುರಸ್ಕರಿಸಿರುವ ನ್ಯಾಯಪೀಠ, 'ಸಂವಿಧಾನದಲ್ಲಿ ನಿಗದಿಪಡಿಸಿದಂತೆ ಪರೀಕ್ಷೆ, ಗೋಪ್ಯತೆಯ ಹಕ್ಕು ಮತ್ತು ಘನತೆಯ ನಡುವೆ ಹೆಣೆದುಕೊಂಡಿರುವ ಸೂಕ್ಷ್ಮ ಸಮತೋಲನವನ್ನು ನಾವು ಸದಾ ಮನಸ್ಸಿನಲ್ಲಿಟ್ಟುಕೊಳ್ಳಬೇಕು. ಭಾರತೀಯ ಸಾಕ್ಷ್ಯ ಕಾಯ್ದೆ-1872ರ ಕಲಂ 112ರಲ್ಲಿ ನಿಗದಿಪಡಿಸಿದ ಷರತ್ತುಗಳನ್ನು ಪೂರೈಸದ ಹೊರತು ನ್ಯಾಯಾಲಯಗಳು ಡಿಎನ್ಎ ಪರೀಕ್ಷೆಗೆ ಅನುಮತಿ ನೀಡಬಾರದು' ಎಂದು ಸ್ಪಷ್ಟಪಡಿಸಿದೆ.
- ಪ್ರಕರಣವೇನು?: ಮೊದಲ ಹೆಂಡತಿಯ ಇಬ್ಬರು ವಯಸ್ಕ ಗಂಡು ಮಕ್ಕಳು ಹಾಗೂ ಎರಡನೇ ಹೆಂಡತಿಯ ವಯಸ್ಕ ಮಗನ ಮಧ್ಯೆ ಆಸ್ತಿ ಪಾಲುದಾರಿಕೆಗೆ ಸಂಬಂಧಿಸಿದಂತೆ 2016ರಿಂದ ಚನ್ನರಾಯಪಟ್ಟಣದ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ಕೋರ್ಟ್‌ನಲ್ಲಿ ಅಸಲು ದಾವೆಯ ವ್ಯಾಜ್ಯ ಮುಂದುವರಿದಿತ್ತು. ವ್ಯಾಜ್ಯದ ಸಮಯದಲ್ಲಿ ಅರ್ಜಿದಾರರನ್ನು ಪಾಟೀ ಸವಾಲಿಗೆ ಒಳಪಡಿಸಿದಾಗ ಅವರ ಪಿತೃತ್ವದ ಬಗ್ಗೆ ಪ್ರಶ್ನೆಗಳನ್ನು ಎತ್ತಲಾಗಿತ್ತು.
- 'ರಿಟ್ ಅರ್ಜಿದಾರರು, ನಮ್ಮ ತಂದೆಗೆ ಜನಿಸಿದ ಮಗನಲ್ಲ. ನಮ್ಮ ತಂದೆಗೆ ಆದಾಗಲೇ ವಾಸೆಕ್ಟಮಿ (ನಸ್ಬಂದಿ) ಆಪರೇಷನ್ ಆಗಿತ್ತು. ಅವರಿಗೆ ಮಕ್ಕಳಾಗುವ ಸಾಧ್ಯತೆಯೇ ಇರಲಿಲ್ಲ. ಹೀಗಾಗಿ, ಇವರ ಪಿತೃತ್ವದ ಸತ್ಯಾಸತ್ಯತೆ ಅರಿಯಲು ಡಿಎನ್ಎ ಪರೀಕ್ಷೆ ನಡೆಸಲು ಆದೇಶಿಸಬೇಕು' ಎಂದು ಮೊದಲ ಹೆಂಡತಿಯ ಇಬ್ಬರು ಮಕ್ಕಳು (ಅಸಲು ದಾವೆಯ ವಾದಿಗಳು) ಕೋರಿದ್ದರು.
- ಈ ತಕರಾರನ್ನು ಮಾನ್ಯ ಮಾಡಿದ್ದ ಸಿವಿಲ್ ನ್ಯಾಯಾಧೀಶರು, ಸಿವಿಲ್ ಪ್ರಕ್ರಿಯಾ ಸಂಹಿತೆ–1908ರ ನಿಯಮ 26, ನಿಯಮ 10 ಎ ಅಡಿಯಲ್ಲಿ ಡಿಎನ್ಎ ಪರೀಕ್ಷೆಗೆ ಸಮ್ಮತಿ ನೀಡಿ 2025ರ ಏಪ್ರಿಲ್ 5ರಂದು ಆದೇಶಿಸಿದ್ದರು.
- ಇದನ್ನು ಪ್ರಶ್ನಿಸಿದ್ದ 39 ವರ್ಷದ ಅರ್ಜಿದಾರರು, 'ವಿಚಾರಣಾ ನ್ಯಾಯಾಲಯ ಡಿಎನ್ಎ ಪರೀಕ್ಷೆಗೆ ಅನುಮತಿ ನೀಡಿರುವುದನ್ನು ರದ್ದುಪಡಿಸಬೇಕು' ಎಂದು ಕೋರಿದ್ದರು. ಈ ಮನವಿಯನ್ನು ಮನ್ನಿಸಿರುವ ನ್ಯಾಯಪೀಠ, 'ಒಂದು ವೇಳೆ ಡಿಎನ್ಎ ಪರೀಕ್ಷೆ ನಡೆಸಿ ಏನಾದರೂ ವರದಿ ಸಿದ್ದಪಡಿಸಿದ್ದರೆ ಅಂತಹ ವರದಿ ಅಮಾನ್ಯವಾಗಿರುತ್ತದೆ' ಎಂದು ಸ್ಪಷ್ಟಪಡಿಸಿದೆ.

ಕಲಂ 112ರ ಘನತೆಗೆ ಧಕ್ಕೆಯಾಗಬಾರದು...

- 'ಕಲಂ 112 ಸಾಮಾನ್ಯ ಸಂದರ್ಭಗಳಲ್ಲಿ ಮಹಿಳೆಯ ಘನತೆ ಏನು ಎತ್ತ ಎಂಬುದರ ಸೂಕ್ಷ್ಮ ಸಿದ್ಧಾಂತವನ್ನು ಒಳಗೊಂಡಿದೆ. ಮಗುವಿನ ತಂದೆ ತಾನೇ ಎಂಬುದು ಗೊತ್ತಿದ್ದರೂ ಕೆಲವೊಮ್ಮೆ ಪುರುಷ ನಿರಾಧಾರ ಆರೋಪ ಹೊರಿಸಿಬಿಡುತ್ತಾನೆ. ಮಹಿಳೆಯ ವ್ಯಕ್ತಿತ್ವವನ್ನು ನಾಶ ಮಾಡಿಬಿಡುತ್ತಾನೆ. ಈ ಹುಮ್ಮಸ್ಸಿನಲ್ಲಿ ರಕ್ತ–ಡಿಎನ್ಎ ಪರೀಕ್ಷೆಗೆ ಕೋರುತ್ತಾನೆ. ಆಗ ಮಹಿಳೆಯ ಘನತೆಗೆ ವಿನಾಕಾರಣ ಪೆಟ್ಟು ಬಿದ್ದಂತಾಗುತ್ತದೆ' ಎಂದು ನ್ಯಾಯಪೀಠ ಹೇಳಿದೆ.
- ಡಿಎನ್ಎ ಪರೀಕ್ಷೆ ಎಂದರೇನು?: ಡಿ ಆಕ್ಸಿ ರೈಬೋ ನ್ಯೂಕ್ಲಿಕ್ ಆಮ್ಲವು (ಡಿಎನ್ಎ) ಮೂಲಭೂತವಾಗಿ ಆನುವಂಶಿಕ ಸಂಕೇತವಾಗಿದೆ. ಇದು ಇಬ್ಬರೂ ಪೋಷಕರಿಂದ ಅವರ ಮಕ್ಕಳಿಗೆ ಗುಣಲಕ್ಷಣಗಳನ್ನು ಹೊತ್ತೊಯ್ಯುತ್ತದೆ. ಪ್ರತಿಯೊಬ್ಬರಲ್ಲೂ ಇದು ವಿಶಿಷ್ಟವಾದ ಸಂಕೇತವನ್ನು ಹೊಂದಿರುತ್ತದೆ. ಯಾವುದೇ ಆನುವಂಶಿಕ ಅಸ್ವಸ್ಥತೆಗಳ ಮೌಲ್ಯಮಾಪನಕ್ಕೆ ಅಥವಾ ಕಾನೂನು ಉದ್ದೇಶಗಳ ದೃಢೀಕರಣಕ್ಕಾಗಿ ಪಿತೃತ್ವವನ್ನು ಸಾಬೀತುಪಡಿಸುವ ಸಂದರ್ಭದಲ್ಲಿ ಈ ಪರೀಕ್ಷೆ ಕೈಗೊಳ್ಳಲಾಗುತ್ತದೆ.

Dr Rajkumar IAS/KAS Academy

## ❖ ಮರಾಠರಿಗೆ ಮೀಸಲಾತಿ: ಒಪ್ಪಿಗೆ

**ಸಂದರ್ಭ:** 'ಮರಾಠರಿಗೆ ಕುಣಬಿ ಜಾತಿ ಪ್ರಮಾಣಪತ್ರ ನೀಡಲು ಮಹಾರಾಷ್ಟ್ರ ಸರ್ಕಾರ ಮಂಗಳವಾರ ಒಪ್ಪಿಕೊಂಡಿದೆ. ಸ್ನೇಹಿತರೇ ನಾವು ಗೆದ್ದುಬಿಟ್ಟೆವು' ಎಂದು ಹೋರಾಟಗಾರ ಮನೋಜ್ ಜರಾಂಗೆ ಘೋಷಿಸಿದರು. ಕಳೆದ 5 ದಿನಗಳಿಂದ ಸಾವಿರಾರು ಹೋರಾಟಗಾರರೊಂದಿಗೆ ಜರಾಂಗೆ ಅವರು ಇಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದರು.

- 'ಮರಾಠರಿಗೆ ಕುಣಬಿ ಜಾತಿ ಪ್ರಮಾಣಪತ್ರ ನೀಡಲು ಮಹಾರಾಷ್ಟ್ರ ಸರ್ಕಾರ ಮಂಗಳವಾರ ಒಪ್ಪಿಕೊಂಡಿದೆ. ಸ್ನೇಹಿತರೇ ನಾವು ಗೆದ್ದುಬಿಟ್ಟೆವು' ಎಂದು ಹೋರಾಟಗಾರ ಮನೋಜ್ ಜರಾಂಗೆ ಘೋಷಿಸಿದರು.
- ಐದು ದಿನಗಳಿಂದ ಸಾವಿರಾರು ಹೋರಾಟಗಾರರೊಂದಿಗೆ ಜರಾಂಗೆ ಅವರು ಇಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದರು.
- ಮರಾಠ ಸಮುದಾಯದವರಿಗೆ ಈಗ ಹಿಂದುಳಿದ ವರ್ಗದ ಕೋಟಾದಡಿ ಮೀಸಲಾತಿ ದೊರೆಯಲಿದೆ. ಮರಾಠರಿಗೆ ಮೀಸಲಾತಿ ನೀಡುವ ವಿಷಯ ಪರಿಶೀಲಿಸಲು ರಚಿಸಿದ ಸಂಪುಟ ಉಪಸಮಿತಿಯು ಜರಾಂಗೆ ಅವರ ಬಹುಪಾಲು ಬೇಡಿಕೆಗಳನ್ನು ಒಪ್ಪಿಕೊಂಡಿದೆ. ಒಪ್ಪಿಗೆ ನೀಡಿರುವುದಾಗಿ ಸಮಿತಿಯ ಮುಖ್ಯಸ್ಥ, ಸಚಿವ ರಾಧಾಕೃಷ್ಣ ವಿಖೆ ಪಾಟೀಲ್ ಅವರು ಜರಾಂಗೆ ಅವರಿಗೆ ತಿಳಿಸಿದರು.
- ಸಮಿತಿಯ ಕರಡು ಪ್ರತಿಯನ್ನು ಜರಾಂಗೆ ಅವರು ಓದಿ ಹೇಳುತ್ತಿದ್ದಂತೆಯೇ ಇಲ್ಲಿನ ಆಜಾದ್ ಮೈದಾನದಲ್ಲಿ ಹೋರಾಟಗಾರರು ಹಲಗೆ ಹೊಡೆದು, ಕುಣಿದು ಕುಪ್ಪಳಿಸಿ ಸಂಭ್ರಮಿಸಿ ದರು. 'ಸರ್ಕಾರದೊಂದಿಗೆ ಮಾತ ನಾಡಲು ಸಿದ್ಧನಿದ್ದೇನೆ. ನನ್ನ ಬೇಡಿಕೆಗಳು ಈಡೇರದ ಹೊರತು ಮುಂಬೈ ಬಿಟ್ಟು ತೆರಳುವುದಿಲ್ಲ' ಎಂದು ಜರಾಂಗೆ ಅವರು ಬೆಳಿಗ್ಗೆಯಷ್ಟೇ ಹೇಳಿದ್ದರು.
- 'ಮರಾಠ ಮೀಸಲಾತಿ ಹೋರಾಟಗಾರರ ವಿರುದ್ಧ ದಾಖಲಾಗಿರುವ ಎಲ್ಲ ಪ್ರಕರಣಗಳನ್ನು ಸೆಪ್ಟೆಂಬರ್ ಅಂತ್ಯದ ಒಳಗಾಗಿ ಕೈಬಿಡಲಾಗುವುದು ಎಂದು ಉಪ ಸಮಿತಿಯವರು ಹೇಳಿದ್ದಾರೆ' ಎಂದರು.
- 'ಕುಣಬಿ ಮತ್ತು ಮರಾಠರು ಒಂದೇ ಸಮುದಾಯದವರು ಎಂದು ಸರ್ಕಾರಿ ಆದೇಶ ಹೊರಡಿಸಲು ಕಾನೂನು ಪ್ರಕಾರ ಇರುವ ಆಯ್ಕೆಗಳ ಕುರಿತು ಹುಡುಕಾಟ ನಡೆಯುತ್ತಿದೆ. ಎಲ್ಲ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಎರಡು ತಿಂಗಳು ಬೇಕಾಗಬಹುದು' ಎಂದು ಸಚಿವ ರಾಧಾಕೃಷ್ಣ ಹೇಳಿದರು.
- ಜರಾಂಗೆ ಅವರು ಉಪವಾಸ ಸತ್ಯಾಗ್ರಹವನ್ನು ಅಂತ್ಯಗೊಳಿಸಿ, ಕಣ್ಣೀರು ಹಾಕಿದರು. ಮೈದಾನದಿಂದ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು.

ಹೈಕೋರ್ಟ್ ತರಾಟೆ

- 'ಅನುಮತಿ ಪಡೆಯದೆಯೇ ಆಜಾದ್ ಮೈದಾನದಲ್ಲಿ ಪ್ರತಿಭಟನೆ ನಡೆಸಲಾಗುತ್ತಿದೆ. ಮಂಗಳವಾರ ಮಧ್ಯಾಹ್ನ 3ರ ಒಳಗೆ ಆಜಾದ್ ಮೈದಾನವನ್ನು ಖಾಲಿ ಮಾಡಬೇಕು' ಎಂದು ಬಾಂಬೆ ಹೈಕೋರ್ಟ್ ಹೇಳಿತ್ತು. 'ಪರಿಸ್ಥಿತಿಯನ್ನು ಸರಿಯಾಗಿ ನಿಭಾಯಿಸಿಲ್ಲ' ಎಂದು ರಾಜ್ಯ ಸರ್ಕಾರವನ್ನೂ ನ್ಯಾಯಾಲಯ ತರಾಟೆಗೆ ತೆಗೆದುಕೊಂಡಿತ್ತು. ಬಳಿಕ ಜರಾಂಗೆ ಅವರ ಮನವಿ ಮೇರೆಗೆ ಬುಧವಾರ ಬೆಳಿಗ್ಗೆವರೆಗೆ ಪ್ರತಿಭಟನೆ ನಡೆಸಲು ಕೋರ್ಟ್ ಅನುಮತಿ ನೀಡಿತ್ತು.
- ಈ ಬಳಿಕ ಸಂಪುಟದ ಉಪ ಸಮಿತಿಯ ಮುಖ್ಯಸ್ಥ ರಾಧಾಕೃಷ್ಣ ಅವರು ಜರಾಂಗೆ ಅವರನ್ನು ಮಧ್ಯಾಹ್ನದ ವೇಳೆಗೆ ಭೇಟಿ ಮಾಡಿದರು.
- ನೂರಾರು ಪ್ರತಿಭಟನಕಾರರು ದಕ್ಷಿಣ ಮುಂಬೈನ ಬೀದಿಗಳಲ್ಲಿ ಮತ್ತು ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್ ಆವರಣದಲ್ಲಿ ಬೀಡುಬಿಟ್ಟಿದ್ದರು. ಇದರಿಂದ ಲಕ್ಷಾಂತರ ಜನರಿಗೆ ತೊಂದರೆಯಾಗುತ್ತಿತ್ತು.

Dr. Rajkumar IAS/KAS Academy

- 'ಜರಾಂಗೆ ಮತ್ತು ಅವರ ಅನುಯಾಯಿಗಳು ಮೈದಾನವನ್ನು ಖಾಲಿ ಮಾಡದೆ ಇದ್ದರೆ ದಂಡ ವಿಧಿಸಲಾಗುವುದು. ಇವರ ಮೇಲೆ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸಲಾಗುವುದು' ಎಂದೂ ಕೋರ್ಟ್ ಎಚ್ಚರಿಸಿತ್ತು.

## ❖ 'ರೇರಾ ವ್ಯಾಪ್ತಿಯಿಂದ ಬಿಡಿಎ ಹೊರಗಿಡಿ'

**ಸಂದರ್ಭ:** 'ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಶಾಸನಬದ್ಧ ಸಂಸ್ಥೆಯಾಗಿದ್ದು, ರಿಯಲ್ ಎಸ್ಟೇಟ್ ಯೋಜನೆಗಳ ಪ್ರವರ್ತಕವಲ್ಲ. ಹಾಗಾಗಿ ಬಿಡಿಎ ಅನ್ನು ತನ್ನ ಅಧಿಕಾರ ವ್ಯಾಪ್ತಿಯಿಂದ ಹೊರಗಿಡಬೇಕು' ಎಂದು ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರವನ್ನು (ಕೆ–ರೇರಾ) ಒತ್ತಾಯಿಸಿದೆ.

- ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ ತನ್ನ ವಿರುದ್ಧ ರೇರಾದಲ್ಲಿ ಸಲ್ಲಿಸಿರುವ ಅರ್ಜಿಗೆ ಬಿಡಿಎ ಈ ರೀತಿ ಪ್ರತಿಕ್ರಿಯಿಸಿದೆ.
- ಬಿಡಿಎ ಕೈಗೆತ್ತಿಕೊಂಡ ಯೋಜನೆಗಳು ವಾಣಿಜ್ಯ ಉದ್ದೇಶದ್ದಲ್ಲ. ಆದ್ದರಿಂದ ಅವುಗಳನ್ನು ರಿಯಲ್ ಎಸ್ಟೇಟ್ ಯೋಜನೆಗಳೆಂದು ಕರೆಯಲು ಆಗುವುದಿಲ್ಲ ಎಂದು ವಾದಿಸಿರುವ ಬಿಡಿಎ, ಇದು ರೇರಾ ಕಾಯ್ದೆಯಲ್ಲಿ ಹೇಳಿರುವಂತೆ 'ಪ್ರವರ್ತಕ'ದ ವ್ಯಾಖ್ಯಾನಕ್ಕೆ ಹೊಂದಿಕೆ ಆಗುವುದಿಲ್ಲ ಎಂದು ತಿಳಿಸಿದೆ.
- 'ಬಿಡಿಎ ಕಾಯ್ದೆ ಅಡಿ ನಗರ ಯೋಜನೆಗಳನ್ನು ರೂಪಿಸಲಾಗಿದ್ದು, ವಸತಿ ಬಡಾವಣೆಗಳನ್ನು ನಿರ್ಮಿಸಿ ಸಾರ್ವಜನಿಕರಿಗೆ ಕೈಗೆಟುಕುವ ಬೆಲೆಯಲ್ಲಿ ನಿವೇಶನಗಳನ್ನು ನೀಡಲಾಗುತ್ತದೆ. ಆರ್ಥಿಕವಾಗಿ ದುರ್ಬಲ ವರ್ಗದವರಿಗೆ ಹೆಚ್ಚಿನ ರಿಯಾಯಿತಿ ದರದಲ್ಲಿ ನಿವೇಶನಗಳನ್ನು ನೀಡುತ್ತದೆ. ಆದರೆ, ಡೆವಲಪರ್‌ಗಳು ಲಾಭದ ಉದ್ದೇಶದಿಂದ ಯೋಜನೆಗಳನ್ನು ಕೈಗೆತ್ತಿಕೊಳ್ಳಲಿದ್ದಾರೆ. ಆದ್ದರಿಂದ, ರೇರಾ ಕಾಯ್ದೆ ನಿಬಂಧನೆಗಳನ್ನು ಪ್ರಾಧಿಕಾರಕ್ಕೆ ಅನ್ವಯಿಸಲು ಸಾಧ್ಯವಿಲ್ಲ' ಎಂದು ಬಿಡಿಎ ವಾದಿಸಿದೆ.
- ನಿವೇಶನದಾರರು ಎದುರಿಸುವ ಯಾವುದೇ ಸಮಸ್ಯೆಗಳನ್ನು ಬಿಡಿಎ ಕಾಯ್ದೆಯ ಪ್ರಕಾರ ಮಾತ್ರ ಪರಿಹರಿಸಬೇಕು ಮತ್ತು ಅವರಿಗೆ ರೇರಾ ಕಾಯ್ದೆಯನ್ನು ಜಾರಿಗೊಳಿಸುವ ಹಕ್ಕಿಲ್ಲ ಎಂದು ಬಿಡಿಎ ಹೇಳಿದೆ.

## ❖ ಎಐಗಳು 'ವಿಜ್ಞಾನಿ'ಗಳಾಗಬಲ್ಲವೆ?

**ಸಂದರ್ಭ:** ಕೇಂದ್ರ ಸರ್ಕಾರದ ಪ್ರಮುಖ ತಂತ್ರಜ್ಞಾನ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಐಐಟಿ ದೆಹಲಿ, ಜರ್ಮನಿಯ ಜೆನಾ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಒಂದು ಪ್ರಮುಖ ಸಂಶೋಧನೆಯನ್ನು ನಡೆಸಿ, ಕೃತಕ ಬುದ್ಧಿಮತ್ತೆ (AI) ಮತ್ತು ವಿಜ್ಞಾನದ ನಡುವಿನ ಸಂಬಂಧದ ಬಗ್ಗೆ ಬೆಳಕು ಚೆಲ್ಲಿದೆ. ಈ ಅಧ್ಯಯನದಲ್ಲಿ, ಕೃತಕ ಬುದ್ಧಿಮತ್ತೆಯು ವಿಜ್ಞಾನಕ್ಷೇತ್ರಕ್ಕೆ ಪ್ರವೇಶಿಸಲು ಸಜ್ಜಾಗಿದೆಯೇ, ನಿಜವಾಗಿಯೂ ವಿಜ್ಞಾನಿಯಂತೆ ಯೋಚಿಸಬಲ್ಲದೇ ಎಂಬುದನ್ನು ಪರೀಕ್ಷಿಸಿದ್ದಾರೆ.

- ತಂತ್ರಜ್ಞಾನದ ಪ್ರಗತಿಯಿಂದಾಗಿ, ಇಂದು ಕೃತಕ ಬುದ್ಧಿಮತ್ತೆಯು ವೈಜ್ಞಾನಿಕ ಪ್ರಪಂಚವನ್ನು ವೇಗವಾಗಿ ಬದಲಾಯಿಸುತ್ತಿದೆ. ಇದು ಹೊಸ ಆವಿಷ್ಕಾರಗಳಿಗೆ ನಾಂದಿ ಹಾಡಲಿದೆ ಎಂದು ಹೇಳಲಾಗುತ್ತಿದೆ. ಇದಕ್ಕೆ ಪೂರಕವಾಗಿ, ಎಐ ತಂತ್ರಜ್ಞಾನಗಳು ವಿಜ್ಞಾನಿಗಳಿಗೆ ಲಕ್ಷಾಂತರ ಸಂಶೋಧನ ಪ್ರಬಂಧಗಳನ್ನು ಓದಿ ಅರ್ಥಮಾಡಿಕೊಳ್ಳಲು, ಪ್ರಯೋಗಗಳನ್ನು ರೂಪಿಸಲು, ಕ್ಲಿಷ್ಟಕರವಾದ ಅಂಕಿ-ಅಂಶಗಳನ್ನು ವಿಶ್ಲೇಷಿಸಲು, ಮತ್ತು ಪ್ರಯೋಗಾಲಯಗಳ ಸಿದ್ಧತೆಗಳನ್ನು ಅರ್ಥಮಾಡಿಕೊಳ್ಳಲು ಸಹಾಯಕವಾಗಿವೆ.
- ಆದರೆ ಈ ಕ್ರಾಂತಿಯು ಸಂಪೂರ್ಣವಾಗಿ ಯಶಸ್ವಿಯಾಗಬೇಕೆಂದರೆ, ಕೃತಕ ಬುದ್ಧಿಮತ್ತೆಯು ನಿಜವಾದ ವಿಜ್ಞಾನಿಯಂತೆ ಯೋಚಿಸಬೇಕು. ಅಂದರೆ, ಅದು ಕೇವಲ ಅಂಕಿ-ಅಂಶಗಳನ್ನು ವಿಶ್ಲೇಷಿಸುವುದು ಮಾತ್ರವಲ್ಲದೆ, ದೃಶ್ಯಮಾಹಿತಿಗಳು, ಅಳತೆ-ಪ್ರಮಾಣಗಳನ್ನು, ಮತ್ತು ಸೈದ್ಧಾಂತಿಕ ಚೌಕಟ್ಟುಗಳನ್ನು ಸಮಗ್ರವಾಗಿ ಅರ್ಥಮಾಡಿಕೊಳ್ಳುವ ಸಾಮರ್ಥ್ಯವನ್ನು ಹೊಂದಿರಬೇಕು.

- ಅದರ ಸಾಮರ್ಥ್ಯಗಳನ್ನು ಅಳೆಯಲು ವಿಜ್ಞಾನಿಗಳು 'ಮ್ಯಾಕ್‌ಬೆಂಚ್' (MaCBench) ಎಂಬ ಹೊಸ ಮಾನದಂಡವನ್ನು ಸಿದ್ಧಪಡಿಸಿದ್ದಾರೆ. 'ಮಲ್ಟಿಮೋಡಲ್ ಲ್ಯಾಂಗ್ವೇಜ್ ಮಾಡೆಲ್ಸ್' ಎಂಬ ಸುಧಾರಿತ ಕೃತಕ ಬುದ್ಧಿಮತ್ತೆಯ ಮಾದರಿಗಳನ್ನು ರಸಾಯನಶಾಸ್ತ್ರ, ಮತ್ತು ವಸ್ತುವಿಜ್ಞಾನದ ಸಂದರ್ಭದಲ್ಲಿ ಪರೀಕ್ಷಿಸಲು ಈ ಮಾನದಂಡವನ್ನು ಬಳಸಲಾಗಿದೆ. ಈ ಸಂಶೋಧನೆಯಲ್ಲಿ ಗಮನಕ್ಕೆ ಬಂದ ಮುಖ್ಯ ಅಂಶವೆಂದರೆ, ಕೃತಕ ಬುದ್ಧಿಮತ್ತೆಯು ಕೆಲವು ಮೂಲಭೂತ ಕಾರ್ಯಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದರೂ, ನಿಜವಾದ ವೈಜ್ಞಾನಿಕ ವಿಶ್ಲೇಷಣೆ ಮತ್ತು ತಾರ್ಕಿಕತೆಗೆ ಬಂದಾಗ ಹಿನ್ನಡೆ ಅನುಭವಿಸುತ್ತದೆ.
- ಸಂಶೋಧಕರು, ನೈಜ ವೈಜ್ಞಾನಿಕ ಕೆಲಸದ ಹಂತಗಳನ್ನು ಅನುಕರಿಸುವ ರೀತಿಯಲ್ಲಿ ಈ 'ಮ್ಯಾಕ್ ಬೆಂಚ್' ಅನ್ನು ವಿನ್ಯಾಸಗೊಳಿಸಿದ್ದಾರೆ. ಈ ಮಾನದಂಡವು ಮೂರು ಮುಖ್ಯ ವಿಭಾಗಗಳನ್ನು ಒಳಗೊಂಡಿದೆ: ವೈಜ್ಞಾನಿಕ ಬರಹಗಳಿಂದ ಮಾಹಿತಿಯನ್ನು ಪಡೆಯುವುದು, ಪ್ರಯೋಗಾಲಯದ ಕೆಲಸಗಳನ್ನು ಅರ್ಥಮಾಡಿಕೊಳ್ಳುವುದು, ಮತ್ತು ಪ್ರಯೋಗಗಳ ಫಲಿತಾಂಶಗಳನ್ನು ವಿಶ್ಲೇಷಿಸುವುದು. ಕೃತಕ ಬುದ್ಧಿಮತ್ತೆಯು ಪರೀಕ್ಷೆಗಳ ಸಮಯದಲ್ಲಿ ಅದರ ಸಾಮರ್ಥ್ಯವನ್ನು ಪ್ರದರ್ಶಿಸಿತು. ಉದಾಹರಣೆಗೆ, ಪ್ರಯೋಗಾಲಯದ ಉಪಕರಣಗಳನ್ನು ಗುರುತಿಸುವುದು, ಸರಳ ಮಾಹಿತಿಗಳನ್ನು ಹೊರತೆಗೆಯುವುದು ಮತ್ತು ಕೈಯಿಂದ ರಚಿಸಿದ ಅಣುಗಳ ಚಿತ್ರಗಳಿಗೆ ಅವುಗಳ ಸರಳೀಕೃತ ಪಠ್ಯರೂಪಗಳನ್ನು (SMILES ಸ್ಟ್ರಿಂಗ್ಸ್) ಹೊಂದಿಸುವುದು – ಈ ಎಲ್ಲಾ ಕಾರ್ಯಗಳಲ್ಲಿ ಅದು ಬಹುತೇಕ ಸಂಪೂರ್ಣ ಯಶಸ್ಸನ್ನು ಸಾಧಿಸಿದೆ.
- ಆದರೆ, ಕೃತಕ ಬುದ್ಧಿಮತ್ತೆಯು ಕ್ಲಿಷ್ಟಕರ ಸಮಸ್ಯೆಗಳನ್ನು ಎದುರಿಸಿದಾಗ ಅದರ ಸಾಮರ್ಥ್ಯ ಕುಸಿಯಿತು. 'ದೈಶಿಕ ವಿಶ್ಲೇಷಣೆ'(spatial reasoning)ಯಲ್ಲಿ ಅದು ತೊಂದರೆಗಳನ್ನು ಎದುರಿಸಿತು. ಉದಾಹರಣೆಗೆ, ಅಣುವಿನ ವಿವಿಧ ಭಾಗಗಳ ನಡುವಿನ ಸಂಬಂಧಗಳನ್ನು ವಿವರಿಸುವುದು ಅಥವಾ ಒಂದು ವಸ್ತುವಿನ ಆಂತರಿಕ ರಚನೆಯನ್ನು ಗುರುತಿಸುವುದು ಅದರ ಮಿತಿಯನ್ನು ಮೀರಿತು. ಅಲ್ಲದೇ, ಎನ್. ಎಂ. ಆರ್. ಸ್ಪೆಕ್ಟ್ರೋಸ್ಕೋಪಿ (NMR spectroscopy) ಅಥವಾ ಅಣು ಭಾರಮಾಪನದಂತಹ (mass spectrometry) ಜಟಿಲ ಪ್ರಯೋಗಗಳ ಫಲಿತಾಂಶಗಳನ್ನು ಅರ್ಥಮಾಡಿಕೊಳ್ಳುವಲ್ಲಿ ಎಐ ಬಹಳ ಕಷ್ಟಪಟ್ಟಿದೆ. ಇದು ಕೆಲವು ಸಂದರ್ಭಗಳಲ್ಲಿ ಅನುದ್ದಿಷ್ಟ (random) ಊಹೆಗಳಿಗಿಂತ ಸ್ವಲ್ಪ ಉತ್ತಮವಾಗಿ ಮಾತ್ರ ಕಾರ್ಯನಿರ್ವಹಿಸಿತು.
- ಈ ಅಧ್ಯಯನದಲ್ಲಿ ಎದ್ದುಕಾಣುವ ಮತ್ತೊಂದು ಅಂಶವೆಂದರೆ, ಬಹು ಹಂತದ ತಾರ್ಕಿಕ ಚಿಂತನೆ ಅಗತ್ಯವಿರುವ ಕಾರ್ಯಗಳಲ್ಲಿ ಅದರ ಕಾರ್ಯಕ್ಷಮತೆ ತೀರಾ ಕಳಪೆಯಾಗಿತ್ತು. ಉದಾಹರಣೆಗೆ, ಒಂದು ಎಕ್ಸ್-ರೇ ಡಿಫ್ರಾಕ್ಷನ್ ಮಾದರಿಯಲ್ಲಿರುವ ಕೆಲವು ನಿರ್ದಿಷ್ಟ ಸ್ಥಳಗಳನ್ನು ಗುರುತಿಸಬಲ್ಲದಾಗಿದ್ದರೂ, ಅವುಗಳನ್ನು ಕ್ರಮವಾಗಿ ಜೋಡಿಸುವಲ್ಲಿ ವಿಫಲವಾಯಿತು. ಈ ಸಂಶೋಧನೆಯಿಂದ ಒಂದು ಪ್ರಮುಖ ವಿಷಯ ಹೊರಬಂದಿದೆ: ಇಂದಿನ ಕೃತಕ ಬುದ್ಧಿಮತ್ತೆ ಮಾದರಿಗಳು ನಿಜವಾದ ವೈಜ್ಞಾನಿಕ ತಿಳಿವಳಿಕೆಯನ್ನು ಬೆಳೆಸಿಕೊಳ್ಳುವುದಕ್ಕಿಂತ, ತಮ್ಮ ತರಬೇತಿಯ ದತ್ತಾಂಶದಲ್ಲಿರುವ ನಮೂನೆಗಳನ್ನು (patterns) ಗುರುತಿಸುವಲ್ಲಿ ಹೆಚ್ಚು ಅವಲಂಬಿತವಾಗಿವೆ. ಎಂದರೆ, ಅದು ಕಲಿತ ಮಾಹಿತಿಯ ಆಧಾರದ ಮೇಲೆ ಉತ್ತರಗಳನ್ನು ನೀಡುತ್ತದೆಯೆ ವಿನಾ ನಿಜವಾದ ವೈಜ್ಞಾನಿಕ ವಿಶ್ಲೇಷಣೆಯನ್ನು ನಡೆಸುವುದಿಲ್ಲ.
- ಈ ಅಧ್ಯಯನವು ಕೃತಕ ಬುದ್ಧಿಮತ್ತೆ ವಿಫಲವಾಗಿರುವುದನ್ನು ತೋರಿಸುವುದರ ಬದಲಿಗೆ, ಅದು ಎಲ್ಲಿ ಸುಧಾರಣೆಗೊಳ್ಳಬೇಕು ಎಂಬುದನ್ನು ತಿಳಿಸುತ್ತದೆ. ಈ ಅಧ್ಯಯನದಲ್ಲಿ ಗುರುತಿಸಲಾದ ಮಿತಿಗಳನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳುವುದರಿಂದ, ಭವಿಷ್ಯದಲ್ಲಿ ಹೆಚ್ಚು ಪರಿಣಾಮಕಾರಿ, ವಿಶ್ವಾಸಾರ್ಹ ಮತ್ತು ಬುದ್ಧಿವಂತ ಎಐ -ಆಧಾರಿತ ವೈಜ್ಞಾನಿಕ ಸಹಾಯಕಗಳನ್ನು ಅಭಿವೃದ್ಧಿಪಡಿಸಲು ಒಂದು ಮಾರ್ಗಸೂಚಿ ಲಭ್ಯವಾಗಿದೆ. ಈ ಹೊಸ ಎಐ ಮಾದರಿಗಳು ಕೇವಲ ಹೆಚ್ಚಿನ ದತ್ತಾಂಶವನ್ನು ಆಧರಿಸುವ ಬದಲು, ನಿಜವಾದ ವೈಜ್ಞಾನಿಕ ತಾರ್ಕಿಕತೆ ಮತ್ತು ವಿವಿಧ ಬಗೆಯ ಮಾಹಿತಿಯನ್ನು ಒಗ್ಗೂಡಿಸುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಈ ಅಧ್ಯಯನ ತಿಳಿಸುತ್ತದೆ.


Dr. Rajkumar IAS/KAS Academy

- ಕೃತಕ ಬುದ್ಧಿಮತ್ತೆಯು ಕೇವಲ ಒಂದು ಸಂಕೀರ್ಣವಾದ ತಂತ್ರಜ್ಞಾನವಾಗಿ ಉಳಿಯದೆ, ನಿಜವಾದ ಜ್ಞಾನಯುತ ಸಹಭಾಗಿತ್ವದ ಸಾಧನವಾಗಿ ಬದಲಾಗುವ ನಿಟ್ಟಿನಲ್ಲಿ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ. ಈ ಸಂಶೋಧನೆಯು ವಿಜ್ಞಾನ ಮತ್ತು ತಂತ್ರಜ್ಞಾನದ ಭವಿಷ್ಯದ ಬಗ್ಗೆ ಭರವಸೆಯನ್ನು ಮೂಡಿಸಿದ್ದು, ಕೃತಕ ಬುದ್ಧಿಮತ್ತೆಯು ಎಲ್ಲ ವಿಜ್ಞಾನಿಗಳಿಗೆ ಮತ್ತು ಸಂಶೋಧಕರಿಗೆ ಒಂದು ಅಮೂಲ್ಯ ಸಾಧನವಾಗಲಿದೆ.

## ❖ 2 ಮಸೂದೆಗಳಿಗೆ ರಾಜ್ಯಪಾಲರ ಅಂಕಿತ

***ಸಂದರ್ಭ:*** ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಸೋರಿಕೆ ತಡೆಗಟ್ಟಲು ರಾಜ್ಯ ಸರ್ಕಾರ ತಿದ್ದುಪಡಿ ತಂದಿದ್ದ 'ಕರ್ನಾಟಕ ಸರಕು ಸೇವೆಗಳ ಮಸೂದೆ- 2025' ಹಾಗೂ ₹3,351.96 ಕೋಟಿ ಮೊದಲ ಪೂರಕ ಅಂದಾಜು ಒಳಗೊಂಡ 'ಕರ್ನಾಟಕ ಧನ ವಿನಿಯೋಗ ಮಸೂದೆ–2025'ಕ್ಕೆ ರಾಜ್ಯಪಾಲರು ಅಂಕಿತ ಹಾಕಿದ್ದು, ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದೆ.

- 'ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್' ಅನ್ನು ಕೆಲವರು ಅಕ್ರಮವಾಗಿ ಪಡೆದುಕೊಳ್ಳುತ್ತಿದ್ದಾರೆ. ತಂಬಾಕು–ಅಡಿಕೆ ಆಧಾರಿತ ಪದಾರ್ಥಗಳಲ್ಲಿ (ಗುಟ್ಕಾ, ಪಾನ್ ಮಸಾಲಾ) ತೆರಿಗೆ ಸೋರಿಕೆ ಆಗುತ್ತಿದ್ದು, ಯಾವ ರೀತಿ ದುರುಪಯೋಗ ಮಾಡುತ್ತಿದ್ದಾರೆ ಎಂಬುದನ್ನು ಹುಡುಕಿ ಅದನ್ನು ತಡೆಗಟ್ಟಲು 'ಕರ್ನಾಟಕ ಸರಕು ಸೇವೆಗಳ ಕಾಯ್ದೆ' ನೆರವಾಗಲಿದೆ.

ಆಧುನಿಕ ಯುದ್ಧರಂಗದಲ್ಲಿ ಡ್ರೋನ್‌ಗಳು, ಕ್ಷಿಪಣಿಗಳು, ಯುದ್ಧವಿಮಾನಗಳು ಹೆಚ್ಚು ಬಳಕೆಯಾಗುತ್ತಿವೆ. ಇವುಗಳ ದಾಳಿಯನ್ನು ತಡೆಯಲು ಯಾವುದೇ ದೇಶ ಸುವ್ಯವಸ್ಥಿತ ವಾಯು ರಕ್ಷಣಾ ವ್ಯವಸ್ಥೆ ಹೊಂದುವುದು ಮುಖ್ಯ. ಭಾರತ ಮತ್ತು ಪಾಕಿಸ್ತಾನ ನಡುವಿನ ಇತ್ತೀಚಿನ ಸೇನಾ ಸಂಘರ್ಷದಲ್ಲಿ ಇದರ ಪ್ರಾಮುಖ್ಯ ಜಗಜ್ಜಾಹೀರಾಗಿದೆ. ಪಾಕಿಸ್ತಾನದ ಎಲ್ಲ ವಾಯು ದಾಳಿಗಳನ್ನು ದೇಶದ ವಾಯು ರಕ್ಷಣಾ ವ್ಯವಸ್ಥೆ ಸಮರ್ಥವಾಗಿ ತಡೆಯಿತು; ಭಾರತದ ವಾಯುದಾಳಿಯನ್ನು ತಡೆಯಲು ಪಾಕ್ ವಾಯು ರಕ್ಷಣಾ ವ್ಯವಸ್ಥೆ ವಿಫಲವಾಗಿತ್ತು. ದೇಶದ ವಾಯು ರಕ್ಷಣಾ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸಲು ಮುಂದಡಿ ಇಟ್ಟಿರುವ ಭಾರತ, ಸಂಪೂರ್ಣವಾಗಿ ದೇಶೀಯ ತಂತ್ರಜ್ಞಾನದಲ್ಲಿ ಅಭಿವೃದ್ಧಿ ಪಡಿಸಿದ ಸಮಗ್ರ ವಾಯು ರಕ್ಷಣಾ ವ್ಯವಸ್ಥೆಯ ಪರೀಕ್ಷೆಯನ್ನು ಇತ್ತೀಚೆಗೆ ಯಶಸ್ವಿಯಾಗಿ ನಡೆಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾತಂತ್ರ್ಯದ ದಿನ ಘೋಷಿಸಿರುವ 'ಸುದರ್ಶನ ಚಕ್ರ' ವಾಯು ರಕ್ಷಣಾ ವ್ಯವಸ್ಥೆಯ ಅಭಿವೃದ್ಧಿಗೆ ಈ ಪರೀಕ್ಷೆ ಮುನ್ನುಡಿ ಬರೆದಿದೆ

# ಸಮಗ್ರ ವಾಯು ರಕ್ಷಣಾ ವ್ಯವಸ್ಥೆ ಭಾರತದ ಮಹತ್ವದ ಹೆಜ್ಜೆ

ಪ್ರಜಾವಾಣಿ ವಾರ್ತೆ

ಪಹಲ್ಗಾಮ್ ಭಯೋತ್ಪಾದಕರ ದಾಳಿಗೆ ಪ್ರತೀಕಾರವಾಗಿ ಈ ವರ್ಷದ ಮೇ 7ರಂದು ಭಾರತೀಯ ಸೇನೆಯು ಪಾಕಿಸ್ತಾನದ ಉಗ್ರರ ನೆಲೆಗಳನ್ನು ಗುರಿಯಾಗಿಸಿಕೊಂಡು ನಡೆಸಿದ್ದ 'ಆಪರೇಷನ್ ಸಿಂಧೂರ'ದ ನಂತರ ಪಾಕಿಸ್ತಾನವು ಭಾರತದ ಮೇಲೆ ನಡೆಸಿದ್ದ ಕ್ಷಿಪಣಿ, ಡ್ರೋನ್‌ಗಳ ದಾಳಿಯ ಸದ್ದಡಗಿಸಿದ್ದು ನಮ್ಮ ಸಮಗ್ರ ವಾಯು ರಕ್ಷಣಾ ವ್ಯವಸ್ಥೆ (ಇಂಟೆಗ್ರೇಟೆಡ್ ಏರ್ ಡಿಫೆನ್ಸ್ ಸಿಸ್ಟಮ್–ಐಎಡಿಡಬ್ಲ್ಯುಎಸ್). ಸ್ವದೇಶಿ ನಿರ್ಮಿತ ಆಕಾಶ್ ಕ್ಷಿಪಣಿ ವ್ಯವಸ್ಥೆ, ರಷ್ಯಾ ನಿರ್ಮಿತ ಎಸ್–400 ಕ್ಷಿಪಣಿ ವ್ಯವಸ್ಥೆ, ಇದರೊಂದಿಗೆ ದೇಶೀಯ ಆಕಾಶ್‌ತೀರ ಕಮಾಂಡ್ ಮತ್ತು ನಿಯಂತ್ರಣ ವ್ಯವಸ್ಥೆ ಹಾಗೂ ಸಮಗ್ರ ವಾಯು ಕಮಾಂಡ್ ಮತ್ತು ನಿಯಂತ್ರಣ ವ್ಯವಸ್ಥೆಯು ಪಾಕಿಸ್ತಾನದ ದಾಳಿಯ ವಿರುದ್ಧ ರಕ್ಷಾ ಕವಚದಂತೆ ಕಾರ್ಯನಿರ್ವಹಿಸಿದ್ದವು.

ವಾಯು ರಕ್ಷಣಾ ವ್ಯವಸ್ಥೆಯಲ್ಲಿ ಜಗತ್ತಿಗೆ ಭಾರತದ ಸಾಮರ್ಥ್ಯವನ್ನು ತೋರಿಸಿದ್ದ ಈ ಕಾರ್ಯಾಚರಣೆ ಮುಕ್ತಾಯ ಕಂಡ ಎರಡೂವರೆ ತಿಂಗಳ ಬಳಿಕ, ಆಗಸ್ಟ್ 23ರಂದು ಭಾರತವು ಒಡಿಶಾ ಕರಾವಳಿಯಲ್ಲಿ ನಡೆಸಿದ ಬಹು ಹಂತಗಳ ಸಮಗ್ರ ವಾಯು ರಕ್ಷಣಾ ವ್ಯವಸ್ಥೆಯ ಪ್ರಯೋಗಾರ್ಥ ಪರೀಕ್ಷೆ ಮೊದಲ ಯತ್ನದಲ್ಲೇ ಯಶಸ್ವಿಯಾಗಿದೆ. ಡಿಆರ್‌ಡಿಒ ಮತ್ತು ಅದರ ಎರಡು ಅಂಗಸಂಸ್ಥೆಗಳು ಈ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿವೆ. ಸಂಪೂರ್ಣ ಸ್ವದೇಶಿ ಸಮಗ್ರ ವಾಯು ರಕ್ಷಣಾ ವ್ಯವಸ್ಥೆ ಎಂಬುದು ಇದರ ಹೆಗ್ಗಳಿಕೆ.

ಮೂರು ಹಂತಗಳ ರಕ್ಷಣಾ ಕವಚವನ್ನು ಹೊಂದಿರುವ ಈ ವ್ಯವಸ್ಥೆಯು ನೆಲದಿಂದ ಆಕಾಶಕ್ಕೆ ಚಿಮ್ಮುವ ಕ್ಷಿಪ್ರ ಪ್ರತಿಕ್ರಿಯೆಯ ಕ್ಷಿಪಣಿಗಳ ವ್ಯವಸ್ಥೆ (ಕ್ವಿಕ್ ರಿಯಾಕ್ಷನ್ ಸರ್ಫೇಸ್ ಟು ಏರ್ ಮಿಸೈಲ್ಸ್– ಕ್ಯುಆರ್‌ಎಸ್‌ಎಎಂ), ಅತ್ಯಾಧುನಿಕ ಅತಿ ಕಡಿಮೆ ವ್ಯಾಪ್ತಿಯ ವಾಯು ರಕ್ಷಣಾ ವ್ಯವಸ್ಥೆ (ಅಡ್ವಾನ್ಸ್ಡ್ ವೆರಿ ಶಾರ್ಟ್ ರೇಂಜ್ ಏರ್ ಡಿಫೆನ್ಸ್ ವ್ಯವಸ್ಥೆ–ವಿಎಸ್‌ಎಚ್‌ಒಆರ್‌ಎಡಿಎಸ್) ಕ್ಷಿಪಣಿಗಳು ಮತ್ತು ಲೇಸರ್ ನಿರ್ದೇಶಿತ ಪ್ರಖರ ಶಕ್ತಿಯ ಅಸ್ತ್ರ (ಡೈರೆಕ್ಟೆಡ್ ಎನರ್ಜಿ ವೆಪನ್–ಡಿಇಡಬ್ಲ್ಯು) ವ್ಯವಸ್ಥೆಗಳನ್ನು ಒಳಗೊಂಡಿದೆ. ಇವುಗಳಲ್ಲಿ ಕ್ಯುಆರ್‌ಎಸ್‌ಎಎಂ ವ್ಯವಸ್ಥೆಯನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಯೋಗಾಲಯ (ಡಿಆರ್‌ಡಿಎಲ್) ಅಭಿವೃದ್ಧಿಪಡಿಸಿದ್ದರೆ, ವಿಎಸ್‌ಎಚ್‌ಒಆರ್‌ಎಡಿಎಸ್ ಅನ್ನು ಹೈದರಾಬಾದ್‌ನಲ್ಲಿರುವ ಇಮಾರತ್ ಸಂಶೋಧನಾ ಕೇಂದ್ರ (ಆರ್‌ಸಿಐ) ಮತ್ತು ಡಿಇಡಬ್ಲ್ಯು ವ್ಯವಸ್ಥೆಯನ್ನು ಹೈದರಾಬಾದ್‌ನಲ್ಲಿರುವ ಪ್ರಖರ ಶಕ್ತಿ (ಹೈ ಎನರ್ಜಿ) ವ್ಯವಸ್ಥೆಗಳು ಮತ್ತು ವಿಜ್ಞಾನಗಳ ಕೇಂದ್ರ (ಸಿಎಚ್‌ಇಎಸ್‌ಎಸ್) ಅಭಿವೃದ್ಧಿ ಪಡಿಸಿವೆ.

ಆ. 23ರಂದು ನಡೆಸಿದ ಪರೀಕ್ಷೆಯಲ್ಲಿ ಈ ವಾಯುರಕ್ಷಣಾ ವ್ಯವಸ್ಥೆಯು ಎರಡು ಮಾನವ ರಹಿತ ವೈಮಾನಿಕ ವಾಹನ (ಯುಎವಿ) ಮತ್ತು ಒಂದು ಡ್ರೋನ್ ಅನ್ನು ಏಕಕಾಲಕ್ಕೆ ಹೊಡೆದುರುಳಿಸಿತ್ತು. ನಿಗದಿಪಡಿಸಲಾಗಿದ್ದ ಗುರಿಗಳು ಭಿನ್ನ ಭಿನ್ನ ಎತ್ತರ ಮತ್ತು ದೂರದಲ್ಲಿ ಹಾರಾಡುತ್ತಿದ್ದವು. ಮೂರೂ ವ್ಯವಸ್ಥೆಗಳು ಒಟ್ಟಾಗಿ ಕಾರ್ಯಾಚರಣೆ ಆರಂಭಿಸಿ, ನಿಖರ ಗುರಿ ಇಟ್ಟು ಡ್ರೋನ್ ಮತ್ತು ಯುಎವಿ ಗಳನ್ನು ಧ್ವಂಸ ಮಾಡಿದ್ದವು.

ಕೆಳ ಮಟ್ಟದಲ್ಲಿ ಹಾರಾಡುವ ಡ್ರೋನ್‌ಗಳಿಂದ ಹಿಡಿದು, ಎತ್ತರದಲ್ಲಿ ಹಾರಾಡುವ ಕ್ಷಿಪಣಿ ಮತ್ತು ಯುದ್ಧವಿಮಾನಗಳ ದಾಳಿಗಳ ವಿರುದ್ಧ ಈ ವ್ಯವಸ್ಥೆ ರಕ್ಷಾ ಕವಚವಾಗಿ ಕೆಲಸ ಮಾಡುತ್ತದೆ ಎಂದು ಡಿಆರ್‌ಡಿಒ ವಿಜ್ಞಾನಿಗಳು ಹೇಳಿದ್ದಾರೆ.



## ಕ್ಯುಆರ್‌ಎಸ್‌ಎಎಂ

- ಇದು ಕಡಿಮೆ ವ್ಯಾಪ್ತಿಯ ಮತ್ತು ನೆಲದಿಂದ ಆಕಾಶಕ್ಕೆ ಚಿಮ್ಮುವ ಕ್ಷಿಪಣಿ ವ್ಯವಸ್ಥೆ. ಸಂಚರಿಸುತ್ತಿರುವ ಶಸ್ತ್ರಸಜ್ಜಿತ ಸೇನಾ ತುಕಡಿಗಳನ್ನು ವಾಯುದಾಳಿಯಿಂದ ರಕ್ಷಿಸುವುದಕ್ಕಾಗಿ ಇದನ್ನು ರೂಪಿಸಲಾಗಿದೆ
- ಇದನ್ನು ವಾಹನಗಳಲ್ಲಿ ಅಳವಡಿಸಬಹುದಾಗಿದೆ. ಸಂಚರಿಸುತ್ತಿರುವಾಗಲೇ ವಾಯು ದಾಳಿಯಿಂದ ರಕ್ಷಣೆ ನೀಡುವ ಸಾಮರ್ಥ್ಯ ಇದಕ್ಕಿದೆ. 2022ರಲ್ಲೇ ಡಿಆರ್‌ಡಿಒ ಈ ವ್ಯವಸ್ಥೆಯನ್ನು ಯಶಸ್ವಿಯಾಗಿ ಪರೀಕ್ಷೆಗೆ ಒಳಪಡಿಸಿತ್ತು
- ಸಂಪೂರ್ಣ ಸ್ವಯಂಚಾಲಿತ ಕಮಾಂಡ್ ಮತ್ತು ನಿಯಂತ್ರಣ ವ್ಯವಸ್ಥೆ, ಎರಡು ರೇಡಾರ್‌ಗಳು ಮತ್ತು ಒಂದು ಉಡಾವಣಾ ಸಲಕರಣೆಯನ್ನು ಹೊಂದಿದೆ
- 3 ಕಿ.ಮೀನಿಂದ 30 ಕಿ.ಮೀ ದೂರ ಮತ್ತು 10 ಕಿ.ಮೀನಷ್ಟು ಎತ್ತರದಲ್ಲಿರುವ ಶತ್ರುಗಳ ಯುದ್ಧವಿಮಾನ, ಹೆಲಿಕಾಪ್ಟರ್, ಡ್ರೋನ್ ಕ್ಷಿಪಣಿಗಳನ್ನು ಹೊಡೆದು ಉರುಳಿಸಬಲ್ಲದು

## ಲೇಸರ್ ಆಧಾರಿತ ಡಿಇಡಬ್ಲ್ಯು

ಇದು ಶತ್ರುಗಳ ವಿಮಾನ, ಡ್ರೋನ್, ಕ್ಷಿಪಣಿಯನ್ನು ಲೇಸರ್ ಕಿರಣಗಳ ಮೂಲಕ ನಾಶ ಮಾಡುವ ಅಸ್ತ್ರ. ಈ ವರ್ಷದ ಏಪ್ರಿಲ್‌ನಲ್ಲಿ ಡಿಆರ್‌ಡಿಒ ಈ ವ್ಯವಸ್ಥೆಯ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿತ್ತು. 30 ಕಿಲೋವಾಟ್ ಲೇಸರ್ ಆಧಾರಿತ ಅಸ್ತ್ರ ಬಳಸಿ ಸಣ್ಣ ವಿಮಾನವನ್ನು ನಾಶ ಮಾಡಲಾಗಿತ್ತು. ಗರಿಷ್ಠ 3.5 ಕಿ.ಮೀ ದೂರದಲ್ಲಿರುವ ಗುರಿಗಳನ್ನು ಧ್ವಂಸ ಮಾಡಬಲ್ಲ ಸಾಮರ್ಥ್ಯ ಇದರದ್ದು. ಲೇಸರ್ ಆಧಾರಿತ ಶಸ್ತ್ರಾಸ್ತ್ರ ವ್ಯವಸ್ಥೆಯನ್ನು ಭವಿಷ್ಯದ ಅಸ್ತ್ರಗಳು ಎಂದು ಬಣ್ಣಿಸಲಾಗುತ್ತಿದ್ದು, ಭಾರತವು ಈ ವ್ಯವಸ್ಥೆಯನ್ನು ಯಶಸ್ವಿಯಾಗಿ ಅಳವಡಿಸಿಕೊಳ್ಳುವ ಮೂಲಕ ಅಮೆರಿಕ, ಚೀನಾ, ರಷ್ಯಾ ಸಾಲಿಗೆ ಸೇರಿದೆ.





## ವಿಎಸ್‌ಎಚ್‌ಒಆರ್‌ಎಡಿಎಸ್

ಈ ವರ್ಷದ ಫೆಬ್ರುವರಿ 1ರಂದು ಡಿಆರ್‌ಡಿಒ ಈ ವ್ಯವಸ್ಥೆಯ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿತ್ತು. ಅತ್ಯಂತ ಕಡಿಮೆ ಎತ್ತರದಲ್ಲಿರುವ ಗುರಿಯನ್ನು ಇದು ಧ್ವಂಸ ಮಾಡಬಲ್ಲದು. ಇದು ಮನುಷ್ಯನೇ ಹೊತ್ತೊಯ್ಯಬಹುದಾದ ರಕ್ಷಣಾ ವ್ಯವಸ್ಥೆ. ಅಂದರೆ, ಒಬ್ಬ ಸೈನಿಕ ಈ ವ್ಯವಸ್ಥೆಯನ್ನು ನಿಯಂತ್ರಿಸಬಹುದು. ಕ್ಷಿಪಣಿ ಉಡಾವಣಾ ಸಲಕರಣೆಯನ್ನು ಹಿಡಿದುಕೊಂಡು ಗುರಿಯತ್ತ ದಾಳಿ ಮಾಡಬಹುದು. ಹಗುರವಾದ ಈ ವ್ಯವಸ್ಥೆಯನ್ನು ಎಲ್ಲಿ ಬೇಕಾದರೂ ನಿಯೋಜಿಸಬಹುದು. ಭೂಸೇನೆ, ವಾಯು ಪಡೆ ಮತ್ತು ನೌಕಾ ಪಡೆಗಳಿಗೂ ಹೊಂದುವಂತಿರುವುದು ಇದರ ಬಹುದೊಡ್ಡ ಅನುಕೂಲ. 600 ಮೀಟರ್‌ನಿಂದ ಆರು ಕಿ.ಮೀ ದೂರದಲ್ಲಿರುವ ಗುರಿಯನ್ನು ನಿಖರ ದಾಳಿಯ ಮೂಲಕ ನಾಶಪಡಿಸಬಲ್ಲದು.



## ಸಮಗ್ರ ವಾಯು ರಕ್ಷಣಾ ವ್ಯವಸ್ಥೆ ಹೇಗೆ ಕೆಲಸ ಮಾಡುತ್ತದೆ?

- ಈ ವ್ಯವಸ್ಥೆಯು ರೇಡಾರ್, ನಿಯಂತ್ರಣ ಕೇಂದ್ರಗಳು, ಶಸ್ತ್ರಾಸ್ತ್ರ, ಯುದ್ಧವಿಮಾನಗಳು ಮತ್ತು ನೆಲ ಆಧಾರಿತ ಕ್ಷಿಪಣಿಗಳನ್ನೊಳಗೊಂಡ ಸಮನ್ವಯ ಜಾಲವನ್ನು ಬಳಸಿಕೊಂಡು ಶತ್ರುಗಳು ವಾಯು ಬೆದರಿಕೆಯನ್ನು (ಕ್ಷಿಪಣಿ, ಡ್ರೋನ್, ಯುದ್ಧವಿಮಾನ) ಪತ್ತೆ ಹಚ್ಚಿ, ಅದರ ಮೇಲೆ ನಿಗಾ ಇಟ್ಟು ಅದನ್ನು ಧ್ವಂಸ ಮಾಡುತ್ತದೆ
- ರೇಡಾರ್‌ಗಳು ಶತ್ರುಗಳ ಬೆದರಿಕೆಯನ್ನು ಪತ್ತೆ ಹಚ್ಚಿ, ಅವುಗಳ ಮೇಲೆ ನಿಗಾ ಇಡುತ್ತಾ, ಅವುಗಳ ವೇಗ, ಎತ್ತರ, ಪಥಕ್ಕೆ ಸಂಬಂಧಿಸಿದ ದತ್ತಾಂಶಗಳನ್ನು ನೀಡುತ್ತವೆ. ಎಲೆಕ್ಟ್ರೋ ಆಪ್ಟಿಕಲ್ ಸೆನ್ಸರ್‌ಗಳು ಕೂಡ ಇದಕ್ಕೆ ನೆರವಾಗುತ್ತವೆ
- ಐಎಡಿಡಬ್ಲ್ಯುಎಸ್‌ನ ಹೃದಯ ಭಾಗವಾಗಿರುವ ಕೇಂದ್ರೀಕೃತ ನಿಯಂತ್ರಣಾ ವ್ಯವಸ್ಥೆಯು (ಸಿ2ಸಿ2) ವಿವಿಧ ರೇಡಾರ್‌ಗಳು ಮತ್ತು ಎಲೆಕ್ಟ್ರೋ–ಆಪ್ಟಿಕಲ್ ಸೆನ್ಸರ್‌ಗಳ ದತ್ತಾಂಶವನ್ನು ಬೆಸೆಯುವ ಮೂಲಕ ನಿರ್ದಿಷ್ಟ ವಾಯುಪ್ರದೇಶದ ಆ ಕ್ಷಣದ ಚಿತ್ರಣ ನೀಡುತ್ತದೆ. ಈ ವ್ಯವಸ್ಥೆಯು ವಿಮಾನದ ಪಥ, ವೇಗ, ಎತ್ತರ, ರೇಡಾರ್ ದತ್ತಾಂಶದ ಆಧಾರದಲ್ಲಿ ಅಪಾಯದ ವಿಶ್ಲೇಷಣೆ ಮಾಡುವುದಲ್ಲದೇ ಅದನ್ನು ಎದುರಿಸಲು ಸೂಕ್ತ ರಕ್ಷಣಾ ವ್ಯವಸ್ಥೆಯನ್ನು ನಿಗದಿಪಡಿಸುತ್ತದೆ.
- ಗುರಿಯನ್ನು ನಿಗದಿಪಡಿಸಿದ ನಂತರ ಅವುಗಳನ್ನು ತಡೆಯಲು/ಹೊಡೆದುರುಳಿಸಲು ನಿಗದಿಪಡಿಸಲಾಗಿರುವ ಬಹು ಹಂತಗಳ ಪ್ರತಿದಾಳಿ ಅಸ್ತ್ರಗಳನ್ನು ಕಾರ್ಯಾಚರಣೆಗೆ ಇಳಿಸಲಾಗುತ್ತದೆ

## ಐಎಡಿಡಬ್ಲ್ಯುಎಸ್ ಏಕೆ ಮುಖ್ಯ?

- ರಷ್ಯಾ–ಉಕ್ರೇನ್ ಯುದ್ಧ, ಇಸ್ರೇಲ್–ಹಮಾಸ್ ಸಂಘರ್ಷದಲ್ಲಿ ಕ್ಷಿಪಣಿಗಳು, ಡ್ರೋನ್‌ಗಳದ್ದೇ ಮುಖ್ಯ ಪಾತ್ರ. ಇತ್ತೀಚೆಗೆ ಭಾರತ ಪಾಕಿಸ್ತಾನದ ಮೇಲೆ ನಡೆಸಿದ 'ಆಪರೇಷನ್ ಸಿಂಧೂರ'ದಲ್ಲಿಯೂ ವೈಮಾನಿಕ ದಾಳಿಯದ್ದೇ ಗಣನೀಯ ಪಾಲು. ಶತ್ರುಗಳ ವೈಮಾನಿಕ ದಾಳಿಯಿಂದ ದೇಶವನ್ನು ರಕ್ಷಿಸುವುದರ ದೃಷ್ಟಿಯಿಂದ ಐಎಡಿಡಬ್ಲ್ಯುಎಸ್‌ಗೆ ಪ್ರಾಮುಖ್ಯವಿದೆ
- ಐದಾರು ದಶಕಗಳ ಹಿಂದೆ ವಿಮಾನಗಳ ಮೂಲಕ ನೆಲದ ಮೇಲಿನ ಭೂಪ್ರದೇಶ–ದೃಶ್ಯಗಳನ್ನು ಕೇಂದ್ರೀಕರಿಸಿ ದಾಳಿಗಳನ್ನು ನಡೆಸಲಾಗುತ್ತಿತ್ತು. ಆದರೆ, ಇಂದು ಅತ್ಯಾಧುನಿಕ ಯುದ್ಧವಿಮಾನಗಳು ಬಂದಿವೆ. ಅತ್ಯಾಧುನಿಕವಾದ ರೇಡಾರ್‌ಗಳು, ಡ್ರೋನ್‌ಗಳಂತಹ ಆಧುನಿಕ ಅಸ್ತ್ರಗಳಿವೆ. ಇವುಗಳು ಎಲ್ಲ ರೀತಿಯ ಹವಾಮಾನಗಳಿಗೂ ಹೊಂದಿಕೊಂಡು ಕಾರ್ಯನಿರ್ವಹಿಸಬಲ್ಲವು
- ಆಧುನಿಕ ಯುದ್ಧರಂಗದಲ್ಲಿ ನಗರ ಪ್ರದೇಶಗಳೂ ಸೇರಿದಂತೆ ಯಾವ ಪ್ರದೇಶವೂ ವಾಯು ದಾಳಿಯ ಅಪಾಯದಿಂದ ಮುಕ್ತವಾಗಿಲ್ಲ. ಯುದ್ಧವಿಮಾನಗಳು ಆಧುನಿಕ ಸಂವಹನ ಸಾಧನಗಳನ್ನೂ ಹೊಂದಿವೆ. ಊಹೆಯನ್ನೂ ಮಾಡಲಾಗದ ರೀತಿಯಲ್ಲಿ, ಯಾವುದೇ ದಿಕ್ಕಿನಿಂದ ಶತ್ರು ಮೇಲೆರಗಬಹುದು. ಇಂಥ ಸ್ಥಿತಿಯಲ್ಲಿ ದೇಶದ ರಕ್ಷಣೆಗೆ ಐಎಡಿಡಬ್ಲ್ಯುಎಸ್‌ನಂಥ ರಕ್ಷಣಾ ವ್ಯವಸ್ಥೆ ಅತ್ಯಗತ್ಯ

ಆಧಾರ: ಪಿಟಿಐ, ಪಿಐಬಿ, ಡಿಆರ್‌ಡಿಒ ವೆಬ್‌ಸೈಟ್, ಬಿಜಿನೆಸ್‌-ಇಂಡಿಯಾ.ಕಾಂ, ಎನ್‌ಡಿಟಿವಿ ನ್ಯೂಸ್.ಕಾಂ

## ❖ ವಿಪತ್ತು: ಜಲವಿದ್ಯುತ್ ಯೋಜನೆಗಳಿಗೆ ಅಪಾಯ

**ಸಂದರ್ಭ:** ಜಮ್ಮು ಮತ್ತು ಕಾಶ್ಮೀರದಲ್ಲಿನ ಮಹತ್ವಾಕಾಂಕ್ಷೆಯ ಜಲವಿದ್ಯುತ್ ಯೋಜನೆಗಳ ವಿಸ್ತರಣೆಗೆ ಪ್ರಕೃತಿ ವಿಕೋಪ ಗಳು ಬೆದರಿಕೆಯಾಗಿ ಪರಿಣಮಿಸಿವೆ. ನೀರ್ಗಲ್ಲು ಸರೋವರಗಳಲ್ಲಿ ಏಕಾಏಕಿ ಪ್ರವಾಹ ಉಂಟಾಗುವ (ಗ್ಲೇಸಿಯರ್ ಲೇಕ್ ಔಟ್‌ಬರ್ಸ್ಟ್ ಫ್ಲಡ್ಸ್–ಜಿಎಲ್‌ಒಎಫ್) ವಿದ್ಯಮಾನಗಳು ಮೂಲಸೌಕರ್ಯ ಮತ್ತು ಸಾವಿರಾರು ಕೋಟಿ ಮೊತ್ತದ ಹೂಡಿಕೆಗಳನ್ನು ಅಪಾಯಕ್ಕೆ ಸಿಲುಕಿಸ ಬಹುದು ಎಂದು ತಜ್ಞರು ಎಚ್ಚರಿಸಿದ್ದಾರೆ.

- ಜಮ್ಮು ಮತ್ತು ಕಾಶ್ಮೀರವು ಕಿಶನ್‌ಗಂಗಾ (330 ಮೆ.ವಾ.), ನಿಮೂ ಬಾಜ್ಗೊ (140 ಮೆ.ವಾ.), ಸಲಾಲ್ (690 ಮೆ.ವಾ.) ಮತ್ತು ಉರಿ (1,200 ಮೆ.ವಾ.) ಸೇರಿದಂತೆ ಹಲವಾರು ಪ್ರಮುಖ ಜಲ ವಿದ್ಯುತ್ ಯೋಜನೆಗಳನ್ನು ಹೊಂದಿದೆ. ಚಿನಾಬ್ ನದಿಯಲ್ಲಿ ಪಾಕಲ್ ದೂಲ್ (1,000 ಮೆ.ವಾ.), ಕಿರೂ (624 ಮೆ.ವಾ.), ಕ್ವಾರ್ (540 ಮೆ.ವಾ.) ಮತ್ತು ರೇಟ್ಲೆ (850 ಮೆ.ವಾ.) ಜಲವಿದ್ಯುತ್ ಯೋಜನೆಗಳು ಅಭಿವೃದ್ಧಿ ಹಂತದಲ್ಲಿವೆ.
- ಕಿಶ್ತವಾಡಕ್ಕೆ ಸಂಬಂಧಿಸಿದ 2024–25ರ ಸಾಲಿನ ಜಿಎಲ್‌ಒಎಫ್ ನಿರ್ವಹಣೆ ವರದಿಯು ಚಿನಾಬ್ ಕಣಿವೆಯಲ್ಲಿನ ಯೋಜನೆಗಳಿಗೆ ಎಚ್ಚರಿಕೆಯ ಗಂಟೆಯಾಗಿ ಪರಿಣಮಿಸಿದೆ. ಚಿನಾಬ್ ವ್ಯಾಲಿ ಪವರ್ ಪ್ರಾಜೆಕ್ಟ್ಸ್ ಪ್ರೈವೆಟ್ ಲಿಮಿಟೆಡ್‌ನ ನಾಲ್ಕು ಯೋಜನೆಗಳಾದ ಪಾಕಲ್ ದೂಲ್, ಕಿರೂ, ಕ್ವಾರ್ ಮತ್ತು ಡಾಂಗ್‌ಡುರು– ಅಪಾಯಕ್ಕೆ ಒಳಗಾಗುವ ಹೆಚ್ಚಿನ ಸಾಧ್ಯತೆಯಿದೆ ಎಂದು ಗುರುತಿಸಲಾಗಿದೆ.
- ‘ನೀರಿನ ಮಟ್ಟ ಏರಿದರೆ ಅಥವಾ ಅಣೆಕಟ್ಟೆಯಲ್ಲಿ ಬಿರುಕು ಉಂಟಾಗುವ ಸಾಧ್ಯತೆ ಹೆಚ್ಚಾದರೆ ಜಲವಿದ್ಯುತ್ ಯೋಜನೆಯ ಮೂಲಸೌಕರ್ಯಕ್ಕೆ ಅಪಾಯವಾಗುವುದರ ಜೊತೆಗೆ ಅವುಗಳ ಕಾರ್ಯನಿರ್ವಹಣೆಗೆ ಅಡ್ಡಿಯಾಗ ಬಹುದು’ ಎಂದು ವರದಿ ಹೇಳುತ್ತದೆ.
- ಪ್ಯಾಡರ್, ಮಚ್ಚೈಲ್, ದಚ್ಚನ್, ಮರ್ವಾ ಮತ್ತು ವಾರ್ವಾನ್ ಪ್ರದೇಶಗಳು ಹೆಚ್ಚಿನ ಅಪಾಯದಲ್ಲಿವೆ ಎಂದು ವರದಿ ತಿಳಿಸಿದೆ. ಈ ಪ್ರದೇಶಗಳ ಸನಿಹದಲ್ಲಿರುವ ನೀರ್ಗಲ್ಲು ಸರೋವರಗಳು ಜನವಾಸ ಪ್ರದೇಶ ಮತ್ತು ಜಲವಿದ್ಯುತ್ ಯೋಜನೆಗಳು ಇರುವ ತಾಣಗಳಿಗಿಂತ ಎತ್ತರದಲ್ಲಿರುವುದೇ ಇದಕ್ಕೆ ಕಾರಣ.
- ಪಾಕಲ್ ದೂಲ್, ಕಿರೂ, ಕ್ವಾರ್ ಯೋಜನೆಗಳಿಗೆ ಬಿಡುಗಡೆ ಮಾಡಿರುವ ಮೊತ್ತ ಈಗಾಗಲೇ ₹22,535 ಕೋಟಿ ದಾಟಿದೆ. ಹಠಾತ್ ಪ್ರವಾಹದಿಂದ ಪ್ರಾಣಹಾನಿಯ ಜತೆಗೆ ಭಾರಿ ಆರ್ಥಿಕ ನಷ್ಟಕ್ಕೂ ಕಾರಣವಾಗಬಹುದು.

ಹಲವು ವಿಪತ್ತುಗಳಿಗೆ ಸಾಕ್ಷಿ

- ಈಚೆಗಿನ ವರ್ಷಗಳಲ್ಲಿ ಹಿಮಾಲಯವು ‘ಜಿಎಲ್‌ಒಎಫ್’ಗೆ ಸಂಬಂಧಿತ ಹಲವು ವಿಪತ್ತುಗಳಿಗೆ ಸಾಕ್ಷಿಯಾಗಿದೆ. 2021ರ ಫೆಬ್ರುವರಿಯಲ್ಲಿ ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿ ಹಿಮನದಿ ಸ್ಫೋಟದಿಂದ ಉಂಟಾದ ಹಠಾತ್ ಪ್ರವಾಹದಿಂದ 200ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದರು. ಎರಡು ಜಲವಿದ್ಯುತ್ ಯೋಜನೆಗಳು ನಾಶವಾಗಿದ್ದವು.
- ಈ ದುರಂತವು ಪರಿಸರ ಸೂಕ್ಷ್ಮ ವಲಯಗಳಲ್ಲಿ ಜಲವಿದ್ಯುತ್ ಯೋಜನೆಗಳನ್ನು ಆರಂಭಿಸುವುದಕ್ಕೆ ಸಂಬಂಧಿಸಿದಂತೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿತ್ತು.

Dr. Rajkumar IAS/KAS Academy

## ❖ ಜಿಎಸ್‌ಟಿ ಸರಳ: ಲಾಭ ಹೆಚ್ಚಳ

**ಸಂದರ್ಭ:** ಪ್ರಸ್ತಾವಿತ ಜಿಎಸ್‌ಟಿ ಸರಳೀಕರಣದಿಂದ ಪ್ರಸಕ್ತ ಆರ್ಥಿಕ ವರ್ಷದಲ್ಲಿ ರಾಜ್ಯಗಳಿಗೆ ಅಂದಾಜು ₹14 ಲಕ್ಷ ಕೋಟಿಗೂ ಹೆಚ್ಚು ವರಮಾನ ದೊರೆ ಯುವ ನಿರೀಕ್ಷೆ ಇದೆ ಎಂದು ಎಸ್‌ಬಿಐ ಸಂಶೋಧನಾ ವರದಿ ತಿಳಿಸಿದೆ.

- 2018 ಮತ್ತು 2019ರಲ್ಲಿ ನಡೆದ ಜಿಎಸ್‌ಟಿ ಸರಳೀಕರಣದಲ್ಲಿ ಕಂಡು ಬಂದಂತೆ, ಮಾಸಿಕ ಸಂಗ್ರಹದಲ್ಲಿ ಅಲ್ಪಾವಧಿವರೆಗೆ ಶೇ 3ರಿಂದ ಶೇ 4ರಷ್ಟು ಕಡಿಮೆಯಾಗಬಹುದು. ಇದು ಮಾಸಿಕವಾಗಿ ₹5 ಸಾವಿರ ಕೋಟಿ ಯಷ್ಟಾಗಿರಲಿದೆ. ಆದರೆ, ವರಮಾನವು ಶೇ 5ರಿಂದ ಶೇ 6ರಷ್ಟು ನಿರಂತರವಾಗಿ ಹೆಚ್ಚಳವಾಗಲಿದೆ ಎಂದು ತಿಳಿಸಿದೆ.
- ರಾಜ್ಯ ಸರ್ಕಾರಗಳು ₹10 ಲಕ್ಷ ಕೋಟಿ ಎಸ್‌ಜಿಎಸ್‌ಟಿಯಾಗಿ ಪಡೆದರೆ, ಕೇಂದ್ರದ ತೆರಿಗೆ ಪಾಲಿನ ಮೂಲಕ ₹4.10 ಲಕ್ಷ ಕೋಟಿ ಪಡೆಯಲಿದೆ. ಒಟ್ಟು ₹14.10 ಲಕ್ಷ ಕೋಟಿ ಜಿಎಸ್‌ಟಿ ವರಮಾನ ಸಂಗ್ರಹವಾಗಬಹುದು ಎಂದು ತಿಳಿಸಿದೆ.
- ಕೇಂದ್ರ ಸರ್ಕಾರ ಪ್ರಸ್ತುತ ಇರುವ ನಾಲ್ಕು ಹಂತದ ಜಿಎಸ್‌ಟಿಯನ್ನು (ಶೇ 5, ಶೇ 12, ಶೇ 18 ಮತ್ತು ಶೇ 28) ಎರಡು ಹಂತಕ್ಕೆ (ಶೇ 5 ಮತ್ತು ಶೇ 18) ಇಳಿಸಲು ನಿರ್ಧರಿಸಿದೆ. ಕೆಲ ಉತ್ಪನ್ನಗಳ ಮೇಲೆ ಮಾತ್ರ ಶೇ 40ರಷ್ಟು ತೆರಿಗೆ ಹೇರಲು ಪ್ರಸ್ತಾಪಿಸಿದೆ.
- ಇತ್ತೀಚೆಗೆ ವಿರೋಧ ಪಕ್ಷಗಳ ಆಡಳಿತವಿರುವ 8 ರಾಜ್ಯಗಳು ಜಿಎಸ್‌ಟಿ ಸರಳೀಕರಣದಿಂದ ₹2 ಲಕ್ಷ ಕೋಟಿವರೆಗೆ ವರಮಾನ ನಷ್ಟವಾಗಲಿದೆ ಎಂದು ಹೇಳಿದ್ದು, ನಷ್ಟವನ್ನು ತುಂಬಿ ಕೊಡಬೇಕು ಎಂದು ಒತ್ತಾಯಿಸಿವೆ.
- ಆಗಸ್ಟ್ 19ರಂದು ಎಸ್‌ಬಿಐ ಸಂಶೋಧನಾ ವರದಿಯು ₹85 ಸಾವಿರ ಕೋಟಿ ವರಮಾನ ನಷ್ಟವಾಗಬಹುದು ಎಂದು ಹೇಳಿತ್ತು. ಆದರೆ ಮಂಗಳವಾರ ಬಿಡುಗಡೆ ಮಾಡಿರುವ ವರದಿಯಲ್ಲಿ, ಜಿಎಸ್ ಟಿ ಸರಳೀಕರಣದ ನಂತರ ಜಿಎಸ್‌ಟಿ ವರಮಾನ ಸಂಗ್ರಹದಲ್ಲಿ ಯಾವುದೇ ಇಳಿಕೆ ಆಗುವುದಿಲ್ಲ. ರಾಜ್ಯಗಳು ಜಿಎಸ್‌ಟಿ ಸಂಗ್ರಹದಿಂದ ಹೆಚ್ಚಿನ ಲಾಭ ಗಳಿಸುತ್ತವೆ ಎಂದು ಹೇಳಿದೆ.
- ಕೇಂದ್ರ ಮತ್ತು ರಾಜ್ಯಗಳ ನಡುವೆ ಜಿಎಸ್‌ಟಿ ಸಮವಾಗಿ ಹಂಚಿಕೆಯಾಗ ಲಿದ್ದು, ತಲಾ ಶೇ 50ರಷ್ಟು ಪಡೆಯಲಿವೆ. ಅಲ್ಲದೆ, ತೆರಿಗೆ ಹಂಚಿಕೆಯ ಅಡಿಯಲ್ಲಿ ಕೇಂದ್ರ ಸರ್ಕಾರವು ತನ್ನ ಪಾಲಿನ ಶೇ 41ರಷ್ಟನ್ನು ರಾಜ್ಯಗಳಿಗೆ ನೀಡಬೇ ಕಾಗುತ್ತದೆ. ಹೀಗಾಗಿ, ರಾಜ್ಯಗಳಿಗೆ ಒಟ್ಟು ಪಾಲು ಶೇ 70ರಷ್ಟಾಗಲಿದೆ ಎಂದು ತಿಳಿಸಿದೆ.

ಇ.ವಿ ಕಾರು ಆಮದಿಗೆ ತೆರಿಗೆ ಹೆಚ್ಚಿಸಿ

- ಐಷಾರಾಮಿ ಬೆಲೆಯ ವಿದ್ಯುತ್‌ಚಾಲಿತ ವಾಹನಗಳ (ಇ.ವಿ) ಮೇಲಿನ ತೆರಿಗೆ ಹೆಚ್ಚಿಸುವಂತೆ ತೆರಿಗೆ ಸಮಿತಿ ಪ್ರಸ್ತಾಪಿಸಿದೆ.
- ಇದು ಟೆಸ್ಲಾ, ಮರ್ಸಿಡಿಸ್ ಬೆಂಜ್, ಬಿಎಂಡಬ್ಲ್ಯು, ಬಿವೈಡಿಯಂತಹ ಕಾರು ತಯಾರಕ ಕಂಪನಿಗಳ ಮಾರಾಟದ ಮೇಲೆ ಪರಿಣಾಮ ಬೀರಬಹುದು ಎನ್ನಲಾಗಿದೆ.
- ಪ್ರಸ್ತುತ ಎಲ್ಲ ವಿದ್ಯುತ್‌ಚಾಲಿತ ವಾಹನಗಳಿಗೆ ಶೇ 5ರಷ್ಟು ಜಿಎಸ್‌ಟಿ ವಿಧಿಸಲಾಗುತ್ತಿದೆ. ಈ ಜಿಎಸ್ ಟಿಯನ್ನು ₹20 ಲಕ್ಷದಿಂದ ₹40 ಲಕ್ಷದವರೆಗಿನ ಬೆಲೆಯ ವಾಹನಗಳಿಗೆ ಶೇ 18ಕ್ಕೆ ಹೆಚ್ಚಿಸುವಂತೆ ಸಮಿತಿ ಶಿಫಾರಸು ಮಾಡಿದೆ. ಅಲ್ಲದೆ, ₹40 ಲಕ್ಷಕ್ಕಿಂತ ಮೇಲಿರುವ ವಾಹನಗಳಿಗೆ ಶೇ 28ರಷ್ಟು ಜಿಎಸ್‌ಟಿ ವಿಧಿಸುವಂತೆಯೂ ಪ್ರಸ್ತಾಪಿಸಿದೆ.
- ಆದರೆ, ಕೇಂದ್ರ ಸರ್ಕಾರವು, ಶೇ 28ರಷ್ಟು ತೆರಿಗೆ ದರವನ್ನು ತೆಗೆದು ಹಾಕಲು ನಿರ್ಧರಿಸಿದೆ. ಹೀಗಾಗಿ, ಜಿಎಸ್ ಟಿ ಮಂಡಳಿ ಇ.ವಿಗಳ ಮೇಲಿನ ತೆರಿಗೆಯನ್ನು ಶೇ 18ಕ್ಕೆ ಹೆಚ್ಚಿಸುವ ಅಥವಾ ಕೆಲವು ಐಷಾರಾಮಿ ಸರಕುಗಳಿಗಾಗಿ ಹೊಸದಾಗಿ ಯೋಜಿಸಿರುವ ಶೇ 40ರ ವರ್ಗಕ್ಕೆ ಸೇರಿಸುವ ಆಯ್ಕೆ ಹೊಂದಿದೆ ಎಂದು ಸರ್ಕಾರದ ಮೂಲಗಳು ತಿಳಿಸಿವೆ.

Dr. Rajkumar IAS/KAS Academy

- ಜುಲೈ ತಿಂಗಳಿನಲ್ಲಿ ಟಾಟಾ ಮೋಟರ್ಸ್ ದೇಶದ ವಿದ್ಯುತ್‌ಚಾಲಿತ ಕಾರುಗಳ ಮಾರುಕಟ್ಟೆಯಲ್ಲಿ ಶೇ 40ರಷ್ಟು ಪಾಲನ್ನು ಹೊಂದಿತ್ತು. ಮಹೀಂದ್ರ ಆ್ಯಂಡ್ ಮಹೀಂದ್ರ (ಶೇ 18), ಬಿವೈಡಿ (ಶೇ 3) ಮರ್ಸಿಡಿಸ್ ಬೆಂಜ್ ಮತ್ತು ಬಿಎಂಡಬ್ಲ್ಯು ತಲಾ ಶೇ 2ರಷ್ಟು ಪಾಲು ಹೊಂದಿವೆ. ಟೆಸ್ಲಾ, ವಾಹನಗಳ ಬುಕಿಂಗ್ ಮಾತ್ರ ಪ್ರಾರಂಭಿಸಿದೆ, ವಿತರಣೆ ಇನ್ನು ಆರಂಭಿಸಿಲ್ಲ.

## ❖ 600 ಕಾರುಗಳಿಗೆ ಟೆಸ್ಲಾ ಕಾರ್ಯಾದೇಶ

**ಸಂದರ್ಭ:**ಜುಲೈನಿಂದ ಈ ವರೆಗೆ 600ಕ್ಕೂ ಹೆಚ್ಚು ವಿದ್ಯುತ್‌ಚಾಲಿತ ಕಾರುಗಳಿಗೆ ಟೆಸ್ಲಾ ಕಂಪನಿ ಕಾರ್ಯಾದೇಶ ಪಡೆದುಕೊಂಡಿದೆ ಎಂದು ಬ್ಲೂಮ್‌ಬರ್ಗ್ ನ್ಯೂಸ್ ವರದಿ ಉಲ್ಲೇಖಿಸಿ ರಾಯಿಟರ್ಸ್ ವರದಿ ಮಾಡಿದೆ.

- ಆದರೆ, ಕಂಪನಿ ನಿರೀಕ್ಷಿಸಿದಕ್ಕಿಂತಲೂ ಇದು ಕಡಿಮೆ ಎಂದು ಹೇಳಿದೆ. ಜುಲೈ ಮಧ್ಯಭಾಗದಲ್ಲಿ ಉದ್ಯಮಿ ಇಲಾನ್ ಮಸ್ಕ್ ಒಡೆತನದ ಟೆಸ್ಲಾ ಕಂಪನಿ ಭಾರತದ ಮಾರುಕಟ್ಟೆಯನ್ನು ಪ್ರವೇಶಿಸಿತ್ತು.
- ಪ್ರಸಕ್ತ ವರ್ಷದಲ್ಲಿ 350ರಿಂದ 500 ಕಾರುಗಳನ್ನು ಭಾರತಕ್ಕೆ ರವಾನೆ ಮಾಡಲು ಟೆಸ್ಲಾ ಯೋಜಿಸಿದೆ. ಅದರಲ್ಲಿ ಮೊದಲ ಬ್ಯಾಚ್ ಸೆಪ್ಟೆಂಬರ್ ಆರಂಭದಲ್ಲಿ ಶಾಂಘೈನಿಂದ ಬರಲಿವೆ. ಮುಂಬೈ, ದೆಹಲಿ, ಪುಣೆ ಮತ್ತು ಗುರುಗ್ರಾಮದಲ್ಲಿ ಆರಂಭಿಕವಾಗಿ ವಾಹನಗಳನ್ನು ವಿತರಿಸಲಿದೆ ಎಂದು ಹೇಳಿದೆ.
- ಜುಲೈನಲ್ಲಿ ಭಾರತದಲ್ಲಿ ಬಿಡುಗಡೆಯಾದ ಟೆಸ್ಲಾದ 'ಮಾಡೆಲ್ ವೈ' ಕಾರಿನ ಬೆಲೆ ₹61.67 ಲಕ್ಷವಾಗಿದೆ.

## ❖ 'ನವೆಂಬರ್ ಹೊತ್ತಿಗೆ ಮಾತುಕತೆ ಫಲಪ್ರದ ನಿರೀಕ್ಷೆ'

**ಸಂದರ್ಭ:** ದ್ವಿಪಕ್ಷೀಯ ವ್ಯಾಪಾರ ಒಪ್ಪಂದಕ್ಕೆ (ಬಿಟಿಎ) ಸಂಬಂಧಿಸಿದಂತೆ ಭಾರತವು ಅಮೆರಿಕದೊಂದಿಗೆ ಮಾತುಕತೆ ನಡೆಸಲಿದ್ದು, ನವೆಂಬರ್ ಹೊತ್ತಿಗೆ ಫಲಪ್ರದ ವಾಗುವ ನಿರೀಕ್ಷೆ ಇದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪೀಯೂಷ್ ಗೋಯಲ್ ಇಲ್ಲಿ ತಿಳಿಸಿದರು.

- 'ನಮ್ಮ ನಡುವೆ ಬಹಳಷ್ಟು ಮಾತುಕತೆ ನಡೆದಿದೆ. ಇನ್ನಷ್ಟು ಚರ್ಚೆ ನಡೆಯುತ್ತದೆನ್ನುವುದೂ ನಿಜ. ಆದರೂ ಅಮೆರಿಕದೊಂದಿಗೆ ಸಾಗುವ ಪ್ರಯತ್ನವನ್ನು ಮುಂದುವರಿಸಿ ದ್ದೇವೆ. ಈ ಕಾರಣಕ್ಕೇ ಬಿಟಿಎ ಕುರಿತ ಮಾತುಕತೆ ನಡೆಯಲಿದೆ' ಎಂದು ಸುಸ್ಥಿರತೆಯ ಕುರಿತಂತೆ 'ಇಂಡಸ್ಟ್ರಿ ಚೇಂಬರ್' ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹೇಳಿದರು.
- ಭಾರತವೇ ಹತ್ತಿರ: 'ಚೀನಾ, ರಷ್ಯಾಕ್ಕಿಂತಲೂ ಭಾರತವೇ ನಮಗೆ ಹತ್ತಿರವಾಗಿದೆ' ಎಂದಿರುವ ಅಮೆರಿಕದ ಹಣಕಾಸು ಇಲಾಖೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್, 'ಉಭಯ ದೇಶಗಳು ತಮ್ಮ ನಡುವಿನ ಬಿಕ್ಕಟ್ಟನ್ನು ಬಗೆಹರಿಸಿಕೊಳ್ಳಲಿವೆ' ಎಂದು 'ಫಾಕ್ಸ್ ನ್ಯೂಸ್'ಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.
- ಮಾರ್ಚ್ ತಿಂಗಳಿನಿಂದಲೂ ಉಭಯ ರಾಷ್ಟ್ರಗಳ ನಡುವೆ ಮುಕ್ತ ವ್ಯಾಪಾರ ಒಪ್ಪಂದದ ಮಾತುಕತೆ ನಡೆದಿದೆ. ಇದುವರೆಗೂ ಐದು ಸುತ್ತಿನ ಮಾತುಕತೆ ಪೂರ್ಣಗೊಂಡಿದೆ. ಅಮೆರಿಕವು ಶೇ 50ರಷ್ಟು ಸುಂಕವನ್ನು ವಿಧಿಸಿದ ನಂತರ ಆ. 25ರಿಂದ ನಿಗದಿಯಾಗಿದ್ದ ಮಾತುಕತೆಯನ್ನು ಮುಂದೂಡಲಾಗಿತ್ತು. ಇನ್ನೂ ಆರನೇ ಸುತ್ತಿನ ಮಾತುಕತೆಗೆ ಹೊಸ ದಿನಾಂಕ ನಿಗದಿಪಡಿಸಿಲ್ಲ.
- 8ರಂದು ಮಾತುಕತೆ: 'ಭಾರತ– ಐರೋಪ್ಯ ಒಕ್ಕೂಟದ ನಡುವೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಂಬಂಧಿಸಿದಂತೆ 13ನೇ ಸುತ್ತಿನ ಮಾತುಕತೆಯು ಸೆ. 8ರಿಂದ ನಡೆಯಲಿದ್ದು, ವಾಣಿಜ್ಯ ಸಚಿವಾಲಯದ ಕಾರ್ಯದರ್ಶಿ ಸುನಿಲ್ ಬತ್ರ್ವಾಲ್ ಇದಕ್ಕಾಗಿಯೇ ಬ್ರಸೆಲ್ಸ್‌ನಲ್ಲಿದ್ದಾರೆ' ಎಂದು ಪೀಯೂಷ್ ತಿಳಿಸಿದರು.
- 'ಮಾತುಕತೆಗೆ ಸಂಬಂಧಿಸಿದಂತೆ ನಾವು ಸಕ್ರಿಯರಾಗಿದ್ದೇವೆ. ಮಹತ್ವದ ಪ್ರಗತಿ ಸಾಧಿಸುತ್ತಿದ್ದೇವೆ' ಎಂದಿದ್ದಾರೆ.

Dr. Rajkumar IAS Academy

## ❖ 'ಭಾರತ– ಚೀನಾ ಸಂಬಂಧ ಸಹಜ ಸ್ಥಿತಿಗೆ'

**ಸಂದರ್ಭ:** 'ಭಾರತ– ಚೀನಾ ನಡುವಿನ ಗಡಿ ಸಮಸ್ಯೆಯು ಪರಿಹಾರಗೊಳ್ಳಲು ಆರಂಭವಾಗುತ್ತಿದ್ದಂತೆ, ಉಭಯ ದೇಶಗಳ ನಡುವಿನ ಉದ್ವಿಗ್ನತೆಯು ಶಮನಗೊಳ್ಳುತ್ತಿದೆ. ಸಂಬಂಧವೂ ಸಹಜ ಸ್ಥಿತಿಯತ್ತ ಸಾಗುತ್ತಿದೆ ' ಎಂದು ಕೇಂದ್ರ ಸಚಿವ ಪೀಯೂಷ್ ತಿಳಿಸಿದರು.

- 'ಗಾಲ್ವನ್‌ನಲ್ಲಿ ನಮಗೆ ಸಮಸ್ಯೆಯಿತ್ತು. ಇದರಿಂದಾಗಿಯೇ ಚೀನಾದೊಟ್ಟಿಗಿನ ಸಂಬಂಧ ಹದಗೆಟ್ಟಿತ್ತು. ಗಡಿಯ ವಿವಾದ ತಣ್ಣಗಾಗುತ್ತಿದ್ದಂತೆ ಅಲ್ಲಿನ ಪರಿಸ್ಥಿತಿಯು ಸಾಮಾನ್ಯ ಸ್ಥಿತಿಗೆ ಮರಳುವುದು ಸಹಜ' ಎಂದು ಸುದ್ದಿಗಾರರಿಗೆ ಪ್ರತಿಕ್ರಿಯಿಸಿದರು.

## ❖ 'ನ್ಯಾಯಾಂಗ ನಿಂದನೆ ಆಗುವುದೇ': ರಾಜ್ಯಪಾಲರ ವಿಳಂಬ ಧೋರಣೆ; ಸುಪ್ರೀಂ ಕೋರ್ಟ್ ಪ್ರಶ್ನೆ

**ಸಂದರ್ಭ:** ತಮಿಳುನಾಡಿಗೆ ಸಂಬಂಧಿಸಿದ ಪ್ರಕರಣದಲ್ಲಿ ಏಪ್ರಿಲ್ 8ರಂದು ನೀಡಿರುವ ತೀರ್ಪಿನಂತೆ ರಾಷ್ಟ್ರಪತಿ ಅಥವಾ ರಾಜ್ಯಪಾಲರು ಮಸೂದೆಗಳಿಗೆ ಅಂಕಿತ ಹಾಕಲು ನಿಗದಿಪಡಿಸಿದ ಗಡುವು ಪಾಲಿಸದಿದ್ದರೆ ಅದರಿಂದ ಆಗುವ ಪರಿಣಾಮಗಳೇನು ಎಂದು ಸುಪ್ರೀಂ ಕೋರ್ಟ್.

- ಎಲ್ಲಾ ಮಸೂದೆಗಳಿಗೆ ಅಂಕಿತ ಹಾಕುವುದಕ್ಕೆ ಸಂಬಂಧಿಸಿದಂತೆ ಕಾಲಮಿತಿ ನಿಗದಿಪಡಿಸಲು ನ್ಯಾಯಾಲಯಕ್ಕೆ ಇರುವ ಅಧಿಕಾರದ ಬಗ್ಗೆಯೂ ಸುಪ್ರೀಂ ಕೋರ್ಟ್ ಪೀಠ ಅನುಮಾನ ವ್ಯಕ್ತಪಡಿಸಿದೆ.
- ಯಾವ ರಾಜಕೀಯ ಪಕ್ಷ ಅಧಿಕಾರ ದಲ್ಲಿದೆ ಅಥವಾ ಅಧಿಕಾರದಲ್ಲಿತ್ತು ಎಂಬುದರ ಆಧಾರದ ಮೇಲೆ ಈ ವಿಷಯವನ್ನು ನಿರ್ಧರಿಸುವುದಿಲ್ಲ ಎಂಬುದನ್ನೂ ಪೀಠವು ಸ್ಪಷ್ಟಪಡಿಸಿದೆ.
- ರಾಜ್ಯ ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳಿಗೆ ಅಂಕಿತ ಹಾಕಲು ಕಾಲಮಿತಿ ನಿಗದಿಪಡಿಸಬಹುದೇ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಉಲ್ಲೇಖಿಸಿರುವ ಸಾಂವಿಧಾನಿಕ ಪ್ರಶ್ನೆಗಳ ಕುರಿತ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸುತ್ತಿದೆ.
- ಆರನೇ ದಿನದ ವಿಚಾರಣೆ ವೇಳೆ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಐವರು ನ್ಯಾಯಮೂರ್ತಿಗಳ ಪೀಠವು, 'ಮಸೂದೆಗಳಿಗೆ ನಿಗದಿತ ಸಮಯದೊಳಗೆ ಅಂಕಿತ ಹಾಕದಿದ್ದರೆ, ರಾಷ್ಟ್ರಪತಿ ಅಥವಾ ರಾಜ್ಯಪಾಲರನ್ನು ನ್ಯಾಯಾಂಗ ನಿಂದನೆಗಾಗಿ ವಿಚಾರಣೆಗೆ ಒಳಪಡಿಸಬಹುದೇ' ಎಂದು ಕೇಳಿತು.
- 'ಅಂಕಿತ ಹಾಕಲು ವಿಳಂಬ ಮಾಡಿದರೆ, ಸಂಬಂಧಪಟ್ಟವರು ಸಮಸ್ಯೆಗೆ ಪರಿಹಾರ ಕೋರಿ ನ್ಯಾಯಾಲಯದ ಮೊರೆಹೋಗಬಹುದು. ಆಗ ನ್ಯಾಯಾಲಯವು ಸಮಯದ ಮಿತಿಯೊಳಗೆ ನಿರ್ಧಾರ ತೆಗೆದು ಕೊಳ್ಳಬೇಕೆಂದು ನಿರ್ದೇಶಿಸಬಹುದು. ರಾಜ್ಯಪಾಲರು ಮತ್ತು ರಾಷ್ಟ್ರಪತಿ ಯವರಿಗೆ ನ್ಯಾಯಾಲಯವು ಸಾಮಾನ್ಯ ಕಾಲಮಿತಿ ನಿಗದಿಪಡಿಸಬೇಕು ಎಂದು ಇದರ ಅರ್ಥವಲ್ಲ.' ಎಂದಿದೆ.
- ತಮಿಳುನಾಡು ಸರ್ಕಾರದ ಪರ ಹಾಜರಿದ್ದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ, 'ರಾಜ್ಯಪಾಲರು ಮಸೂದೆಗಳನ್ನು ಅನಿರ್ದಿಷ್ಟ ಅವಧಿಯವರೆಗೆ ತಡೆಹಿಡಿದ ಪುನರಾವರ್ತಿತ ಪ್ರಕರಣಗಳನ್ನು ಗಮನದಲ್ಲಿಟ್ಟುಕೊಂಡು ಕಾಲಮಿತಿ ನಿಗದಿಪಡಿಸುವುದು ಅಗತ್ಯ' ಎಂದು ವಾದಿಸಿದರು.

Dr. Rajkumar IAS/KAS Academy

‘ಸಂವಿಧಾನದ ಅಂಶಗಳ ವ್ಯಾಖ್ಯಾನ’

- ರಾಜ್ಯ ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳಿಗೆ ಅಂಕಿತ ಹಾಕಲು ರಾಜ್ಯಪಾಲರು ಮತ್ತು ರಾಷ್ಟ್ರಪತಿಯವರಿಗೆ ನ್ಯಾಯಾಲಯವು ಸಮಯ ಮಿತಿ ನಿಗದಿಪಡಿಸಬಹುದೇ ಎಂಬ ರಾಷ್ಟ್ರಪತಿಯವರ ಉಲ್ಲೇಖವನ್ನು ಪರಿಗಣಿಸುವಾಗ ಸಂವಿಧಾನ ಏನು ಹೇಳಿದೆಯೋ ಅದನ್ನು ಮಾತ್ರ ವ್ಯಾಖ್ಯಾನಿಸುತ್ತೇವೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.
- ‘ಆಂಧ್ರಪ್ರದೇಶ, ತೆಲಂಗಾಣ ಅಥವಾ ಕರ್ನಾಟಕಕ್ಕೆ ಸಂಬಂಧಿಸಿದ ಪ್ರತ್ಯೇಕ ಪ್ರಕರಣಗಳನ್ನು ನಾವು ಪರಿಗಣಿಸುವುದಿಲ್ಲ. ಸಂವಿಧಾನದಲ್ಲಿರುವ ವಿಚಾರಗಳನ್ನು ಮಾತ್ರ ವ್ಯಾಖ್ಯಾನಿಸುತ್ತೇವೆ. ಅದರ ಹೊರತಾದುದು ಏನೂ ಇಲ್ಲ’ ಎಂದು ಸಿಜೆಐ ಹೇಳಿದರು.

IAS/KAS Academy



## ❖ ಜಿಎಸ್‌ಟಿ ಕಡಿತ: ದಸರಾ ಉಡುಗೊರೆ

**ಸಂದರ್ಭ:** ಹೇರ್ ಆಯಿಲ್‌ನಿಂದ ಸೇರಿದಂತೆ ಕಾರ್ನ್‌ಫ್ಲೇಕ್ಸ್, ಟಿವಿ ಸೆಟ್‌ಗಳಿಂದ ಹಿಡಿದು ಆರೋಗ್ಯ ಮತ್ತು ಜೀವ ವಿಮೆ ಪಾಲಿಸಿ ವರೆಗಿನ ಸಾಮಾನ್ಯ ಜನರು ಬಳಸುವ ವಸ್ತುಗಳ ಮೇಲಿನ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ದರಗಳನ್ನು ಪರಿಷ್ಕರಿಸುವ ಮಹತ್ವದ ನಿರ್ಧಾರವನ್ನು ಜಿಎಸ್‌ಟಿ ಮಂಡಳಿ ತೆಗೆದುಕೊಂಡಿದೆ.

- ಅವಧಿ ವಿಮೆ, ಯುಲಿಪ್ ಅಥವಾ ಎಂಡೋಮೆಂಟ್ ಪಾಲಿಸಿ ಸೇರಿ ವೈಯಕ್ತಿಕ ಜೀವ ವಿಮೆ ಮತ್ತು ಆರೋಗ್ಯ ವಿಮೆ ಪಾಲಿಸಿಗಳ ಪ್ರೀಮಿಯಮ್‌ಗೆ ಜಿಎಸ್‌ಟಿಯಿಂದ ಸಂಪೂರ್ಣ ವಿನಾಯಿತಿ ನೀಡಲಾಗಿದೆ. ಹೆಚ್ಚು ಜನರಿಗೆ ವಿಮಾ ಸೌಲಭ್ಯ ತಲುಪಲಿ ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ.
- ಫ್ಯಾಮಿಲಿ ಫ್ಲೋಟರ್ ಪಾಲಿಸಿಗಳು, ಹಿರಿಯ ನಾಗರಿಕರ ಆರೋಗ್ಯ ವಿಮೆ ಪಾಲಿಸಿಗಳ ಪ್ರೀಮಿಯಂಗಳಿಗೆ ಜಿಎಸ್‌ಟಿಯಿಂದ ವಿನಾಯಿತಿ ನೀಡಲಾಗಿದೆ. **2017ರಲ್ಲಿ ಈ ತೆರಿಗೆ ವ್ಯವಸ್ಥೆ ಜಾರಿಗೆ ಬಂದಾಗಿನಿಂದ ಈ ವಿಮಾ ಉತ್ಪನ್ನಗಳ ಪ್ರೀಮಿಯಂ ಮೇಲೆ ಶೇ 18ರಷ್ಟು ಜಿಎಸ್‌ಟಿ ವಿಧಿಸಲಾಗುತ್ತಿತ್ತು.**
- ಜಿಎಸ್‌ಟಿ ವ್ಯವಸ್ಥೆಯ ಅಡಿಯಲ್ಲಿ ಈಗ ಇರುವ ನಾಲ್ಕು ತೆರಿಗೆ ಹಂತಗಳನ್ನು ಎರಡು ಹಂತಗಳಿಗೆ ತಗ್ಗಿಸುವ ಪ್ರಸ್ತಾವಕ್ಕೆ ಮಂಡಳಿಯು ಒಪ್ಪಿಗೆ ನೀಡಿದೆ.
- **ಈ ಎರಡು ತೆರಿಗೆ ಹಂತಗಳ (ಶೇ 5 ಮತ್ತು ಶೇ 18) ಹೊಸ ವ್ಯವಸ್ಥೆಯು ನವರಾತ್ರಿಯ ಮೊದಲ ದಿನವಾದ ಸೆಪ್ಟೆಂಬರ್ 22ರಿಂದ ಜಾರಿಗೆ ಬರಲಿದೆ. ಈ ಮೂಲಕ ದೇಶದ ಜನರಿಗೆ ಕೇಂದ್ರ ಸರ್ಕಾರ ದಸರಾ ಭರ್ಜರಿ ಉಡುಗೊರೆ ನೀಡಿದೆ.**



## ಎರಡು ಹಂತದ ತೆರಿಗೆ ವ್ಯವಸ್ಥೆ


- ದಿನನಿತ್ಯದ ಬಳಕೆಯ ಆಹಾರ ಪದಾರ್ಥಗಳಿಗೆ ಜಿಎಸ್‌ಟಿ ಇಲ್ಲ.
- ಬೆಣ್ಣೆ, ತುಪ್ಪ, ಒಣಹಣ್ಣುಗಳು, ಸಾಂದ್ರೀಕರಿಸಿದ ಹಾಲು, ಸಾಸುಯೇಜ್, ಮಾಂಸ, ಸಕ್ಕರೆ ಮಿಠಾಯಿಗಳು, ಜಾಮ್, ಹಣ್ಣಿನ ಜೆಲ್ಲಿಗಳು, ಎಳನೀರು, ಕರಿದ ಪದಾರ್ಥಗಳು, 20 ಲೀ. ಬಾಟಲುಗಳಲ್ಲಿ ಸಂಗ್ರಹಿಸಿರುವ ಕುಡಿಯುವ ನೀರು, ಹಣ್ಣಿನ ತಿರುಳು ಅಥವಾ ಹಣ್ಣಿನ ರಸ, ಐಸ್‌ಕ್ರೀಂ, ಪೇಸ್ಟ್ರಿ, ಬಿಸ್ಕತ್ತುಗಳು, ಕಾರ್ನ್‌ಫ್ಲೇಕ್ಸ್‌ಗಳ ಮೇಲೆ ಈಗಿರುವ ಶೇ 18ರಷ್ಟು ಜಿಎಸ್‌ಟಿಯನ್ನು ಶೇ 5ಕ್ಕೆ ಇಳಿಸಲಾಗುತ್ತದೆ
- ಎಲ್ಲ ಬಗೆಯ ಚಪಾತಿ ಮತ್ತ ಪರಾಠಗಳಿಗೆ ಯಾವುದೇ ತೆರಿಗೆ ಇಲ್ಲ. ಈ ಮೊದಲು ಇವುಗಳ ಮೇಲೆ ಶೇ 5ರಷ್ಟು ತೆರಿಗೆ ಇತ್ತು
- ಟೂತ್‌ಪೌಡರ್, ಹಾಲುಣಿಸಲು ಬಳಸುವ ಬಾಟಲ್‌ಗಳು, ಅಡುಗೆ ಮನೆ ಸಲಕರಣೆಗಳು, ಬಂಬೂವಿನಿಂದ ತಯಾರಿಸಿದ ಫರ್ನಿಚರ್, ಹಣಿಗೆಗಳ ಮೇಲಿನ ಶೇ 12ರ ತೆರಿಗೆಯನ್ನು ಶೇ 5ಕ್ಕೆ ಇಳಿಸಲಾಗುತ್ತದೆ
- ಶಾಂಪೂ, ಟಾಲ್ಕಮ್ ಪೌಡರ್, ಟೂತ್‌ಪೇಸ್ಟ್, ಟೂತ್‌ಬ್ರಶ್, ಫೇಸ್ ಪೌಡರ್, ಸೋಪು, ಹೇರ್ ಆಯಿಲ್ ಮೇಲೆ ಶೇ 18ರ ಬದಲು ಶೇ 5ರಷ್ಟು ತೆರಿಗೆ ವಿಧಿಸಲಾಗುವುದು
- ಸಿಮೆಂಟ್‌ಗೆ ಈಗಿನ ಶೇ 28ರ ಬದಲು ಶೇ 18ರಷ್ಟು ತೆರಿಗೆ
- 1,200 ಸಿ.ಸಿಗಿಂತ ಕಡಿಮೆ ಸಾಮರ್ಥ್ಯದ ಹಾಗೂ 4 ಸಾವಿರ ಎಂ.ಎಂಗಿಂತ ಹೆಚ್ಚು ಉದ್ದ ಇರದ ಪೆಟ್ರೋಲ್, ಎಲ್‌ಪಿಜಿ ಹಾಗೂ ಸಿಎನ್‌ಜಿ ವಾಹನಗಳ ಮೇಲಿನ ಶೇ 28ರಷ್ಟು ತೆರಿಗೆ ಶೇ 18ಕ್ಕೆ ಇಳಿಕೆ
- 1,500 ಸಿ.ಸಿ ವರೆಗಿನ ಹಾಗೂ 4 ಸಾವಿರ ಎಂ.ಎಂ ಉದ್ದದ ಡಿಸೇಲ್ ವಾಹನಗಳಿಗೂ ಶೇ 18ರಷ್ಟು ತೆರಿಗೆ. ಸದ್ಯ ಇವುಗಳ ಮೇಲೆಯೂ ಶೇ 28ರಷ್ಟು ತೆರಿಗೆ ಇದೆ
- 1,200 ಸಿ.ಸಿ ಗಿಂತ ಹೆಚ್ಚು ಸಾಮರ್ಥ್ಯದ ಪೆಟ್ರೋಲ್ ಕಾರುಗಳು, 1,500 ಸಿ.ಸಿಗಿಂತ ಅಧಿಕ ಸಾಮರ್ಥ್ಯದ ಡಿಸೇಲ್ ಕಾರುಗಳಿಗೆ ಶೇ 40ರಷ್ಟು ತೆರಿಗೆ
- 350 ಸಿ.ಸಿ ವರೆಗಿನ ಮೋಟರ್‌ಸೈಕಲ್‌ಗಳು, ಏರ್ ಕಂಡಿಷನರ್‌ಗಳು, ಡಿಷ್ ವಾಶರ್‌ಗಳು, ಟಿ.ವಿ ಸೇರಿದಂತೆ ಗ್ರಾಹಕ ಬಳಕೆಯ ಎಲೆಕ್ಟ್ರಾನಿಕ್ಸ್ ಸರಕುಗಳ ಮೇಲಿನ ಶೇ 28ರಷ್ಟು ತೆರಿಗೆಯನ್ನು ಶೇ 18ಕ್ಕೆ ಇಳಿಸಲಾಗುವುದು ▸8

- ಮಂಡಳಿ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ವಿವರಣೆ ನೀಡಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, 'ಜಿಎಸ್‌ಟಿ ದರ ಪರಿಷ್ಕರಣೆ ಕುರಿತಂತೆ ಸರ್ವಾನುಮತದ ನಿರ್ಣಯ ಕೈಗೊಳ್ಳಲಾಗಿದೆ. ಯಾವ ರಾಜ್ಯವೂ ಭಿನ್ನಾಭಿಪ್ರಾಯ ವ್ಯಕ್ತಪಡಿಸಿಲ್ಲ' ಎಂದರು.
- 'ಪ್ರಸ್ತುತ ಶೇ 5, 12, 18 ಹಾಗೂ ಶೇ 28ರಂತೆ ತೆರಿಗೆ ಹಂತಗಳಿವೆ. ಇವುಗಳನ್ನು ಪರಿಷ್ಕರಿಸಿ, ಕೇವಲ ಶೇ 5 ಹಾಗೂ ಶೇ 18ರಂತೆ ಎರಡು ಹಂತಗಳ ಜಿಎಸ್‌ಟಿ ವ್ಯವಸ್ಥೆ ಜಾರಿಗೊಳಿಸಲಾಗುವುದು. ಹೈಎಂಡ್ ಕಾರುಗಳು, ತಂಬಾಕು ಹಾಗೂ ಸಿಗರೇಟ್‌ಗಳು ಸೇರಿ ಕೆಲ ಐಷಾರಾಮಿ ವಸ್ತುಗಳ ಮೇಲೆ ವಿಶೇಷ ಶೇ 40ರಷ್ಟು ಜಿಎಸ್‌ಟಿ ವಿಧಿಸಲು ಮಂಡಳಿ ಅನುಮೋದಿಸಿದೆ' ಎಂದು ವಿವರಿಸಿದರು.
- 'ಗುಟ್ಕಾ, ತಂಬಾಕು ಮತ್ತು ತಂಬಾಕು ಉತ್ಪನ್ನಗಳು ಹಾಗೂ ಸಿಗರೇಟ್ ಹೊರತುಪಡಿಸಿ, ಉಳಿದ ಎಲ್ಲ ವಸ್ತುಗಳ ಮೇಲಿನ ಹೊಸ ದರಗಳು ಸೆಪ್ಟೆಂಬರ್ 22ರಿಂದ ಜಾರಿಗೆ ಬರಲಿವೆ' ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.
- ಜಿಎಸ್‌ಟಿ ವ್ಯವಸ್ಥೆಯ ಸರಳೀಕರಣ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾತಂತ್ರ್ಯೋತ್ಸವ ಅಂಗವಾಗಿ ಮಾಡಿದ ಭಾಷಣದಲ್ಲಿ ಘೋಷಿಸಿದ್ದರು. ಅಲ್ಲದೇ, ಅಮೆರಿಕವು ಭಾರತದಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಶೇ 50ರಷ್ಟು ಸುಂಕ ವಿಧಿಸಿರುವ ಸಂದರ್ಭದಲ್ಲಿಯೇ ಈ ಜಿಎಸ್‌ಟಿ ವ್ಯವಸ್ಥೆಯಲ್ಲಿ ಸುಧಾರಣೆ ತಂದಿ। 1,200 ಸಿ.ಸಿಗಿಂತ ಅಧಿಕ ಸಾಮರ್ಥ್ಯದ ಹಾಗೂ 4 ಸಾವಿರ ಎಂ.ಎಂ ಉದ್ದದ ಎಲ್ಲ ಆಟೊಮೊಬೈಲ್‌ಗಳು, 350 ಸಿ.ಸಿಗಿಂತ ಹೆಚ್ಚು ಸಾಮರ್ಥ್ಯದ ಮೋಟರ್ ಸೈಕಲ್‌ಗಳು, ಯಾಚ್‌ಗಳು, ವೈಯಕ್ತಿಕ ಬಳಕೆಯ ಏರ್‌ಕ್ರಾಫ್ಟ್‌ಗಳು, ರೇಸಿಂಗ್ ಕಾರುಗಳ ಮೇಲೆ ಶೇ 40ರಷ್ಟು ತೆರಿಗೆ.

Dr. Rajkumar IAS A

- I 1,200 ಸಿ.ಸಿಗಿಂತ ಅಧಿಕ ಸಾಮರ್ಥ್ಯದ ಹಾಗೂ 4 ಸಾವಿರ ಎಂ.ಎಂ ಉದ್ದದ ಎಲ್ಲ ಆಟೊಮೊಬೈಲ್‌ಗಳು, 350 ಸಿ.ಸಿಗಿಂತ ಹೆಚ್ಚು ಸಾಮರ್ಥ್ಯದ ಮೋಟರ್ ಸೈಕಲ್‌ಗಳು, ಯಾಚ್‌ಗಳು, ವೈಯಕ್ತಿಕ ಬಳಕೆಯ ಏರ್‌ಕ್ರಾಫ್ಟ್‌ಗಳು, ರೇಸಿಂಗ್ ಕಾರುಗಳ ಮೇಲೆ ಶೇ 40ರಷ್ಟು ತೆರಿಗೆ.
- I ಎಲ್ಲ ಇ.ವಿಗಳ ಮೇಲೆ ಈಗ ಇರುವ ಶೇ 5ರಷ್ಟು ಜಿಎಸ್‌ಟಿ ಮುಂದುವರಿಕೆ.

## ❖ ಕ್ಯಾನ್ಸರ್ ತಡೆಗೆ ಗಮನ ಹರಿಸಿ ಐಸಿಎಂಆರ್ ವರದಿ



# ಕ್ಯಾನ್ಸರ್ ತಡೆಗೆ ಗಮನ ಹರಿಸಿ ಐಸಿಎಂಆರ್ ವರದಿ

ಪ್ರಜಾವಾಣಿ ವಾರ್ತೆ

**ಬೆಂಗಳೂರಿನ** ಮಹಿಳೆಯರು ದೇಶದಲ್ಲಿಯೇ ಅತಿ ಹೆಚ್ಚು ಪ್ರಮಾಣದಲ್ಲಿ ಕ್ಯಾನ್ಸರ್ ಬಾಧಿತರಾಗಿದ್ದು, ಸ್ತನ ಕ್ಯಾನ್ಸರ್ ಪ್ರಕರಣಗಳು ಅತಿ ಹೆಚ್ಚು ಇರುವ ದೇಶದ ಮೊದಲ ಮೂರು ನಗರಗಳಲ್ಲಿ ಕರ್ನಾಟಕದ ರಾಜಧಾನಿಯೂ ಒಂದಾಗಿದೆ ಎಂದು ಅಧ್ಯಯನ ವರದಿ ಹೇಳಿದೆ. ಸ್ತನ ಕ್ಯಾನ್ಸರ್ ಮಾತ್ರವಲ್ಲ, ಗರ್ಭಕಂಠ ಕ್ಯಾನ್ಸರ್ ಮತ್ತು ಬಾಯಿ ಕ್ಯಾನ್ಸರ್ ಪ್ರಕರಣಗಳಲ್ಲೂ ದೇಶದ ಮೊದಲ ಹತ್ತು ನಗರಗಳಲ್ಲಿ ಬೆಂಗಳೂರಿನ ಹೆಸರು ಇದೆ. ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯ (ಐಸಿಎಂಆರ್) ವಿಶ್ಲೇಷಣೆಯ ಪ್ರಕಾರ, ಮಹಿಳೆಯರಲ್ಲಿ ಕಂಡು ಬರುತ್ತಿರುವ ಕ್ಯಾನ್ಸರ್ ಪ್ರಕರಣಗಳಲ್ಲಿ ಮಿಜೋರಾಂ ರಾಜಧಾನಿ ಐಜ್ವಾಲ್ ಮೊದಲನೆಯದಾಗಿದ್ದರೆ, ಬೆಂಗಳೂರು ಆರನೆಯದ್ದಾಗಿದೆ. ಇದಕ್ಕೂ ಮೊದಲಿನ ಸ್ಥಾನದಲ್ಲಿ ಹೈದರಾಬಾದ್ ಇದೆ.

ಗರ್ಭಕಂಠ ಕ್ಯಾನ್ಸರ್, ಸ್ತನ ಕ್ಯಾನ್ಸರ್ ಹೆಚ್ಚಳ ಬೆಂಗಳೂರಿನ ಮಹಿಳೆಯರಿಗಷ್ಟೇ ಸೀಮಿತವಾಗಿಲ್ಲ. ಇಡೀ ದೇಶದಲ್ಲೇ ಈ ಪ್ರವೃತ್ತಿ ಕಂಡು ಬರುತ್ತಿದೆ ಎಂದು ಅಧ್ಯಯನದ ಅಂಕಿ ಅಂಶಗಳು ಹೇಳಿವೆ.

‘ಭಾರತದ 43 ಕ್ಯಾನ್ಸರ್ ನೋಂದಣಿ ಕೇಂದ್ರಗಳಲ್ಲಿ ಕ್ಯಾನ್ಸರ್ ಪ್ರಕರಣಗಳು ಮತ್ತು ಮರಣ’ ಎನ್ನುವ ಅಂತರ್ ಶಾಖಾ ಅಧ್ಯಯನ ವರದಿಯಲ್ಲಿ ಮಹಿಳಾ ಮತ್ತು ಪುರುಷ ಕ್ಯಾನ್ಸರ್ ಬಾಧಿತರ ಪ್ರಮಾಣದ ಬಗ್ಗೆ ವಿವರಿಸಲಾಗಿದೆ. ಐಸಿಎಂಆರ್‌ನ ನ್ಯಾಷನಲ್ ಕ್ಯಾನ್ಸರ್ ರಿಜಿಸ್ಟ್ರಿ ಪ್ರೋಗ್ರಾಮ್ ಇನ್‌ವೆಸ್ಟಿಗೇಟರ್ ಗ್ರೂಪ್ ದೇಶದ 43 ಜನಸಂಖ್ಯಾ ಆಧಾರಿತ ಕ್ಯಾನ್ಸರ್ ನೋಂದಣಿ ಕೇಂದ್ರಗಳ (ಪಿಬಿಸಿಆರ್) 2015 ಮತ್ತು 2019ರ ನಡುವಿನ ದತ್ತಾಂಶ ಆಧಾರದಲ್ಲಿ ಕ್ಯಾನ್ಸರ್ ಪ್ರಕರಣಗಳ ಪ್ರಮಾಣ ಮತ್ತು ಪ್ರವೃತ್ತಿಗಳನ್ನು ವಿಶ್ಲೇಷಿಸಿದೆ. ಕ್ಯಾನ್ಸರ್, ಜಾಗತಿಕ ಮಟ್ಟದ ಆರೋಗ್ಯ ಸಮಸ್ಯೆಯಾಗಿದ್ದು, ವಾರ್ಷಿಕ ಒಂದು ಕೋಟಿ ಮಂದಿ ಕ್ಯಾನ್ಸರ್‌ನಿಂದ ಸಾಯುತ್ತಿದ್ದಾರೆ. 2045ರ ಹೊತ್ತಿಗೆ ಜಗತ್ತಿನಲ್ಲಿ ಕ್ಯಾನ್ಸರ್‌ಪೀಡಿತರ ಸಂಖ್ಯೆ 3.26 ಕೋಟಿಗೆ ಏರಲಿದೆ. ಕ್ಯಾನ್ಸರ್‌ಪೀಡಿತರ ಪ್ರಮಾಣದಲ್ಲಿ ಭಾರತವು ಜಾಗತಿಕ ಮಟ್ಟದಲ್ಲಿ ಮೂರನೆಯದಾಗಿದ್ದರೆ, ಏಷ್ಯಾದಲ್ಲಿ ಎರಡನೆಯದ್ದಾಗಿದೆ. ರೋಗದ ಪ್ರಭಾವ ಅಳೆಯುವ ಮತ್ತು ಅದರ ನಿಯಂತ್ರಣಕ್ಕೆ ಪರಿಣಾಮಕಾರಿ ಕ್ರಮಗಳನ್ನು ಕಂಡುಕೊಳ್ಳುವ ದೃಷ್ಟಿಯಿಂದ ದೇಶದಲ್ಲಿ ಕ್ಯಾನ್ಸರ್‌ಗೆ ಸಂಬಂಧಿಸಿದ ಅಂಕಿಅಂಶವನ್ನು ದಾಖಲಿಸುವುದು, ಅದನ್ನು ನಿಯಮಿತವಾಗಿ ಪರಾಮರ್ಶಿಸುವುದು ಮುಖ್ಯವಾಗಿದೆ ಎಂದು ವರದಿ ಉಲ್ಲೇಖಿಸಿದೆ.

ಕ್ಯಾನ್ಸರ್ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿಯೂ ದೇಶಕ್ಕೆ ಹೊರೆಯಾಗಿದ್ದು, ಅದನ್ನು ತಪ್ಪಿಸಬಹುದಾಗಿದೆ. ಈ ಮಹಾಮಾರಿಗೆ ಕಾರಣವಾಗಬಹುದಾದ ಧೂಮಪಾನ, ಸ್ಥೂಲಕಾಯ, ಬೊಜ್ಜು ಮತ್ತು ಸೋಂಕು ಮುಂತಾದ ಆರೋಗ್ಯ ಸಮಸ್ಯೆಗಳ ಬಗ್ಗೆ ಗಮನ ಹರಿಸಿ, ಅವುಗಳ ನಿಯಂತ್ರಣಕ್ಕೆ ಒತ್ತು ನೀಡಬೇಕು. ಈ ಮೂಲಕ ಕ್ಯಾನ್ಸರ್‌ನಿಂದ ಸಂಭವಿಸುವ ಲಕ್ಷಾಂತರ ಸಾವುಗಳನ್ನು ತಡೆಯಬಹುದು ಎಂದು ವರದಿ ವಿಶ್ಲೇಷಿಸಿದೆ.

ಬೆಂಗಳೂರಿನಲ್ಲಿ ಪ್ರತಿ ಲಕ್ಷ ಮಹಿಳೆಯರಲ್ಲಿ ಸುಮಾರು 150 ಮಂದಿ ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ಲಕ್ಷ ಪುರುಷರಲ್ಲಿ 125ರಷ್ಟು ಜನ ಈ ಕಾಯಿಲೆಗೆ ತುತ್ತಾಗುತ್ತಿದ್ದಾರೆ

**1** ಕೋಟಿ ಜಾಗತಿಕವಾಗಿ ಪ್ರತಿವರ್ಷ ಕ್ಯಾನ್ಸರ್‌ನಿಂದ ಸಾಯುತ್ತಿರುವವರು

**2** ಕೋಟಿ 2022ರಲ್ಲಿ ವರದಿಯಾಗಿದ್ದ ಕ್ಯಾನ್ಸರ್ ಪ್ರಕರಣಗಳು

**3.26** ಕೋಟಿ 2045ರ ಹೊತ್ತಿಗೆ ಸಂಭವನೀಯ ಕ್ಯಾನ್ಸರ್ ಪ್ರಕರಣಗಳ ಸಂಖ್ಯೆ

**24** ಲಕ್ಷ ಆಗ್ನೇಯ ಏಷ್ಯಾದಲ್ಲಿ ಹೊಸದಾಗಿ ಕ್ಯಾನ್ಸರ್‌ನಿಂದ ಬಾಧಿತರಾದವರ ಅಂದಾಜು ಸಂಖ್ಯೆ

**15** ಲಕ್ಷ ಆಗ್ನೇಯ ಏಷ್ಯಾದಲ್ಲಿ ಕ್ಯಾನ್ಸರ್‌ನಿಂದ ಮೃತಪಟ್ಟವರ ಸಂಖ್ಯೆ

### ಸ್ತನ ಕ್ಯಾನ್ಸರ್ ಬಾಧಿತರು: ಎಲ್ಲಿ, ಎಷ್ಟು?
(ಪ್ರತಿ ಲಕ್ಷ ಜನರಿಗೆ)

| | |
|---|---|
| ಹೈದರಾಬಾದ್ | 54.0 |
| ಬೆಂಗಳೂರು | 46.7 |
| ಚೆನ್ನೈ | 45.4 |
| ಗೌತಮ ಬುದ್ಧ ನಗರ (ಉತ್ತರ ಪ್ರದೇಶ) | 44.1 |
| ಆಲಪ್ಪುಳ | 42.2 |
| ತಿರುವನಂತಪುರ | 40.7 |
| ಪತ್ತಣಂತಿಟ್ಟ | 36.7 |
| ಕೊಲ್ಲಂ | 36.3 |
| ದೆಹಲಿ | 35.6 |
| ಐಜ್ವಾಲ್ | 35.6 |

### ಬೆಂಗಳೂರಿನಲ್ಲಿ ಇತರ ಕ್ಯಾನ್ಸರ್ ಬಾಧಿತರು (ಪ್ರತಿ ಲಕ್ಷ ಜನರಿಗೆ)

| | ಮಹಿಳೆಯರು | ಪುರುಷರು |
|---|---|---|
| ಶ್ವಾಸಕೋಶ ಕ್ಯಾನ್ಸರ್ | 6.2 | 13.1 |
| ಬಾಯಿ ಕ್ಯಾನ್ಸರ್ | 7.8 | 11.6 |
| ಹೊಟ್ಟೆ ಕ್ಯಾನ್ಸರ್ | 4.9 | 8.6 |
| ಗರ್ಭಕಂಠ ಕ್ಯಾನ್ಸರ್ | 13.8 | |

### ಪ್ರಾಸ್ಟೇಟ್ ಕ್ಯಾನ್ಸರ್ ಬಾಧಿತರು
(ಪ್ರತಿ ಲಕ್ಷ ಜನರಿಗೆ)

| | |
|---|---|
| ಶ್ರೀನಗರ | 12.7 |
| ದೆಹಲಿ | 12.7 |
| ಗೌತಮ ಬುದ್ಧ ನಗರ | 11.7 |
| ತಿರುವನಂತಪುರ | 11.1 |
| ಆಲಪ್ಪುಳ | 10.8 |
| ಮುಂಬೈ | 10.5 |
| ಚಂಡೀಗಢ | 10.4 |
| ಕಾಮರೂಪ ನಗರ | 10.2 |
| ಪತ್ತಣಂತಿಟ್ಟ | 10.1 |
| ಬೆಂಗಳೂರು | 9.8 |

### ಬಾಯಿ ಕ್ಯಾನ್ಸರ್ ಬಾಧಿತ ಮಹಿಳೆಯರು

| | |
|---|---|
| ಪೂರ್ವ ಖಾಶಿ ಹಿಲ್ಸ್ | 13.6 |
| ಕಛಾರ್ | 13 |
| ಶಿಲ್ಲಾಂಗ್ | 12.7 |
| ಕಾಮರೂಪ ನಗರ | 10.5 |
| ಭೋಪಾಲ್ | 10.3 |
| ಅಹಮದಾಬಾದ್ | 8.3 |
| ಹೈದರಾಬಾದ್ | 7.9 |
| ಬೆಂಗಳೂರು | 7.8 |
| ನಾಗ್ಪುರ | 7.6 |
| ಕರೀಂಗಂಜ್ ಜಿಲ್ಲೆ | 6.9 |

### ದಕ್ಷಿಣದ ನಗರಗಳಲ್ಲಿ...

ಬೆಂಗಳೂರು ಮಾತ್ರವಲ್ಲದೇ, ಹೈದರಾಬಾದ್, ಚೆನ್ನೈ ಹಾಗೂ ಕೇರಳದ ತಿರುವನಂತಪುರ, ಕೊಲ್ಲಂ, ಆಲಪ್ಪುಳ, ಕಾಸರಗೋಡು ಸೇರಿದಂತೆ ದಕ್ಷಿಣ ಭಾರತದ ಹಲವು ನಗರಗಳಲ್ಲಿ ವಿವಿಧ ರೀತಿಯ ಕ್ಯಾನ್ಸರ್ ಪ್ರಕರಣಗಳು ಹೆಚ್ಚು ವರದಿಯಾಗುತ್ತಿರುವುದನ್ನು ವರದಿ ಉಲ್ಲೇಖಿಸಿದೆ. ಬೆಂಗಳೂರು, ಚೆನ್ನೈ, ವಿಶಾಖಪಟ್ಟಣ, ತಿರುವನಂತಪುರದಂತಹ ಮಹಾನಗರಗಳ ಪುರುಷರಲ್ಲಿ ಶ್ವಾಸಕೋಶ ಕ್ಯಾನ್ಸರ್ ಹೆಚ್ಚು ಪತ್ತೆಯಾಗುತ್ತಿದೆ. ದೆಹಲಿಯಲ್ಲೂ ಈ ಕ್ಯಾನ್ಸರ್ ಪುರುಷರಲ್ಲಿ ಹೆಚ್ಚು ಕಂಡುಬರುತ್ತಿದೆ.

icmr INDIAN COUNCIL OF MEDICAL RESEARCH Serving the nation since 1911

### ಪ್ರದೇಶವಾರು ವ್ಯತ್ಯಾಸ

ಭಾರತದಲ್ಲಿ ಕ್ಯಾನ್ಸರ್ ಬಾಧಿತರ ಸಂಖ್ಯೆ ಪುರುಷ ಮತ್ತು ಮಹಿಳೆ ಇಬ್ಬರಲ್ಲೂ ಹೆಚ್ಚಾಗುತ್ತಿದೆ. ಅದಕ್ಕೆ ತಕ್ಕಂತೆ ಕ್ಯಾನ್ಸರ್ ಸಂಬಂಧಿ ಸಾವುಗಳೂ ಹೆಚ್ಚುತ್ತಿವೆ. ಪುರುಷರಲ್ಲಿ ಬಾಯಿ, ಶ್ವಾಸಕೋಶ ಮತ್ತು ಪ್ರಾಸ್ಟೇಟ್ ಕ್ಯಾನ್ಸರ್ ಹೆಚ್ಚುತ್ತಿದ್ದರೆ, ಮಹಿಳೆಯರಲ್ಲಿ ಸ್ತನ, ಗರ್ಭಕಂಠ ಮತ್ತು ಅಂಡಾಶಯದ ಕ್ಯಾನ್ಸರ್ ವ್ಯಾಪಕವಾಗಿವೆ. ಇವು ದೇಶದಲ್ಲಿ ಕ್ಯಾನ್ಸರ್ ತಡೆಗೆ ಪರಿಣಾಮಕಾರಿ ಕ್ರಮಗಳ ಅಗತ್ಯವನ್ನು ಒತ್ತಿಹೇಳುತ್ತಿವೆ. ಕ್ಯಾನ್ಸರ್ ಪ್ರಕರಣಗಳು ಮತ್ತು ಸಾವುಗಳು ದೇಶದ ಕೆಲವು ಪ್ರದೇಶಗಳಲ್ಲಿ ಹೆಚ್ಚಾಗಿದ್ದರೆ, ಕೆಲವು ಪ್ರದೇಶಗಳಲ್ಲಿ ಕಡಿಮೆ ಇವೆ. ಜತೆಗೆ, ಮಹಾನಗರಗಳಲ್ಲಿ ಹೆಚ್ಚು ಪ್ರಕರಣಗಳು ಪತ್ತೆಯಾಗುತ್ತಿವೆ.

### ಭಾರತದಲ್ಲಿ ಕ್ಯಾನ್ಸರ್: ಒಂದು ನೋಟ

**3** ಹೆಚ್ಚು ಕ್ಯಾನ್ಸರ್ ಪ್ರಕರಣಗಳು ವರದಿಯಾಗುತ್ತಿರುವ ಜಗತ್ತಿನ ಮೂರನೇ ರಾಷ್ಟ್ರ

**2** ಏಷ್ಯಾ ಖಂಡದ ಎರಡನೇ ದೇಶ

**11%** ದೇಶದಲ್ಲಿ ಜನರು ಕ್ಯಾನ್ಸರ್‌ಗೆ ತುತ್ತಾಗುವ ಅಪಾಯದ ಪ್ರಮಾಣ

2024ರಲ್ಲಿ ದೇಶದಲ್ಲಿ ವರದಿಯಾದ ಕ್ಯಾನ್ಸರ್ ಪ್ರಕರಣಗಳ ಅಂದಾಜು ಸಂಖ್ಯೆ: 15.62 ಲಕ್ಷ

2022ರಲ್ಲಿ ವರದಿಯಾಗಿದ್ದ ಪ್ರಕರಣಗಳು: 14.6 ಲಕ್ಷ

**8.74** ಲಕ್ಷ 2024ರಲ್ಲಿ ಕ್ಯಾನ್ಸರ್‌ನಿಂದಾಗಿ ಮೃತಪಟ್ಟವರು

**24.6** ಲಕ್ಷ | 2045ರ ಹೊತ್ತಿಗೆ ದೇಶದಲ್ಲಿರಬಹುದಾದ ಕ್ಯಾನ್ಸರ್‌ನ ಅಂದಾಜು ಪ್ರಕರಣಗಳು

## ❖ ಎಫ್‌ಡಿಐ: ಕರ್ನಾಟಕಕ್ಕೆ ಹೆಚ್ಚು

**ಸಂದರ್ಭ:** ಜೂನ್ ತ್ರೈಮಾಸಿಕದಲ್ಲಿ ದೇಶದಲ್ಲಿನ ವಿದೇಶಿ ನೇರ ಹೂಡಿಕೆ (ಎಫ್‌ಡಿಐ) ಪ್ರಮಾಣ ಶೇ 15ರಷ್ಟು ಹೆಚ್ಚಳವಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

- ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ₹1.42 ಲಕ್ಷ ಕೋಟಿ ವಿದೇಶಿ ನೇರ ಹೂಡಿಕೆ ಆಗಿತ್ತು. ಈ ಬಾರಿ ಇದು ₹1.63 ಲಕ್ಷ ಕೋಟಿ ಆಗಿದೆ. ಇದು ಮಾರ್ಚ್ ತ್ರೈಮಾಸಿಕದಲ್ಲಿ ₹82,210 ಕೋಟಿಯಷ್ಟಾಗಿತ್ತು.
- ಈಕ್ವಿಟಿ ಒಳಹರಿವು, ಗಳಿಕೆಯ ಮರುಹೂಡಿಕೆ ಮತ್ತು ಇತರೆ ಬಂಡವಾಳ ಹೂಡಿಕೆಯು ಹೆಚ್ಚಳವಾಗಿದ್ದು, ಒಟ್ಟು ಹೂಡಿಕೆ ₹2.21 ಲಕ್ಷ ಕೋಟಿಯಾಗಿದೆ. ಕಳೆದ ಜೂನ್ ತ್ರೈಮಾಸಿಕದಲ್ಲಿ ₹1.98 ಲಕ್ಷ ಕೋಟಿಯಾಗಿತ್ತು.

- **ಕರ್ನಾಟಕ ಮುಂಚೂಣಿ: ರಾಜ್ಯಗಳು ಸ್ವೀಕರಿಸಿದ ವಿದೇಶಿ ಬಂಡವಾಳ ಪಟ್ಟಿಯಲ್ಲಿ ಕರ್ನಾಟಕವು ಮೊದಲ ಸ್ಥಾನದಲ್ಲಿದ್ದು, ₹50,094 ಕೋಟಿ ಸ್ವೀಕರಿಸಿದೆ. ನಂತರದ ಸ್ಥಾನಗಳಲ್ಲಿ ಮಹಾರಾಷ್ಟ್ರ (₹47,188 ಕೋಟಿ), ತಮಿಳುನಾಡು (₹23,505 ಕೋಟಿ), ಹರಿಯಾಣ (₹11,444 ಕೋಟಿ), ಗುಜರಾತ್ (₹10,564 ಕೋಟಿ), ದೆಹಲಿ (₹8,803 ಕೋಟಿ) ಮತ್ತು ತೆಲಂಗಾಣ (₹3,477 ಕೋಟಿ) ಇವೆ.**
- ಇದೇ ಅವಧಿಯಲ್ಲಿ ಅಮೆರಿಕದ ಹೂಡಿಕೆಯ ಪ್ರಮಾಣದಲ್ಲಿ ಮೂರು ಪಟ್ಟು ಏರಿಕೆಯಾಗಿದೆ. ಭಾರತದಲ್ಲಿ ಅತಿ ಹೆಚ್ಚು ಹೂಡಿಕೆ ಮಾಡಿದ ದೇಶ ಅಮೆರಿಕ. ಒಟ್ಟು ₹49,379 ಕೋಟಿ ಹೂಡಿಕೆ ಈ ತ್ರೈಮಾಸಿಕದಲ್ಲಿ ಅಮೆರಿಕದಿಂದ ಆಗಿದೆ. ಕಳೆದ ಆರ್ಥಿಕ ವರ್ಷದ ಜೂನ್ ತ್ರೈಮಾಸಿಕದಲ್ಲಿ ₹13,205 ಕೋಟಿ ಬಂಡವಾಳ ಒಳಹರಿವಾಗಿತ್ತು.
- ಜೂನ್ ತ್ರೈಮಾಸಿಕದಲ್ಲಿ ಹೂಡಿಕೆ ಮಾಡಿದ ದೇಶಗಳ ಪೈಕಿ ಸಿಂಗಪುರ, ಮಾರಿಷಸ್, ಸೈಪ್ರಸ್, ಯುಎಇ, ಕೇಮನ್ ಐಸ್‌ಲ್ಯಾಂಡ್, ನೆದರ್ಲೆಂಡ್ಸ್, ಜಪಾನ್ ಮತ್ತು ಜರ್ಮನಿ ನಂತರದ ಸ್ಥಾನಗಳಲ್ಲಿ ಇವೆ.
- 2000ದ ಏಪ್ರಿಲ್‌ನಿಂದ 2025ರ ವರೆಗೆ ಅಮೆರಿಕ ₹6.71 ಲಕ್ಷ ಕೋಟಿ ಹೂಡಿಕೆ ಮಾಡಿದೆ. ಈ ಮೂಲಕ ಮೂರನೇ ಅತಿಹೆಚ್ಚು ಎಫ್‌ಡಿಐ ಹೂಡಿಕೆ ಮಾಡಿದ ದೇಶವಾಗಿದೆ. ಮಾರಿಷಸ್ ₹16.04 ಲಕ್ಷ ಕೋಟಿ ಹೂಡಿಕೆ ಮಾಡಿದ್ದು, ಅತಿ ಹೆಚ್ಚು ಹೂಡಿಕೆ ಮಾಡಿದ ದೇಶವಾಗಿದೆ. ಸಿಂಗಪುರ ಎರಡನೇ ಸ್ಥಾನದಲ್ಲಿದ್ದು, ₹15.80 ಲಕ್ಷ ಕೋಟಿಯಾಗಿದೆ.
- ಕಂಪ್ಯೂಟರ್ ಯಂತ್ರಾಂಶ ಹಾಗೂ ತಂತ್ರಾಂಶ, ಸೇವೆಗಳು, ವ್ಯಾಪಾರ, ದೂರಸಂಪರ್ಕ, ವಾಹನೋದ್ಯಮ, ರಾಸಾಯನಿಕ ವಲಯಗಳು ಹೆಚ್ಚು ಹೂಡಿಕೆ ಸ್ವೀಕರಿಸಿವೆ ಎಂದು ತಿಳಿಸಿದೆ.

## ❖ ಸೇವಾ ವಲಯದ ಪ್ರಗತಿ 15 ವರ್ಷದ ಗರಿಷ್ಠ

**ಸಂದರ್ಭ:** ದೇಶದ ಸೇವಾ ವಲಯದ ಬೆಳವಣಿಗೆ ಆಗಸ್ಟ್ ತಿಂಗಳಿನಲ್ಲಿ 15 ವರ್ಷದ ಗರಿಷ್ಠ ಮಟ್ಟಕ್ಕೆ ಏರಿಕೆ ದಾಖಲಿಸಿದೆ ಎಂದು ಮಾಸಿಕ ಸಮೀಕ್ಷೆಯೊಂದು ತಿಳಿಸಿದೆ.

- ಎಚ್‌ಎಸ್‌ಬಿಸಿ ಇಂಡಿಯಾ ಸರ್ವಿಸಸ್ ಪಿಎಂಐ ಬ್ಯುಸಿನೆಸ್ ಆ್ಯಕ್ಟಿವಿಟಿ ಸೂಚ್ಯಂಕವು ಜುಲೈನಲ್ಲಿ 60.5 ದಾಖಲಾಗಿತ್ತು. ಆಗಸ್ಟ್‌ನಲ್ಲಿ 62.9ಕ್ಕೆ ಹೆಚ್ಚಳ ಕಂಡಿದೆ. ಹೊಸ ಕಾರ್ಯಾದೇಶ ಮತ್ತು ಉತ್ಪಾದನೆಯಲ್ಲಿ ಹೆಚ್ಚಳವಾಗಿರುವುದೇ ಸೂಚ್ಯಂಕ ಏರಿಕೆಗೆ ಕಾರಣ ಎನ್ನಲಾಗಿದೆ.
- ಪಿಎಂಐ ಮಾನದಂಡಗಳ ಪ್ರಕಾರ ಸೂಚ್ಯಂಕವು 50ಕ್ಕಿಂತ ಹೆಚ್ಚಿನ ಮಟ್ಟದಲ್ಲಿ ಇದ್ದರೆ ಅದನ್ನು ಬೆಳವಣಿಗೆ ಎಂದು ಪರಿಗಣಿಸಲಾಗುತ್ತದೆ. 50ಕ್ಕಿಂತ ಕಡಿಮೆ ಇದ್ದರೆ ಅದನ್ನು ಕುಸಿತವೆಂದು ಕಾಣಲಾಗುತ್ತದೆ.
- 'ರಫ್ತು ಹೆಚ್ಚಳಗೊಂಡಿದ್ದರಿಂದ ಒಟ್ಟಾರೆ ಮಾರಾಟ ಏರಿಕೆ ಕಂಡಿದೆ. ಏಷ್ಯಾ, ಯುರೋಪ್, ಪಶ್ಚಿಮ ಏಷ್ಯಾ ಮತ್ತು ಅಮೆರಿಕದಿಂದ ವಲಯಕ್ಕೆ ಹೆಚ್ಚಿನ ಬೇಡಿಕೆ ಉಂಟಾಗಿದೆ' ಎಂದು ಎಚ್‌ಎಸ್‌ಬಿಸಿಯ ಮುಖ್ಯ ಅರ್ಥಶಾಸ್ತ್ರಜ್ಞೆ ಪ್ರಾಂಜುಲ್ ಭಂಡಾರಿ ಹೇಳಿದ್ದಾರೆ.
- ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಹೆಚ್ಚಿದ ಮಾರಾಟದಿಂದ ದೇಶದ ಸೇವಾ ವಲಯದ ಕಂಪನಿಗಳು ಹೆಚ್ಚುವರಿ ಸಿಬ್ಬಂದಿ ನೇಮಿಸಿಕೊಳ್ಳಲು ಮುಂದಾದವು. ಇದರಿಂದ ಕಾರ್ಮಿಕರ ವೆಚ್ಚ ಹೆಚ್ಚಳವಾಯಿತು. ಪರಿಣಾಮವಾಗಿ ತಯಾರಿಕೆ ಮತ್ತು ಉತ್ಪಾದನಾ ದರ ಏರಿಕೆಯಾಯಿತು ಎಂದು ತಿಳಿಸಿದ್ದಾರೆ.

Dr. Rajkumar IAS/KAS Academy

## ❖ ಭಾರತ-ಜರ್ಮನಿ ಸಹಕಾರ ವೃದ್ಧಿ ಅನಿವಾರ್ಯ: ಜೈಶಂಕರ್

**ಸಂದರ್ಭ:** ಜಾಗತಿಕ ಆರ್ಥಿಕತೆ ಹಾಗೂ ಭೌಗೋಳಿಕ ರಾಜಕೀಯ ಸನ್ನಿವೇಶಗಳಲ್ಲಿನ ಅನಿರೀಕ್ಷಿತ ಬೆಳವಣಿಗೆಗಳು ಭಾರತ ಮತ್ತು ಜರ್ಮನಿಯು ತಮ್ಮ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಿಕೊಂಡು ಕಾರ್ಯಪ್ರವೃತ್ತವಾಗಬೇಕಾದ ಅನಿವಾರ್ಯವನ್ನು ಸೃಷ್ಟಿಸಿವೆ ಎಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ಹೇಳಿದ್ದಾರೆ.

- ಜರ್ಮನಿ ವಿದೇಶಾಂಗ ಸಚಿವ ಜೋಹನ್ ವಡೆಫುಲ್ ಅವರೊಂದಿಗಿನ ಮಾತುಕತೆ ಬಳಿಕ ಜೈಶಂಕರ್ ಈ ಹೇಳಿಕೆ ನೀಡಿದ್ದಾರೆ.
- 'ವ್ಯಾಪಾರ, ರಕ್ಷಣೆ, ಸೆಮಿಕಂಡಕ್ಟರ್ ಉತ್ಪಾದನೆ, ತಂತ್ರಜ್ಞಾನ ಹಾಗೂ ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ಸಹಕಾರ ವೃದ್ಧಿಗೆ ಸಂಬಂಧಿಸಿದ ವಿಚಾರಗಳ ಕುರಿತು ಚರ್ಚೆ ನಡೆಸಿದ್ದೇವೆ. ಶೀಘ್ರದಲ್ಲೇ ಈ ನಿಟ್ಟಿನಲ್ಲಿ ಮತ್ತೊಂದು ಸುತ್ತಿನ ಮಾತುಕತೆ ನಡೆದು ಅಂತಿಮ ನಿರ್ಣಯ ಕೈಗೊಳ್ಳಲಾಗುವುದು' ಎಂದು ಜೈಶಂಕರ್ ತಿಳಿಸಿದ್ದಾರೆ.

## ❖ ನಿರ್ಣಾಯಕ ಖನಿಜಗಳ ಪುನರ್ ಬಳಕೆಗೆ ₹1500 ಕೋಟಿ

**ಸಂದರ್ಭ:** ದೇಶದಲ್ಲಿ ನಿರ್ಣಾಯಕ ಖನಿಜಗಳ ಮರು ಬಳಕೆ ಯನ್ನು ಉತ್ತೇಜಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸಚಿವ ಸಂಪುಟವು ₹1,500 ಕೋಟಿ ಮೊತ್ತದ ಪ್ರೋತ್ಸಾಹಕ ಯೋಜನೆಗೆ ಒಪ್ಪಿಗೆ ನೀಡಿದೆ.

- ದ್ವಿತೀಯ ಮೂಲಗಳಿಂದ ನಿರ್ಣಾಯಕ ಖನಿಜಗಳ ಉತ್ಪಾದನೆ ಮತ್ತು ಪ್ರತ್ಯೇಕಗೊಳಿಸುವ ಮರು ಬಳಕೆಯ ಸಾಮರ್ಥ್ಯವನ್ನು ವೃದ್ಧಿ ಮಾಡುವ ಗುರಿಯನ್ನು ಈ ಯೋಜನೆಯು ಹೊಂದಿದೆ.
- ಇ-ತ್ಯಾಜ್ಯ, ಲಿಥಿಯಂ ಇಯಾನ್ ಬ್ಯಾಟರಿ ತುಣುಕುಗಳು (ಎಲ್ಐಬಿ) ಮತ್ತು ಅವಧಿ ಮೀರಿದ ವಾಹನಗಳಲ್ಲಿನ ಕ್ಯಾಟಲಿಟಿಕ್ (ವೇಗವರ್ಧಕ/ಉತ್ಪ್ರೇರಕಗಳು) ತ್ಯಾಜ್ಯ ಸೇರಿ ವಿವಿಧ ಮೂಲಗಳಿಂದ ಮರು ಬಳಕೆ ಮಾಡುವ ಉದ್ದೇಶದ ಯೋಜನೆಗೆ ಸಂಪುಟ ಒಪ್ಪಿಗೆ ನೀಡಿದೆ ಎಂದು




## ❖ ಪ್ರತ್ಯೇಕ ಮತ ಪಟ್ಟಿ, ಬ್ಯಾಲಟ್ ಪೇಪರ್

**ಸಂದರ್ಭ:** ತನ್ನ ವ್ಯಾಪ್ತಿಯಲ್ಲಿರುವ ನಗರ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರದ (ಇವಿಎಂ) ಬದಲು ಮತ ಪತ್ರ (ಬ್ಯಾಲಟ್ ಪೇಪರ್) ಬಳಕೆ ಹಾಗೂ ರಾಜ್ಯ ಚುನಾವಣಾ ಆಯೋಗದ ನೇತೃತ್ವದಲ್ಲಿ ಪ್ರತ್ಯೇಕ ಮತದಾರರ ಪಟ್ಟಿ ಸಿದ್ಧಪಡಿಸಲು ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಮುಂದಾಗಿದೆ.

- ‘ಗ್ರೇಟರ್ ಬೆಂಗಳೂರು ಪ್ರಾಧಿಕಾರ’ವೂ ಸೇರಿದಂತೆ ಎಲ್ಲ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆಗಳಿಗೆ ಹೊಸ ಮತದಾರರ ಪಟ್ಟಿ ಸಿದ್ಧಪಡಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಅಧಿಕಾರ ನೀಡಲು ಸರ್ಕಾರ ತೀರ್ಮಾನಿಸಿದೆ ಎಂದರು.
- ಈ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತ ಯಂತ್ರ (ಇವಿಎಂ) ಬದಲಿಗೆ ಮತ ಪತ್ರ (ಬ್ಯಾಲಟ್ ಪೇಪರ್) ಬಳಸಿ ಮತ ಚಲಾಯಿಸುವ ವ್ಯವಸ್ಥೆಯನ್ನು ಜಾರಿ ಮಾಡಲು ನಿರ್ಧರಿಸಲಾಗಿದೆ.
- ಇವೆರಡೂ ವಿಷಯಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲಾಗುವುದು. ಮತದಾರರ ಪಟ್ಟಿ ಪರಿಷ್ಕರಿಸಿ, ಹೊಸ ಪಟ್ಟಿ ತಯಾರಿಸಲು ಕಾಯ್ದೆಗೆ ಅಗತ್ಯ ತಿದ್ದುಪಡಿಗಳನ್ನು ಮಾಡಿ ಹೊಸ ನಿಯಮಾವಳಿಗಳನ್ನು ರೂಪಿಸಲಾಗುವುದು’.
- ಅಲ್ಲದೇ, ಇನ್ನು 15 ದಿನಗಳಲ್ಲಿ ನಿಯಮಗಳನ್ನು ಅಂತಿಮಗೊಳಿಸಿ ಸುಗ್ರೀವಾಜ್ಞೆ ಹೊರಡಿಸಲಾಗುವುದು.
- ರಾಜ್ಯ ಚುನಾವಣಾ ಆಯೋಗದ ಆಯುಕ್ತ ಜಿ.ಎಸ್.ಸಂಗ್ರೇಶಿ ಅವರು ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ 2024ರ ಸೆಕ್ಷನ್ 35 ಅನ್ನು ಉಲ್ಲೇಖಿಸಿ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿದ್ದರು.
- ಅದರ ಆಧಾರದ ಮೇರೆಗೆ ಈ ತೀರ್ಮಾನ ತೆಗೆದುಕೊಳ್ಳಲಾಗಿದೆ. ಪಂಚಾಯತ್‌ರಾಜ್ ಕಾಯ್ದೆ, ಮುನಿಸಿಪಾಲಿಟಿ ಕಾಯ್ದೆಯಲ್ಲೂ ಈ ಅವಕಾಶ ಕಲ್ಪಿಸಲಾಗಿದೆ. ಅಲ್ಲದೇ, ಕೇಂದ್ರ ಚುನಾವಣಾ ಆಯೋಗದಂತೆ ರಾಜ್ಯ ಚುನಾವಣಾ ಆಯೋಗವೂ ಸ್ವಾಯತ್ತ ಸಂಸ್ಥೆ. ಕೇಂದ್ರ ಚುನಾವಣಾ ಆಯೋಗದಷ್ಟೇ ರಾಜ್ಯ ಚುನಾವಣಾ ಆಯೋಗಕ್ಕೂ ಅಧಿಕಾರ ಇದೆ. ಮತದಾರರ ಪಟ್ಟಿಯನ್ನೂ ಸ್ವತಂತ್ರವಾಗಿ ತಯಾರಿಸಬಹುದಾಗಿದೆ ಎಂದು ಅವರು ಹೇಳಿದರು.
- **2010 ಮತ್ತು 2015ರಲ್ಲಿ ನಡೆದ ಬಿಬಿಎಂಪಿ ಚುನಾವಣೆಗಳಲ್ಲಿ ಇವಿಎಂಗಳನ್ನು ಬಳಸಲಾಗಿತ್ತು. ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳಲ್ಲೂ ಇವಿಎಂಗಳನ್ನು ಬಳಸಲಾಗುತ್ತಿತ್ತು. ಗ್ರಾಮಪಂಚಾಯಿತಿ ಚುನಾವಣೆಯಲ್ಲಿ ಮತಪತ್ರ ಬಳಸಲಾಗುತ್ತಿದೆ. ವಿಧಾನಪರಿಷತ್ ಚುನಾವಣೆಗಳಲ್ಲಿ ಮತಪತ್ರಗಳನ್ನು ಬಳಸಲಾಗುತ್ತಿತ್ತು.**

## ❖ ಬಿಡದಿಯಲ್ಲಿ ದೇಶದ ಮೊದಲ ಎ.ಐ ನಗರ

**ಸಂದರ್ಭ:** ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬಿಡದಿಯಲ್ಲಿ ನಿರ್ಮಾಣವಾಗಲಿರುವ ಬಿಡದಿ ಸಮಗ್ರ ಉಪನಗರ ಯೋಜನೆ ಅಡಿ 'ಕೆಲಸ, ವಾಸ, ಉಲ್ಲಾಸ' ಪರಿಕಲ್ಪನೆ ಅಡಿ ದೇಶದಲ್ಲೇ ಮೊದಲ ಕೃತಕ ಬುದ್ಧಿಮತ್ತೆ (ಎ.ಐ) ನಗರವನ್ನು ಅಭಿವೃದ್ಧಿಪಡಿಸಲಾಗುವುದು.

- ಯೋಜನೆಗಾಗಿ ಒಂಬತ್ತು ಗ್ರಾಮಗಳ 8,493 ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳಲಾಗುವುದು. ಭೂಮಿ ಕೊಟ್ಟವರಿಗೆ 2013ರ ಭೂ ಸ್ವಾಧೀನ ಕಾಯ್ದೆ ಅಡಿ ಪ್ರಸಕ್ತ ಮಾರುಕಟ್ಟೆ ದರದಲ್ಲಿ ಪ್ರತಿ ಎಕರೆಗೆ ₹1.50 ಕೋಟಿಯಿಂದ ₹2.50 ಕೋಟಿವರೆಗೆ ಪರಿಹಾರ ನೀಡಲಾಗುವುದು. ಒಪ್ಪಿಗೆ ಪತ್ರ ಕೊಟ್ಟವರಿಗೆ ಮೂರು ದಿನದಲ್ಲಿ ಪರಿಹಾರದ ಚೆಕ್ ವಿತರಿಸಲಾಗುವುದು ಎಂದು ಭರವಸೆ ನೀಡಿದರು.
- ‘ಪರಿಹಾರದ ಬದಲು ಯೋಜನೆಯ ಸಹಭಾಗಿತ್ವ ಪಡೆಯಲು ಮುಂದೆ ಬರುವ ರೈತರಿಗೆ, ವಸತಿ ಉದ್ದೇಶಕ್ಕೆ ಅಭಿವೃದ್ಧಿಪಡಿಸುವ ಬಡಾವಣೆಗಳಲ್ಲಿ 50:50 ಅನುಪಾತದಲ್ಲಿ ಹಾಗೂ ವಾಣಿಜ್ಯ ಉದ್ದೇಶಕ್ಕೆ ಅಭಿವೃದ್ಧಿ ಪಡಿಸುವ ಪ್ರದೇಶದಲ್ಲಿ 45:55 ಅನುಪಾತದಲ್ಲಿ ನಿವೇಶನ ಒದಗಿಸಲಾಗುವುದು. ದೇಶದಲ್ಲೇ

Dr. Rajkumar IAS/KAS Academy

ಮೊದಲ ಬಾರಿಗೆ ಇಂತಹದ್ದೊಂದು ಐತಿಹಾಸಿಕ ತೀರ್ಮಾನವನ್ನು ನಾವು ಕೈಗೊಂಡಿದ್ದೇವೆ' ಎಂದು ತಿಳಿಸಿದರು.

- ಯೋಜನೆಯ ಅಂತಿಮ ಅಧಿಸೂಚನೆ ದಿನಾಂಕದಿಂದ ಪರಿಹಾರ ನೀಡುವುವರೆಗೆ ಹಾಗೂ ಅಭಿವೃದ್ಧಿ ಪಡಿಸಿದ ಜಾಗವನ್ನು ಮಾಲೀಕರಿಗೆ ಹಸ್ತಾಂತರ ಮಾಡುವವರೆಗೆ ಜೀವನೋಪಾಯದ ಬೆಂಬಲಕ್ಕಾಗಿ ಪ್ರತ್ಯೇಕವಾಗಿ ವಾರ್ಷಿಕ ಪರಿಹಾರ ನೀಡಲಾಗುವುದು. ವರ್ಷಕ್ಕೆ ಪ್ರತಿ ಎಕರೆ ಖುಷ್ಕಿ ಜಮೀನಿಗೆ (ಒಣಭೂಮಿ) ₹30 ಸಾವಿರ, ತರಿಗೆ ಜಮೀನಿಗೆ (ಮಳೆ ಅಥವಾ ನೀರಾವರಿಯಿಲ್ಲದೆ ವ್ಯವಸಾಯ ಮಾಡುವ ಭೂಮಿ) ₹40 ಸಾವಿರ, ಭಾಗಾಯ್ತು ಭೂಮಿಗೆ (ನೀರಾವರಿ ಅಥವಾ ಮಳೆಯಾಶ್ರಿತ ತೋಟ) ₹50 ಸಾವಿರ ಹಾಗೂ ಭೂರಹಿತ ಕುಟುಂಬಕ್ಕೆ ₹25 ಸಾವಿರ ನೀಡಲಾಗುವುದು ಎಂದು ಹೇಳಿದರು.

## ❖ 2 ಸಮೀಕ್ಷೆಗಳಿಗೆ ಸಿ.ಎಂ ಚಾಲನೆ

**ಸಂದರ್ಭ:** ರಾಜ್ಯದಲ್ಲಿ ಸೆ. 15ರಿಂದ ಒಟ್ಟು 45 ಕೆಲಸದ ದಿನ, ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಮತ್ತು 15 ಜಿಲ್ಲೆಗಳಲ್ಲಿ ಮಾಜಿ ದೇವದಾಸಿಯರ ಮರು ಸಮೀಕ್ಷೆ ನಡೆಯಲಿದೆ. ದೇಶದಲ್ಲೇ ಮೊದಲ ಬಾರಿಗೆ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ನಡೆಯುತ್ತಿರುವುದು ವಿಶೇಷ.

- ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಯಲಿರುವ ಈ ಸಮೀಕ್ಷೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು.
- ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಪುನರ್ವಸತಿ ಕಲ್ಪಿಸುವ ಉದ್ದೇಶದಿಂದ ಈ ಸಮೀಕ್ಷೆಗಳನ್ನು ನಡೆಸಲು ಸರ್ಕಾರ ಉದ್ದೇಶಿಸಿದೆ. ಎರಡೂ ಸಮೀಕ್ಷೆಗಳು ಪ್ರತ್ಯೇಕವಾಗಿ ನಡೆಯಲಿವೆ. ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಗೆ 'ಕರ್ಮಣಿ ವೆಬ್ ಅಪ್ಲಿಕೇಷನ್' ಹಾಗೂ ಮಾಜಿ ದೇವದಾಸಿಯರ ಮರು ಸಮೀಕ್ಷೆಗೆ ಸೇವಾ ಸಿಂಧು ಮೂಲಕ 'ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ವೆಬ್ ಅಪ್ಲಿಕೇಷನ್' ಸಿದ್ದಪಡಿಸಲಾಗಿದೆ.
- ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಯನ್ನು ಎಲ್ಲ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳು ಮತ್ತು ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಸಲಾಗುವುದು. ಮಾಜಿ ದೇವದಾಸಿ ಯರ ಮರು ಸಮೀಕ್ಷೆಯನ್ನು ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಗಳ ಕಚೇರಿಯಲ್ಲಿ ನಡೆಸಲಾಗು ವುದು. ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಯು ಅದೇ ಸಮುದಾಯದವರ ಮೂಲಕವೇ ನಡೆಯಲಿರುವುದು ವಿಶೇಷವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೂಲಗಳು ತಿಳಿಸಿವೆ.

### ಸಮೀಕ್ಷೆಗಳ ವೈಶಿಷ್ಟ್ಯ

- ।ಮೊಬೈಲ್ ಆ್ಯಪ್ ಬಳಕೆ
- ।ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಲಿಂಗತ್ವ ಅಲ್ಪಸಂಖ್ಯಾತರನ್ನು ಒಳಗೊಂಡ ಸಮಿತಿ
- ।ಮಾಜಿ ದೇವದಾಸಿಯರ ಮರು ಸಮೀಕ್ಷೆಗೆ ಮಾಜಿ ದೇವದಾಸಿ ಮಹಿಳೆಯರ ಸಂಘಟನೆಗಳ ಪ್ರತಿನಿಧಿಗಳನ್ನು ಸೇರಿಸಿ ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಆಂತರಿಕ ಸಮಿತಿ.


### ಮಾಜಿ ದೇವದಾಸಿ ಸಮೀಕ್ಷೆ ಎಲ್ಲೆಲ್ಲಿ?

- **ಬೆಳಗಾವಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಧಾರವಾಡ, ಹಾವೇರಿ, ಗದಗ, ಕಲಬುರಗಿ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಬಳ್ಳಾರಿ, ವಿಜಯನಗರ ಜಿಲ್ಲೆಗಳು.**

Dr. Rajkumar IAS/KAS Academy

## ❖ ಡಿ.ಕೆ ಶಿವಕುಮಾರ್ ದೇಶದ ಎರಡನೇ ಶ್ರೀಮಂತ ಸಚಿವ

**ಸಂದರ್ಭ:** ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೇಶದ ಎರಡನೇ ಶ್ರೀಮಂತ ಸಚಿವ ಎಂದು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ಎಡಿಆರ್) ವರದಿ ಹೇಳಿದೆ.




- ರಾಜ್ಯ ವಿಧಾನಸಭೆಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸಚಿವರು ಚುನಾವಣೆ ಸಂದರ್ಭದಲ್ಲಿ ಸಲ್ಲಿಸಿದ ಪ್ರಮಾಣಪತ್ರ ಗಳನ್ನು ವಿಶ್ಲೇಷಿಸಿ ಎಡಿಆರ್ ವರದಿ ಬಿಡುಗಡೆ ಮಾಡಿದೆ. 27 ವಿಧಾನಸಭೆಗಳು, 3 ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರದ 652 ಸಚಿವರ ಪೈಕಿ 643 ಸಚಿವರು ಸಲ್ಲಿಸಿರುವ ಪ್ರಮಾಣಪತ್ರಗಳನ್ನು ವಿಶ್ಲೇಷಿಸಲಾಗಿದೆ.
- ಕರ್ನಾಟಕದಲ್ಲಿ ನೂರು ಕೋಟಿಗಿಂತ ಹೆಚ್ಚು ಆಸ್ತಿ ಇರುವ ಎಂಟು ಸಚಿವರು ಇದ್ದಾರೆ. ಆಂಧ್ರ ಪ್ರದೇಶವು ನಂತರದ ಸ್ಥಾನದಲ್ಲಿದೆ.
- 643 ಸಚಿವರ ಪೈಕಿ 302 ಮಂದಿ (ಶೇ 47) ವಿರುದ್ಧ ಕ್ರಿಮಿನಲ್ ಪ್ರಕರಣಗಳಿವೆ. 174 ಸಚಿವರ ವಿರುದ್ಧ (ಶೇ 27) ಗಂಭೀರ ಅಪರಾಧ ಪ್ರಕರಣಗಳಿವೆ. ಈ ಸಚಿವರು ಕೊಲೆ, ಕೊಲೆಯತ್ನ, ಅಪಹರಣ, ಮಹಿಳೆಯರ ವಿರುದ್ಧದ ಅಪರಾಧಗಳು ಸೇರಿದಂತೆ ಗಂಭೀರ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ. ಕೇಂದ್ರ ಸಚಿವ ಸಂಪುಟದ 72ರಲ್ಲಿ 29 (ಶೇ 40) ಮಂದಿ ವಿರುದ್ಧ ಪ್ರಕರಣಗಳಿವೆ.

## ❖ ಐಐಎಸ್‌ಸಿ ಅತ್ಯುತ್ತಮ ವಿವಿ

**ಸಂದರ್ಭ:** ಕೇಂದ್ರ ಶಿಕ್ಷಣ ಇಲಾಖೆಯು ಬಿಡುಗಡೆಗೊಳಿಸಿದ ರಾಷ್ಟ್ರೀಯ ಸಾಂಸ್ಥಿಕ ಶ್ರೇಯಾಂಕ ಸಮಿತಿ–2025ರ (ಎನ್‌ಐಆರ್‌ಎಫ್) ಪಟ್ಟಿಯಲ್ಲಿ ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯು (ಐಐಎಸ್‌ಸಿ) ಸತತ 10ನೇ ವರ್ಷವೂ ಅತ್ಯುತ್ತಮ ವಿಶ್ವವಿದ್ಯಾಲಯ ಎಂಬ ಹಿರಿಮೆಗೆ ಪಾತ್ರವಾಗಿದೆ.

| ರಾಜ್ಯದ ಕಾಲೇಜುಗಳು | |
|---|---|
| ಕ್ರಿಸ್ತು ಜಯಂತಿ ಕಾಲೇಜು, ಬೆಂಗಳೂರು | 34 |
| ಎಂ.ಎಸ್. ರಾಮಯ್ಯ ಪದವಿ ಕಾಲೇಜು, ಬೆಂಗಳೂರು | 67 |
| ಸೇಂಟ್ ಅಲೋಶಿಯಸ್ ಕಾಲೇಜು, ಮಂಗಳೂರು | 73 |
| ಸೇಂಟ್ ಜೋಸೆಫ್ಸ್ ಕಾಮರ್ಸ್ ಕಾಲೇಜು, ಬೆಂಗಳೂರು | 98 |

| ರಾಜ್ಯದ ವಿಶ್ವವಿದ್ಯಾಲಯಗಳು | |
|---|---|
| ಐಐಎಸ್‌ಸಿ | 1 |
| ಎಂಎಎಚ್‌ಇ | 3 |
| ಜೆಎಸ್‌ಎಸ್ ಅಕಾಡೆಮಿ | 21 |
| ಜೈನ್ ವಿಶ್ವವಿದ್ಯಾಲಯ | 62 |
| ಕ್ರೈಸ್ಟ್ ವಿಶ್ವವಿದ್ಯಾಲಯ | 63 |
| ಬೆಂಗಳೂರು ವಿಶ್ವವಿದ್ಯಾಲಯ | 65 |
| ಮೈಸೂರು ವಿಶ್ವವಿದ್ಯಾಲಯ | 71 |
| ನಿಟ್ಟೆ | 80 |
| ಕೃಷಿ ವಿಶ್ವವಿದ್ಯಾಲಯ ಬೆಂಗಳೂರು | 95 |

- ಎನ್‌ಐಆರ್‌ಎಫ್‌ನ 10ನೇ ಆವೃತ್ತಿಯನ್ನು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಪ್ರಕಟಿಸಿದರು.
- 'ಸಮಗ್ರ' ವಿಭಾಗದಲ್ಲಿ ಭಾರತೀಯ ತಂತ್ರಜ್ಞಾನ ಸಂಸ್ಥೆ ಮದ್ರಾಸ್ (ಐಐಟಿ ಮದ್ರಾಸ್) ಸತತ 7ನೇ ವರ್ಷವೂ ಅಗ್ರಸ್ಥಾನದಲ್ಲಿ ಮುಂದುವರಿದಿದೆ. ಈ ವಿಭಾಗದಲ್ಲಿ ಬೆಂಗಳೂರಿನ ಐಐಎಸ್‌ಸಿ 2ನೇ ಸ್ಥಾನದಲ್ಲಿದ್ದರೆ, ಐಐಟಿ ಬಾಂಬೆ ಹಾಗೂ ಐಐಟಿ ದೆಹಲಿ ನಂತರದ ಸ್ಥಾನದಲ್ಲಿವೆ.
- ವಿಶ್ವವಿದ್ಯಾಲಯಗಳ ವಿಭಾಗದಲ್ಲಿ ಬೆಂಗಳೂರಿನ ಐಐಎಸ್‌ಸಿ ಅಗ್ರಸ್ಥಾನದಲ್ಲಿದೆ. ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ ಮೂರನೇ ಸ್ಥಾನದಲ್ಲಿದೆ. ಕರ್ನಾಟಕದ ಈ ಸಂಸ್ಥೆಯು, ಎನ್‌ಐಆರ್‌ಎಫ್ ಪಟ್ಟಿಯಲ್ಲಿ ಮೊದಲ ಮೂರು ಸ್ಥಾನಗಳಲ್ಲಿ ಸ್ಥಾನ ಪಡೆದ ಮೊದಲ ಖಾಸಗಿ ಶಿಕ್ಷಣ ಸಂಸ್ಥೆಯಾಗಿದೆ. ಜವಾಹರಲಾಲ್ ನೆಹರೂ ವಿಶ್ವವಿದ್ಯಾಲಯ ಎರಡನೇ ಸ್ಥಾನದಲ್ಲಿದೆ.
- ಕಾಲೇಜುಗಳ ವಿಭಾಗದಲ್ಲಿ ದೆಹಲಿ ವಿಶ್ವವಿದ್ಯಾಲಯದ ಹಿಂದೂ ಕಾಲೇಜು ಮೊದಲ ಹಾಗೂ ಮಿರಾಂಡಾ ಹೌಸ್ ಎರಡನೇ ಸ್ಥಾನದಲ್ಲಿವೆ. ಹಂಸರಾಜ್ ಕಾಲೇಜು ಮತ್ತು ಕಿರೋರಿ ಮಾಲ್ ಕಾಲೇಜು ನಂತರದ ಸ್ಥಾನದಲ್ಲಿವೆ.
- ಎಂಜಿನಿಯರಿಂಗ್ ಕಾಲೇಜುಗಳ ಮೊದಲ 10 ಸ್ಥಾನದಲ್ಲಿವೆ 9 ಐಐಟಿಗಳಿವೆ. ಐಐಟಿ ಮದ್ರಾಸ್, ಐಐಟಿ ಬಾಂಬೆ ಹಾಗೂ ಐಐಟಿ ದೆಹಲಿ ಕ್ರಮವಾಗಿ ಮೊದಲ ಮೂರು ಸ್ಥಾನದಲ್ಲಿವೆ. ತಿರುಚನಾಪಳ್ಳಿಯ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯು (ಎನ್‌ಐಟಿ) ಪಟ್ಟಿಯಲ್ಲಿರುವ ಐಐಟಿಯೇತರ ಸಂಸ್ಥೆಯಾಗಿದೆ.
- ರಾಜ್ಯದ ಸಂಸ್ಥೆಗಳಿಗೆ ಗೌರವ: ಸುರತ್ಕಲ್ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆ, ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಹಾಗೂ ನರಶಾಸ್ತ್ರ ಸಂಸ್ಥೆ, ಕ್ರಮವಾಗಿ 54ನೇ ಹಾಗೂ 60ನೇ ಸ್ಥಾನ ಗಳಿಸಿವೆ. ಖಾಸಗಿ

Dr. Rajkumar IAS Academy

ವಿಶ್ವವಿದ್ಯಾಲಯಗಳಲ್ಲಿ ಜೆಎಸ್‌ಎಸ್ ಅಕಾಡೆಮಿ 38ನೇ ಮತ್ತು ಕ್ರೈಸ್ಟ್ ವಿಶ್ವವಿದ್ಯಾಲಯ 96ನೇ ಸ್ಥಾನ ಪಡೆದಿವೆ.

- ಸರ್ಕಾರಿ ವಿಶ್ವವಿದ್ಯಾಲಯಗಳ ಪಟ್ಟಿಯಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ 50ನೇ ಸ್ಥಾನ ಪಡೆದಿದ್ದು, ರಾಜ್ಯದ ಯಾವುದೇ ಸರ್ಕಾರಿ ಕಾಲೇಜು ಟಾಪ್ 100ರಲ್ಲಿ ಸ್ಥಾನ ಪಡೆದಿಲ್ಲ.
- ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಮಣಿಪಾಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಇನೋವೇಶನ್ ಸಂಸ್ಥೆಗಳಲ್ಲಿ ಎಂ.ಎಸ್. ರಾಮಯ್ಯ ಟೆಕ್ನಾಲಜಿ, ಕ್ರೈಸ್ಟ್ ವಿಶ್ವವಿದ್ಯಾಲಯ, ಐಐಟಿ ಧಾರವಾಡ, ಮ್ಯಾನೇಜ್ಮೆಂಟ್ ಕಾಲೇಜುಗಳಲ್ಲಿ ಅಲಯನ್ಸ್ ವಿಶ್ವವಿದ್ಯಾಲಯ, ವೈದ್ಯಕೀಯ ಸಂಸ್ಥೆಗಳಲ್ಲಿ ಮಣಿಪಾಲ–ಮಂಗಳೂರಿನ ಕಸ್ತೂರಬಾ ಮೆಡಿಕಲ್ ಕಾಲೇಜುಗಳು, ಬೆಂಗಳೂರಿನ ಸೇಂಟ್ ಜಾನ್ಸ್ ಮೆಡಿಕಲ್ ಕಾಲೇಜು, ಬೆಳಗಾವಿಯ ಜೆಎನ್‌ಎಂಸಿ, ಎಂ.ಎಸ್. ರಾಮಯ್ಯ ಕಾಲೇಜು ಸ್ಥಾನ ಪಡೆದಿವೆ.
- 'ಕೆಲ ವಿಶ್ವವಿದ್ಯಾಲಯಗಳು ಎನ್‌ಐಆರ್‌ಎಫ್‌ಗೆ ಅರ್ಜಿ ಸಲ್ಲಿಸಿಲ್ಲ. ಬೋಧಕ ಸಿಬ್ಬಂದಿ ಕೊರತೆ, ಸಂಶೋಧನಾ ಚಟುವಟಿಕೆಗಳ ಸ್ಥಗಿತದ ಕಾರಣ ಕೆಲವು ಮಾನ್ಯತೆ ಕಳೆದುಕೊಂಡಿವೆ. ಎಲ್ಲ ಉನ್ನತ ಶಿಕ್ಷಣ ಸಂಸ್ಥೆಗಳು ಭಾಗಿಯಾದರೆ ರಾಜ್ಯಕ್ಕೆ ಇನ್ನೂ ಹೆಚ್ಚಿನ ಸ್ಥಾನಗಳು ಲಭಿಸಲಿವೆ' ಎನ್ನುತ್ತಾರೆ ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳು.

ಪ್ರಮುಖ ವಿಭಾಗಗಳು

- ।ಮ್ಯಾನೇಜ್‌ಮೆಂಟ್ ಕಾಲೇಜುಗಳ ವಿಭಾಗದಲ್ಲಿ ಅಹಮದಾಬಾದ್‌ನ ಐಐಎಂ ಮೊದಲ ಸ್ಥಾನಲ್ಲಿದ್ದರೆ ಐಐಎಂ ಬೆಂಗಳೂರು 2ನೇ ಸ್ಥಾನದಲ್ಲಿದೆ
- ।ಕಾನೂನು ವಿಭಾಗದಲ್ಲಿ 'ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ'ಯು ಮೊದಲ ಸ್ಥಾನ ಪಡೆದುಕೊಂಡಿದೆ. ದೆಹಲಿಯ ನ್ಯಾಷನಲ್ ಲಾ ಯೂನಿವರ್ಸಿಟಿ ಹಾಗೂ ಹೈದರಾಬಾದ್‌ನ ಎನ್ ಎಎಲ್‌ಎಸ್‌ಎಆರ್ ಯೂನಿವರ್ಸಿಟಿ ಕ್ರಮವಾಗಿ ಮೊದಲ ಮತ್ತು ಎರಡನೇ ಸ್ಥಾನದಲ್ಲಿವೆ
- ।ಸಂಶೋಧನಾ ಸಂಸ್ಥೆಗಳ ವಿಭಾಗದಲ್ಲಿ ಬೆಂಗಳೂರಿನ ಐಐಎಸ್‌ಸಿ ಮೊದಲ ಹಾಗೂ ಐಐಟಿ ಮದ್ರಾಸ್ 2ನೇ ಸ್ಥಾನದಲ್ಲಿವೆ
- ।ಮುಕ್ತ ವಿಶ್ವವಿದ್ಯಾಲಯ ವಿಭಾಗದಲ್ಲಿ ಇಂದಿರಾ ಗಾಂಧಿ ರಾಷ್ಟ್ರೀಯ ಮುಕ್ತ ವಿವಿ ಮೊದಲ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿವಿ ಮೈಸೂರು ಎರಡನೇ ಸ್ಥಾನದಲ್ಲಿದೆ

## ❖ ಗ್ರಾಹಕರಿಗೆ ನೇರವಾಗಿ ಸಾಲ ಪರವಾನಗಿ ಪಡೆದ ಅಮೆಜಾನ್

**ಸಂದರ್ಭ:** ಬೆಂಗಳೂರು ಮೂಲದ ಬ್ಯಾಂಕೇತರ ಹಣಕಾಸು ಕಂಪನಿ ಆಕ್ಸಿಯೊ ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಜಾಗತಿಕ ಇ–ಕಾಮರ್ಸ್ ಕಂಪನಿ ಅಮೆಜಾನ್ ತಿಳಿಸಿದೆ. ಅಲ್ಲದೆ, ದೇಶದಲ್ಲಿ ನೇರವಾಗಿ ಗ್ರಾಹಕರಿಗೆ ಸಾಲ ನೀಡುವ ಪರವಾನಗಿ ಪಡೆಯಲಾಗಿದೆ ಎಂದು ತಿಳಿಸಿದೆ.

- ಆಕ್ಸಿಯೊ 12 ವರ್ಷದ ಹಳೆಯದಾದ ಫಿನ್‌ಟೆಕ್ ಕಂಪನಿಯಾಗಿದೆ. ಸಣ್ಣ ಗ್ರಾಹಕರು ಮತ್ತು ಸಣ್ಣ ಉದ್ದಿಮೆಗಳಿಗೆ ಸಾಲವನ್ನು ನೀಡುತ್ತದೆ.
- 2018ರಿಂದ ಅಮೆಜಾನ್, ಆಕ್ಸಿಯೊ ಜೊತೆಗೆ ಒಪ್ಪಂದ ಮಾಡಿಕೊಂಡು ಸಾಲವನ್ನು ನೀಡುತ್ತಿತ್ತು. ಕಳೆದ ಡಿಸೆಂಬರ್‌ನಿಂದ ಸ್ವಾಧೀನ ಪ್ರಕ್ರಿಯೆ ಮಾತುಕತೆ ನಡೆಯುತ್ತಿತ್ತು. ಜೂನ್‌ನಲ್ಲಿ ಆರ್‌ಬಿಐ ಒಪ್ಪಂದಕ್ಕೆ ಅನುಮೋದಿಸಿದೆ ಎಂದು ಅಮೆಜಾನ್‌ನ ಉಪಾಧ್ಯಕ್ಷ ಮಹೇಂದ್ರ ನೆರೂರ್ಕರ್ ಹೇಳಿದ್ದಾರೆ.
- ಆಕ್ಸಿಯೊ ಸ್ವಾಧೀನದಿಂದ ಅಮೆಜಾನ್ ತನ್ನ ವೇದಿಕೆಯ ಮೂಲಕ ಗ್ರಾಹಕರಿಗೆ ಮತ್ತು ಸಣ್ಣ ಹಾಗೂ ಮಧ್ಯಮ ಪ್ರಮಾಣದ ಉದ್ದಿಮೆಗಳಿಗೆ ವಿವಿಧ ರೀತಿಯ ಸಾಲವನ್ನು ನೀಡಲು ಯೋಜಿಸಿದೆ ಎಂದು ಹೇಳಿದ್ದಾರೆ.

Rajkumar IAS/KAS Academy

- ದೇಶದಲ್ಲಿ ಫ್ಲಿಪ್‌ಕಾರ್ಟ್ ಸೇರಿದಂತೆ ಬಹುತೇಕ ಇ–ಕಾಮರ್ಸ್ ಕಂಪನಿಗಳು ಬ್ಯಾಂಕ್ ಮತ್ತು ಬ್ಯಾಂಕೇತರ ಸಂಸ್ಥೆಗಳ ಜೊತೆ ಪಾಲುದಾರಿಕೆ ಮಾಡಿಕೊಂಡು ಸಾಲ ನೀಡುತ್ತವೆ. ಆದರೆ, ಅಮೆಜಾನ್ ಈಗ ನೇರವಾಗಿ ಸಾಲ ನೀಡುವ ಪರವಾನಗಿ ಪಡೆದಿದೆ.

## ❖ ಕುಕಿ ಸಂಘಟನೆ ಜತೆ ಕೇಂದ್ರ ಒಪ್ಪಂದ

**ಸಂದರ್ಭ:** ಮಣಿಪುರದಲ್ಲಿ ಶಾಶ್ವತ ಶಾಂತಿ ಮತ್ತು ಸ್ಥಿರತೆ ಸ್ಥಾಪಿಸು ವುದೂ ಸೇರಿದಂತೆ ಹಲವು ನಿಯಮಗಳ ಕುರಿತ ಒಪ್ಪಂದಕ್ಕೆ ಕೇಂದ್ರ ಸರ್ಕಾರ ಹಾಗೂ ಎರಡು ಪ್ರಮುಖ ಕುಕಿ ಸಂಘಟನೆ ಗಳು ಸಹಿ ಹಾಕಿದವು.

- ‘ಕುಕಿ ರಾಷ್ಟ್ರೀಯ ಸಂಘಟಣೆ (ಕೆಎನ್‌ಒ) ಮತ್ತು ಯುನೈಟೆಡ್ ಪೀಪಲ್ಸ್ ಫ್ರಂಟ್ (ಯುಪಿಎಫ್) ಕಾರ್ಯಾಚರಣೆ ನಿಗ್ರಹ (ಎಸ್‌ಒಒ) ಒಪ್ಪಂದಕ್ಕೆ ಸಹಿ ಹಾಕಿವೆ. ಇದು ರಾಜ್ಯದಲ್ಲಿ ಶಾಂತಿ ಸ್ಥಾಪನೆ ಗಾಗಿ ನಡೆಯುತ್ತಿರುವ ಪ್ರಯತ್ನಗಳ ಮೇಲೆ ಸಕಾರಾತ್ಮಕ ಪರಿಣಾಮ ಬೀರಲಿದೆ’ ಎಂದು ಅಧಿಕಾರಿಗಳು ತಿಳಿಸಿದ್ದಾರೆ.
- ಕಳೆದ ಕೆಲ ದಿನಗಳಿಂದ ಗೃಹ ಸಚಿವಾಲಯದ ಅಧಿಕಾರಿಗಳು ಮತ್ತು ಕುಕಿ ಗುಂಪುಗಳ ನಿಯೋಗದ ನಡುವೆ ನಡೆದ ಸರಣಿ ಸಭೆಗಳ ಬಳಿಕ ಈ ಒಪ್ಪಂದ ನಡೆದಿದೆ ಎಂದು ಗೃಹ ಸಚಿವಾಲಯ ಬಿಡುಗಡೆ ಮಾಡಿದ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಲಾಗಿದೆ.
- ‘ಇಂದು ದೆಹಲಿಯಲ್ಲಿ ಗೃಹ ಸಚಿವಾಲಯ, ಮಣಿಪುರ ಸರ್ಕಾರ, ಕೆಎನ್‌ಒ ಮತ್ತು ಯುಪಿಎಫ್ ಪ್ರತಿನಿಧಿಗಳ ನಡುವೆ ತ್ರಿಪಕ್ಷೀಯ ಸಭೆ ನಡೆಯಿತು. ಒಪ್ಪಂದಕ್ಕೆ ಸಹಿ ಹಾಕಿದ ದಿನದಿಂದ ಒಂದು ವರ್ಷದ ಅವಧಿಗೆ ಜಾರಿಗೆ ಬರುವಂತೆ ನಿಯಮಗಳು ಮತ್ತು ಷರತ್ತು ಗಳ ಅನ್ವಯ ಎಲ್ಲ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸುವ ಒಪ್ಪಂದಕ್ಕೆ ಸಹಿ ಹಾಕಲಾಗಿದೆ’ ಎಂದು ಗೃಹ ಸಚಿವಾಲಯ ತಿಳಿಸಿದೆ.
- ಮಣಿಪುರದ ಪ್ರಾದೇಶಿಕ ಸಮಗ್ರತೆ ಯನ್ನು ಕಾಪಾಡಿಕೊಳ್ಳಲು ಮತ್ತು ಮಾತುಕತೆಯ ಮೂಲಕ ಶಾಶ್ವತ ಶಾಂತಿ ಮತ್ತು ಸ್ಥಿರತೆಯನ್ನು ತರಲು ಎಲ್ಲರೂ ಒಪ್ಪಿಕೊಂಡಿದ್ದಾರೆ.
- ಸಂಘರ್ಷ ಪೀಡಿತ ಪ್ರದೇಶಗಳಿಂದ ಏಳು ಶಿಬಿರಗಳನ್ನು ಸ್ಥಳಾಂತರಿಸಬೇಕು. ನಿರಾಶ್ರಿತರ ಶಿಬಿರಗಳ ಸಂಖ್ಯೆಯನ್ನು ಕಡಿಮೆ ಮಾಡಬೇಕು. ಹತ್ತಿರದ ಸಿಆರ್‌ಪಿಎಫ್ ಮತ್ತು ಬಿಎಸ್‌ಎಫ್ ಶಿಬಿರ ಗಳಿಗೆ ಶಸ್ತ್ರಾಸ್ತ್ರಗಳನ್ನು ಹಸ್ತಾಂತರಿಸ ಬೇಕು. ವಿದೇಶಿ ಪ್ರಜೆಗಳನ್ನು ಪಟ್ಟಿಯಿಂದ ತೆಗೆದುಹಾಕುವುದು ಮತ್ತು ಸಂಘಟನೆಯ ಸದಸ್ಯರನ್ನು ಭದ್ರತಾ ಪಡೆಗಳ ಕಟ್ಟುನಿಟ್ಟಿನ ತನಿಖೆಗೆ ಒಳಪಡಿಸಲು ಕೆಎನ್‌ಒ ಮತ್ತು ಯುಪಿಎಫ್ ಒಪ್ಪಿಕೊಂಡಿವೆ.
- 2008ರಲ್ಲಿ ಮೊದಲ ಬಾರಿಗೆ ಎಸ್‌ಒಒ ಒಪ್ಪಂದ ನಡೆದಿತ್ತು. ಬಳಿಕ ಅದನ್ನು ನಿಗದಿತ ಅವಧಿಗೆ ನವೀಕರಿಸ ಲಾಗುತ್ತಿತ್ತು. ಆದರೆ, ಜನಾಂಗೀಯ ಕಲಹದಿಂದಾಗಿ ಫೆಬ್ರುವರಿ 2024ರಿಂದ ಈ ಒಪ್ಪಂದ ಮುಂದುವರಿದಿರಲಿಲ್ಲ.

Dr. Rajkumar IAS/KAS Academy

## ❖ ಶಿಶು ಮರಣ ಪ್ರಮಾಣ ಶೇ 37ರಷ್ಟು ಇಳಿಕೆ

**ಸಂದರ್ಭ:** ದೇಶದಲ್ಲಿ ಶಿಶುಗಳ ಮರಣ ಪ್ರಮಾಣದಲ್ಲಿ (ಐಎಂಆರ್) ಗಣನೀಯ ಇಳಿಕೆ ದಾಖಲಾಗಿದೆ. 2013ಕ್ಕೆ ಹೋಲಿಸಿದರೆ 2023ರಲ್ಲಿ ಶಿಶುಗಳ ಮರಣ ಪ್ರಮಾಣವು ದಾಖಲೆಯ ಶೇ 37ರಷ್ಟು ಕಡಿಮೆಯಾಗಿದೆ.

- ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ಬಿಡುಗಡೆಗೊಳಿಸಿರುವ 2023ರ ಮಾದರಿ ನೋಂದಣಿ ವರದಿಯಲ್ಲಿ ಈ ವಿವರಗಳನ್ನು ನೀಡಲಾಗಿದೆ. ಒಂದು ವರ್ಷದಲ್ಲಿ ಜನಿಸಿದ ಪ್ರತಿ ಸಾವಿರ ಮಗುವಿನ ಪೈಕಿ ಮರಣ ಹೊಂದಿದ ಮಕ್ಕಳ ಸಂಖ್ಯೆಯನ್ನು ಪರಿಗಣಿಸಿ ಈ ದತ್ತಾಂಶ ನಿಗದಿಪಡಿಸಲಾಗುತ್ತದೆ.
- 2013ರಲ್ಲಿ ಶೇ 40ಕ್ಕೆ ತಲುಪಿದ್ದ ಶಿಶುಗಳ ಮರಣ ಪ್ರಮಾಣವು 2023ರ ವೇಳೆಗೆ 25ಕ್ಕೆ ಇಳಿಕೆಯಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಅಲ್ಲದೇ, 1971ಕ್ಕೆ ಹೋಲಿಸಿದರೆ ಶಿಶುಗಳ ಮರಣ ಪ್ರಮಾಣವು 2023ರ ವೇಳೆಗೆ ಬರೋಬ್ಬರಿ ಶೇ 80ರಷ್ಟು ಇಳಿಕೆಯಾಗಿದೆ. 1971ರಲ್ಲಿ ಶಿಶುಗಳ ಮರಣ ಸಂಖ್ಯೆಯು 129 ಆಗಿತ್ತು ಎಂದೂ ವರದಿ ಉಲ್ಲೇಖಿಸಿದೆ.

## ❖ ಜೆಪಿಸಿ ರಚನೆ; ಮತ್ತಷ್ಟು ವಿಳಂಬ: ಸಮಿತಿಯಲ್ಲಿ ಸೇರದಿರಲು ಹಲವು ಪಕ್ಷಗಳ ನಿರ್ಧಾರ

**ಸಂದರ್ಭ:** ಬಂಧನಕ್ಕೆ ಒಳಗಾಗಿ 30 ದಿನ ಜೈಲಿನಲ್ಲಿದ್ದರೆ ಪ್ರಧಾನಿ, ಮುಖ್ಯಮಂತ್ರಿ ಹಾಗೂ ಸಚಿವರನ್ನು ಪದಚ್ಯುತಿಗೊಳಿಸುವುದಕ್ಕೆ ಅನುವು ಮಾಡಿಕೊಡುವ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಲೋಕಸಭೆಯಲ್ಲಿ ಮಂಡಿಸಿ ಎರಡು ವಾರಗಳು ಕಳೆದಿವೆ. ಆದರೆ ಮಸೂದೆಯನ್ನು ಪರಿಶೀಲಿಸಲಿ ರುವ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಸದಸ್ಯರ ಹೆಸರು ಇನ್ನೂ ಅಂತಿಮಗೊಂಡಿಲ್ಲ.

- ವಕ್ಫ್ (ತಿದ್ದುಪಡಿ) ಮಸೂದೆ– 2024 ಮತ್ತು 'ಒಂದು ರಾಷ್ಟ್ರ–ಒಂದು ಚುನಾವಣೆ'ಗೆ ಸಂಬಂಧಿಸಿದ ಮಸೂದೆಗಳ ಪರಿಶೀಲನೆಗೆ ಜೆಪಿಸಿ ರಚನೆ ಪ್ರಕ್ರಿಯೆ ತ್ವರಿತವಾಗಿ ನಡೆದಿತ್ತು. ಆದರೆ ಈ ಮಸೂದೆಯ ವಿಚಾರದಲ್ಲಿ ಜೆಪಿಸಿ ರಚನೆ ವಿಳಂಬವಾಗಿದೆ.
- ಪ್ರಧಾನಿ, ಮುಖ್ಯಮಂತ್ರಿ ಮತ್ತು ಸಚಿವರನ್ನು ಹುದ್ದೆಯಿಂದ ಪದಚ್ಯುತಿ ಗೊಳಿಸಲು ಸಾಧ್ಯವಾಗುವಂತಹ ಮೂರು ಮಸೂದೆಗಳನ್ನು ಗೃಹ ಸಚಿವ ಅಮಿತ್ ಶಾ ಅವರು ಆಗಸ್ಟ್ 20ರಂದು ಲೋಕಸಭೆಯಲ್ಲಿ ಮಂಡಿಸಿದ್ದರು. ಸಂವಿಧಾನ (130ನೇ ತಿದ್ದುಪಡಿ) ಮಸೂದೆ 2025, ಕೇಂದ್ರಾಡಳಿತ ಸರ್ಕಾರ ತಿದ್ದುಪಡಿ ಮಸೂದೆ, ಜಮ್ಮು ಮತ್ತು ಕಾಶ್ಮೀರ ಪುನರ್‌ರಚನೆ ತಿದ್ದುಪಡಿ ಮಸೂದೆ– 2025 ಗಳನ್ನು ಪರಿಶೀಲನೆಗೆ ಜೆಪಿಸಿಗೆ ಒಪ್ಪಿಸಲಾಗಿದೆ ಎಂದು ಶಾ ಹೇಳಿದ್ದರು.
- ತೃಣಮೂಲ ಕಾಂಗ್ರೆಸ್ (ಟಿಎಂಸಿ), ಸಮಾಜವಾದಿ ಪಾರ್ಟಿ (ಎಸ್‌ಪಿ), ಎಎಪಿ ಮತ್ತು ಶಿವಸೇನಾ (ಯುಬಿಟಿ) ಪಕ್ಷಗಳು ಜೆಪಿಸಿ ಸೇರುವುದಿಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿವೆ. ಈ ಮಸೂದೆ 'ರಾಜಕೀಯ ಅಸ್ತ್ರ'ವಾಗಿ ಬಳಕೆಯಾಗಬಹುದು ಎಂಬುದು ಈ ಪಕ್ಷಗಳ ಆರೋಪ.
- ಜೆಪಿಸಿ ಸೇರುವ ಕುರಿತು ಕಾಂಗ್ರೆಸ್ ಪಕ್ಷ ಇದುವರೆಗೂ ಲೋಕಸಭಾ ಸಚಿವಾಲಯಕ್ಕೆ ಯಾವುದೇ ಮಾಹಿತಿ ನೀಡಿಲ್ಲ ಎಂದು ಮೂಲಗಳು ತಿಳಿಸಿವೆ. ಸಮಿತಿ ಸೇರುವ ಬಗ್ಗೆ ಪಕ್ಷದೊಳಗೆ ಹಾಗೂ 'ಇಂಡಿಯಾ' ಮೈತ್ರಿಕೂಟ ದಲ್ಲಿ ಭಿನ್ನಾಭಿಪ್ರಾಯ ಇದೆ. ತನ್ನ ನಿರ್ಧಾರವನ್ನು ಇನ್ನೂ ಬಹಿರಂಗಪಡಿಸ ದಿರುವ ಆರ್‌ಜೆಡಿಗೆ ಕೂಡ ಸಮಿತಿಗೆ ಸೇರುವ ಇಷ್ಟವಿಲ್ಲ.
- ಸಮಿತಿಗೆ ಸೇರಬೇಕೆ ಅಥವಾ ಬೇಡವೇ ಎಂಬ ವಿಷಯದ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದು ಕಾಂಗ್ರೆಸ್ ಪಕ್ಷದ ಮೂಲಗಳು ಖಚಿತಪಡಿಸಿವೆ. ಪರ–ವಿರೋಧದ ವಾದಗಳನ್ನು ಆಲಿಸಿದ ಬಳಿಕವೇ ಅಂತಿಮ ನಿರ್ಧಾರ ತೆಗೆದುಕೊಳ್ಳಲು ಪಕ್ಷದ ಹೈಕಮಾಂಡ್ ನಿರ್ಧರಿಸಿದೆ.
- ಸಮಿತಿಗೆ ಸೇರುವುದರಿಂದ 'ಇಂಡಿಯಾ' ಮೈತ್ರಿಕೂಟದ ಇತರ ಪಾಲುದಾರರನ್ನು ಕಡೆಗಣಿಸಿದಂತೆ ಆಗುತ್ತದೆ ಎಂಬ ಆತಂಕವೂ ಪಕ್ಷವನ್ನು ಕಾಡುತ್ತಿದೆ. 'ಪಕ್ಷದೊಳಗೆ ಚರ್ಚೆ ಮುಂದುವರಿದಿದ್ದು, ಒಮ್ಮತದ ತೀರ್ಮಾನ ತೆಗೆದುಕೊಳ್ಳಲಾಗುತ್ತದೆ' ಎಂದು ಕಾಂಗ್ರೆಸ್‌ನ ಹಿರಿಯ ನಾಯಕರೊಬ್ಬರು ತಿಳಿಸಿದ್ದಾರೆ.

## ❖ ಪೊಂಗ ಭರ್ತಿ: ತುಂಬಿದ ಯಮುನೆ

**ಸಂದರ್ಭ:** ಪಂಜಾಬ್, ಹಿಮಾಚಲ ಪ್ರದೇಶ ಮತ್ತು ಜಮ್ಮುವಿನಲ್ಲಿ ಮಳೆ ಮುಂದುವರಿದಿದೆ. ಪಂಜಾಬ್‌ನಲ್ಲಿ ಸತಲುಜ್ ನದಿಗೆ ಕಟ್ಟಲಾಗಿರುವ ಬಾಕ್ರಾ ಅಣೆಕಟ್ಟು ತುಂಬಲು ಕೆಲವೇ ಅಡಿಗಳಿವೆ. ಬಿಯಾಸ್ ನದಿಗೆ ಕಟ್ಟಲಾಗಿರುವ ಪೊಂಗ ಅಣೆಕಟ್ಟಿನಲ್ಲಿ ಗರಿಷ್ಠ ಸಾಮರ್ಥ್ಯ ಮೀರಿ ನೀರು ತುಂಬಿದೆ.

**ಪಂಜಾಬ್**

- **ಸತಲುಜ್, ರಾವಿ ಮತ್ತು ಬಿಯಾಸ್ ನದಿಗಳು** ಉಕ್ಕಿ ಹರಿಯುತ್ತಿವೆ. ಈ ಕಾರಣದಿಂದ ಪಂಜಾಬ್‌ನ ಎಲ್ಲ 23 ಜಿಲ್ಲೆಗಳಲ್ಲಿ ಪ್ರವಾಹ ಸ್ಥಿತಿ ಉಂಟಾಗಿದೆ. ಇದರೊಂದಿಗೆ, ಹಿಮಾಚಲ ಪ್ರದೇಶ ಹಾಗೂ ಜಮ್ಮು ಮತ್ತು ಕಾಶ್ಮೀರದಲ್ಲಿಯೂ ಭಾರಿ ಮಳೆಯಾಗುತ್ತಿದೆ. ಇದು ಕೂಡ ಪಂಜಾಬ್‌ನಲ್ಲಿ ಪ್ರವಾಹ ಉಂಟಾಗಲು ಕಾರಣವಾಗಿದೆ.
- ಯಮುನಾ ನದಿಯ ನೀರಿನ ಮಟ್ಟವು 207.46 ಮೀಟರ್ ತಲುಪಿದೆ.

**ಹಿಮಾಚಲ ಪ್ರದೇಶ**

- ಕುಲ್ಲು ಜಿಲ್ಲೆಯಲ್ಲಿ ಭೂಕುಸಿತ ಸಂಭವಿಸಿದ ಕಾರಣ ಎರಡು ಮನೆಗಳು ಕುಸಿದಿವೆ. ಜೂನ್ 20ರಿಂದ ಈಚೆಗೆ ರಾಜ್ಯದಲ್ಲಿ ಒಟ್ಟು 95 ದಿಢೀರ್ ಪ್ರವಾಹ, 45 ಮೇಘಸ್ಫೋಟ, 127 ಪ್ರಮುಖ ಭೂಕುಸಿತದ ಘಟನೆಗಳು ನಡೆದಿವೆ.

## ❖ ಜಿಎಸ್‌ಟಿ: ತುಟ್ಟಿಯಾಗಲಿರುವ ಐಪಿಎಲ್ ಟಿಕೆಟ್

**ಸಂದರ್ಭ:** ಮುಂದಿನ ಆವೃತ್ತಿಯಿಂದ ಐಪಿಎಲ್ ಪಂದ್ಯ ವೀಕ್ಷಿಸಲು ಹೋಗುವವರು ಟಿಕೆಟ್‌ಗೆ ಹೆಚ್ಚಿನ ಹಣ ತೆರ ಬೇಕಾಗುತ್ತದೆ. ಸರ್ಕಾರ, ಇಂಥ ಪಂದ್ಯಗಳ ಟಿಕೆಟ್‌ಗೆ ವಿಧಿಸುವ ಜಿಎಸ್‌ಟಿಯನ್ನು ಶೇ 28 ರಿಂದ 40ರ ವ್ಯಾಪ್ತಿಗೆ ತಂದಿದೆ.

- 'ಕ್ಯಾಸಿನೊ, ರೇಸ್ ಕ್ಲಬ್‌ಗಳ ಪ್ರವೇಶ ಅಥವಾ ಐಪಿಎಲ್‌ನಂಥ ಕ್ರೀಡಾ ಕಾರ್ಯ ಕ್ರಮಗಳಿಗೆ ಪ್ರವೇಶದ ಟಿಕೆಟ್‌ಗಳ ಮೇಲೆ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಜೊತೆ ಶೇ 40 ಜಿಎಸ್‌ಟಿ ವಿಧಿಸಲಾಗುತ್ತಿದೆ.
- ₹500 ಮೂಲದರದ ಟಿಕೆಟ್‌ಗೆ ಈ ಹಿಂದೆ ಶೇ 28 ಜಿಎಸ್‌ಟಿ ಸೇರಿ ₹640 ಆಗುತಿತ್ತು. ಈಗ ಶೇ 40 ಜಿಎಸ್‌ಟಿ ಹೇರಿಕೆ ಯಿಂದ ಟಿಕೆಟ್ ದರ ₹700 ಆಗಲಿದೆ. ಐಪಿಎಲ್ ಟಿಕೆಟ್‌ಗಳನ್ನು 'ಐಷಾರಾಮಿ ಸರಕು'ಗಳ ವ್ಯಾಪ್ತಿಗೆ ತರಲಾಗಿದೆ. ಆದರೆ ಅಂತರರಾಷ್ಟ್ರೀಯ ಪಂದ್ಯಗಳ ಟಿಕೆಟ್ ದರ ಕೊಂಚ ಅಗ್ಗವಾಗಲಿದೆ. ಇತರೆ ಕ್ರೀಡಾ ಚಟುವಟಿಕೆಯಡಿ ಬರುವುದರಿಂದ ಈ ಪಂದ್ಯಗಳ ಟಿಕೆಟ್ ಮೇಲೆ ಶೇ 18 ಜಿಎಸ್‌ಟಿ ಮಾತ್ರ ವಿಧಿಸಲಾಗುತ್ತದೆ.

Dr. Rajkumar IAS Academy

## ❖ ಶಾಲೆಗಳ ಅಭಿವೃದ್ಧಿಗೆ ಇನ್ನು 'ಸಿಎಸ್‌ಆರ್ ನಿಧಿ'

**ಸಂದರ್ಭ:** 'ಕಾರ್ಪೊರೇಟ್ ಸಂಸ್ಥೆಗಳ ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿಎಸ್‌ಆರ್) ಬಳಸಿ ಕೊಂಡು ಸರ್ಕಾರಿ ಶಾಲೆಗಳ ಸ್ಥಾಪನೆ, ಅಭಿವೃದ್ಧಿ ಮಾಡುವ ಕುರಿತು ಮುಂದಿನ ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ ತೆಗೆದುಕೊಳ್ಳಲಾಗುವುದು' ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

- 'ಸರ್ಕಾರಿ ಶಾಲೆಗಳ ಸ್ಥಾಪನೆ, ಅತ್ಯುತ್ತಮ ಕಟ್ಟಡಗಳನ್ನು ನಿರ್ಮಿಸಿ ಕೊಡುವ ಕಂಪನಿಗಳ ಹೆಸರನ್ನೇ ಶಾಲೆಗೆ ಇಡಲು ಅನುಮತಿ ನೀಡಲಾಗುವುದು. ನಗರದ ಮಾದರಿಯಲ್ಲಿ ಗ್ರಾಮೀಣ ಪ್ರದೇಶದ ಮಕ್ಕಳು ಸಿಬಿಎಸ್‌ಇ ಮಾದರಿ ಶಿಕ್ಷಣ ಪಡೆಯಲು ಅವಕಾಶಕಲ್ಪಿಸಲಾಗುವುದು.
- 'ಈಗಾಗಲೇ ಒಂದಷ್ಟು ಶಾಲೆಗಳು ಪ್ರಾರಂಭವಾಗಿವೆ. ಮುಂದಿನ ಶೈಕ್ಷಣಿಕ ವರ್ಷದ ಒಳಗೆ 2,000 ಶಾಲೆಗಳ ನಿರ್ಮಾಣದ ಗುರಿ ಇಟ್ಟುಕೊಂಡಿದ್ದೇವೆ. ರಾಜ್ಯದಲ್ಲಿ ₹7,800 ಕೋಟಿಯಷ್ಟು ಸಿಎಸ್‌ಆರ್ ಹಣ ಲಭ್ಯವಿದೆ. ನನ್ನ ಕ್ಷೇತ್ರದಲ್ಲಿ ಟೊಯೊಟಾ ಕಂಪನಿ ತಲಾ ₹10 ಕೋಟಿ ವೆಚ್ಚದಲ್ಲಿ ಏಳು ಕೆಪಿಎಸ್ ಶಾಲೆ ಕಟ್ಟಡ ನಿರ್ಮಾಣ ಮಾಡುತ್ತಿದೆ. ಅದೇ ರೀತಿ ಇತರೆ ಉದ್ಯಮಿಗಳನ್ನೂ ಉತ್ತೇಜಿಸಲಾಗುವುದು. ಗ್ರಾಮೀಣ ಭಾಗದಲ್ಲಿ ಮೂರು ಪಂಚಾಯಿತಿಗಳಿಗೆ ಒಂದು ಕೆಪಿಎಸ್ ಶಾಲೆ ಆರಂಭಿಸಲಾಗುವುದು. ಮಕ್ಕಳು ಸರ್ಕಾರಿ ಶಾಲೆಗಳನ್ನು ತೊರೆಯದಂತೆ ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗುವುದು.

## ❖ 'ಜಿಎಸ್‌ಟಿ ಪರಿಷ್ಕರಣೆ: ಲಾಭ ಗ್ರಾಹಕರಿಗೆ'

**ಸಂದರ್ಭ:** ಜಿಎಸ್‌ಟಿ ದರಗಳ ಪರಿಷ್ಕರಣೆಯ ಪ್ರಯೋಜನಗಳನ್ನು ಗ್ರಾಹಕರಿಗೆ ಸಂಪೂರ್ಣವಾಗಿ ವರ್ಗಾಯಿಸುವುದನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ನಿಗಾವಹಿಸಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪೀಯೂಷ್ ಗೋಯಲ್.

- ವಿವಿಧ ವಸ್ತುಗಳ ಮೇಲಿನ ತೆರಿಗೆ ಇಳಿಕೆಯು ಅವುಗಳ ಬೆಲೆಗಳಲ್ಲಿ ಪ್ರತಿಫಲಿಸಲಿವೆ ಎಂಬ ಭರವಸೆಯನ್ನು ಉದ್ಯಮ ಕ್ಷೇತ್ರ ನೀಡಿರುವುದಾಗಿ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.
- ನಿತ್ಯ ಬಳಕೆಯ ಹತ್ತು ಹಲವು ಉತ್ಪನ್ನಗಳು, ಸೇವೆಗಳ ಮೇಲಿನ ತೆರಿಗೆ ಪ್ರಮಾಣವನ್ನು ಕಡಿಮೆ ಮಾಡುವ ತೀರ್ಮಾನವನ್ನು ಜಿಎಸ್‌ಟಿ ಮಂಡಳಿಯು ಇತ್ತೀಚೆಗೆ ತೆಗೆದುಕೊಂಡಿದ್ದು, ಈ ತೀರ್ಮಾನಗಳು ನವರಾತ್ರಿಯ ಮೊದಲ ದಿನವಾದ ಇದೇ 22ರಿಂದಲೇ ಜಾರಿಗೆ ಬರಲಿವೆ.

## ❖ 'ಚಿಲ್ಲರೆ ಹಣದುಬ್ಬರ ಇಳಿಕೆ ನಿರೀಕ್ಷೆ'

**ಸಂದರ್ಭ:** ಜಿಎಸ್‌ಟಿ ಸರಳೀಕರಣದಿಂದ ಮುಂದಿನ ಆರ್ಥಿಕ ವರ್ಷದಲ್ಲಿ ದೇಶದ ಚಿಲ್ಲರೆ ಹಣದುಬ್ಬರವು ಶೇ 0.65ರಿಂದ ಶೇ 0.75ರಷ್ಟು ಇಳಿಕೆ ಆಗಲಿದೆ ಎಂದು ಎಸ್‌ಬಿಐ ರಿಸರ್ಚ್ ತಿಳಿಸಿದೆ.

- ಮನೆ ಬಳಕೆಯ ಅಗತ್ಯ ವಸ್ತುಗಳು ಮತ್ತು ಸೇವೆಗಳ ಮೇಲಿನ ತೆರಿಗೆಯು ಜಿಎಸ್‌ಟಿ ಸರಳೀಕರಣದಿಂದ ಕಡಿಮೆ ಆಗಲಿದೆ. ಇದು ಚಿಲ್ಲರೆ ಹಣದುಬ್ಬರ ಇಳಿಕೆಗೆ ನೆರವಾಗಲಿದೆ ಎಂದು ತಿಳಿಸಿದೆ.
- ಅಗತ್ಯ ವಸ್ತುಗಳ (ಅಂದಾಜು 295 ಸರಕುಗಳು) ಮೇಲಿನ ತೆರಿಗೆ ಶೇ 12ರಿಂದ ಶೇ 5ಕ್ಕೆ ಇಳಿದಿದೆ ಅಥವಾ ಶೂನ್ಯವಾಗಿದೆ. ಹೀಗಾಗಿ, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ) ಆಧಾರಿತ ಚಿಲ್ಲರೆ ಹಣದುಬ್ಬರ ಪ್ರಮಾಣವು ಶೇ 0.25ರಿಂದ ಶೇ 0.30ರಷ್ಟು ಕಡಿಮೆಯಾಗಲಿದೆ.
- ಅಲ್ಲದೆ, ಸರಕು ಮತ್ತು ಸೇವೆಗಳ ಮೇಲಿನ ತೆರಿಗೆ ಸಹ ಇಳಿಕೆಯಾಗಿದ್ದು, ಶೇ 0.40ರಿಂದ ಶೇ 0.45ರಷ್ಟು ಹಣದುಬ್ಬರ ಕಡಿಮೆಯಾಗಲಿದೆ. ಒಟ್ಟಾರೆ, ಮುಂದಿನ ಆರ್ಥಿಕ ವರ್ಷದ ವೇಳೆಗೆ ಹಣದುಬ್ಬರ ಶೇ 0.65ರಿಂದ ಶೇ 0.75ರಷ್ಟು ಇಳಿಕೆ ಆಗಲಿದೆ ಎಂದು ತಿಳಿಸಿದೆ.

ಟಾಟಾ ಮೋಟರ್ಸ್ ವಾಹನ ಬೆಲೆ ಇಳಿಕೆ

- ದೇಶದ ವಾಹನ ತಯಾರಿಕಾ ಕಂಪನಿ ಟಾಟಾ ಮೋಟರ್ಸ್ ಸೆಪ್ಟೆಂಬರ್ 22ರಿಂದ ಜಾರಿಗೆ ಬರುವಂತೆ ತನ್ನ ಪ್ರಯಾಣಿಕ ವಾಹನಗಳ ಬೆಲೆಯನ್ನು ಕಡಿತಗೊಳಿಸಿದೆ.
- ಟಿಯಾಗೊ ಕಾರಿನ ಬೆಲೆಯನ್ನು ₹75 ಸಾವಿರ ಕಡಿಮೆ ಮಾಡಿದೆ. ಟಿಗಾರ್ (₹80 ಸಾವಿರ), ಆಲ್ಟ್ರೋಜ್ (₹1.10 ಲಕ್ಷ), ಪಂಚ್ (₹85 ಸಾವಿರ), ನೆಕ್ಸಾನ್ (₹1.55 ಲಕ್ಷ), ಹ್ಯಾರಿಯರ್ ₹1.4 ಲಕ್ಷ ಮತ್ತು ಸಫಾರಿ ದರ ₹1.45 ಲಕ್ಷದವರೆಗೆ ಕಡಿಮೆ ಮಾಡಲಾಗಿದೆ ಎಂದು ಕಂಪನಿ ತಿಳಿಸಿದೆ.
- ಜಿಎಸ್‌ಟಿ ಕಡಿತದ ಪೂರ್ಣ ಲಾಭವನ್ನು ಗ್ರಾಹಕರಿಗೆ ವರ್ಗಾಯಿಸಲಾಗು ವುದು ಎಂದು ಟಾಟಾ ಮೋಟರ್ಸ್ ತಿಳಿಸಿದೆ.

## ❖ 'ವ್ಯಾಪಾರ ಒಪ್ಪಂದ: ಭಾರತದ ಜೊತೆ ಶೀಘ್ರ ಮಾತುಕತೆ'

**ಸಂದರ್ಭ:** ವ್ಯಾಪಾರ ಒಪ್ಪಂದ ಕುರಿತಂತೆ ಅಮೆರಿಕದೊಂದಿಗೆ ಭಾರತ ಶೀಘ್ರವೇ ಮಾತುಕತೆ ನಡೆಸಲಿದೆ ಎಂದು ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೋವರ್ಡ್ ಲುಟ್ನಿಕ್ ಹೇಳಿದ್ದಾರೆ.

- 'ಒಂದು ಅಥವಾ ಎರಡು ತಿಂಗಳ ಒಳಗಾಗಿ ಭಾರತ ಮಾತುಕತೆಗೆ ಮುಂದಾಗಲಿದೆ. ಕ್ಷಮೆ ಕೋರುವ ಜೊತೆಗೆ ಟ್ರಂಪ್ ಅವರೊಂದಿಗೆ ವ್ಯಾಪಾರ ಒಪ್ಪಂದ ಮಾಡಿಕೊಳ್ಳಲು ಕೂಡ ಯತ್ನಿಸಲಿದೆ.
- ಪ್ರಧಾನಿ ಮೋದಿ ಅವರೊಂದಿಗಿನ ಒಪ್ಪಂದ ಯಾವ ರೀತಿಯದ್ದಾಗಿರಬೇಕು ಎಂಬುದನ್ನು ಟ್ರಂಪ್ ಅವರೇ ನಿರ್ಧರಿಸುವರು' ಎಂದು ಬ್ಲೂಮ್‌ಬರ್ಗ್‌ಗೆ ನೀಡಿದ ಸಂದರ್ಶನದಲ್ಲಿ ಲುಟ್ನಿಕ್ ಹೇಳಿದ್ದಾರೆ.
- 'ಉಕ್ರೇನ್ ಮತ್ತು ರಷ್ಯಾ ನಡುವಿನ ಯುದ್ಧಕ್ಕೂ ಮೊದಲು ರಷ್ಯಾದಿಂದ ಭಾರತ ಖರೀದಿಸುತ್ತಿದ್ದ ತೈಲದ ಪ್ರಮಾಣ ಶೇ2ಕ್ಕಿಂತಲೂ ಕಡಿಮೆ ಇತ್ತು. ಈಗ, ಭಾರತ ತನ್ನ ಬೇಡಿಕೆಯ ಶೇ40ರಷ್ಟು ತೈಲವನ್ನು ರಷ್ಯಾದಿಂದ ಖರೀದಿ ಮಾಡುತ್ತಿದೆ' ಎಂದಿದ್ದಾರೆ.

## ❖ 'ಹಣ ಮರುಪಾವತಿ: ಹಕ್ಕು ವಿವಾದ ಇತ್ಯರ್ಥಪಡಿಸಿ'

**ಸಂದರ್ಭ:** ಭವಿಷ್ಯನಿಧಿ ವಂತಿಗೆ ಪಾವತಿಸುವಲ್ಲಿ ವಿಫಲವಾಗಿರುವ ಅಕ್ರೊಪೆಟಲ್ ಟೆಕ್ನಾಲಜೀಸ್ ಪ್ರೈವೆಟ್ ಲಿಮಿಟೆಡ್ ಕಂಪನಿಯ ಸ್ವತ್ತುಗಳ ಮಾರಾಟದಿಂದ ಸಂಗ್ರಹವಾಗಿರುವ ಹಣದ ಮೇಲೆ, ಇಪಿಎಫ್‌ಒ ಹಾಗೂ ಸಾಲ ನೀಡಿರುವ ಎಕ್ಸಿಸ್ ಬ್ಯಾಂಕ್ ಮತ್ತು ಇತರ ಎರಡು ಬ್ಯಾಂಕುಗಳ ಪೈಕಿ ಯಾರು ಮೊದಲು ಹಕ್ಕು ಹೊಂದಿದ್ದಾರೆ ಎಂಬ ಬಗ್ಗೆ ನಿರ್ಧರಿಸುವಂತೆ ಕರ್ನಾಟಕ ಹೈಕೋರ್ಟ್‌ಗೆ ಸುಪ್ರೀಂ ಕೋರ್ಟ್ ಸೂಚಿಸಿದೆ.

- ಈ ವಿಚಾರವಾಗಿ ಎಡೆಲ್‌ವೀಸ್ ಅಸೆಟ್ ರಿಕನ್‌ಸ್ಟ್ರಕ್ಷನ್ ಲಿಮಿಟೆಡ್‌ನ(ಇಎಆರ್‌ಎಲ್) ಮೇಲ್ಮನವಿ ವಜಾಗೊಳಿಸಿ ಕರ್ನಾಟಕ ಹೈಕೋರ್ಟ್ ಕಳೆದ ವರ್ಷ ಫೆಬ್ರುವರಿ 1ರಂದು ಹೊರಡಿಸಿದ್ದ ಆದೇಶವನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿದೆ.
- ನ್ಯಾಯಮೂರ್ತಿಗಳಾದ ವಿಕ್ರಮನಾಥ್, ಸಂಜಯ ಕರೋಲ್ ಹಾಗೂ ಸಂದೀಪ್ ಮೆಹ್ತಾ ಅವರು ಇದ್ದ ನ್ಯಾಯಪೀಠವು,ಇಎಆರ್‌ಎಲ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿತು.
- ಈ ವಿವಾದಕ್ಕೆ ಸಂಬಂಧಿಸಿ ಕಕ್ಷಿದಾರರರಾಗಿರುವ ಎಲ್ಲ ಸಂಸ್ಥೆಗಳು ಹೈಕೋರ್ಟ್ ಮುಂದೆ ತಮ್ಮ ವಾದ ಮಂಡಿಸಲು ಸ್ವತಂತ್ರವಾಗಿವೆ ಎಂದೂ ಪೀಠ ಹೇಳಿದೆ.
- ವಿಚಾರಣೆ ವೇಳೆ, ಇಎಆರ್‌ಎಲ್ ಪರ ಹಿರಿಯ ವಕೀಲ ಕೃಷ್ಣನ್ ವೇಣುಗೋಪಾಲ್, 'ಬಾಕಿ ಇರುವ ವಂತಿಗೆ ಹಣದ ಮೇಲೆ ಇಪಿಎಫ್‌ಒಗೆ ಮೊದಲ ಹಕ್ಕು ಇದೆ' ಎಂದರು.
- 'ಕಂಪನಿಗೆ ಸಾಲ ನೀಡಿರುವ ಬ್ಯಾಂಕುಗಳ ಪೈಕಿ ಎಕ್ಸಿಸ್ ಬ್ಯಾಂಕ್, ಒಂದು ಸ್ವತ್ತನ್ನು ₹12 ಕೋಟಿಗೆ ಮಾರಾಟ ಮಾಡಿದೆ. ಕಂಪನಿಯು ಎರಡು ಸ್ವತ್ತುಗಳನ್ನು ಒಟ್ಟು ₹7 ಕೋಟಿಗೆ ಮಾರಾಟ ಮಾಡಿದೆ.

Dr. Rajkumar IAS/KAS Academy

ಹೀಗಾಗಿ, ಇಪಿಎಫ್ಒ ತನಗೆ ಬರಬೇಕಾದ ಬಾಕಿ ಮೊತ್ತವನ್ನು ಎಕ್ಸಿಸ್ ಬ್ಯಾಂಕ್‌ನಿಂದ ವಸೂಲು ಮಾಡಿಕೊಳ್ಳಬಹುದು' ಎಂದು ನ್ಯಾಯಪೀಠಕ್ಕೆ ತಿಳಿಸಿದರು.

- 'ಪಿಎಫ್ ಕಾಯ್ದೆಯಡಿ, ಬಾಕಿ ಮೊತ್ತವನ್ನು ಎಕ್ಸಿಸ್ ಬ್ಯಾಂಕಿನಿಂದ ಮಾಡಿಕೊಳ್ಳಬೇಕೇ ಹೊರತು ಮೇಲ್ಮನವಿದಾರರಿಂದಲ್ಲ' ಎಂದೂ ವಾದಿಸಿದರು.
- ಇಪಿಎಫ್ಒ ಪರ ಹಾಜರಿದ್ದ ವಕೀಲ ದುಷ್ಯಂತ ಪರಾಶರ, 'ಮೇಲ್ಮನವಿದಾರರ ಅರ್ಜಿಯನ್ನು ವಜಾಗೊಳಿಸಿರುವ ಹೈಕೋರ್ಟ್‌ನ ಕ್ರಮ ಸರಿಯಾಗಿಯೇ ಇದೆ' ಎಂದರು.
- 'ಎಸ್‌ಎಆರ್‌ಎಫ್‌ಎಇಎಸ್ಐ ಕಾಯ್ದೆಯ ಸೆಕ್ಷನ್ 35ರ ಪ್ರಕಾರ, ಬ್ಯಾಂಕಿನ ಸಾಲ ಮರುಪಾವತಿಯೇ ಆದ್ಯತೆಯಾಗಲಿದೆ. ಹೀಗಾಗಿ, ಭವಿಷ್ಯನಿಧಿ ವಂತಿಗೆ ಸಂಬಂಧಿಸಿ ಬ್ಯಾಂಕಿನಿಂದ ಯಾವುದೇ ವಸೂಲಾತಿ ಮಾಡುವ ಹಾಗಿಲ್ಲ' ಎಂದು ಎಕ್ಸಿಸ್ ಬ್ಯಾಂಕ್ ಪರ ಹಾಜರಿದ್ದ ಹಿರಿಯ ವಕೀಲ ಗೋಪಾಲ್ ಜೈನ್, ಪೀಠಕ್ಕೆ ತಿಳಿಸಿದರು.
- ಎಲ್ಲ ಕಕ್ಷಿದಾರರ ವಾದ ಆಲಿಸಿದ ಪೀಠ, 'ವಸೂಲಾಗಬೇಕಾದ ಬಾಕಿ ಮೊತ್ತದ ಮೇಲೆ ಇಪಿಎಫ್ಒ, ಎಕ್ಸಿಸ್ ಬ್ಯಾಂಕ್, ಎಸ್‌ಬಿಐ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಟ್ರಾವಂಕೂರ್(ಈಗ ಎಸ್‌ಬಿಐನಲ್ಲಿ ವಿಲೀನವಾಗಿದೆ) ಪೈಕಿ ಯಾರಿಗೆ ಮೊದಲ ಹಕ್ಕು ಇದೆ ಎಂಬ ಬಗ್ಗೆ ಹೈಕೋರ್ಟ್ ನಿರ್ಧರಿಸಲಿದೆ' ಎಂದು ಪೀಠ, ಅರ್ಜಿ ವಿಲೇವಾರಿ ಮಾಡಿತು.

'ದಾಖಲೆ ಇಲ್ಲದ ವಹಿವಾಟು: ಅಲ್ಲಗಳೆಯಲಾಗದು'

- ಚೆಕ್, ಬ್ಯಾಂಕ್ ವರ್ಗಾವಣೆ ದಾಖಲೆ ಅಥವಾ ರಶೀದಿ ಇಲ್ಲ ಎಂಬ ಕಾರಣಕ್ಕೆ ಹಣಕಾಸಿನ ವಹಿವಾಟು ನಡೆದೇ ಇಲ್ಲ ಎನ್ನಲಾಗದು ಎಂದು ಸುಪ್ರೀಂ ಕೋರ್ಟ್ ಹೇಳಿದೆ.
- 'ಹಣದ ವಹಿವಾಟು ಎಂದಮೇಲೆ ಅದರಲ್ಲಿ ನಗದು ಕೂಡ ಇರಬಹುದು. ಅದು ಅಸಹಜವೇನೂ ಅಲ್ಲ' ಎಂದು ಕೋರ್ಟ್ ತಿಳಿಸಿದೆ.
- ವ್ಯಕ್ತಿಯೊಬ್ಬರು ಅಧಿಕೃತ ವಿಧಾನಗಳ ಮೂಲಕ (ನೆಗೋಶಿಯಬಲ್ ಇನ್‌ಸ್ಟ್ರುಮೆಂಟ್ಸ್ ಅಥವಾ ಬ್ಯಾಂಕ್ ವಹಿವಾಟು) ಹಣ ವರ್ಗಾವಣೆಯನ್ನು ಸಾಬೀತುಪಡಿಸಲು ಸಾಧ್ಯವಾಗದೇ ಇದ್ದರೆ, ಅಂತಹ ಮೊತ್ತವನ್ನು ನಗದು ಮೂಲಕ ಪಾವತಿಸಲಾಗಿಲ್ಲ ಎಂಬ ತೀರ್ಮಾನಕ್ಕೆ ಬರಲು ಸಾಧ್ಯವಿಲ್ಲ. ಅದರಲ್ಲೂ ಸಾಲ ಮರುಪಾವತಿ ಕುರಿತು ಸ್ಪಷ್ಟವಾಗಿ ವಚನಪತ್ರ ಇದ್ದಲ್ಲಿ ಹಾಗೆ ನಿರ್ಧರಿಸಲು ಆಗುವುದಿಲ್ಲ ಎಂದು ನ್ಯಾಯಮೂರ್ತಿಗಳಾದ ಅಹ್ಸಾನುದ್ದೀನ್ ಅಮಾನುಲ್ಲಾ ಮತ್ತು ವಿಪುಲ್.ಎಂ ಪಾಂಚೋಲಿ ಅವರ ಪೀಠ ಹೇಳಿದೆ.

**----------------------------------------------ಶುಭವಂದನೆಗಳು ------------------------------------------**

Dr. Rajkumar IAS/KAS Academy